22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 276 | ನವದೆಹಲಿ | ಬೆಲೆ ₹ 10 | ಏಪ್ರಿಲ್ 11 2025, ಶುಕ್ರವಾರ

## ಒಳಪುಟಗಳಲ್ಲಿ

ಮುಂದಿನ ದಿನಗಳಲ್ಲಿ ಟಿವಿ, ಫ್ರಿಜ್, ಮೊಬೈಲ್ ಬೆಲೆಯಲ್ಲಿ ಭಾರಿ ಇಳಿಕೆ -ಪು.4

# ರಾಣಾನನ್ನು ದೆಹಲಿಗೆ ಕರೆತಂದ ಎನ್‌ಐಎ ತಂಡ

**ನವದೆಹಲಿ, ಏ.10: 26/11 ಮುಂಬೈ ಭಯೋತ್ಪಾದಕ ದಾಳಿಯ ಮಾಸ್ಟರ್‌ಮೈಂಡ್ ತಹವೂರ್ ರಾಣಾನನ್ನು ಭಾರತಕ್ಕೆ ಹಸ್ತಾಂತರಿಸಲಾಗಿದೆ. ಭಾರತದ ಇತಿಹಾಸದಲ್ಲೇ ಅತ್ಯಂತ ಭೀಕರ ಭಯೋತ್ಪಾದಕ ದಾಳಿಯ ಸಂಚುಕೋರ ನವದೆಹಲಿಯ ಪಾಲಂ ವಿಮಾನ ನಿಲ್ದಾಣಕ್ಕೆ ಬಂದಿಳಿದಿದ್ದುಅಲ್ಲಿಂದ ಎನ್‌ಐಎ ಪ್ರಧಾನ ಕಚೇರಿಗೆ ಕರೆದೊಯ್ಯಲಾಗುವುದು.**



**ನವದೆಹಲಿ, ಇ.10:** 26/11 ಮುಂಬೈ ಭಯೋತ್ಪಾದಕ ದಾಳಿಯನ್ನು ಕಾರ್ಯಗತಗೊಳಿಸಲು ಡೇವಿಡ್ ಕೋಲ್ಮನ್ ಹೆಡ್ಲಿಯೊಂದಿಗೆ ಸಹ ಪಿತೂರಿ ನಡೆಸಿದ ಕೆನಡಾ ಮೂಲದ ಪಾಕಿಸ್ತಾನಿ ಪ್ರಜೆ ತಹವೂರ್ ರಾಣಾ ಅಂತಿಮವಾಗಿ ರಾಷ್ಟ್ರ ರಾಜಧಾನಿಯ ಪಾಲಂ ವಿಮಾನ ನಿಲ್ದಾಣದಲ್ಲಿ ಬಿಗಿ ಭದ್ರತೆಯ ನಡುವೆ ಭಾರತಕ್ಕೆ ಬಂದಿಳಿದಿದ್ದಾನೆ.

ದೆಹಲಿ ಪೊಲೀಸ್ ಮೂಲಗಳ ಪ್ರಕಾರ, ದೆಹಲಿ ಪೊಲೀಸರ ಮೂರನೇ ಬೆಟಾಲಿಯನ್ ತಂಡವನ್ನು ತಹವೂರ್ ರಾಣಾಗಾಗಿ ನಿಯೋಜಿಸಲಾಗಿದೆ.

ಈಗ ತಹವೂರ್ ರಾಣಾ ಹಸ್ತಾಂತರ ಪೂರ್ಣಗೊಂಡಿದ್ದು ಆತನನ್ನು ರಾಷ್ಟ್ರ ರಾಜಧಾನಿಯಲ್ಲಿರುವ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ) ಪ್ರಧಾನ ಕಚೇರಿಗೆ ಕರೆದೊಯ್ಯಲಾಗುತ್ತಿದೆ. ದೆಹಲಿ ಪೊಲೀಸ್ ಮೂಲಗಳ ಪ್ರಕಾರ, ದೆಹಲಿ ಪೊಲೀಸರ ಮೂರನೇ ಬೆಟಾಲಿಯನ್ ಈ ತಂಡವು ಪೈಲಟ್ ಕಾರು ಮತ್ತು ಬೆಂಗಾವಲು ಕಾರು ಜೊತೆಗೆ ಜೈಲು ವ್ಯಾನ್ ಅನ್ನು ಹೊಂದಿರುತ್ತದೆ ಮತ್ತು 15 ಪೊಲೀಸರು ಅತ್ಯಾಧುನಿಕ ಶಸ್ತ್ರಾಸ್ತ್ರಗಳನ್ನು ಹೊಂದಿರುತ್ತಾರೆ. ಈ ತಂಡವು ರಾಣಾ ಅವರನ್ನು ಎನ್‌ಐಎ ಪ್ರಧಾನ ಕಚೇರಿಗೆ ಕರೆದೊಯ್ಯಲಿದೆ.

**ಎನ್‌ಐಎ ಕೇಂದ್ರ ಕಚೇರಿ, ದೆಹಲಿ ಪೊಲೀಸ್ ವಿಶೇಷ ಸೆಲ್ ಸುತ್ತ ಬಿಗಿ ಭದ್ರತೆ:**

ಇತ್ತೀಚಿನ ವರದಿಗಳ ಪ್ರಕಾರ, ತಹವೂರ್ ರಾಣಾ ಅವರನ್ನು ಕಟ್ಟಡದ ನೆಲ ಮಹಡಿಯಲ್ಲಿರುವ ವಿಶೇಷ ಸೆಲ್‌ನಲ್ಲಿ ಇರಿಸಲಾಗುವುದು, ಅಲ್ಲಿ ಅವರ ವೈದ್ಯಕೀಯ ಪರೀಕ್ಷೆಗಳನ್ನು ಸಹ ನಡೆಸಲಾಗುವುದು. ಪಾಲಂ ವಿಮಾನ ನಿಲ್ದಾಣದ ಸುತ್ತಲೂ ಭದ್ರತಾ ಕ್ರಮಗಳನ್ನು ಗಮನಾರ್ಹವಾಗಿ ಹೆಚ್ಚಿಸಲಾಗಿದ್ದು, ಸ್ಥಳದಲ್ಲಿ ಮತ್ತು ಎನ್‌ಐಎ ಪ್ರಧಾನ ಕಚೇರಿಯಲ್ಲಿ ಕಮಾಂಡೋಗಳನ್ನು ನಿಯೋಜಿಸಲಾಗಿದೆ. ಡೈಫಲಿ ಪೊಲೀಸರ ವಿಶೇಷ ಸೆಲ್ ಹೆಚ್ಚಿನ ಎಚ್ಚರಿಕೆ ವಹಿಸಿದೆ ಮತ್ತು ಎನ್‌ಐಎ ಪ್ರಧಾನ ಕಚೇರಿಯಲ್ಲಿ ಭದ್ರತೆಯನ್ನು ಬೆಂಬಲಿಸಲು ಅರೆಸೈನಿಕ ಪಡೆಗಳನ್ನು ನಿಯೋಜಿಸಲಾಗಿದೆ. ಹೆಚ್ಚುವರಿಯಾಗಿ, ತಿಹಾರ್ ಜೈಲಿನಲ್ಲಿ ಭದ್ರತೆಯನ್ನು ಬಲಪಡಿಸಲಾಗಿದೆ ಮತ್ತು ಹೆಚ್ಚಿನ ಭದ್ರತೆಯ ಭಾಗವಾಗಿ, ಜೆಎಲ್‌ಎನ್ ಮೆಟ್ರೋ ನಿಲ್ದಾಣದ ಗೇಟ್ ಸಂಖ್ಯೆ 2ಅನ್ನು ಮುಚ್ಚಲಾಗಿದೆ.

**2008ರ ಮುಂಬೈ ಭಯೋತ್ಪಾದಕ ದಾಳಿ ಪ್ರಕರಣದ ಪ್ರಮುಖ ಆರೋಪಿ ತಹವ್ವೂರ್ ರಾಣಾ ಅವರ ನ್ಯಾಯಾಲಯದ ವಿಚಾರಣೆಯಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ (ಎನ್‌ಐಎ)ಗೆ ಸಹಾಯ ಮಾಡಲು ಕೇಂದ್ರವು ಹಿರಿಯ ವಕೀಲ ನರೇಂದರ್ ಮಾನ್**



**ಅವರನ್ನು ವಿಶೇಷ ಸಾರ್ವಜನಿಕ ಅಭಿಯೋಜಕರನ್ನಾಗಿ ನೇಮಿಸಿದೆ.**

**2008 ರ ಗಲಭೆಯ ಹಿಂದಿನ ಪ್ರಮುಖ ಸಂಚುಕೋರನನ್ನು ನ್ಯಾಯಕ್ಕೆ ತರಲು ವರ್ಷಗಳ ನಿರಂತರ ಮತ್ತು ಸಂಘಟಿತ ಪ್ರಯತ್ನಗಳ ನಂತರ, 26/11 ಮುಂಬೈ ಭಯೋತ್ಪಾದಕ ದಾಳಿಯ ಮಾಸ್ಟರ್ ಮೈಂಡ್ ತಹವ್ವೂರ್ ಹುಸೇನ್ ರಾಣಾನನ್ನು ಹಸ್ತಾಂತರಿಸುವಲ್ಲಿ ರಾಷ್ಟ್ರೀಯ ತನಿಖಾ ಸಂಸ್ಥೆ ಗುರುವಾರ ಯಶಸ್ವಿಯಾಗಿದೆ ಎಂದು NIA ತಿಳಿಸಿದೆ. ರಾಣಾನನ್ನು ಕರೆದೊಯ್ಯುವ ವಿಶೇಷ ವಿಮಾನವು ಅಮೆರಿಕದಿಂದ ದೆಹಲಿಗೆ ಆಗಮಿಸಿದಾಗ. ಭಾರತ-ಯುಎಸ್ ಹಸ್ತಾಂತರ ಒಪ್ಪಂದದ ಅಡಿಯಲ್ಲಿ ಪ್ರಾರಂಭಿಸಲಾದ ಪ್ರಕ್ರಿಯೆಗಳ ಪ್ರಕಾರ ರಾಣಾ ಅವರನ್ನು ಅಮೆರಿಕದಲ್ಲಿ ನ್ಯಾಯಾಂಗ ಬಂಧನದಲ್ಲಿ ಇರಿಸಲಾಗಿತ್ತು. ರಾಣಾ ಈ ಕ್ರಮವನ್ನು ತಡೆಯಲು ಎಲ್ಲಾ ಕಾನೂನು ಮಾರ್ಗಗಳನ್ನು ಕಳೆದುಕೊಂಡ ನಂತರ ಹಸ್ತಾಂತರವು ಅಂತಿಮವಾಗಿ ನೆರವೇರಿತು ಎಂದು NIA ತಿಳಿಸಿದೆ. ಕ್ಯಾಲಿಫೋರ್ನಿಯಾದ ಸೆಂಟ್ರಲ್ ಡಿಸ್ಟ್ರಿಕ್ಟ್ನ ಜಿಲ್ಲಾ ನ್ಯಾಯಾಲಯವು ಮೇ 16, 2023 ರಂದು ಅವರನ್ನು ಹಸ್ತಾಂತರಿಸಲು ಆದೇಶಿಸಿತ್ತು. ನಂತರ ರಾಣಾ ಒಂಬತ್ತನೇ ಸರ್ಕ್ಯೂಟ್ ಕೋರ್ಟ್ ಆಫ್ ಅಪೀಲ್ಸ್‌ನಲ್ಲಿ ಅನೇಕ ಮೊಕದ್ದಮೆಗಳನ್ನು ಸಲ್ಲಿಸಿತು, ಅವೆಲ್ಲವನ್ನೂ ತಿರಸ್ಕರಿಸಲಾಯಿತು. ತರುವಾಯ ಅವರು ಅಮೆರಿಕದ ಸುಪ್ರೀಂ ಕೋರ್ಟ್‌ನಲ್ಲಿ ರಿಟ್ ಆಫ್ ಸರ್ಟಿಯೊರಾರಿ ಅರ್ಜಿ, ಎರಡು ಹೇಬಿಯಸ್ ಅರ್ಜಿಗಳು ಮತ್ತು ತುರ್ತು ಅರ್ಜಿಯನ್ನು ಸಲ್ಲಿಸಿದರು, ಆದರೆ ಅವುಗಳನ್ನು ಸಹ ನಿರಾಕರಿಸಲಾಯಿತು. ಭಾರತವು ಅಂತಿಮವಾಗಿ ಅಮೆರಿಕ ಸರ್ಕಾರದಿಂದ ಬೇಕಾಗಿರುವ ಭಯೋತ್ಪಾದಕನಿಗೆ ಶರಣಾಗತಿ ವಾರಂಟ್ ಪಡೆದ ನಂತರ ಎರಡೂ ದೇಶಗಳ ನಡುವೆ ಹಸ್ತಾಂತರ ಪ್ರಕ್ರಿಯೆಗಳನ್ನು ಪ್ರಾರಂಭಿಸಲಾಯಿತು ಎಂದು ಅದು ಹೇಳಿದೆ.**

## ಮುಂಬೈ ದಾಳಿ ಬಗ್ಗೆ ರಾಣಾನಿಂದ ಮಹತ್ವದ ಮಾಹಿತಿ: ಉನ್ನಿಕೃಷ್ಣನ್ ತಂದೆ ಆಶಯ

**ನವದೆಹಲಿ, ಏ.10:** ಕೇಂದ್ರ ಸರ್ಕಾರ ಟೆರರಿಸ್ಟ್ ರಾಣಾನನ್ನು ವಾಪಾಸ್ ಕರೆತಂದಿರುವ ವಿಚಾರಕ್ಕೆ ಹುತಾತ್ಮ ಸಂದೀಪ್ ಉನ್ನಿಕೃಷ್ಣನ್ ಅವರ ತಂದೆ ಕೆ.ಉನ್ನಿಕೃಷ್ಣನ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿದ್ದಾರೆ. 26/11ರ ಮುಂಬೈ ದಾಳಿ ಪ್ರಕರಣದ ತನಿಖೆಗೆ ಈ ನಡೆ ಮರು ಜೀವ ನೀಡಲಿದೆ. ಈ ಮೂಲಕ ನಾವು ಗೆದ್ದು ಬಿಟ್ವೆವು ಎನ್ನುವುದಲ್ಲ. ಆದರೆ ಇವನಿಂದ ಈ ಸ್ಫೋಟದ ಕುರಿತಾದ ಮೌಲ್ಯಯುತ ಮಾಹಿತಿ ಸಿಗಲಿದೆ ಅಂತ ಕೆ. ಉನ್ನಿಕೃಷ್ಣನ್ ಅಭಿಪ್ರಾಯಪಟ್ಟಿದ್ದಾರೆ.

ಈ ಪ್ರಕರಣದ ರೂವಾರಿಗಳು ಯಾರು ಅನ್ನೋದು ಇಡೀ ಜಗತ್ತಿಗೇ ಗೊತ್ತಿದೆ. ಆದರೆ ಅದನ್ನು ನಾವು ಜಗತ್ತಿಗೆ ಹೇಳಬೇಕು ಅಂದ್ರೆ ನಮಗೆ ದಾಖಲೆಗಳು ಬೇಕು. 17 ವರ್ಷಗಳ ಬಳಿಕ ಇಂಥಾ ಬೆಳವಣಿಗೆ ನಡೆಯುತ್ತಿದೆ. ನಮ್ಮ ನ್ಯಾಷನಲ್ ಏಜೆನ್ಸಿಗಳು ಬಹಳ ಬಲಿಷ್ಠವಾಗಿದೆ. ಇವತ್ತೋ ಅಥವಾ ನಾಳೆಯೋ ಇದಕ್ಕೆ ಒಂದು ತಾರ್ಕಿಕ ಅಂತ್ಯ ಸಿಗಲಿದೆ ಅಂತ ಕೆ. ಉನ್ನಿಕೃಷ್ಣನ್ ಹೇಳಿದ್ದಾರೆ.

## ಮುಂಬೈ ದಾಳಿಕೋರ ರಾಣಾ ತನ್ನ ಪ್ರಜೆಯಲ್ಲ; ಪಾಕ್ ಸ್ಪಷ್ಟನೆ

**ಇಸ್ಲಾಮಾಬಾದ್, ಏ.10:** ಮುಂಬೈ ದಾಳಿಯ ಉಗ್ರ ತಹವ್ವೂರ್ ರಾಣಾ ತನ್ನ ಪ್ರಜೆಯಲ್ಲ, ಆತ ಕೆನಡಾದ ಪ್ರಜೆ ಎಂದು ಪಾಕಿಸ್ತಾನ ಹೇಳಿದೆ. ಅಮೆರಿಕದಿಂದ ರಾಣಾನನ್ನು ಭಾರತ ಕರೆ ತರುತ್ತಿದ್ದಂತೆ ಪಾಕಿಸ್ತಾನ ವಿದೇಶಾಂಗ ಸಚಿವಾಲಯ ಅಂತರ ಕಾಯ್ದುಕೊಳ್ಳಲು ಮುಂದಾಗಿದೆ. ಆತ ತನ್ನ ಹೆಸರನ್ನು ಹೇಳಬಹುದು ಎಂಬ ಭಯದಿಂದ ಇಲ್ಲಿಯವರೆಗೆ ಯಾವುದೇ ಪ್ರತಿಕ್ರಿಯೆ ನೀಡದ ಪಾಕ್ ಈಗ ದಿಢೀರ್ ಸ್ಪಷ್ಟೀಕರಣ ನೀಡಿದೆ.

ಈ ಸಂಬಂಧ ವಾರದ ಮಾಧ್ಯಮ ಸುದ್ದಿಗೋಷ್ಠಿಯಲ್ಲಿ ವಿದೇಶಾಂಗ ಇಲಾಖೆ, ರಾಣಾ ಎರಡು ದಶಕಗಳಿಗೂ ಹೆಚ್ಚು ಕಾಲ ತನ್ನ ಪೌರತ್ವವನ್ನು ನವೀಕರಿಸದ ಕಾರಣ ಆತ ಪಾಕಿಸ್ತಾನಿ ಪ್ರಜೆಯಲ್ಲ ಎಂದು ಹೇಳಿದೆ. ಕಳೆದ ಎರಡು ದಶಕಗಳಿಂದ ತಹವ್ವೂರ್ ರಾಣಾ ತನ್ನ ಪಾಕಿಸ್ತಾನಿ ದಾಖಲೆಗಳನ್ನು ನವೀಕರಿಸಿಲ್ಲ. ಇದರಿಂದ ಆತ ಕೆನಡಾ ಪ್ರಜೆ ಎನ್ನುವುದು ಸ್ಪಷ್ಟವಾಗಿದೆ ಎಂದು ತಿಳಿಸಿದೆ. ಗುಪ್ತಚರ ವರದಿಗಳ ಪ್ರಕಾರ, ರಾಣಾ ಪಾಕಿಸ್ತಾನದ ಐಎಸ್‌ಐ ಜೊತೆ ಆಳವಾದ ಸಂಪರ್ಕ ಹೊಂದಿದ್ದ ಮತ್ತು ಪಾಕ್ ಸೇನೆಗೆ ಬೆಂಬಲ ನೀಡಿದ್ದ. ಮುಂಬೈ ದಾಳಿಯ ಸಂಚು ರೂಪಿಸುವಲ್ಲಿ ಪಾಕಿಸ್ತಾನದ ನೇರ ಪಾತ್ರದ ಬಗ್ಗೆ ರಾಣಾ ಬಹಿರಂಗ ಪಡಿಸುವ ಸಾಧ್ಯತೆಯಿದೆ. ಐಎಸ್‌ಐ ಭಾಗಿಯಿಂದ ಹಿಡಿದು ಲಷ್ಕರ್-ಎ-ತೊಯ್ಬಾದ ಜೊತೆಗಿನ ಸಮನ್ವಯದವರೆಗಿನ ಸಂಪೂರ್ಣ ಜಾಲವನ್ನು ರಾಣಾ ಬಹಿರಂಗಪಡಿಸುವ ಸಾಧ್ಯತೆಯಿದೆ. ಹೆಡ್ಲಿ ಮತ್ತು ಲಷ್ಕರ್ ಜೊತೆ ರಾಣಾ ಸಂಪರ್ಕದಾಳಿಯ ಮೊದಲು ಮುಂಬೈ ಸ್ಥಳಗಳ ಮೇಲೆ ದಾಳಿ ನಡೆಸಿದ್ದ ಪಾಕಿಸ್ತಾನಿ-ಅಮೆರಿಕನ್ ಭಯೋತ್ಪಾದಕ ಡೇವಿಡ್ ಕೋಲ್ಮನ್ ಹೆಡ್ಲಿಯೊಂದಿಗಿನ ನಿಕಟ ಸಂಬಂಧದಿಂದಾಗಿ ರಾಣಾ ಹೆಸರು ಮುನ್ನೆಲೆಗೆ ಬಂದಿತ್ತು.

ತಹಾವೂರ್ ರಾಣಾ ಯಾರು ತಹಾವೂರ್ ರಾಣಾ ಪಾಕಿಸ್ತಾನ ಮೂಲದ ಕೆನಡಾದ ಉದ್ಯಮಿ. ತನ್ನ ಬಾಲ್ಯದ ಗೆಳೆಯ ಡೇವಿಡ್ ಕೋಲ್ಮನ್ ಹೆಡ್ಲಿ, ದಾವೂದ್ ಗಿಲಾನಿ ಮತ್ತು ಇತರರಿಗೆ ಸಹಕರಿಸಿದ್ದ. ಈ ಮೂಲಕ ಮುಂಬೈನಲ್ಲಿ ಲಷ್ಕರ್ ಭಯೋತ್ಪಾದಕ ದಾಳಿಯ ಯೋಜನೆ ಮತ್ತು ಕಾರ್ಯಗತಗೊಳಿಸಿದ್ದ. ರಾಣಾ ನವೆಂಬರ್ 11 ಮತ್ತು 21, 2008 ರ ನಡುವೆ ದುಬೈ ಮೂಲಕ ಮುಂಬೈಗೆ ಬಂದಿದ್ದ. ಪೊವೈನಲ್ಲಿರುವ ಹೋಟೆಲ್ ರಿನೈಸಾನ್ಸ್‌ನಲ್ಲಿ ತಂಗಿ ದಾಳಿಗೆ ಬೇಕಾದ ಸಿದ್ಧತೆ ಪರಿಶೀಲಿಸಿದ್ದ. ಈತ ದುಬೈಗೆ ಹೋದ 5 ದಿನಗಳ ಬಳಿಕ ದಾಳಿ ನಡೆದಿತ್ತು. ಭಾರತವು ಜೂನ್ 2020 ರಲ್ಲಿ ರಾಣಾನನ್ನು ಗಡೀಪಾರುಗಾಗಿ ಕಾನೂನು ಪ್ರಕ್ರಿಯೆಯನ್ನು ಪ್ರಾರಂಭಿಸಿತು. ಈ ವರ್ಷದ ಫೆಬ್ರವರಿಯಲ್ಲಿ, ಯುಎಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ರಾಣಾನನ್ನು ಗಡೀಪಾರು ಮಾಡಲಾಗುವುದು ಎಂದು ದೃಢಪಡಿಸಿದ್ದರು.

# 36ನೇ ರಾಷ್ಟ್ರೀಯ ಭೂಮಾಪನಾ ದಿನಾಚರಣೆ: ಸಿಎಂ ಉದ್ಘಾಟನೆ

**ಬೆಂಗಳೂರು, ಏ.10:** ಪರವಾನಗಿ ಭೂಮಾಪಕರ ಖಾಯಂ ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ಘೋಷಣೆ ಮಾಡಿದ್ದಾರೆ. ವಿಧಾನಸೌಧದ ಮುಂಭಾಗ ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ಇಲಾಖೆಯ ನೌಕರರ ಸಂಘಗಳ 36ನೇ ರಾಷ್ಟ್ರೀಯ ಭೂಮಾಪನಾ ದಿನಾಚರಣೆಯನ್ನು ಉದ್ಘಾಟಿಸಿ ಮುಖ್ಯಮಂತ್ರಿಗಳು ಮಾತನಾಡಿದರು. ಕಂದಾಯ ಇಲಾಖೆ ಸರ್ಕಾರದ ಮಾತೃ ಇಲಾಖೆ ಇದ್ದಂತೆ. ಈ ಇಲಾಖೆ ಅಚ್ಚುಕಟ್ಟಾಗಿ ಕೆಲಸ ಮಾಡಿದರೆ ರೈತ ಸಮುದಾಯ ನೆಮ್ಮದಿಯಾಗಿರುತ್ತದೆ. ಕೃಷ್ಣ ಬೈರೇಗೌಡರ ನೇತೃತ್ವದಲ್ಲಿ ಕಂದಾಯ ಇಲಾಖೆಯಲ್ಲಿ ಅತ್ಯುತ್ತಮ ಕೆಲಸಗಳಾಗುತ್ತಿವೆ ಎಂದು ಮೆಚ್ಚುಗೆ ಸೂಚಿಸಿದರು. ನಾನು ಎರಡು ಬಾರಿ ಮುಖ್ಯಮಂತ್ರಿ ಆಗಿ ಕಂದಾಯ ಇಲಾಖೆಯ, ನೌಕರರ ಬಹಳಷ್ಟು ಸಮಸ್ಯೆಗಳನ್ನು ಬಗೆಹರಿಸಿದ್ದೇನೆ. ಪೂರ್ತಿ ಸಮಸ್ಯೆ ಬಗೆಹರಿದಿಲ್ಲ ಎನ್ನುವ ಬೇಸರ ನನಗೂ ಇದೆ. ತಹಶೀಲ್ದಾರ್, ಎಸಿ ಕಚೇರಿಗಳಲ್ಲಿ ಸುಗಮವಾಗಿ, ಪ್ರಾಮಾಣಿಕವಾಗಿ ಕೆಲಸ ಮಾಡಿದರೆ, ನಾಡಿನ ಜನತೆ, ರೈತ ಸಮುದಾಯ ಅತ್ಯಂತ ನೆಮ್ಮದಿಯಾಗಿರುತ್ತದೆ. ಕಂದಾಯ ಇಲಾಖೆಗೆ ಅಗತ್ಯ ಇರುವಷ್ಟು ಹಣ ಕೊಟ್ಟಿದ್ದೇವೆ, ಮುಂದೆಯೂ ಕೊಡುತ್ತೇವೆ. ಅಗತ್ಯ ಸಿಬ್ಬಂದಿ ಬಲವನ್ನೂ ಕೊಟ್ಟಿದ್ದೇವೆ. ಅಗತ್ಯ ಇದ್ದರೆ ಮತ್ತಷ್ಟು ಕೊಡಲಾಗುವುದು. ಖಾಲಿ ಇರುವ ಎಲ್ಲಾ ಸರ್ವೇಯರ್ ಹುದ್ದೆಗಳ ನೇಮಕಾತಿ ಅತ್ಯಂತ ಪಾರದರ್ಶಕವಾಗಿ ಆಗಿದೆ. ಸದ್ಯದಲ್ಲೇ ನೇಮಕಾತಿ ಪತ್ರವನ್ನೂ ಕೊಡುತ್ತೇವೆ. ಹಿಂದೆ ಗೋವಿಂದೇ ಗೌಡರು ಪ್ರಾಮಾಣಿಕವಾಗಿ ಒಂದು ಲಕ್ಷ ಶಿಕ್ಷಕರ ನೇಮಕಾತಿ ಆಗಿರುವ ರೀತಿಯಲ್ಲೇ ಕೃಷ್ಣ ಬೈರೇಗೌಡರು ಸರ್ವೇಯರ್ಗಳ ನೇಮಕಾತಿ ಮಾಡಿದ್ದಾರೆ. ಪರವಾನಗಿ ಭೂಮಾಪಕರ ಕಾಯಂ ಮಾಡಲು ಗಂಭೀರ ಚಿಂತನೆ ಮಾಡಲಾಗುವುದು. ಜೊತೆಗೆ 36 ಮಂದಿ ಎಡಿಎಲ್‌ಆರ್‌ಗಳ ನೇಮಕವನ್ನೂ ಸದ್ಯದಲ್ಲೇ ಮಾಡಲಾಗುವುದು ಎಂದು ಘೋಷಿಸಿದರು.ನಮ್ಮದು ಹಳ್ಳಿಗಳ ಮತ್ತು ರೈತರ ದೇಶ. ಗ್ರಾಮಗಳು ಮತ್ತು ರೈತರು ನೆಮ್ಮದಿಯಾಗಿ ಉತ್ಪಾದನೆಯಲ್ಲಿ ತೊಡಗಬೇಕಾದರೆ ಸರ್ವೇ ಕಾರ್ಯ ಸರಿಯಾಗಿ ಪೂರ್ಣಗೊಳ್ಳಬೇಕು. ಕೆರೆ ಕಟ್ಟೆಗಳ ಒತ್ತುವರಿ ತೆರವುಗೊಳಿಸಬೇಕು, ಪೋಡಿ ಮುಕ್ತ ಗ್ರಾಮಗಳಾಗಬೇಕು. ಇದಕ್ಕಾಗಿ ಇಲಾಖೆಯ ಪ್ರತಿಯೊಬ್ಬರೂ ಪ್ರಾಮಾಣಿಕವಾಗಿ ಶ್ರಮಿಸಿ, ಧ್ವನಿ ಇಲ್ಲದವರ ಪರವಾಗಿ ಕೆಲಸ ಮಾಡುವುದೇ ನಿಜವಾದ ಪುಣ್ಯದ ಕಾರ್ಯ ಎಂದು ಕರೆ ನೀಡಿದರು.ಈ ಸಂದರ್ಭದಲ್ಲಿ ಶಾಸಕರಾದ ರಿಜ್ವಾನ್ ಅರ್ಷದ್, ಸಚಿವ ಕೃಷ್ಣ ಬೈರೇಗೌಡ, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಶಾಸಕದ ರಿಜ್ವಾನ್ ಅರ್ಷದ್, ಮುಖ್ಯ ಸಚೇತಕರಾದ ಅಶೋಕ್ ಪಟ್ಟಣ್ ಸೇರಿದಂತೆ ಹಲವು ಪ್ರಮುಖರು ಇದ್ದರು.



**ನಮ್ಮದು ಹಳ್ಳಿಗಳ ಮತ್ತು ರೈತರ ದೇಶ. ಗ್ರಾಮಗಳು ಮತ್ತು ರೈತರು ನೆಮ್ಮದಿಯಾಗಿ ಉತ್ಪಾದನೆಯಲ್ಲಿ ತೊಡಗಬೇಕಾದರೆ ಸರ್ವೇ ಕಾರ್ಯ ಸರಿಯಾಗಿ ಪೂರ್ಣಗೊಳ್ಳಬೇಕು. ಕೆರೆ ಕಟ್ಟೆಗಳ ಒತ್ತುವರಿ ತೆರವುಗೊಳಿಸಬೇಕು, ಪೋಡಿ ಮುಕ್ತ ಗ್ರಾಮಗಳಾಗಬೇಕು – ಸಿಎಂ ಸಿದ್ದರಾಮಯ್ಯ**

**ಸಮಾರಂಭದಲ್ಲಿ ಉಪಸ್ಥಿತರಿದ್ದ ಕಂದಾಯ ಸಚಿವ ಕೃಷ್ಣಬೈರೇಗೌಡ ಈ ವೇಳೆ ಮಾತನಾಡಿ, 7 ವರ್ಷಗಳಿಂದ ಭೂಮಾಪನ ದಿನಾಚರಣೆ ಆಚರಿಸಿರಲಿಲ್ಲ. ಆದರೆ ಸಿಎಂ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ದೊಡ್ಡ ಕಾರ್ಯಕ್ರಮವಾಗಿದೆ. ರೈತರ ಕೆಲಸ ಸರ್ಕಾರದ ಮೊದಲ ಆದ್ಯತೆ ಎಂದು ಹೇಳಿದ್ದಾರೆ.1802ರಲ್ಲಿ ಸರ್ವೇ ನಡೆದಿದೆ. ವೈಜ್ಞಾನಿಕವಾಗಿ ಸರ್ವೇ ಮಾಡಬೇಕು ಎಂದು ಹೇಳಿ ಕನ್ಯಾಕುಮಾರಿಯಿಂದ ಬೆಂಗಳೂರಿನವರೆಗೂ ಸರ್ವೇ ಮಾಡಲಾಗಿತ್ತು. ಎಲ್ಲಾ ಮಾದರಿಯಲ್ಲಿ ಡಿಜಿಟಲೀಕರಣ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.**

# ಬಿಜೆಪಿ ಜನಾಕ್ರೋಶ ಯಾತ್ರೆ 4 ದಿನಕ್ಕೆ

**ಬೆಂಗಳೂರು, ಏ. 10–** ರಾಜ್ಯದ ಕಾಂಗ್ರೆಸ್ ಸರ್ಕಾರದ ಬೆಲೆ ಏರಿಕೆ, ಮುಸ್ಲಿಂ ಓಲೈಕೆ, ದಲಿತರ ಹಣ ಲೂಟಿ ವಿರುದ್ಧ ರಾಜ್ಯ ಬಿಜೆಪಿ ನಡೆಸಿರುವ ಜನಾಕ್ರೋಶ ಯಾತ್ರೆ 4ನೇ ದಿನವಾದ ಗುರುವಾರ ಉಡುಪಿ ಮತ್ತು ಚಿಕ್ಕಮಗಳೂರಿನಲ್ಲಿ ಯಾತ್ರೆ ನಡೆದಿದೆ. ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ರಾಜ್ಯ ಬಿಜೆಪಿ ಏಪ್ರಿಲ್ 7 ರಂದು ಮೈಸೂರಿನಲ್ಲಿ 4 ಹಂತಗಳಲ್ಲಿ ಜನಾಕ್ರೋಶ ಯಾತ್ರೆಯನ್ನು ಆರಂಭಿಸಿತ್ತು. ಯಾತ್ರೆಯ ಮೊದಲ ಹಂತವಾಗಿ ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ, ಕೊಡಗು, ಮಂಗಳೂರಿನಲ್ಲಿ ಯಾತ್ರೆ ಬುಧವಾರದವರೆಗೂ ನಡೆದಿತ್ತು. ಇಂದು ಉಡುಪಿ ಮತ್ತು ಚಿಕ್ಕಮಗಳೂರನಲ್ಲಿ ಜನಾಕ್ರೋಶ ಯಾತ್ರೆ ನಡೆದಿದೆ. ಈ ಜನಾಕ್ರೋಶ ಯಾತ್ರೆಯಲ್ಲಿ ವಿರೋಧ ಪಕ್ಷಗಳ ನಾಯಕರಾದ ಆರ್. ಅಶೋಕ್, ಚಲವಾದಿ ನಾರಾಯಣಸ್ವಾಮಿ ಸೇರಿದಂತೆ ಬಿಜೆಪಿಯ ಎಲ್ಲ ಪ್ರಮುಖ ಮುಖಂಡರು ಭಾಗಿಯಾಗಿದ್ದಾರೆ. ಸಿದ್ದರಾಮಯ್ಯ ಸರ್ಕಾರ ಪಥನ ನಿಶ್ಚಯಉಡುಪಿಯಲ್ಲಿ ನಡೆದ ಬಿಜೆಪಿ ಜನಾಕ್ರೋಶ ಯಾತ್ರೆಯ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಸಂಸದ ಕೋಟ ಶ್ರೀನಿವಾಸಪೂಜಾರಿ ಅವರು, ಸಿದ್ದರಾಮಯ್ಯ ಸರ್ಕಾರ ಉರುಳುವುದು ನಿಶ್ಚಿತ ಎಂದರು. ಬಿರುಗಾಳಿ ಬೀಸುವುದು, ತೆರೆ ಎದ್ದು ಕುಣಿಯುವುದು, ಹರಿಗೋಲು ಮುಳುವುಗುವುದು ನಿಶ್ಚಿತ ಎಂದು ಕವನದ ಸಾಲುಗಳನ್ನು ಉಲ್ಲೇಖಿಸಿ ಮಾತನಾಡಿದ ಅವರು, ಜನ ರಾಜ್ಯದ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಸಿದ್ಧರಾಮಯ್ಯ ಸರ್ಕಾರ ಬಹಳ ದಿನ ಉಳಿಯಲ್ಲ. ಪತನವಾಗುತ್ತದೆ ಎಂದರು.ಅಲ್ಪಸಂಖ್ಯಾತರಿಗೆ 1 ಲಕ್ಷ ಕೋಟಿಯಾದರೂ ಕೊಡಿ ನಮ್ಮದೇನು ಅಭ್ಯಂತರವಿಲ್ಲ. ಆದರೆ ಹಿಂದುಳಿದ ಸಮಾಜಗಳ ಪರಿಶಿಷ್ಟ ಜಾತಿ, ಪಂಗಡಗಳ ಮಕ್ಕಳ ಹಾಸ್ಟೆಲ್ನಲ್ಲಿ ಸೀಟು ಸಿಗುತ್ತಿಲ್ಲ. ಬೊಬ್ಬೆ ಹೊಡೆಯುವ ಪರಿಸ್ಥಿತಿ ಇದೆ. ಹೀಗಿರುವಾಗ ಈ ಸಮುದಾಯಗಳಿಗೆ ನೀವು ಕೊಟ್ಟಿರುವ ನ್ಯಾಯವಾದರೇ ಏನು ಎಂದು ಪ್ರಶ್ನಿಸಿದ್ದಾರೆ. ಪಾಕಿಸ್ತಾನ ಗೆಲ್ಲಲಿ ಎಂದು ವಿಧಾನಸೌಧದಲ್ಲಿ ಘೋಷಣೆ ಕೂಗಲು ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದಿದೆಯೇ. ರಾಷ್ಟ್ರವಾದಿ ಕಾಂಗ್ರೆಸ್‌ನವರು ಇದಕ್ಕೆ ಉತ್ತರ ಕೊಡಬೇಕು ಎಂದು ಒತ್ತಾಯಿಸಿದರು.

# ಗೋದಿ ಸಂಗ್ರಹ: ಉ.ಪ್ರ.ದಲ್ಲಿ ಸಚಿವ ಜೋಶಿ ಪರಿಶೀಲನಾ ಸಭೆ



- **1 ಲಕ್ಷ ಟನ್ ಮೀರಿ ಗೋದಿ ಸಂಗ್ರಹ: ಸಿಎಂ ಯೋಗಿ ಆದಿತ್ಯನಾಥ ಮಾಹಿತಿ**
- **ಯುಪಿಯ 5,780 ಖರೀದಿ ಕೇಂದ್ರಗಳಲ್ಲಿ 20,409 ರೈತರಿಂದ ಗೋದಿ ಮಾರಾಟ**

**ನವದೆಹಲಿ, ಏ.10:** ಕೇಂದ್ರ ಸರ್ಕಾರ 2025-26ರ ರಬಿ ಮಾರುಕಟ್ಟೆ ಋತುವಿನಲ್ಲಿ ವಿವಿಧ ರಾಜ್ಯಗಳಿಂದ 31 ಮೆಟ್ರಿಕ್ ಟನ್ ಗೋದಿ ಸಂಗ್ರಹ ನಿರೀಕ್ಷಿಸಿದ್ದು, ಈ ಹಿನ್ನೆಲೆಯಲ್ಲಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಇಂದು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ ಅವರೊಂದಿಗೆ ಪರಿಶೀಲನಾ ಸಭೆ ನಡೆಸಿದ್ದಾರೆ.

ಬುಧವಾರ ಸಿಎಂ ಯೋಗಿ ಆದಿತ್ಯನಾಥ್ ಅವರ ಸಮ್ಮುಖದಲ್ಲಿ ಉತ್ತರ ಪ್ರದೇಶ ಸರ್ಕಾರದೊಂದಿಗೆ ಪರಿಶೀಲನಾ ಸಭೆ ನಡೆಸಿದ ಕೇಂದ್ರ ಸಚಿವರು, ಯುಪಿಯಲ್ಲಿ ಪ್ರಸ್ತುತ ಗೋದಿ ದಾಸ್ತಾನು, ಸಂಗ್ರಹ ಕುರಿತು ಮಾಹಿತಿ ಪಡೆದುಕೊಂಡರು. ಉತ್ತರ ಪ್ರದೇಶ ಸರ್ಕಾರ ಏಪ್ರಿಲ್ ಮೊದಲ ವಾರದಲ್ಲಿ 1 ಲಕ್ಷ ಟನ್ ಗೋದಿ ಸಂಗ್ರಹಿಸಿದ ಬಗ್ಗೆ ಶ್ಲಾಘಿಸಿದರು.

ಗೋದಿ ಉತ್ಪಾದನೆಯಲ್ಲಿ ಉತ್ತರಪ್ರದೇಶ ಮುಂದಿದ್ದು, ಹೆಚ್ಚಿನ ಮಟ್ಟದಲ್ಲಿ ಗೋದಿ ಸಂಗ್ರಹಿಸಬೇಕೆಂದು ಸಲಹೆ-ಸೂಚನೆ ನೀಡಿದ ಸಚಿವ ಜೋಶಿ, ಕೇಂದ್ರ ಸರ್ಕಾರ ಈ ಬಾರಿ ವಿವಿಧ ಏಜೆನ್ಸಿಗಳಿಂದ ಏಪ್ರಿಲ್-ಜೂನ್ ಅವಧಿಯಲ್ಲಿ 31 MT ಗೋದಿ ಸಂಗ್ರಹವನ್ನು ಅಂದಾಜಿಸಿದೆ. ಇದಕ್ಕೆ ಅತಿ ಹೆಚ್ಚು ಗೋದಿ ಉತ್ಪಾದಿಸುವ ರಾಜ್ಯಗಳು ಕೊಡುಗೆ ನೀಡಬೇಕು ಎಂದು ಹೇಳಿದರು.

2025-26ರ ಮುಂಗಾರು ಮಾರುಕಟ್ಟೆ ಋತುವಿನಲ್ಲಿ (ಏಪ್ರಿಲ್-ಜೂನ್) 31 MT ಗೋದಿ ಸಂಗ್ರಹವನ್ನು ಅಂದಾಜಿಸಿದ್ದು, ಇದು 2024-25ರ ಹಂಗಾಮಿನ 26.6 MT ಗಿಂತ ಶೇ.26ರಷ್ಟು ಹೆಚ್ಚಾಗಿದೆ. ಪ್ರಸ್ತುತ, ಭಾರತೀಯ ಆಹಾರ ನಿಗಮ ಆಫ್ ಇಂಡಿಯಾ ಏಪ್ರಿಲ್ 1ಕ್ಕೆ 7.46 MT ಬಫರ್ ವಿರುದ್ಧ 13.55 MT ಗೋದಿ ದಾಸ್ತಾನು ಹೊಂದಿದೆ ಎಂದು ತಿಳಿಸಿದರು.

ಇದೇ ವೇಳೆ ಯುಪಿ ಸಿಎಂ ಯೋಗಿ ಆದಿತ್ಯನಾಥ್ ಅವರು ಮಾತನಾಡಿ, ಉತ್ತರ ಪ್ರದೇಶ ಸರ್ಕಾರ ಗೋದಿ ಸಂಗ್ರಹಕ್ಕೆ ಕ್ರಮ ಕೈಗೊಂಡಿದೆ. 5,780 ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ. ಅಧಿಕಾರಿಗಳ ಪ್ರಕಾರ 20,409 ರೈತರು ಇಲ್ಲಿ ಗೋದಿ ಮಾರಾಟ ಮಾಡಿದ್ದಾರೆ ಎಂದರು. ಖರೀದಿ ಕೇಂದ್ರಗಳಲ್ಲಿ ರೈತರು 100 ಕ್ವಿಂಟಾಲ್‌ವರೆಗೆ ಗೋದಿ ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ. ಅಲ್ಲದೇ, ರಜಾ ದಿನಗಳಲ್ಲಿಯೂ ಖರೀದಿ ಕೇಂದ್ರಗಳನ್ನು ತೆರೆದಿಡುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ಸಚಿವ ಜೋಶಿ ಅವರು ಉತ್ತರ ಪ್ರದೇಶದಲ್ಲಿ ಪಿಎಂ ಕುಸುಮ್ ಮತ್ತು ಪಿಎಂ ಸೂರ್ಯ ಘರ್ ಯೋಜನೆ ಪ್ರಗತಿ ಬಗ್ಗೆಯೂ ಚರ್ಚೆ ನಡೆಸಿದರು. ನಮ್ಮ ರಾಜ್ಯದ ಜನಸಾಮಾನ್ಯರಿಗೆ ಕಡಿಮೆ ವೆಚ್ಚದ ಸೌರಶಕ್ತಿ ಅನುಷ್ಠಾನವನ್ನು ಖಚಿತಪಡಿಸಲಾಗಿದೆ. ಉತ್ತರ ಪ್ರದೇಶ 2027ರ ವೇಳೆಗೆ 22 ಸಾವಿರ ಮೆಗಾವ್ಯಾಟ್‌ಗಿಂತ ಹೆಚ್ಚಿನ ಸೌರ ವಿದ್ಯುತ್ ಉತ್ಪಾದನೆ ಗುರಿ ಹೊಂದಿದೆ. ಅಲ್ಲದೇ, ಪಿಎಂ ಸೂರ್ಯ ಘರ್ ಯೋಜನೆಯಡಿ ಸ್ವೀಕರಿಸಿದ ಅರ್ಜಿಗಳಿಗೆ ಅಭಿಯಾನ ನಡೆಸುವ ಮೂಲಕ ಸೌರ ಫಲಕಗಳನ್ನು ವಿತರಿಸಲು ನಿರ್ದೇಶನ ನೀಡಲಾಗಿದೆ ಎಂದು ಸಚಿವರ ಗಮನ ಸೆಳೆದರು.



**ಸೂರ್ಯಘರ್ ಫಲಾನುಭವಿಗಳ ಭೇಟಿ:**

**ಇದೇ ಸಂದರ್ಭದಲ್ಲಿ ಸಚಿವ ಜೋಶಿ ಅವರು ಲಖ್ನೋದಲ್ಲಿ ಸೂರ್ಯ ಘರ್ ಯೋಜನೆಯಡಿ ಅಳವಡಿಸಿದ ಸೌರ ಸ್ಥಾವರ, ಮೇಲ್ಛಾವಣಿ ಘಟಕಗಳನ್ನು ವೀಕ್ಷಿಸಿದರು. ಸೂರ್ಯಘರ್ ಫಲಾನುಭವಿ ಉಮೇಶ ರಾವತ್ ಎಂಬುವರು, 1.80 ಲಕ್ಷ ವೆಚ್ಚದಲ್ಲಿ ಸೌರ ಮೇಲ್ಛಾವಣಿ ಅಳವಡಿಸಿಕೊಂಡಿದ್ದು, ಸರ್ಕಾರದಿಂದ 1.08 ಲಕ್ಷ ಸಬ್ಸಿಡಿ ಬಂದಿದೆ. ಈ ಯೋಜನೆ ತುಂಬಾ ಪ್ರಯೋಜನಕಾರಿಯಾಗಿದೆ. ಈ ಮೊದಲು 2000, 3000 ವಿದ್ಯುತ್ ಬಿಲ್ ಭರಿಸುತ್ತಿದ್ದೆ. ಇದೀಗ ಕೇವಲ 150-200ಕ್ಕೆ ಇಳಿದಿದೆ ಎಂದು ಸಂತಸ ಹಂಚಿಕೊಂಡರು.**

**ಲಕ್ನೋದಲ್ಲಿ ಆತ್ಮೀಯ ಸ್ವಾಗತ:**

ಉತ್ತರ ಪ್ರದೇಶ ಭೇಟಿಗೆ ತೆರಳಿದ್ದ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರನ್ನು ಮಂಗಳವಾರ ಸಂಜೆ ಲಖನೌ ವಿಮಾನ ನಿಲ್ದಾಣದಲ್ಲಿ ಯುಪಿ ಇಂಧನ ರಾಜ್ಯ ಸಚಿವ ಸೋಮೇಂದ್ರ ಮತ್ತು ಆಹಾರ ಸಚಿವ ಸತೀಶ ಶರ್ಮಾ ಮತ್ತು ಅಧಿಕಾರಿಗಳು ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು.

## ನಿತ್ಯ ಪಂಚಾಂಗ 11.04.2025 ಶುಕ್ರವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ಚೈತ್ರ ಶುದ್ಧ

ಚತುರ್ದಶಿ, ಉತ್ತರಾ ನಕ್ಷತ್ರ,
ಅನಧ್ಯಯನ ಚತುಷ್ಟಯ,
ಕಡಂಬ ಓಲೆಸಿರಿ, ಪಂಗುಣಿ ಉತ್ತರಂ,
ಕಾವಡಿ ಭಗವತಿ ಉತ್ಸವ, ನೆಲೋಗಿ ಉತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಗ್ಯಾರಂಟಿ ಹೊಡೆತದಿಂದ ರಾಜ್ಯದಲ್ಲಿ ಅಭಿವೃದ್ಧಿ ಕ್ಷೀಣ: ವಿಜಯೇಂದ್ರ ವಾಗ್ದಾಳಿ



**ಮಂಗಳೂರು, ಏ.10:** ಗ್ಯಾರಂಟಿ ಹೊಡೆತಕ್ಕೆ ಸಿಲುಕಿ ರಾಜ್ಯದಲ್ಲಿ ಅಭಿವೃದ್ಧಿ ಕ್ಷೀಣಿಸಿದೆ. ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಹರಿಹಾಯ್ದಿದ್ದಾರೆ. ಮಾಧ್ಯಮಗಳ ಜತೆ ಮಾತಾಡಿದ ವಿಜಯೇಂದ್ರ, ಸಿಎಂ ಸಿದ್ದು ಸರ್ಕಾರದ ವಿರುದ್ಧ ಕೆಂಡಕಾರಿದ್ದಾರೆ. ರಾಜ್ಯದ ಯಾವುದೇ ಕ್ಷೇತ್ರಕ್ಕೂ ಅನುದಾನ ಕೊಡುತ್ತಿಲ್ಲ. ರಾಜ್ಯದ ಕಾಂಗ್ರೆಸ್ ಸರಕಾರವು ದಕ್ಷಿಣ ಕನ್ನಡಕ್ಕೆ ಮಾತ್ರವಲ್ಲ. ರಾಜ್ಯದ ಯಾವುದೇ ಕ್ಷೇತ್ರಕ್ಕೂ ಅನುದಾನ ಕೊಡುತ್ತಿಲ್ಲ ಎಂದು ಟೀಕಿಸಿದ್ದಾರೆ. ರಾಜ್ಯದಲ್ಲಿ ಬಿಜೆಪಿ ಅಧಿಕಾರದಲ್ಲಿದ್ದಾಗ, ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಮೋದಿಜೀ ಅವರ ಕೇಂದ್ರ ಸರಕಾರ ಮತ್ತು ರಾಜ್ಯ ಸರಕಾರ ಸೇರಿ ದಕ್ಷಿಣ ಕನ್ನಡಕ್ಕೆ, ಮಂಗಳೂರಿನಲ್ಲಿರುವ ವಿಧಾನಸಭಾ ಕ್ಷೇತ್ರಕ್ಕೆ 19,500 ಕೋಟಿ ಅನುದಾನ ಕೊಟ್ಟಿದ್ದರು. ಸಿದ್ದರಾಮಯ್ಯನವರ ಸರಕಾರ ಬಂದ ಬಳಿಕ ಅನುದಾನವೂ ಇಲ್ಲ; ರಾಜ್ಯದ ಮುಖ್ಯಮಂತ್ರಿಗಳು ದಕ್ಷಿಣ ಕನ್ನಡಕ್ಕೆ ಬರುವುದೂ ಇಲ್ಲ ಎಂದು ವಾಗ್ದಾಳಿ ನಡೆಸಿದ್ದಾರೆ.

ಸಿದ್ದರಾಮಯ್ಯನವರು ಬೆಂಗಳೂರಿನ ಮುಖ್ಯಮಂತ್ರಿಗಳೇ ಅಥವಾ ರಾಜ್ಯದ ಮುಖ್ಯಮಂತ್ರಿಗಳೇ ಎಂದು ಜನರು ಪ್ರಶ್ನೆ ಮಾಡುತ್ತಿದ್ದಾರೆ ಎಂದರು. ಬಸವರಾಜ ರಾಯರೆಡ್ಡಿ ಅವರದ್ದು ದಿಟ್ಟವಾಗಿ ಮಾತನಾಡುವ ಸ್ವಭಾವ. ಅವರು ಸತ್ಯವನ್ನೇ ಹೇಳಿದ್ದಾರೆ. ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣ ಸೇರಿ ಬೇರೆಬೇರೆ ಹಗರಣಗಳ ಬಳಿಕ ಅವರು ಕೂಡ ಬೇಸತ್ತಿದ್ದಾರೆ. ಅಭಿವೃದ್ಧಿಗೆ ಹಣ ಕೊಡುತ್ತಿಲ್ಲ ಎಂದು ನೇರವಾಗಿ ಹೇಳಿದ್ದಾರೆ ಎಂದು ವಿಜಯೇಂದ್ರ ತಿಳಿಸಿದರು. ಹಿಂದೆ ಬಿಜೆಪಿ ಸರಕಾರ ಇದ್ದಾಗ ಅಭಿವೃದ್ಧಿ ವಿಷಯದಲ್ಲಿ ಇಡೀ ದೇಶದಲ್ಲಿ ಕರ್ನಾಟಕವು ಗುಜರಾತ್ ನಂತರದ ಸ್ಥಾನವನ್ನು ಪಡೆದಿತ್ತು. ಇವತ್ತು ಭ್ರಷ್ಟಾಚಾರದಲ್ಲಿ ಕರ್ನಾಟಕವು ನಂಬರ್ ಒನ್ ಸ್ಥಾನಕ್ಕೆ ತಲುಪಿದೆ ಎಂದರೆ ಅದರ ಕೀರ್ತಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಲ್ಲುತ್ತದೆ ಎಂದು ತಿಳಿಸಿದರು.

# ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ಅಧಿಕಾರಾವಧಿ 4 ತಿಂಗಳು ವಿಸ್ತರಣೆ



**ಬೆಂಗಳೂರು, ಏ.10:** ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ.ಅಲೋಕ್ ಮೋಹನ್ ಅಧಿಕಾರಾವಧಿ 4 ತಿಂಗಳು ವಿಸ್ತರಣೆ ಮಾಡುವ ಸಾಧ್ಯತೆ ಇದೆ. ಏ.30ಕ್ಕೆ ಸೇವಾನಿವೃತ್ತಿ ಹೊಂದಬೇಕಿದೆ. ಸುಪ್ರೀಂಕೋರ್ಟ್ ಆದೇಶದ ಅನ್ವಯ ಅಧಿಕಾರ ಅವಧಿ ಆಗಸ್ಟ್‌ವರೆಗೆ ವಿಸ್ತರಣೆ ಆಗಲಿದೆ ಎಂಬ ಚರ್ಚೆ ನಡೆದಿದೆ. ಈ ಸಂಬಂಧ ಡಿಜಿ–ಐಜಿಪಿ ಡಾ. ಅಲೋಕ್ ಮೋಹನ್, 4 ತಿಂಗಳು ಅವಧಿ ವಿಸ್ತರಣೆಗೆ ಸರ್ಕಾರಕ್ಕೆ ಪತ್ರ ಬರೆದಿದ್ದಾರೆ. ಆಡಳಿತಾತ್ಮಕ ದೃಷ್ಟಿಯಿಂದ ರಾಜ್ಯ ಪೊಲೀಸ್ ಮಹಾನಿರ್ದೇಶಕರಿಗೆ ಕನಿಷ್ಠ 2 ವರ್ಷಗಳ ಅಧಿಕಾರ ಅವಧಿ ಹೊಂದಿರಬೇಕು ಎಂದು ಸುಪ್ರೀಂಕೋರ್ಟ್ ಆದೇಶವಿದೆ. ಕೇಂದ್ರ ತನಿಖಾ ದಳ (ಸಿಬಿಐ) ನಿರ್ದೇಶಕರಾಗಿ ಪ್ರವೀಣ್ ಸೂದ್ ತೆರಳಿದ ಬಳಿಕ ತೆರವಾದ ಡಿಜಿ–ಐಜಿಪಿ ಹುದ್ದೆಗೆ 2023ರ ಮೇ 23ರಂದು ಸೇವಾ ಹಿರಿತನದ ಆಧಾರದ ಮೇರೆಗೆ ನೇಮಕ ಮಾಡಲಾಗಿತ್ತು. ಮೊದಲು ಪ್ರಭಾರ ಡಿಜಿಪಿಯಾಗಿ ಕಾರ್ಯನಿರ್ವಹಿಸಿ 4 ತಿಂಗಳ ಬಳಿಕ ಹುದ್ದೆ ಕಾಯಂಗೊಂಡಿತು. ಪ್ರಭಾರ ಅವಧಿಯನ್ನು ಪರಿಗಣಿಸದೆ ಕಾಯಂ ಅವಧಿ ಮಾತ್ರ ಪರಿಗಣಿಸುವಂತೆ ರಾಜ್ಯ ಸರ್ಕಾರಕ್ಕೆ ಕೋರಿಕೆ ಸಲ್ಲಿಸಿದ್ದಾರೆ. ಈ ಮನವಿಗೆ ಸಿಎಂ ಸಿದ್ದರಾಮಯ್ಯ, ಗೃಹ ಸಚಿವ ಡಾ.ಜಿ.ಪರಮೇಶ್ವರ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎನ್ನಲಾಗುತ್ತಿದೆ. ಇಲಾಖೆಯಲ್ಲಿ ಕೆಲ ಹಿರಿಯ ಅಧಿಕಾರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ತುಮಕೂರು ರೈಲು ನಿಲ್ದಾಣಕ್ಕೆ ಶಿವಕುಮಾರ ಶ್ರೀ ನಾಮಕರಣ: ಪ್ರಸ್ತಾವಕ್ಕೆ ಪರಮೇಶ್ವರ್ ಸ್ಪಷ್ಟನೆ



**ತುಮಕೂರು, ಏ.10:** ಕಲ್ಪತರು ನಾಡು ತುಮಕೂರು ರೈಲ್ವೆ ನಿಲ್ದಾಣಕ್ಕೆ ಶಿವಕುಮಾರ ಶ್ರೀಗಳ ಹೆಸರಿಡಲು ಪ್ರಸ್ತಾವನೆ ಬಂದಿದೆ. ಈ ಕುರಿತು ಸಿಎಂ ಜೊತೆ ಚರ್ಚಿಸಿ ಆದೇಶ ಹೊರಡಿಸುತ್ತಾರೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದರು. ತುಮಕೂರಿನ ಸಿದ್ದಗಂಗಾಮಠದಲ್ಲಿ ಇವತ್ತು ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ತುಮಕೂರು ರೈಲ್ವೆ ನಿಲ್ದಾಣಕ್ಕೆ ಶ್ರೀಗಳ ಹೆಸರಿಟ್ಟರೇ ಶಾಶ್ವತವಾಗಿರುತ್ತೆ ಶ್ರೀಗಳ ಹೆಸರಿಡುವಂತೆ ಕೇಂದ್ರ ಸಚಿವ ಸೋಮಣ್ಣ ಕೂಡ ಮನವಿ ಮಾಡಿದ್ದಾರೆ ಎಂದು ಹೇಳಿದರು.ಶ್ರೀಗಳ ಹೆಸರಿಡಲು ಕೇಂದ್ರದಿಂದ ಮಂಜೂರು ಆಗಬೇಕು. ಶ್ರೀಗಳ ಹೆಸರಿಡುವ ವಿಚಾರದಲ್ಲಿ ವಿಳಂಬವಾಗಿಲ್ಲ. ಸಾರ್ವಜನಿಕ ಸ್ಥಳಗಳಿಗೆ ಹೆಸರಿಡಬೇಕಾದರೆ ಪ್ರೊಸಿಜರ್ ಇರುತ್ತೆ ಪ್ರಸ್ತಾವನೆಗಳು ಬಂದಾಗ ಸಾಧಕ ಬಾಧಕ ನೋಡಬೇಕಾಗುತ್ತೆ ಎಲ್ಲವನ್ನೂ ಪರಿಶೀಲಿಸಿದ ಬಳಿಕ ಪ್ರೊಸಿಜರ್ ಆಗಬೇಕಲ್ಲ. ಹಾಗಾಗಿ ವಿಳಂಬವಾಗಿದೆ ಎಂದರು.

# ಸುಂಕ ನೀತಿ ಬದಲಾದ ನಂತರ ಅಮೆರಿಕದೊಂದಿಗೆ ಮಾತುಕತೆ ಉತ್ತಮ: ಪಿಯೂಷ್ ಗೋಯಲ್




**ಮುಂಬೈ, ಏ.10:** ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪರಸ್ಪರ ಸುಂಕದ ಮೇಲೆ 90 ದಿನಗಳ ವಿರಾಮವನ್ನು ಘೋಷಿಸುತ್ತಿದ್ದಂತೆ, ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಗುರುವಾರ ಅಮೆರಿಕದೊಂದಿಗೆ ಮಾತುಕತೆಗಳು ಉತ್ತಮವಾಗಿ ಪ್ರಗತಿಯಲ್ಲಿವೆ ಮತ್ತು ಭಾರತವು ಸುಂಕ ಸಂಬಂಧಿತ ಸಮಸ್ಯೆಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ ಎಂದು ಹೇಳಿದರು. ಭಾರತವು ಈಗಾಗಲೇ ಈ ಸಮಸ್ಯೆಯನ್ನು (ಯುಎಸ್ ಜೊತೆಗಿನ ವ್ಯಾಪಾರ ಸುಂಕ) ಆರಂಭದಿಂದಲೇ ಬಹಳ ಪರಿಣಾಮಕಾರಿಯಾಗಿ ನಿರ್ವಹಿಸುತ್ತಿದೆ.

ಪ್ರಧಾನಿ ಮೋದಿ ಮತ್ತು ಅಧ್ಯಕ್ಷ ಟ್ರಂಪ್ ಫೆಬ್ರವರಿಯಲ್ಲಿಯೇ ಈ ನಿರ್ಧಾರವನ್ನು ತೆಗೆದುಕೊಂಡಿದ್ದರು, ಇದು ಎರಡೂ ದೇಶಗಳು ದ್ವಿಪಕ್ಷೀಯ ಒಪ್ಪಂದಕ್ಕೆ ಸಹಿ ಹಾಕುತ್ತವೆ, ಇದು ವ್ಯಾಪಾರವನ್ನು ಸರಳಗೊಳಿಸುತ್ತದೆ ಮತ್ತು ದ್ವಿಮುಖ ವ್ಯಾಪಾರವನ್ನು $500 ಶತಕೋಟಿಗೆ ಕೊಂಡೊಯ್ಯುತ್ತದೆ, ಇದು ಇಂದಿನಿಂದ 2.5 ಪಟ್ಟು ಹೆಚ್ಚಾಗಿದೆ" ಎಂದು ಗೋಯಲ್ ಹೇಳಿದರು. ಪ್ರಸ್ತಾವಿತ ವ್ಯಾಪಾರ ಒಪ್ಪಂದವು ನಾಗರಿಕರಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸುತ್ತದೆ ಮತ್ತು ಆರ್ಥಿಕತೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಸಚಿವರು ಹೇಳಿದರು.

# ಅಮಾನತು ಆದೇಶ ವಾಪಸ್ ಪಡೆಯುವಂತೆ ಸ್ಪೀಕರ್‌ಗೆ ಮನವಿ?

**ಬೆಂಗಳೂರು, ಏ.10:** ವಿಧಾನಸಭೆಯಿಂದ ಆರು ತಿಂಗಳು ಅಮಾನತು ಜತೆಗೆ ಕಠಿಣ ನಿರ್ಬಂಧ ವಿಧಿಸಿರುವುದು ಸದನದ ಕಾರ್ಯಕಲಾಪಗಳ ನಿಯಮಾವಳಿಗೆ ವಿರುದ್ಧವಾಗಿದೆ. ಈ ಆದೇಶ ವಾಪಸ್ ಪಡೆಯಬೇಕು ಎಂದು ವಿಧಾನಸಭಾಧ್ಯಕ್ಷ ಯು.ಟಿ.ಖಾದರ್‌ಗೆ ಶಿಕ್ಷೆಗೆ ಗುರಿಯಾದ ಬಿಜೆಪಿಯ ಶಾಸಕರು ಮತ್ತೊಮ್ಮೆ ಮನವಿ ಸಲ್ಲಿಸಲು ನಿರ್ಧರಿಸಿದ್ದಾರೆ. ನಗರದ ಖಾಸಗಿ ಹೋಟೆಲ್‌ನಲ್ಲಿ ಈ ಶಾಸಕರು ಸಭೆ ಸೇರಿ ಮುಂದಿನ ಕಾರ್ಯತಂತ್ರದ ಬಗ್ಗೆ ಚರ್ಚಿಸಿದರು. ಸರ್ಕಾರದ ಹಠಮಾರಿತನ, ಸಂವಿಧಾನಬಾಹಿರ ನಿರ್ಧಾರದ ವಿರುದ್ಧ ಪ್ರತಿಭಟನೆ ಮಾಡಿದ್ದೇವೆಯೇ ಹೊರತು ಸ್ಪೀಕರ್ ಪೀಠಕ್ಕೆ ಅಗೌರವ ತೋರಿಲ್ಲ. ಸ್ಪೀಕರ್ಗೆ ಸಲ್ಲಿಸಲಿರುವ ಮನವಿಯಲ್ಲಿ ಈ ಅಂಶವನ್ನು ಪ್ರಧಾನವಾಗಿ ಉಲ್ಲೇಖಿಸಿ, ಅಮಾನತು ಆದೇಶ ಹಿಂಪಡೆಯಲು ಕೋರುವುದಕ್ಕೆ ಸಭೆಯಲ್ಲಿ ಒಮ್ಮತ ವ್ಯಕ್ತವಾಗಿದೆ. ಸುಪ್ರೀಂ ಕೋರ್ಟ್‌ಗೆ ಮೊರೆ ಹೋದರೆ ಸ್ಪೀಕರ್ ಆದೇಶ ರದ್ದಾಗುವುದು ನಿಶ್ಚಿತವೆಂಬ ವಿಶ್ವಾಸ ವ್ಯಕ್ತಪಡಿಸಿದೆ.

ಮಹಾರಾಷ್ಟ್ರದಲ್ಲೂ ಹೀಗೆ ನಿಯಮ ಮೀರಿ ಹಲವು ಶಾಸಕರನ್ನು ಒಂದು ವರ್ಷದ ಅಮಾನತು ಮಾಡಲಾಗಿತ್ತು. ಆದರೆ ಸುಪ್ರೀಂ ಕೋರ್ಟ್, ಮಹಾರಾಷ್ಟ್ರ ಸರ್ಕಾರದ ಸ್ಪೀಕರ್ ಆದೇಶ ಅತಾರ್ಕಿಕ, ಅಸಮಂಜಸ, ನಿಯಮಬಾಹಿರವಾಗಿ ವರ್ತಿಸಿದ್ದಾರೆ ಎಂದು ತೀರ್ಪು ನೀಡಿ, ಸಸ್ಪೆಂಡ್ ಆದೇಶವನ್ನು ಅಸಿಂಧುವೆಂದು ಹೇಳಿದ್ದೂ ಸಭೆಯಲ್ಲಿ ಪ್ರಸ್ತಾಪವಾಗಿದೆ. ಕಾರ್ಯಕಲಾಪಗಳ ನಿಯಮಾವಳಿಗೆ ವಿರುದ್ಧವಾದ ಆದೇಶವೆಂದು ಸ್ಪೀಕರ್ ಯು.ಟಿ.ಖಾದರ್ ಅರ್ಥ ಮಾಡಿಕೊಂಡು ವಾಪಸ್ ಪಡೆಯಲಿದ್ದು, ಸುಪ್ರೀಂ ಕೋರ್ಟ್‌ಗೆ ಮೊರೆ ಹೋಗಬೇಕಾದ ಅಗತ್ಯವಿಲ್ಲವೆಂದು ಸಭೆ ತೀರ್ಮಾನಿಸಿದೆ. ಅಮಾನತಾದ ಶಾಸಕರಾದ ಡಾ.ಸಿ.ಎನ್.ಅಶ್ವತ್ಥ ನಾರಾಯಣ, ದೊಡ್ಡನಗೌಡ ಪಾಟೀಲ, ಮುನಿರತ್ನ, ಡಾ.ಶೈಲೇಂದ್ರ ಬೆಲ್ದಾಳೆ, ಬಸವರಾಜ ಮತ್ತಿಮೂಡ್, ಧೀರಜ್ ಮುನಿರಾಜು, ಎಂ.ಆರ್.ಪಾಟೀಲ್ ಮತ್ತಿತರರು ಇದ್ದರು.

# ಬಿಐಇಸಿಯಲ್ಲಿ ಪರಿಸರ ಸ್ನೇಹಿ ಬಾಗಿಲು, ಕಿಟಕಿ ಮತ್ತು ಬಣ್ಣ, ಕೋಟಿಂಗ್ ವಸ್ತುಗಳ ಬೃಹತ್ ಪ್ರದರ್ಶನ ಮೇಳಕ್ಕೆ ಚಾಲನೆ







ಬೆಂಗಳೂರು, ಏ, 10; ನಗರದ ಅಂತರರಾಷ್ಟ್ರೀಯ ಪ್ರದರ್ಶನ ಕೇಂದ್ರದಲ್ಲಿ ಮೂರು ದಿನಗಳ ಪರಿಸರಸ್ನೇಹಿ ಇಂಡಿಯಾ ಪೇಂಟ್ ಮತ್ತು ಕೋಟಿಂಗ್ ಪ್ರದರ್ಶನ, ಬಾಗಿಲು, ಕಿಟಕಿ ಮತ್ತು ಇತರ ನಿರ್ಮಾಣ ಸಾಮಗ್ರಿಗಳ ಪ್ರದರ್ಶನಕ್ಕೆ ಕ್ರೆಡಾಯ್ ಕರ್ನಾಟಕದ ಅಧ್ಯಕ್ಷ ಪ್ರದೀಪ್ ರಾಯ್ಕರ್ ಚಾಲನೆ ನೀಡಿದರು.

ಅತ್ಯಂತ ವೇಗವಾಗಿ ಬೆಳವಣಿಗೆಯಾಗುತ್ತಿರುವ ಮನ ನಿರ್ಮಾಣ ವಲಯದ ಪರಿಸರಸ್ನೇಹಿ ಮರಮುಟ್ಟುಗಳು, ಪ್ಲೈವುಡ್, ಫಲಕಗಳು, ಅಲಂಕಾರಿಕ ವಸ್ತುಗಳು, ಹಾರ್ಡ್‌ವೇರ್, ಪೀಠೋಪಕರಣಗಳು ಮತ್ತು ಯಂತ್ರೋಪಕರಣಗಳ ಸಮಗ್ರ ಪ್ರದರ್ಶನಕ್ಕೆ ಇದು ಅತ್ಯುತ್ತಮ ವೇದಿಕೆಯಾಗಿದೆ. ಉದ್ಯಮ ವಲಯದ ಪ್ರಮುಖರು, ವಾಸ್ತುಶಿಲ್ಪಿಗಳು, ವಿನ್ಯಾಸಕರು ಮತ್ತು ವ್ಯಾಪಾರ ವೃತ್ತಿಪರರ ಸಮಾಗಮಕ್ಕೆ ಸಮ್ಮೇಳನ ಸಾಕ್ಷಿಯಾಯಿತು. ಒಂದೇ ವೇದಿಕೆಯಡಿ ಅತ್ಯುತ್ತಮ ಸಾಮಗ್ರಿಗಳು, ವ್ಯಾಪಾರ, ವ್ಯವಹಾರಕ್ಕೆ ಸೂಕ್ತ ಅವಕಾಶ ಒದಗಿಸಿದೆ. ನಂತರ ಮಾತನಾಡಿದ ಕ್ರೆಡಾಯ್ ಅಧ್ಯಕ್ಷ ಪ್ರದೀಪ್ ರಾಯ್ಕರ್, ಸ್ಟೀಲ್‌ನಿಂದ ಮಾಡಿದ ಹೊಸ್ತಿಲು, ಬಾಗಿಲು, ಕಿಟಕಿ ಮತ್ತಿತರ ಅತ್ಯಾಧುನಿಕ ವಸ್ತುಗಳು ಇಂದಿನ ಅಗತ್ಯವಾಗಿದೆ.

ಹೊಸ ಮಾದರಿಯ ಮನೆ ನಿರ್ಮಾಣದ ಪರಿಕರಗಳಿಂದ ಮರಗಳು ಹನನವಾಗುವುದು ತಪ್ಪುತ್ತದೆ ಎಂದು ಹೇಳಿದರು.

ಮನೆಗಳಿಗೆ ಕ್ಷಣಾರ್ಧದಲ್ಲಿ ಬಣ್ಣ ಬಳಿಯುವ ಅತ್ಯಾಧುನಿಕ ಯಂತ್ರೋಪಕರಗಳು ಮೇಳದಲ್ಲಿವೆ. ನಾವೀನ್ಯಕಾರರು, ಮರಮುಟ್ಟುಗಳ ಮೇಲ್ಮೈಗೆ ಅತ್ಯುತ್ತಮ ವಿನ್ಯಾಸ ದೊರಕಿಸಿಕೊಡುವ, ಉದ್ಯಮದ ಭವಿಷ್ಯವನ್ನು ರೂಪಿಸುವ ಇತ್ತೀಚಿನ ಪ್ರವೃತ್ತಿಗಳು, ತಂತ್ರಜ್ಞಾನಗಳು ಮತ್ತು ಸುಸ್ಥಿರ ಪರಿಹಾರಗಳ ಅನ್ವೇಷಣೆಗೆ ಇದು ಸಾಕ್ಷಿಯಾಗಿದೆ.

ಮೀಡಿಯಾ ಡೇ ಮಾರ್ಕೆಟಿಂಗ್ ಆಯೋಜಿಸಿರುವ ಈ ಪ್ರದರ್ಶನ ದೇಶಾದ್ಯಂತದ 100 ಕ್ಕೂ ಹೆಚ್ಚು ಪ್ರದರ್ಶಕರನ್ನು ಒಳಗೊಂಡಿದೆ. ಅತ್ಯಾಧುನಿಕ ಉತ್ಪನ್ನಗಳು, ಕಚ್ಚಾ ವಸ್ತುಗಳು, ಯಂತ್ರೋಪಕರಣಗಳು ಮತ್ತು ನವ ನವೀನ ತಂತ್ರಜ್ಞಾನಗಳನ್ನು ಪ್ರದರ್ಶಿಸಲಾಗುತ್ತಿದೆ. ಸುಸ್ಥಿರತೆ, ನಾವೀನ್ಯತೆ, ಪರಿಸರ ಸ್ನೇಹಿ ಅಭ್ಯಾಸಗಳು, ಪ್ರಗತಿಗಳನ್ನು ಉತ್ತೇಜಿಸುವ ಜೊತೆಗೆ ಉದ್ಯಮದ ವಿಕಸನ ಗೊಳ್ಳುತ್ತಿರುವ ಅಗತ್ಯಗಳನ್ನು ಪರಿಹರಿಸುವ ಗುರಿ ಹೊಂದಿದೆ. ಡೋರ್ಸ್ ವಿಂಡೋಸ್ ಮತ್ತು ಮುಂಭಾಗಗಳ ಪ್ರದರ್ಶನವನ್ನು ಮಹಾರಾಷ್ಟ್ರ ಪಾಲಿಮರ್ ಪ್ರಾಡಕ್ಟ್ಸ್ ಪ್ರಾಯೋಜಿಸಿದರೆ, ಇಂಡಿಯಾ ಪೇಂಟ್ ಮತ್ತು ಕೋಟಿಂಗ್ ಪ್ರದರ್ಶನವನ್ನು ಇಂಡಿಯಾ ಸ್ಮಾಲ್‌ಸ್ಕೇಲ್ ಪೇಂಟ್ ಅಸೋಸಿಯೇಷನ್ ಮತ್ತು ಯುಪಿವಿಸಿ ಕಿಟಕಿ ಮತ್ತು ಬಾಗಿಲು ತಯಾರಕರ ಸಂಘ – ಯುಡಬ್ಲ್ಯುಡಿಎಂಎ ಬೆಂಬಲಿಸಿದೆ.

ರಿಯಲ್ ಎಸ್ಟೇಟ್ ಡೆವಲಪರ್‌ಗಳ ಒಕ್ಕೂಟ (ಕ್ರೆಡಾ)ದ ಸಿಇಒಅನಿಲ್ ನಾಯಕ್, ಕ್ರೆಡಾಯ್ ಮೈಸೂರು ಅಧ್ಯಕ್ಷ ಅಮೋರ್, ಟಿಂಬರ್ ಮರ್ಚೆಂಟ್ ಅಸೋಸಿಯೇಷನ್ ಅಧ್ಯಕ್ಷ ಅರ್ಜುನ್ ಹಿರಿಜಿ ಪಟೇಲ್, ಭಾರತೀಯ ಸಣ್ಣ ಸ್ಕೇಲ್ ಪೇಂಟ್ ಅಸೋಸಿಯೇಷನ್ನಿನ ಕರ್ನಾಟಕ ಪ್ರದೇಶ ಅಧ್ಯಕ್ಷ ಬಿ.ಎಸ್.ಸೂರ್ಯ ಪ್ರಕಾಶ್, ವಾರಿಯೋ ಸ್ಮಿತ್ ಅಧ್ಯಕ್ಷರು, ಯುಡಬ್ಲ್ಯುಡಿಎಂಎ ಉಪಾಧ್ಯಕ್ಷ ಫರೀದ್ ಖಾನ್, ಪ್ಲಾಸ್ಟಿಕ್ ಅಸೋಸಿಯೇಷನ್ ಅಧ್ಯಕ್ಷ ವಿಜಯ್ ಕುಮಾರ್, ಕರ್ನಾಟಕ ಹಾರ್ಡ್‌ವೇರ್ ಅಸೋಸಿಯೇಷನ್ ಅಧ್ಯಕ್ಷ ಯೂಸುಫ್ ಮೊಹ್ಸಿನಾಲಿ, ಕರ್ನಾಟಕ ಹಾರ್ಡ್ವೇರ್ ಅಸೋಸಿಯೇಷನ್ ಅಧ್ಯಕ್ಷ ವಿಜಯ್ ಅಗರ್ವಾಲ್ ಕರ್ನಾಟಕ ಹಾರ್ಡ್‌ವೇರ್ ಅಸೋಸಿಯೇಷನ್, ಹಾರ್ದಿಕ್ ಪಟೇಲ್ ಅಧ್ಯಕ್ಷರು – ಪ್ರೀಕಾಸ್ಟ್ ಮತ್ತಿತರರು ಪಾಲ್ಗೊಂಡಿದ್ದರು.

# ಕಾಂಗ್ರೆಸ್ ಸರ್ಕಾರ ಯಾವಾಗ ತೊಲಗುತ್ತೋ ಅನ್ನುವುದು ಜನರ ಭಾವನೆ: ಬಸವರಾಜ ಬೊಮ್ಮಾಯಿ

**ಜನರ ಭಾವನೆಯಂತೆ ಬಿಜೆಪಿ ಹೋರಾಟ ಆರಂಭಿಸಿದೆ**




**ಹಾವೇರಿ, ಏ.10:** ಹಾಲು, ಆಲ್ಕೋಹಾಲು, ವಿದ್ಯುತ್ ದರ ಹೆಚ್ಚಳ ಸೇರಿದಂತೆ ಎಲ್ಲದರ ಬೆಲೆ ಹೆಚ್ಚಳ ಮಾಡಿರುವ ಕಾಂಗ್ರೆಸ್ ಸರ್ಕಾರ ಯಾವಾಗ ತೊಲಗಿತ್ತೊ ಅಂತ ಜನರ ಭಾವನೆ ಇದೆ. ಅವರ ಭಾವನೆಯಂತೆ ನಾವು ಹೋರಾಟ ಮಾಡುತ್ತಿದ್ದೇವೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಜೆಪಿ ರಾಜ್ಯಾದ್ಯಂತ ಜನ ವಿರೋಧಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಆರಂಭಿಸಿದೆ. ಪ್ರತಿ ಜಿಲ್ಲೆಯಲ್ಲಿ ಜನಾಕೋಶ ಯಾತ್ರೆ ಆರಂಭಿಸಿದೆ. ಹಾವೇರಿ ಜಿಲ್ಲೆಯಲ್ಲಿ ಅಹೋರಾತ್ರಿ ಹೋರಾಟ ಆರಂಭ ಮಾಡಿದ್ದೇವೆ. ಕರ್ನಾಟಕ ಸರ್ಕಾರ ಎಲ್ಲ ವಸ್ತುಗಳ ಬೆಲೆ ಏರಿಸಿದೆ. ಹಾಲು, ಆಲೊಹಾಲು, ಎಲೆಕ್ಟ್ರಿಸಿಟಿ ಸೇರಿದಂತೆ ಎಲ್ಲದರ ಬೆಲೆ ಹೆಚ್ಚಳ ಮಾಡಿದೆ. ಸರ್ಕಾರ ದಿವಾಳಿಯಾಗಿದೆ. ಬರುವಂತಹ ದಿನಗಳಲ್ಲಿ ಸರ್ಕಾರಿ ನೌಕರರಿಗೆ ಸಂಬಳ ಕೊಡಲು ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಲಿದೆ ಎಂಬ ಮಾಹಿತಿ ಇದೆ ಎಂದು ಹೇಳಿದರು. ಭಷಾಚಾರ ತುಂಬಿ ತುಳುಕುತ್ತಿದೆ. ಕಾಂಗ್ರೆಸ್ನ ಶಾಸಕರೇ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ ಅಂತ ಹೇಳಿದ್ದಾರೆ.

ಪಿಡಬ್ಲ್ಯುಡಿ, ಎಲೆಕ್ಟ್ರಿಕ್ ಕಾಂಟ್ರಾಕ್ಟರ್, ಅಬಕಾರಿ ಗುತ್ತಿಗೆದಾರರು ಎಲ್ಲರೂ ಭ್ರಷ್ಟಾಚಾರ ಹೆಚ್ಚಾಗಿದೆ ಅಂತ ಆರೋಪಿಸಿದ್ದಾರೆ. ಇಷ್ಟೆಲ್ಲಾ ಆದರೂ ಮುಖ್ಯಮಂತ್ರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ. ಬಡವನ ಬದುಕು ಭಾರವಾಗಿದೆ. ಗ್ಯಾರೆಂಟಿಯನ್ನೂ ಸರಿಯಾಗಿ ನೀಡದೇ ದೊಡ್ಡ ಪ್ರಮಾಣದ ತೆರಿಗೆಯ ಭಾರವನ್ನು ಜನರ ಮೇಲೆ ಹಾಕಿದ್ದಾರೆ. ಹಾಲಿನ ಸಬ್ಸಿಡಿ ರೈತರಿಗೆ ಕೊಡುವ ಬದಲು ಹಾಲಿನ ದರ ಹೆಚ್ಚಳ ಮಾಡಿದ್ದಾರೆ. ಅದರ ವಿರುದ್ಧ ಜನರ ಧ್ವನಿಯಾಗಿ ಹೋರಾಟ ನಡೆಸಿದ್ದೇವೆ ಎಂದು ಹೇಳಿದರು.

ಎಲೆಕ್ಟ್ರಿಕ್ ಮೀಟರ್ ಅಳವಡಿಕೆಯಲ್ಲಿ ಬಹಳ ದೊಡ್ಡ ಮಟ್ಟದ ಭ್ರಷ್ಟಾಚಾರ ನಡೆದಿದೆ ಅಂತ ಗುತ್ತಿಗೆದಾರರು ದಾಖಲೆ ಸಮೇತ ಹೇಳಿದ್ದಾರೆ. ಬೇರೆ ರಾಜ್ಯಗಳಲ್ಲಿ ಕೇವಲ 700 ರೂ. ಇರುವ ಮೀಟರ್‌ಗಳಿಗೆ ಐದರಿಂದ ಆರು ಸಾವಿರ ರೂ. ವಸೂಲಿ ಮಾಡುತ್ತಿದ್ದಾರೆ. ಯಾವಾಗ ಈ ಸರ್ಕಾರ ತೊಲಗಿತ್ತೊ ಅಂತ ಜನರ ಭಾವನೆ ಇದೆ. ಅವರ ಭಾವನೆಯಂತೆ ನಾವು ಹೋರಾಟ ಮಾಡುತ್ತಿದ್ದೇವೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಜಾತಿ ಗಣತಿ ವಿಚಾರದ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಜಾತಿ ಗಣತಿ ವಿಚಾರದಲ್ಲಿ ರಾಜ್ಯ ಸರ್ಕಾರ ಏನು ಮಾಡತ್ತದೆ ಮಾಡಲಿ, ಜಾತಿ ಗಣತಿ ವರದಿಯನ್ನು ಕೊಟ್ಟು ಒಂದು ವರ್ಷವಾಯಿತು. ಸಿಎಂ ಸಿದ್ದರಾಮಯ್ಯ ಅವರು ಅದನ್ನು ಯಾಕೆ ಮುಚ್ಚಿಟ್ಟುಕೊಂಡಿದ್ದಾರೊ ಗೊತ್ತಿಲ್ಲ. ಅವರು ಬಿಡುಗಡೆ ಮಾಡಲು ಏನು ಸಮಸ್ಯೆಯಾಗಿದೆ. ಅವರು ಬಿಡುಗಡೆ ಮಾಡಲಿ ಆ ನಂತರ ಮಾತನಾಡುತ್ತೇನೆ ಎಂದು ಹೇಳಿದರು.

# ಗುಜರಾತ್ ಕನ್ನಡ ಸಂಘದಿಂದ ಸುಧೀಂದ್ರಗೆ ಸನ್ಮಾನ



**ಅಹಮದಾಬಾದ್, ಏ.10:** ಗುಜರಾತ್ ರಾಜ್ಯದ ಅಹಮದಾಬಾದ್ ಕರ್ನಾಟಕ ಸಂಘವು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಈ ಸುಧೀಂದ್ರ ಅವರು ರಾಜ್ಯದಲ್ಲಿ ಜೈವಿಕ ಇಂಧನ ಕ್ಷೇತ್ರದ ಅಭಿವೃದ್ಧಿಗಾಗಿ ಕೈಗೊಂಡಿರುವ ಅನೇಕ ಕಾರ್ಯಕ್ರಮಗಳು ಹಾಗೂ ಅವರ ಅವಿರತ ಶ್ರಮ, ನಾಯಕತ್ವ ಗುಣಗಳು ಮತ್ತು ದೂರ ದೃಷ್ಟಿಯ ಚಿಂತನೆಗಳಿಂದ ಪ್ರಭಾವಿತರಾಗಿ ಅಧ್ಯಕ್ಷರನ್ನು ಕನ್ನಡ ಸಂಘಕ್ಕೆ ಆಹ್ವಾನಿಸಿ ಹೃತ್ಪೂರ್ವಕವಾಗಿ ಸನ್ಮಾನಿಸಿದರು. ಗುಜರಾತ್ ರಾಜ್ಯದ ಕನ್ನಡ ಸಂಘದ ಅಧ್ಯಕ್ಷ ಹನುಮಂತ ಬೆನ್ನೂರ್ ಅವರು ಮಾತನಾಡಿ ದೆಹಲಿಯ ಮಾದರಿಯಲ್ಲಿ ಕರ್ನಾಟಕ ಭವನವನ್ನು ಅಹಮದಾಬಾದಿನಲ್ಲಿ ನಿರ್ಮಿಸಿ ಕೊಡಬೇಕೆಂದು ಹಾಗೂ ಕರ್ನಾಟಕ ರಾಜ್ಯ ಸರ್ಕಾರವನ್ನು ಈ ಸಂಬಂಧ ಮನವೊಲಿಸಿ ರಾಜ್ಯ ಸರ್ಕಾರದ ಮುಖ್ಯಮಂತಿ ಸಿದ್ದರಾಮಯ್ಯನವರಿಗೆ ತಾವು ವೈಯಕ್ತಿಕವಾಗಿ ಮಾತನಾಡಿ ಕೂಡಲೇ ಕರ್ನಾಟಕ ಭವನವನ್ನು ನಿರ್ವಹಣೆ ಮಾಡಲು ಕ್ರಮವಹಿಸಲು ತಾವು ಸಹಾಯ ಮಾಡಬೇಕೆಂದು ಕೋರಿದರು. ಅಹಮದಾಬಾದಿನಲ್ಲಿ ಕರ್ನಾಟಕ ಭವನವನ್ನು ನಿರ್ಮಾಣ ಮಾಡುವುದರಿಂದ ಗುಜರಾತ್ ರಾಜ್ಯಕ್ಕೆ ಕರ್ನಾಟಕ ಸರ್ಕಾರದ ಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಭೇಟಿ ನೀಡಲು ಹಾಗೂ ಭೇಟಿ ಕೊಟ್ಟ ಸಂದರ್ಭದಲ್ಲಿ ತಂಗಲು ಅನುಕೂಲವಾಗಲಿದೆ ಎಂದು ಪ್ರಸ್ತಾವನೆ ಸಲ್ಲಿಸುತ್ತಾ ಮಂಡಳಿಯ ಅಧ್ಯಕ್ಷರ ವೈಯಕ್ತಿಕ ಸಹಕಾರ ಈ ನಿಟ್ಟಿನಲ್ಲಿ ಅನುಕೂಲವಾಗಲಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗುಜರಾತ್ ರಾಜ್ಯದ ಕನ್ನಡ ಸಂಘದ ಅಧ್ಯಕ್ಷ ಹನುಮಂತ ಬೆನ್ನೂರ್ ಉಪಾಧ್ಯಕ್ಷ ಸುನಿಲ್ ಕಪೂರ್, ಕಾರ್ಯದರ್ಶಿ ಸುಮಾನಲ್ ಕೊಡಿಯಾಲಬೈಲ್ ಟ್ರಸ್ಟಿಗಳಾದ ಮನೋಜ್ ಪೂಜಾರಿ ಹಾಗೂ ಪದಾಧಿಕಾರಿಗಗಳಾದ ಹರೀಶ್ ಪೂಜಾರಿ, ನಿತಿನ್ ಅಮೀನ್, ರಾಜಕುಮಾರ್ ನಾಡಗುಂಡಿ, ರಮೇಶ್ ಅಂಸಿ ಹಾಗೂ ಎಮ್,ಎಸ್,ರಾವ್ ಇದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕಂದಾಯ ಇಲಾಖೆ ಆಧುನಿಕ ತಂತ್ರಜ್ಞಾನಕ್ಕೂ ಒಗ್ಗಿಕೊಳ್ಳುತ್ತಿದೆ: ಕೃಷ್ಣ ಬೈರೇಗೌಡ

**ಬೆಂಗಳೂರು, ಏ, 10:** ಕಂದಾಯ ಇಲಾಖೆ ಎಲ್ಲಾ ನೌಕರರ ಸಹಕಾರದಿಂದ ಜನಪರವಾಗುತ್ತಿದೆ, ಪರಿವರ್ತನೆಯ ಹಾದಿಯಲ್ಲಿದೆ ಹಾಗೂ ಹೊಸ ಆಧುನಿಕ ತಂತ್ರಜ್ಞಾನಕ್ಕೂ ಒಗ್ಗಿಕೊಳ್ಳುತ್ತಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಭಿಪ್ರಾಯಪಟ್ಟರು.

ವಿಧಾನಸೌಧದ ಮೆಟ್ಟಿಲುಗಳ ಮೇಲೆ ನಡೆದ ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ ಹಾಗೂ ಇಲಾಖೆಯ ನೌಕರರ ಸಂಘಗಳ 36ನೇ ರಾಷ್ಟ್ರೀಯ ಭೂಮಾಪನಾ ದಿನಾಚರಣೆಯಲ್ಲಿ ಮಾತನಾಡಿದ ಅವರು, ಸರ್ವೇ ಇಲಾಖೆ ಇಡೀ ಸರ್ಕಾರಕ್ಕೆ ಮೂಲ ಇಲಾಖೆ. ಯಾವುದೇ ಭೂಮಿಗೆ ದಾಖಲೆಗಳ ಮೂಲಕ ಅಸ್ಥಿತ್ವ ಕಲ್ಪಿಸುವ ಮಹತ್ವದ ಕಾರ್ಯ ಸರ್ವೇ ಇಲಾಖೆಯದ್ದು. ಹೀಗಾಗಿ ಈ ಇಲಾಖೆಯನ್ನು ನೌಕರರ ಸಹಕಾರದಿಂದ ಹೊಸ ಆಧುನಿಕ ತಂತ್ರಜ್ಞಾನಕ್ಕೆ ತೆರೆದುಕೊಳ್ಳುವಂತೆ ಮಾಡಲಾಗಿದೆ. ಆ ಮೂಲಕ ಇಲಾಖೆಯನ್ನು ಮತ್ತಷ್ಟು ಜನಪರಗೊಳಿಸುವ ಪರಿವರ್ತನೆಯ ಹಾದಿಯಲ್ಲಿ ಮುನ್ನಡೆಸಲಾಗುತ್ತಿದೆ ಎಂದರು.

ಮುಂದುವರೆದು, ಹತ್ತಾರು ವರ್ಷಗಳಿಂದ ಬಾಕಿ ಇದ್ದ ರೈತರ ಕೆಲಸಗಳನ್ನು ಕಳೆದ ಎರಡು ವರ್ಷಗಳಲ್ಲಿ ಅಭಿಯಾನದ ಮಾದರಿಯಲ್ಲಿ ನಡೆಸಲಾಗುತ್ತಿದೆ. ಗ್ರಾಮಠಾಣಾ ಹಾಗೂ ನಗರ ಪ್ರದೇಶಗಳಲ್ಲಿ ಜನ ನೆಮ್ಮದಿಯಿಂದ ಜೀವಿಸಲು ಆಸ್ತಿಯ ನಕ್ಷೆ ಅವಶ್ಯ ಎಂದು ಅರ್ಥ ಮಾಡಿಕೊಂಡು ಸ್ವಾಮಿತ್ವ ಯೋಜನೆಯ ಅಡಿ ಗ್ರಾಮಠಾಣಾಗಳನ್ನು ಕರ್ನಾಟಕದಲ್ಲಿ ಮೊದಲ ಬಾರಿಗೆ ಸರ್ವೇ ಮಾಡುವ ಕೆಲಸವನ್ನು ನಾವು ಮಾಡುತ್ತಿದ್ದೇವೆ. ಜೊತೆಗೆ ನಗರ ಆಸ್ತಿ ಮಾಲಿಕತ್ವವನ್ನೂ ನೀಡಲಾಗುತ್ತಿದೆ. ಇದೇ ಮಾದರಿಯನ್ನು ಅನುಕರಿಸಿ ಕೇಂದ್ರ ಸರ್ಕಾರ ದೇಶಾದ್ಯಂತ ನಕ್ಷಾ ಕಾರ್ಯಕ್ರಮ ನಡೆಸುತ್ತಿದೆ. ನಮ್ಮ ರಾಜ್ಯದಲ್ಲೂ 10 ಗ್ರಾಮ ಪಂಚಾಯತ್ ಹಾಗೂ ನಗರ ಸಭೆ ಆಯ್ಕೆ ಮಾಡಿಕೊಂಡು ಕಳೆದ ಮೂರು ತಿಂಗಳಿಂದ ಗ್ರಾಮೀಣ–ನಗರ ಪ್ರದೇಶಗಳಲ್ಲಿ ವಸತಿ ನಿವೇಶನಗಳಿಗೆ ಆಸ್ತಿ ಪ್ರಮಾಣ ಪತ್ರ ನೀಡುತ್ತಿದೆ. ಆದರೆ, ಈ ಮಹತ್ವಾಕಾಂಕ್ಷೆಯ ಕೆಲಸಕ್ಕೆ ಬುನಾದಿ ಹಾಕಿದ್ದು ಕರ್ನಾಟಕ ಎಂದು ಹರ್ಷ ವ್ಯಕ್ತಪಡಿಸಿದರು.

ಆಧುನಿಕ ಕಂಪ್ಯೂಟರ್ ಜಗತ್ತಿನಲ್ಲೂ ಸಹ ಸರ್ವೇ ಕೆಲಸವನ್ನು ತಾಂತ್ರಿಕಗೊಳಿಸದೆ ಜನರ ಮೇಲೆ ಹೊರೆ ಹಾಕುವುದು ಅಮಾನವೀಯ ಮತ್ತು ಸಾಮಾಜಿಕ ನ್ಯಾಯಕ್ಕೆ ವಿರುದ್ಧವಾದ ನಡವಳಿಕೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಭಿಪ್ರಾಯ ಪಟ್ಟರು.

"ಸರ್ವೇ ಕೆಲಸವನ್ನು 1802 ರಿಂದಲೂ ಚೈನ್ ಹಿಡಿದೇ ಭೂಮಿಯನ್ನು ಅಳೆಯುವ ಸಂಪ್ರದಾಯ ಚಾಲ್ತಿಯಲ್ಲಿದೆ. ಬಿಸಿಲಿನಲ್ಲಿ ಸರ್ವೇಯರ್ ಜೊತೆಗೆ ಇಬ್ಬರು ಸಹಾಯಕರೂ ಕೆಲಸ ಮಾಡಬೇಕಿತ್ತು. ಸರ್ವೇ ಮಾಡಲು ಕನಿಷ್ಠ 70 ನಿಮಿಷ ಅದನ್ನು ನಕ್ಷೆ ಮಾಡಲು 3 ಗಂಟೆ ಸಮಯ ವ್ಯರ್ಥವಾಗುತ್ತಿತ್ತು. ಆದರೆ, ಆಧುನಿಕ ತಂತ್ರಜ್ಞಾನ ಆಧಾರಿತ ರೋವರ್ ಈ ಕೆಲಸವನ್ನು ಕೇವಲ 10 ನಿಮಿಷಕ್ಕೆ ಮುಗಿಸಲಿದೆ ಎಂದು ಮಾಹಿತಿ ನೀಡಿದರು.

ಕಳೆದ 200 ವರ್ಷದಲ್ಲಿ ಪ್ರಪಂಚ ಇಷ್ಟು ಬದಲಾದರೂ ನಮ್ಮ ವಿಧಿ–ವಿಧಾನ ಹಾಗೆ ಇದೆ. ಪ್ರಪಂಚದ ಮುಖ ಅಂತರಾಳ ಬದಲಾದರೂ, ಇಲಾಖೆ ಕೆಲಸ ಮಾಡುವ ರೀತಿ ನೀತಿ ಮಾತ್ರ ಬದಲಾಗಿಲ್ಲ. ಆದರೆ, ಸರ್ವೇ ಕೆಲಸವನ್ನು ತಾಂತ್ರಿಕಗೊಳಿಸದೆ ಕೆಲಸ ಮಾಡೋಕೆ ಜನ ಇದ್ದಾರೆ ಎಂದು ಉಢಾಫೆಯಿಂದ ನೌಕರರ ಮೇಲೆ ಹೊರೆ ಹಾಕುವುದು ಅಮಾನವೀಯ . ಅಲ್ಲದೆ, ಚೈನ್ ಸರ್ವೇ ಕೆಲಸದಲ್ಲಿ ಕೆಲವರು ತಮ್ಮ ಹಿತಾಸಕ್ತಿಗೆ ಅನುಗುಣವಾಗಿ ಸರ್ವೇಯಲ್ಲಿ ಬದಲಾವಣೆ ಮಾಡಬಹುದು. ಇದರಿಂದ ಹಲವರು ಇಂದಿಗೂ ಕೋರ್ಟ್ ಕಚೇರಿಗೆ ಅಲೆಯುವಂತಾಗಿದೆ. ಆದರೆ, ರೋವರ್ ಸರ್ವೇಯಲ್ಲಿ ಇಂತಹ ಅಕ್ರಮಗಳಿಗೆ ಆಸ್ಪದ ಇಲ್ಲ. ಹೀಗಾಗಿ ಇಲಾಖೆಯಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳುವ



ಮೂಲಕ ಜನರಿಗೆ ತ್ವರಿತ ಸರ್ವೇ ಮಾಡಿಕೊಡುವುದು ಹಾಗೂ ಅಧಿಕಾರಿಗಳಿಗೆ ಕೆಲಸದ ಒತ್ತಡ ಕಡಿಮೆ ಮಾಡುವುದು ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಿಂದೆಯೇ 775 ರೋವರ್ ಖರೀದಿಗೆ ಅವಕಾಶ ಮಾಡಿಕೊಟ್ಟಿದ್ದರು. ಪ್ರಸ್ತುತ 5 ಸಾವಿರ ರೋವರ್ ಖರೀದಿಗೆ ಅನುಮತಿ ನೀಡಿದ್ದಾರೆ. ಹೀಗಾಗಿ ಮುಂದಿನ ದಿನಗಳಲ್ಲಿ ಪ್ರತಿಯೊಬ್ಬ ಭೂ ಮಾಪಕರಿಗೂ ಒಂದು ರೋವರ್ ನೀಡುವುದು ಹಾಗೂ ಸರ್ವೇ ನಕ್ಷೆ ನೂರಕ್ಕೆ ನೂರು ಗಣಕೀರಣಗೊಳಿಸುವುದು ನಮ್ಮ ಗುರಿ ಎಂದು ತಿಳಿಸಿದರು.

**ಎಂಟೇ ದಿನಕ್ಕೆ ಹದ್ದುಬಸ್ತು:** 11 ಇ ಸ್ಕೆಚ್ ಜಮೀನಿನ ಹದ್ದುಬಸ್ತು, ತತ್ಕಾಲ್ ಪೋಡಿ, ಇ ಸ್ವತ್ತು, ಸ್ವಾವಲಂಬಿ, ಭೂ ಮಂಜೂರಿ ಪ್ರಕರಣಗಳ ಸರ್ವೇ, ಕೆರೆ ಬಂಡಿದಾರಿ ಸರ್ವೇ, ಭೂ ಪರಿವರ್ತನೆ ಸರ್ವೇ, ಕಂದಾಯ ಅರಣ್ಯ ಗಡಿ ನಿಗದಿಗೊಳಿಸುವ ಜಂಟಿ ಸರ್ವೇ, ಇವು ನಮ್ಮ ಇಲಾಖೆಯ ಪ್ರಮುಖ ಕೆಲಸ. ಕಳೆದ 23 ತಿಂಗಳಲ್ಲಿ ಈವರೆಗೆ 26 ಲಕ್ಷ ಸರ್ವೇ ಪ್ರಕರಣಗಳನ್ನು ಜನತೆಗೆ ಮಾಡಿಕೊಟ್ಟಿದ್ದೇವೆ. ಒಂದು ದಿನಕ್ಕೆ ಸರಾಸರಿ 5 ರಿಂದ 6 ಸಾವಿರ ಪ್ರಕರಣಗಳ್ನು ಸರ್ವೇ ಮಾಡಿಕೊಡುತ್ತಿದ್ದೇವೆ ಎಂದು ಅವರು ತಿಳಿಸಿದರು.

ನಮ್ಮ ಸರ್ಕಾರ ಬರುವ ಮೊದಲು ಹದ್ದುಬಸ್ತಿಗೆ ಸರಾಸರಿ ಒಂದು ಅರ್ಜಿ ಕೊಟ್ರೆ ಸುಮಾರು 3 ರಿಂದ 6 ತಿಂಗಳಾಗುತ್ತಿತ್ತು. ಆದರೆ ಈಗ ಗರಿಷ್ಠ 8 ದಿನದಲ್ಲಿ ನಮ್ಮ ಸರ್ಕಾರದಲ್ಲಿ ಹದ್ದುಬಸ್ತು ಮಾಡಿಕೊಡುತ್ತಿದ್ದೇವೆ. ಹಾವೇರಿಯಲ್ಲಿ ಒಂದು ಹದ್ದುಬಸ್ತು ಸರ್ವೇಗೆ 2 ವರ್ಷ ಆದರೂ ಆಗಿಲ್ಲ ಎಂದು ಶಾಸಕರೇ ನನ್ನನ್ನು ಪ್ರಶ್ನೆ ಮಾಡಿದರು. ಈ ಬಗ್ಗೆ ನಾನು ವಿಚಾರಿಸಿದಾಗ ಆ ದೂರು ನಿಜವಾಗಿತ್ತು. ನಮ್ಮ ಹಿಂದಿನ ಸಿಎಂ ಹಾವೇರಿ ಜಿಲ್ಲೆಯವರೇ ಆಗಿದ್ದರು. ನಾನು ಇಂದಿನ ಡೇಟಾ ಪ್ರಕಾರ ಹೇಳೋದಾದ್ರೆ 8 ದಿನಕ್ಕೆ ಹದ್ದುಬಸ್ತು ಮತ್ತು ಕೇವಲ ಮೂರು ದಿನಕ್ಕೆ 11ಇ ಸ್ಕೆಚ್ ಮಾಡಿಕೊಡುತ್ತಿದ್ದೇವೆ. ಈ ಮೊದಲು ತಿಂಗಳಾನುಗಟ್ಟಲೆ ಕಾಯಬೇಕಾದ್ದ ಪರಿಸ್ಥಿತಿಯನ್ನು ಬದಲಿಸಿದ್ದೇವೆ ಎಂದರು.

ಹತ್ತಾರು ವರ್ಷದಿಂದ ಪೋಡಿ ಆಗದ ಖಾಸಗಿ ಜಮೀನಿಗೆ ಪೋಡಿಮುಕ್ತ ಅಭಿಯಾನ ನಡೆಸಬೇಕು ಎಂದು ಸಿದ್ದರಾಮಯ್ಯನವರು ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗಲೇ ಕೆಲಸ ಆರಂಭಿಸಿದ್ದರು. ಆಗಲೇ ರಾಜ್ಯದ 30 ಸಾವಿರ ಗ್ರಾಮಗಳ ಪೈಕಿ 16630 ಗ್ರಾಮಗಳನ್ನು ಪೋಡಿ ಮಾಡಲಾಗಿತ್ತು. ಆದರೆ, ಕಳೆದ ನಾಲ್ಕು ವರ್ಷ ಹಿಂದಿನ ಸರ್ಕಾರದ ಅವಧಿಯಲ್ಲಿ ಕೇವಲ 2 ಸಾವಿರ ಗ್ರಾಮಗಳಲ್ಲಿ ಮಾತ್ರ ಪೋಡಿ ಮಾಡಲಾಗಿದೆ. ಆದರೆ, ಪ್ರಸ್ತುತ 23 ತಿಂಗಳಲ್ಲಿ 2079 ಗ್ರಾಮಗಳನ್ನು ಈಗಾಗಲೇ ಪೋಡಿಮುಕ್ತ ಮಾಡಲಾಗಿದೆ. ಅಲ್ಲದೆ, ಉಳಿದ ಗ್ರಾಮಗಳನ್ನು ಮುಂದಿನ ಒಂದು ವರ್ಷದಲ್ಲಿ ಪೋಡಿ ಮುಕ್ತ ಮಾಡುವ ಸವಾಲನ್ನು ತೆಗೆದುಕೊಳ್ಳಲಾಗಿದೆ ಎಂದರು. ಮಾನವ ಸಂಪನ್ಮೂಲ ಇಲ್ಲದೆ ಜನಪರ ಕೆಲಸ ಸಾಧ್ಯವಿಲ್ಲ. ಹೀಗಾಗಿ ಇಲಾಖೆಗೆ ಮತ್ತಷ್ಟು ಬಲ ತುಂಬಲು ಖಾಲಿ ಇರುವ ಎಲ್ಲಾ ಸ್ಥಾನಗಳನ್ನು ಭರ್ತಿಗೆ ಸಿಎಂ ಸಿದ್ದರಾಮಯ್ಯ ಈಗಾಗಲೇ ಗ್ರೀನ್ ಸಿಗ್ನಲ್ ನೀಡಿದ್ದು, ಈ ನಿರ್ಧಾರ ಇಲಾಖೆಯನ್ನು ಮತ್ತಷ್ಟು ಜನಪರವಾಗಿ ಕೆಲಸ ಮಾಡಲು ಅನುವು ಮಾಡಿಕೊಟ್ಟಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಭಿಪ್ರಾಯ ಪಟ್ಟರು.

ಸಿದ್ದರಾಮಯ್ಯ ಕಳೆದ ವರ್ಷವೇ 750 ಜನ ಸರ್ಕಾರಿ ಸರ್ವೇಯರ್ ನೇಮಕಾತಿಗೆ ಒಪ್ಪಿಗೆ ಸೂಚಿಸಿದ್ದರು. ಹುದ್ದೆ ಭರ್ತಿಗೆ ಈಗಾಗಲೇ ಕೆಪಿಎಸ್‌ಸಿ ಪರೀಕ್ಷೆ ಮುಗಿಸಿ ಅಂತಿಮ ಪರೀಕ್ಷೆ ಮುಂದಿನ ಮೇ 10–11ಕ್ಕೆ ನಿಗದಿಯಾಗಿದೆ. ಸಂದರ್ಶನ ಇಲ್ಲದೆ ಮೆರಿಟ್ ಆಧಾರದಲ್ಲಿ ನೇಮಕಾತಿ ನಡೆಯಲಿದ್ದು, ಒಂದು ರೂಪಾಯಿಯೂ ಲಂಚಕ್ಕೆ ಆಸ್ಪದವಿಲ್ಲ. ಅಲ್ಲದೆ, ಖಾಲಿ ಇರುವ 39 ಎಡಿಎಲ್‌ಆರ್ ಸ್ಥಾನಗಳನ್ನೂ ತುಂಬಲು ಒಪ್ಪಿಗೆ ದೊರೆತಿದೆ ಎಂದರು.

## ದುರಸ್ತಿ ಕೆಲಸಕ್ಕೆ ಹೆಚ್ಚಿನ ಒತ್ತು

ರಾಜ್ಯದಲ್ಲಿ ಸುಮಾರು 10 ಲಕ್ಷ ರೈತರಿಗೆ ಹತ್ತಾರು ವರ್ಷಗಳ ಹಿಂದೆ ಸರ್ಕಾರಿ ಜಮೀನು ಅಕ್ರಮ ಸಕ್ರಮದಡಿ ಮಂಜೂರಾಗಿದೆ. ಜಮೀನು ಮಂಜೂರಾಗಿದ್ದರೂ ಪೋಡಿಯಾಗಿ ಆರ್.ಟಿ.ಸಿ ಆಗದೆ ಇರುವುದರಿಂದ, ಅಂತಹ ರೈತರ ಪರಿಸ್ಥಿತಿ ತ್ರಿಶಂಕುವಿನಂತೆ ಆಗಿದೆ. ತಾಲ್ಲೂಕು ಕಚೇರಿ, ಸರ್ವೆ ಕಚೇರಿಗಳಿಗೆ ಅಲೆದು ಅಲೆದು ಪ್ರಯೋಜನವಾಗದೆ ತೀವ್ರ ತೊಂದರೆಗೆ ತುತ್ತಾಗಿದ್ದಾರೆ. ಈ ಬಗ್ಗೆ ಬಹಳ ವರ್ಷಗಳಿಂದ ಚರ್ಚೆಗಳು, ಪ್ರಯತ್ನಗಳು ಆಗುತ್ತಿದ್ದರೂ ಸರಿಯಾದ ಪರಿಹಾರ ದೊರೆತಿರುವುದಿಲ್ಲ.

ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈ ಸಮಸ್ಯೆಯನ್ನು ಪರಿಹರಿಸಲು, ಸೂಕ್ತ ಪರಿಹಾರ ಕ್ರಮಕೈಗೊಳ್ಳಲು ಸೂಚಿಸಿದ ಹಿನ್ನೆಲೆಯಲ್ಲಿ, ಇಲಾಖೆ ಈ ಕೆಲಸವನ್ನು ಗಂಭೀರವಾಗಿ ಪರಿಗಣಿಸಿತ್ತು. ಪರಿಣಾಮ ಸರಳೀಕೃತ ದುರಸ್ತಿ ಪೋಡಿ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಈಗ ಇಲಾಖೆಯ ನೌಕರರ ಸಹಾಯದಿಂದ ಎಲ್ಲವನ್ನೂ ಆನ್‌ಲೈನ್ ಮೂಲಕವೇ ಮಾಡಲಾಗುತ್ತಿದ್ದು, ಕಳೆದ ಮೂರು ತಿಂಗಳಲ್ಲಿ 20 ಸಾವಿರ ರೈತರಿಗೆ ದುರಸ್ತಿ ಮಾಡಿಕೊಟ್ಟಿದ್ದೇವೆ. ಅಲ್ಲದೆ, ಒಂದು ರೂಪಾಯಿಯೂ ಲಂಚವಿಲ್ಲದೆ ಪಾರದರ್ಶಕವಾಗಿ ಈ ಕೆಲಸವನ್ನು ಮಾಡಲಾಗುತ್ತಿದೆ ಎಂಬುದು ಗಮನಾರ್ಹ ಎಂದರು.

# ವಾರಣಾಸಿಗೆ ಇಂದು ಮೋದಿ ಭೇಟಿ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ

**ಲಖನೌ,ಏ.10:** ಪ್ರಧಾನಿ ನರೇಂದ್ರ ಮೋದಿ ಅವರು ಇದೇ ಇಂದು ತಮ್ಮ ಲೋಕಸಭಾ ಕ್ಷೇತ್ರವಾದ ವಾರಣಾಸಿಗೆ ಭೇಟಿ ನೀಡಲಿದ್ದು, 3,884.18 ಕೋಟಿ ರೂ. ಮೌಲ್ಯದ 44 ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಎಂದು ವಾರಣಾಸಿಯ ಬಿಜೆಪಿ ಅಧ್ಯಕ್ಷ ದಿಲೀಪ್ ಪಟೇಲ್ ತಿಳಿಸಿದ್ದಾರೆ. ಇದು ವಾರಣಾಸಿಗೆ ಮೋದಿ ಅವರ 50ನೇ ಭೇಟಿಯಾಗಿದೆ.



ಮೋದಿ ಭೇಟಿ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 130 ಕುಡಿಯುವ ನೀರಿನ ಯೋಜನೆಗಳು, 100 ಹೊಸ ಅಂಗನವಾಡಿ ಕೇಂದ್ರಗಳು, 356 ಗ್ರಂಥಾಲಯಗಳು, 4 ಗ್ರಾಮೀಣ ರಸ್ತೆಗಳು ಮತ್ತು 2 ಕಾಲೇಜುಗಳನ್ನು ಉದ್ಘಾಟಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ. ಅಲ್ಲದೇ ನಗರದ ವಿದ್ಯುತ್ ಮೂಲಸೌಕರ್ಯ ಬಲಪಡಿಸುವ ನಿಟ್ಟಿನಲ್ಲಿ 15 ಹೊಸ ಸಬ್‌ಸ್ಟೇಷನ್‌ಗಳ ನಿರ್ಮಾಣ, ಹೊಸ ಟ್ರಾನ್ಸ್ ಮಾರ್ಗಗಳ ಸ್ಥಾಪನೆ ಮತ್ತು 1,500 ಕಿಮೀ ಹೊಸ ವಿದ್ಯುತ್ ಮಾರ್ಗಗಳ ಸ್ಥಾಪನೆ ಸೇರಿದಂತೆ, 2,250 ಕೋಟಿ ರೂ. ವೆಚ್ಚದ 25 ಯೋಜನೆಗಳಿಗೆ ಪ್ರಧಾನಿ ಮೋದಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಅವರು ಹೇಳಿದ್ದಾರೆ.

ಮೂರು ಹೊಸ ಮೇಲ್ಸೇತುವೆಗಳು, ವಿವಿಧ ರಸ್ತೆ ಅಗಲೀಕರಣ ಕ್ರಮಗಳು, ಶಾಲಾ ನವೀಕರಣ ಕಾರ್ಯಗಳು ಹಾಗೂ ಶಿವಪುರ ಮತ್ತು ಉತ್ತರ ಪ್ರದೇಶದ ಕಾಲೇಜಿನಲ್ಲಿ ಎರಡು ಕ್ರೀಡಾಂಗಣಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬಳಿಕ ಶಹಂಶಾಪುರದ ಮೆಹದಿಗಂಜ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮೋದಿ ಮಾತನಾಡಲಿದ್ದಾರೆ ಎಂದು ವಿವರಿಸಿದ್ದಾರೆ. 4,000 ಪೊಲೀಸ್ ಭದ್ರತೆ; ಪ್ರಧಾನಿ ಮೋದಿ ಅವರ ಭೇಟಿ ಹಿನ್ನೆಲೆ ಭದ್ರತೆಗಾಗಿ ಪೊಲೀಸ್ ಮತ್ತು ಅರೆಸೈನಿಕ ಪಡೆಗಳಿಂದ ಸುಮಾರು 4,000 ಸಿಬ್ಬಂದಿ ನಿಯೋಜಿಸಲಾಗುವುದು ಎಂದು ಪೊಲೀಸ್ ಆಯುಕ್ತ ಮೋಹಿತ್ ಅಗರ್ವಾಲ್ ಮತ್ತು ಭದ್ರತಾ ವಿಭಾಗದ ಎಡಿಜಿ ರಘುವೀರ್ ಲಾಲ್ ಅವರು ತಿಳಿಸಿದ್ದಾರೆ.

# ಸಚಿವ ಸಂಪುಟದ ಸಭೆಯಲ್ಲಿ ಇಂದು ಜಾತಿ ಗಣತಿ ವರದಿ

ಬೆಂಗಳೂರು, ಏ.10 ನಾಳೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ರಾಜ್ಯದ ಶಾಶ್ವತ ಹಿಂದುಳಿದ ವರ್ಗದ ಆಯೋಗ ನಡೆಸಿರುವ ಜಾತಿ ಗಣತಿ ವರದಿ ಮಂಡನೆಯಾಗಲಿದ್ದು, ಈ ಜಾತಿ ಗಣತಿ ವರದಿಯನ್ನು ಸಂಪುಟ ಒಪ್ಪಿಕೊಳ್ಳುತ್ತದೆಯೇ, ಇಲ್ಲವೇ ತಿರಸ್ಕರಿಸುತ್ತದೆಯೇ ಅಥವಾ ವರದಿ ಪರಿಶೀಲನೆಗೆ ಸಚಿವ ಸಂಪುಟ ಉಪಸಮಿತಿ ರಚನೆಗೆ ತೀರ್ಮಾನ ಮಾಡುತ್ತದೆಯೇ ಎಂಬುದು ಚರ್ಚೆಗೆ ಗ್ರಾಸವಾಗಿ ಸಂಪುಟ ತೀರ್ಮಾನ ಕುತೂಹಲಕ್ಕೆ ಎಡೆಮಾಡಿದೆ. ರಾಜ್ಯದ ಶಾಶ್ವತ ಹಿಂದುಳಿದ ವರ್ಗಗಳ ಆಯೋಗ ಕಳೆದ ವರ್ಷವೇ ರಾಜ್ಯ ಸರ್ಕಾರಕ್ಕೆ ಮುಚ್ಚಿದ ಲಕೋಟೆಯಲ್ಲಿ ಜಾತಿ ಗಣತಿಯ ವರದಿಯನ್ನು ಸಲ್ಲಿಸಿದೆ. ಈ ವರದಿಯಲ್ಲಿ ಏನೆಲ್ಲಾ ಇದೆ ಎಂಬುದು ಅಧಿಕೃತವಾಗಿ ಇದುವರೆಗೂ ಬಹಿರಂಗವಾಗಿಲ್ಲ. ನಾಳೆ ಸಚಿವ ಸಂಪುಟ ಸಭೆಯಲ್ಲಿ ವರದಿ ಮಂಡನೆಯಾಗುತ್ತಿದ್ದು, ವರದಿಯಲ್ಲಿ ಏನೆಲ್ಲಾ ಅಂಶಗಳಿವೆ, ಯಾವ ಯಾವ ಜಾತಿಗಳ ಜನಸಂಖ್ಯೆ ಎಷ್ಟಿದೆ, ಯಾವಾ ಯಾವ ಜಾತಿಗಳ ಶೈಕ್ಷಣಿಕ ಹಾಗೂ ಆರ್ಥಿಕ ಪರಿಸ್ಥಿತಿ ಏನಿದೆ ಎಂಬುದೆಲ್ಲಾ ಬಹಿರಂಗವಾಗಲಿದೆ. ಜಾತಿ ಗಣತಿ ವರದಿಯನ್ನು ಸರ್ಕಾರ ಈಗಿರುವಂತೆಯೇ ಒಪ್ಪುತ್ತದೆಯೇ, ಇಲ್ಲವೇ ಜಾತಿ ಗಣತಿ ವರದಿಯನ್ನು ತಿರಸ್ಕರಿಸುತ್ತದೆಯೇ ಎಂಬುದು ಕುತೂಹಲಕ್ಕೆ ಎಡೆ ಮಾಡಿದ್ದು, ಯಾವುದೇ ವಿವಾದ ಬೇಡ ಎಂದು ಸರ್ಕಾರ ಜಾತಿ ಗಣತಿ ವರದಿ ಪರಿಶೀಲನೆಗೆ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಿ ಸದ್ಯಕ್ಕೆ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಳ್ಳುವ ತೀರ್ಮಾನ ಮಾಡುತ್ತದೆಯೇ ಎಂಬುದು ಕುತೂಹಲ ಮೂಡಿಸಿದೆ.

ನಾಳೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿಯ ವರದಿಯ ಹಣೆ ಬರಹ ಏನಾಗಲಿದೆ ಎಂಬುದು ತೀರ್ಮಾನವಾಗಲಿದೆ. ಈ ವರದಿ ಅಂಗೀಕಾರ ಸಂಬಂಧ ಪರ–ವಿರೋಧ ಹೇಳಿಕೆಗಳು ವ್ಯಕ್ತವಾಗಿ ಪ್ರಬಲ ಸಮುದಾಯಗಳು ಈ ವರದಿಯನ್ನು ವಿರೋಧಿಸಿದ್ದವು. ಜಾತಿ ಗಣತಿ ವರದಿ ವಿವಾದಕ್ಕೆ ಒಳಗಾದ ಬೆನ್ನಲ್ಲೆ ಸರ್ಕಾರ ವರದಿ ಜಾರಿಗೆ ಹಿಂದೇಟು ಹಾಕಿತ್ತು. ಜಾತಿ ಗಣತಿ ವರದಿಯನ್ನು ಒಪ್ಪಬೇಕು ಎಂಬ ಪ್ರಬಲ ಒತ್ತಾಯಗಳ ನಡುವೆಯೇ ನಾಳೆ ನಡೆಯುವ ಸಚಿವ ಸಂಪುಟ ಸಭೆಯಲ್ಲಿ ವರದಿ ಮಂಡನೆಯಾಗುತ್ತಿದ್ದು, ವರದಿಯ ಬಗ್ಗೆ ಸಂಪುಟ ಯಾವ ತೀರ್ಮಾನ ಕೈಗೊಳ್ಳುತ್ತದೆ ಎಂಬುದು ಕುತೂಹಲ ಮೂಡಿಸಿದೆ. ರಾಜ್ಯದ ಹಿಂದುಳಿದ ವರ್ಗಗಳ ಶಾಶ್ವತ ಆಯೋಗ 2015ರಲ್ಲೇ ಜಾತಿ ಗಣತಿಯನ್ನು ನಡೆಸಿತ್ತು. ಈ ವರದಿಗೆ ಆಕ್ಷೇಪಗಳು, ವಿರೋಧಗಳು ವ್ಯಕ್ತವಾದ ಹಿನ್ನೆಲೆಯಲ್ಲಿ ನಂತರ ಬಂದ ಶಾಶ್ವತ ಹಿಂದುಳಿದ ವರ್ಗದ ಅಧ್ಯಕ್ಷರಾದ ಜಯಪ್ರಕಾಶ್ ಹೆಗ್ಡೆಯವರು ಹಿಂದಿನ ಕಾಂತರಾಜು ಅಧ್ಯಕ್ಷತೆಯ ಸಮಿತಿ ರೂಪಿಸಿದ್ದ ದತ್ತಾಂಶಗಳನ್ನು ಆಧರಿಸಿ ಅಧಿಕೃತವಾಗಿ ಕಳೆದ ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ಸರ್ಕಾರಕ್ಕೆ ವರದಿಯನ್ನು ಮುಚ್ಚಿದ ಲಕೋಟೆಯಲ್ಲಿ ನೀಡಿತ್ತು. ನಾಳೆ ಈ ವರದಿ ಸಂಪುಟದ ಮುಂದೆ ಬರಲಿದ್ದು, ವರದಿಯಲ್ಲಿ ಯಾವೆಲ್ಲ ಅಂಶಗಳಿವೆ ಎಂಬುದು ಅಧಿಕೃತವಾಗಿ ಬಹಿರಂಗವಾಗಲಿದೆ. ಜಾತಿ ಗಣತಿ ವರದಿಯ ಕೆಲವು ಮಾಹಿತಿಗಳು ಈಗಾಗಲೇ ಸೋರಿಕೆಯಾಗಿದ್ದು, ಈ ವರದಿಯನ್ನು ರಾಜ್ಯದ ಪ್ರಬಲ ಜಾತಿಗಳಾದ ಲಿಂಗಾಯತ ಮತ್ತು ಒಕ್ಕಲಿಗ ಸಂಖ್ಯೆ ಮುಸ್ಲಿಂರು ಮತ್ತು ಪರಿಶಿಷ್ಟ ಜಾತಿಗಿಂತ ಕಡಿಮೆ ಇದೆ ಎಂಬ ಅಂಶಗಳು ಬಹಿರಂಗವಾಗಿತ್ತು. ಈ ಜಾತಿ ಗಣತಿ ವರದಿ ಸರಿಯಿಲ್ಲ, ಇದನ್ನು ತಿರಸ್ಕರಿಸಬೇಕು ಎಂದು ಲಿಂಗಾಯತ ಮತ್ತು ಒಕ್ಕಲಿಗ ಸಮುದಾಯದ ಸ್ವಾಮೀಜಿಗಳು, ಮುಖಂಡರುಗಳು ಒತ್ತಾಯಿಸಿದ್ದರು. ಹಾಗೆಯೇ ಈ ವರದಿಯನ್ನು ಸರ್ಕಾರ ಒಪ್ಪಿಕೊಳ್ಳಬೇಕು ಎಂದು ಪರಿಶಿಷ್ಟ ಜಾತಿ, ಸಮುದಾಯ, ಹಿಂದುಳಿದ ವರ್ಗಗಳ ಮುಖಂಡರುಗಳು ಒತ್ತಾಯಿಸಿದ್ದರು. ಪರ–ವಿರೋಧ ಅಭಿಪ್ರಾಯಗಳ ನಡುವೆಯೇ ನಾಳೆ ಜಾತಿ ಗಣತಿ ವರದಿ ಸಂಪುಟದ ಮುಂದೆ ಬರುತ್ತಿದೆ.

# 2ನೇ ವಿಮಾನ ನಿಲ್ದಾಣ: ಎಎಐ ವರದಿ ಬಳಿಕ ಪರಿಣತ ಸಂಸ್ಥೆಗಳಿಂದ ಅಧ್ಯಯನ: ಎಂಬಿ ಪಾಟೀಲ

**ಬೆಂಗಳೂರು,ಏ.10;** ರಾಜಧಾನಿಯ ಸಮೀಪ ನಿರ್ಮಿಸಲು ಉದ್ದೇಶಿಸಿರುವ ಎರಡನೇ ಏರ್‌ಪೋರ್ಟ್ ಸಂಬಂಧ ಮೂರೂ ಸ್ಥಳಗಳ ಪರಿಶೀಲನೆ ನಡೆಸಿರುವ ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರದ (ಎಎಐ) ಉನ್ನತ ಮಟ್ಟದ ತಂಡವು ಇನ್ನು ಒಂದು ತಿಂಗಳಲ್ಲಿ ತನ್ನ ಅಭಿಪ್ರಾಯ ತಿಳಿಸುವ ಸಾಧ್ಯತೆ ಇದೆ. ಬಳಿಕ ಇದನ್ನು ವಿಸ್ತೃತ ಅಧ್ಯಯನಕ್ಕೆ ವಿಮಾನ ನಿಲ್ದಾಣಗಳ ಅಭಿವೃದ್ಧಿಪಡಿಸುವ ಪರಿಣತ ಕಂಪನಿಗಳ ಮುಂದೆ ಕೊಂಡೊಯ್ಯಲಾಗುವುದು. ಬಳಿಕ ಸರಕಾರವು ವಿಮಾನ ನಿಲ್ದಾಣಕ್ಕೆ ಸ್ಥಳವನ್ನು ಅಂತಿಮಗೊಳಿಸಲಿದೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ.



ಎಎಐ ತಂಡ ಬಂದು ಹೋಗಿರುವುದು ನಿಜ. ವಿಮಾನ ನಿಲ್ದಾಣವನ್ನು ಎಲ್ಲಿ ಮಾಡಿದರೆ ಸೂಕ್ತವೆನ್ನುವುದು ಪ್ರಯಾಣಿಕರ ದಟ್ಟಣೆ, ಸರಕು ಸಾಗಣೆ ದಟ್ಟಣೆ ಮತ್ತು ಕೈಗಾರಿಕಾ ಅಗತ್ಯ ಮುಂತಾದ ಅಂಶಗಳನ್ನು ಅವಲಂಬಿಸಿದೆ ಎಂದು ಅವರು ತಿಳಿಸಿದ್ದಾರೆ. ಈಗ ದೇವನಹಳ್ಳಿಯಲ್ಲಿ ಬಳಿ ವಿಮಾನ ನಿಲ್ದಾಣವಿದೆ. 2033ರವರೆಗೂ ಇಲ್ಲಿಂದ 150 ಕಿ.ಮೀ. ಅಂತರದಲ್ಲಿ ಇನ್ನೊಂದು ವಿಮಾನ ನಿಲ್ದಾಣ ಮಾಡಬಾರದು ಎನ್ನುವ ಷರತ್ತಿದೆ. ನಾವು ಈಗಿನಿಂದಲೇ ಪ್ರಾರಂಭಿಸಿದರೆ, 2030ರ ವೇಳೆಗೆ ಎರಡನೇ ವಿಮಾನ ನಿಲ್ದಾಣ ಅಭಿವೃದ್ಧಿ ಪ್ರಾರಂಭಿಸಬಹುದು. ಇಲ್ಲದೆ ಹೋದರೆ 2040ನೇ ಇಸವಿ ಬಂದರೂ ವಿಮಾನ ನಿಲ್ದಾಣ ಆಗುವುದಿಲ್ಲ ಎಂದು ಅವರು ವಿವರಿಸಿದ್ದಾರೆ. ಹಿರಿಯ ನಾಯಕ ಟಿ ಬಿ ಜಯಚಂದ್ರ ಅವರು ತಮ್ಮ ಕ್ಷೇತ್ರವಾದ ಶಿರಾ ಸಮೀಪ ವಿಮಾನ ನಿಲ್ದಾಣ ಬರಲೆಂದು ಪ್ರಯತ್ನ ಶುರು ಮಾಡಿದ್ದಾರೆ. ಅಲ್ಲಿ ಜಿಲ್ಲಾ ಮಟ್ಟದ ಏರ್‌ಪೋರ್ಟ್ ಮಾಡಬಹುದೇ ವಿನಾ ಅದು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಆಗುವುದಿಲ್ಲ. ಬಿಜೆಪಿಯ ಅರವಿಂದ ಬೆಲ್ಲದ ಅವರು ಕೂಡ ಉತ್ತರ ಕರ್ನಾಟಕಕ್ಕೆ ಆಗಬೇಕೆಂದು ಹುಬ್ಬಳ್ಳಿಯ ಜಾಗದಲ್ಲಿ ಹೊಸ ವಿಮಾನ ನಿಲ್ದಾಣ ಬರಲಿ ಎನ್ನುತ್ತಿದ್ದಾರೆ. ಕೇವಲ ಜಾಗವನ್ನು ಕೊಟ್ಟ ಮಾತ್ರಕ್ಕೆ ಎಲ್ಲವೂ ಆಗುವುದಿಲ್ಲ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ. ವಿಜಯಪುರ ವಿಮಾನ ನಿಲ್ದಾಣ ಉದ್ಘಾಟನೆಗೆ ಸಜ್ಜಾಗಿದೆ. ಸುಪ್ರೀಂಕೋರ್ಟ್‌ನಲ್ಲಿ ಪರಿಸರ ಇಲಾಖೆಯ ಅನುಮತಿ ಸಂಬಂಧ ಒಂದು ಪ್ರಕರಣವಿದೆ. ಅದು ಸದ್ಯದಲ್ಲೇ ಇತ್ಯರ್ಥವಾಗುವ ಲಕ್ಷಣಗಳಿವೆ. ಇದಾದರೆ, ಇನ್ನು 6 ತಿಂಗಳಲ್ಲಿ ಉದ್ಘಾಟನೆ ಆಗಲಿದೆ ಎಂದು ಅವರು ತಿಳಿಸಿದ್ದಾರೆ.

ಕಾಂಗ್ರೆಸ್ಸಿನ ಹಿರಿಯ ನಾಯಕ ಮತ್ತು ಮುಖ್ಯಮಂತ್ರಿಯವರ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಕರ್ನಾಟಕವು ಭ್ರಷ್ಟಾಚಾರದಲ್ಲಿ ನಂಬರ್ ಒನ್ ಆಗಿದೆ ಎಂದು ಹೇಳಿದ್ದಾರೆ. ಭ್ರಷ್ಟಾಚಾರದಲ್ಲಿ ಯಾರಾರು ಭಾಗಿಯಾಗಿದ್ದಾರೆ ಎನ್ನುವುದನ್ನು ಅವರು ಹೇಳಬೇಕಿತ್ತು ಮತ್ತು ಮಾಹಿತಿಗಳನ್ನು ಪಕ್ಷ ಗಮನಿಸಿದೆ. ಯಾರೂ ಪಕ್ಷಕ್ಕಿಂತ ದೊಡ್ಡವರಲ್ಲ ಎಂದು ಅವರು ಹೇಳಿದ್ದಾರೆ.

ಅಹಮದಾಬಾದ್ ಎಐಸಿಸಿ ಅಧಿವೇಶನದಲ್ಲಿ ಪಕ್ಷವು ಬಡವರು, ದಲಿತರು, ಮಹಿಳೆಯರು ಮತ್ತು ಅಲ್ಪಸಂಖ್ಯಾತರನ್ನು ಗಮನದಲ್ಲಿಟ್ಟುಕೊಂಡು ನಿರ್ಣಯಗಳನ್ನು ತೆಗೆದುಕೊಂಡಿದೆ. ಒಬ್ಬರಿಗೆ ಒಂದೇ ಹುದ್ದೆ ಎನ್ನುವ ನಿಯಮಕ್ಕೆ ಪಕ್ಷದಲ್ಲಿ ಕೆಲವು ಅಪವಾದಗಳಿರಬೇಕು. ಇಡೀ ಅನುಭವ ಮತ್ತು ಹಿರಿತನಗಳ ಮೇಲೆ ಇಂತಹ ವಿನಾಯಿತಿ ಕೊಡಬೇಕಾಗುತ್ತದೆ ಎಂದು ಪಾಟೀಲ ಪ್ರತಿಪಾದಿಸಿದ್ದಾರೆ.

# ಗ್ಯಾರಂಟಿ ಯೋಜನೆಯಿಂದ ಬೊಕ್ಕಸ ಖಾಲಿ

**ಬೆಂಗಳೂರು,ಏ.11:** ಸಿದ್ದರಾಮಯ್ಯ ಸರ್ಕಾರದ ಆಡಳಿತಯಂತ್ರ ಕುಸಿದುಬಿದ್ದಿದ್ದು, ಭ್ರಷ್ಟಾಚಾರ ಮೀತಿ ಮೀರಿರುವುದಕ್ಕೆ ರಾಜ್ಯಾದ್ಯಂತ ವ್ಯಕ್ತವಾಗುತ್ತಿರುವ "ಜನಾಕ್ರೋಶ"ವೇ ಸಾಕ್ಷಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಹೇಳಿದ್ದಾರೆ. ಭ್ರಷ್ಟಾಚಾರದಲ್ಲಿ ಕರ್ನಾಟಕ ನಂಬರ್ ಒನ್ ಎಂದು ಸಿಎಂ ಅವರ ಆರ್ಥಿಕ ಸಲಹೆಗಾರ ಬಸವರಾಜ್ ರಾಯರೆಡ್ಡಿ ನೀಡಿರುವ ಸರ್ಟಿಫಿಕೇಟ್ ಮತ್ತು 20 ತಿಂಗಳ ಬಳಿಕ ಸರ್ಕಾರ ಟೇಕಾಫ್ ಆಗುತ್ತಿದೆ ಎಂದು ಸಚಿವ ಡಿ.ಸುಧಾಕರ್ ನೀಡಿರುವ ಹೇಳಿಕೆ ಸರ್ಕಾರದ ಕಾರ್ಯವೈಖರಿಗೆ ಕನ್ನಡಿ ಹಿಡಿದಿವೆ ಎಂದು ಟೀಕಿಸಿದ್ದಾರೆ.ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಈ ಸರ್ಕಾರದ ಬಗ್ಗೆ ರಾಜ್ಯಾದ್ಯಂತ ಜನರಲ್ಲಿ ಆಕ್ರೋಶ ವ್ಯಕ್ತವಾಗುತ್ತಿದೆ. 20 ತಿಂಗಳಲ್ಲಿ ಸಿದ್ದರಾಮಯ್ಯ ಸರ್ಕಾರದ ಬಣ್ಣ ಬಯಲಾಗಿದೆ. ಅವೈಜ್ಞಾನಿಕ ಗ್ಯಾರಂಟಿ ಯೋಜನೆ ಜಾರಿಯಿಂದ ಬೊಕ್ಕಸ ಬರಿದಾಗಿ, ಸರ್ಕಾರ ದಿವಾಳಿಯಾಗಿದೆ. ಒಂದೇ ಒಂದು ಅಭಿವೃದ್ಧಿ ಕಾರ್ಯಕ್ರಮ ಅನುಷ್ಠಾನ ಆಗುತ್ತಿಲ್ಲ ಎಂದು ಆರೋಪಿಸಿದ್ದಾರೆ.ಈ ಕಾರಣದಿಂದಲೇ ಸಿಎಂ ಮತ್ತು ಸಚಿವರು ಎಲ್ಲಿಯೂ ಪ್ರವಾಸ ನಡೆಸುತ್ತಿಲ್ಲ. ಭೇಟಿ ನೀಡಿದ ಕಡೆ ಜನರ ಆಕ್ರೋಶಕ್ಕೆ ಗುರಿಯಾಗಬೇಕಾಗುತ್ತದೆ ಎಂದು ಬೆಂಗಳೂರಿನಲ್ಲಿ ಕುಳಿತು ಕಾಲಾಹರಣ ಮಾಡುತ್ತಿದ್ದಾರೆ. ಒಂದು ಕಡೆ ದರ ಏರಿಕೆ ಬರೆ, ಮತ್ತೊಂದು ಕಡೆ ಯಾವ ಕಚೇರಿಗೆ ಹೋದರು ಲಂಚದ ಹಾವಳಿಯಿಂದ ಜನ ಹೈರಾಣ ಆಗಿದ್ದಾರೆ ಎಂದು ಹರಿಹಾಯ್ದಿದ್ದಾರೆ.ಈ ವಾಸ್ತವ ಸಂಗತಿಯನ್ನು ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರೇ ಹಾದಿ ಬೀದಿಗಳಲ್ಲಿ ಟೀಕಿಸುತ್ತಿದ್ದಾರೆ. ಹೆಚ್ಚು ದಿನ ಸುಳ್ಳು ಹೇಳಿ ಕಾಲಾಹರಣ ಮಾಡಲು ಆಗುವುದಿಲ್ಲ. ಹೀಗಾಗಿ ಆ ಸತ್ಯವನ್ನು ರಾಯರೆಡ್ಡಿ ಮತ್ತು ಸಚಿವ ಡಿ. ಸುಧಾಕರ್ ಬಹಿರಂಗವಾಗಿ ಹೇಳಿದ್ದಾರೆ. ಇದಕ್ಕಿಂತ ಈ ಸರ್ಕಾರಕ್ಕೆ ದೊಡ್ಡ ಸರ್ಟಿಫಿಕೇಟ್ ಬೇಕೆ ಎಂದು ಅಶೋಕ್ ವ್ಯಂಗ್ಯವಾಡಿದ್ದಾರೆ. ಕೆಲ ತಿಂಗಳ ಹಿಂದೆ ವಿಧಾನಸೌಧದ ಮುಂದೆ ದಿನವಿಡೀ ಜನತಾ ದರ್ಶನ ಕಾರ್ಯಕ್ರಮ ನಡೆಸಿದ್ದ ಸಿದ್ದರಾಮಯ್ಯನವರು, ಇನ್ನು ಮುಂದೆ ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿ ತಿಂಗಳು ಕಡ್ಡಾಯವಾಗಿ ಜಿಲ್ಲಾ ಕೇಂದ್ರಗಳಲ್ಲಿ ಜನತಾ ದರ್ಶನ ಮಾಡಬೇಕು ಎಂದು ಸೂಚನೆ ನೀಡಿದರು.

# ಮಹಾವೀರ ಜನ್ಮ ಕಲ್ಯಾಣೋತ್ಸವ



**ಮುಂಬಯಿ, ಏ.10:** ಮಹಾವೀರ ಜಯಂತಿಯ ಶುಭ ಸಂದರ್ಭದಲ್ಲಿ, ಮಾತೃಶ್ರೀ ಹೇಮಾವತಿ ಅಮ್ಮನವರ ಮಾರ್ಗದರ್ಶನದಲ್ಲಿ ಧರ್ಮಸ್ಥಳದ ಶ್ರೀ ಚಂದ್ರನಾಥ ಸ್ವಾಮಿ ಬಸದಿಯಲ್ಲಿ ಮಹಾವೀರ ಜನ್ಮ ಕಲ್ಯಾಣೋತ್ಸವವು ಶ್ರದ್ಧಾಭಕ್ತಿಯಿಂದ ನೆರವೇರಿತು.

ಭವ್ಯ ಮೆರವಣಿಗೆಯೊಂದಿಗೆ ಆರಂಭಗೊಂಡ ಈ ಧಾರ್ಮಿಕ ಕಾರ್ಯಕ್ರಮದಲ್ಲಿ, ತೀರ್ಥಂಕರರಿಗೆ ವಿಶೇಷ ಅಭಿಷೇಕ ಮತ್ತು ಅಷ್ಟವಿಧಾರ್ಚನೆ ಪೂಜೆಗಳನ್ನು ಸಲ್ಲಿಸಲಾಯಿತು. ಬಳಿಕ, ಬಾಲ ತೀರ್ಥಂಕರನಿಗೆ ವೈಭವಯುತವಾದ ನಾಮಕರಣೋತ್ಸವವನ್ನು ಆಚರಿಸಲಾಯಿತು.

ಈ ಪವಿತ್ರ ಕಾರ್ಯಕ್ರಮದಲ್ಲಿ ಮಾತೃಶ್ರೀ ಹೇಮಾವತಿ ಅಮ್ಮನವರು, ಡಿ. ಹರ್ಷೇಂದ್ರ ಕುಮಾರ್ ಅವರು ಹಾಗೂ ಸುಪ್ರಿಯಾ ಹರ್ಷೇಂದ್ರ ಕುಮಾರ್ ಅವರು ಉಪಸ್ಥಿತರಿದ್ದು, ಭಕ್ತ ಸಮೂಹಕ್ಕೆ ಮಾರ್ಗದರ್ಶನ ನೀಡಿದರು

# ಬೆಲೆ ಏರಿಕೆ: ಕೇಂದ್ರದ ವಿರುದ್ಧ ಏ.17ರಂದು ಪ್ರತಿಭಟನೆ

**ಬೆಂಗಳೂರು, ಏ.10:** "ಬಿಜೆಪಿಯ ಕೇಂದ್ರ ಸರ್ಕಾರದ ಬೆಲೆ ಏರಿಕೆ ವಿರುದ್ಧ ಹಾಗೂ ರಾಜ್ಯ ಬಿಜೆಪಿಯ ದ್ವಂದ್ವ ನಿಲುವಿನ ವಿರುದ್ಧ ಇದೇ ಏ.17 ರಂದು ಜಿಲ್ಲಾ ಕೇಂದ್ರಗಳು ಹಾಗೂ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಗುವುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಕೆಪಿಸಿಸಿ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಲೆ ಏರಿಕೆ ಹಾಗೂ ರಾಜ್ಯ ಬಿಜೆಪಿಯ ಇಬ್ಬಗೆ ನೀತಿಯ ವಿರುದ್ಧ ಸರಣಿ ವಾಗ್ದಾಳಿ ನಡೆಸಿದರು. "ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಈ ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಹೋರಾಟದ ಸ್ವರೂಪವನ್ನು ಶೀಘ್ರ ತಿಳಿಸಲಾಗುತ್ತದೆ. ಅವರ ಜನಾಕ್ರೋಶ ಯಾತ್ರೆಯ ವಿರುದ್ಧ ನಾವು ಏನಾದರೂ ಮಾಡಬೇಕಲ್ಲವೇ ಎಂದು ಹೇಳಿದರು. ಆರ್.ಅಶೋಕ್ ಹಾಗೂ ವಿಜಯೇಂದ್ರ ಅವರಿಗೆ ಕೇವಲ ರಾಜ್ಯ ಸರ್ಕಾರ ಏರಿಸಿದ ಹಾಲಿನ ದರ ಮಾತ್ರ ಕಣ್ಣಿಗೆ ಕಾಣುತ್ತಿದೆಯೇ ಬಿಜೆಪಿ ರಾಜ್ಯದಲ್ಲಿ ನಡೆಸುತ್ತಿರುವ ಜನಾಕ್ರೋಶ ಯಾತ್ರೆ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ಮಾಡುತ್ತಿರುವ ಯಾತ್ರೆ" ಕುಹಕವಾಡಿದರು.



**ಕೇಂದ್ರ ಬಿಜೆಪಿಯಿಂದ ರಾಜ್ಯ ಬಿಜೆಪಿಗೆ ಗಿಫ್ಟ್**

"ಬಿಜೆಪಿಯವರು ಯಾತ್ರೆ ಹೊರಟ ದಿನವೇ ಕೇಂದ್ರ ಸರ್ಕಾರದವರು ಪೆಟ್ರೋಲ್, ಡೀಸೆಲ್ ಗೆ ತಲಾ 2 ರೂಪಾಯಿ ಹಾಗೂ ಗ್ಯಾಸ್ ಸಿಲಿಂಡರ್ ಬೆಲೆಯನ್ನು 50 ರೂಪಾಯಿ ಜಾಸ್ತಿ ಮಾಡಿ ಉದ್ಘಾಟನೆ ಮಾಡಿ, ಇವರ ಯಾತ್ರೆಗೆ 'ಗಿಫ್ಟ್' ಕಳಿಸಿದ್ದಾರೆ. ಇದರ ಬಗ್ಗೆ ಜನಸಾಮಾನ್ಯರು ಮಾಡುತ್ತಿರುವ ಗುಣಗಾನವನ್ನು ಎಲ್ಲರು ಕೇಳಬೇಕು. ಕೇಂದ್ರ ಸರ್ಕಾರದ ವಿರುದ್ಧ ಮಾಡುತ್ತಿರುವ ಜನಾಕ್ರೋಶ ಯಾತ್ರೆ ಎಂದು ಬಿಜೆಪಿಯವರು ಬೋರ್ಡ್ ಹಾಕಿಕೊಳ್ಳಬೇಕು" ಎಂದರು. "ಬುಧವಾರದಂದು ಕಚ್ಚಾ ತೈಲದ ಬೆಲೆ ಶೇ. 4.23 ರಷ್ಟು ಇಳಿಕೆಯಾಗಿದೆ. ಆದರೂ ಕೇಂದ್ರ ಸರ್ಕಾರ ಬೆಲೆ ಇಳಿಕೆ ಮಾಡಿಲ್ಲ. ಪೆಟ್ರೋಲ್ ನ ಮೂಲ ದರ ಪ್ರತಿ ಲೀಟರ್ ಗೆ 42.60 ಪೈಸೆ ಇದೆ. ದೇಶದಾದ್ಯಂತ ಪ್ರತಿ ಲೀಟರ್ ಪೆಟ್ರೋಲ್ 103 ರೂಪಾಯಿಗೆ ಮಾರಾಟ ಮಾಡಲಾಗುತ್ತಿದೆ. ಒಂದು ಲೀಟರ್ ಗೆ ರೂ.60 ರೂಪಾಯಿ ಲಾಭ ಸರ್ಕಾರಕ್ಕೆ ಸಿಗುತ್ತಿದೆ. ಡೀಸಲ್ ಬೆಲೆ ರೂ.91 ರೂಪಾಯಿ ಇದೆ. ರೂ. 43 ಲಾಭ ಮಾಡುತ್ತಿದ್ದಾರೆ. ಶೇಕಡ 60 ರಷ್ಟು ತೆರಿಗೆ ಪೆಟ್ರೋಲ್, ಡೀಸೆಲ್ ಮೇಲೆ ಹಾಕಿದ್ದಾರೆ" ಎಂದರು.

"ಹಾಲಿನ ದರ ನಮ್ಮ ರಾಜ್ಯದಲ್ಲಿ ಅತ್ಯಂತ ಕಡಿಮೆಯಿದೆ. ಕರ್ನಾಟಕದಲ್ಲಿ 42 ರೂಪಾಯಿ ಇದ್ದರೆ. ಕೇರಳ 52 ರೂ, ಗುಜರಾತ್ 53 ರೂ, ದೆಹಲಿ 55 ರೂ, ಮಹಾರಾಷ್ಟ್ರ 52 ರೂ, ತೆಲಂಗಾಣ 58 ರೂ, ಅಸ್ಸಾಂ 60 ರೂ, ಹರಿಯಾಣ 56 ರೂ, ರಾಜಸ್ಥಾನ 50 ರೂ, ಮಧ್ಯಪ್ರದೇಶ 52 ರೂ, ಪಂಜಾಬ್ 56 ರೂ, ಉತ್ತರ ಪ್ರದೇಶ 56 ರೂಪಾಯಿ ಬೆಲೆಯಿದೆ" ಎಂದು ವಿವರಿಸಿದರು. "ನೀರಿನ ಬೆಲೆ ಏರಿಕೆಯನ್ನು ಅತ್ಯಂತ ಕಡಿಮೆ ಮಾಡಿದ್ದೇವೆ. ಕಸ ಸಂಗ್ರಹಣೆ ಶುಲ್ಕವನ್ನು ಈ ಹಿಂದಿನ ಬಿಜೆಪಿ ಸರ್ಕಾರ ನಿಗದಿ ಮಾಡಿದ್ದಕ್ಕಿಂತ ಕಡಿಮೆ ನಿಗದಿ ಮಾಡಿ ಬಡವರ ಪರವಾಗಿ ನಾವು ನಿರ್ಧಾರ ತೆಗೆದುಕೊಂಡಿದ್ದೇವೆ. ಬೆಲೆ ಏರಿಕೆಯಿಂದ ತತ್ತರಿಸಿ ಹೋಗಿದ್ದ ಜನರ ಬದುಕು ಹಸನಾಗಲಿ ಎಂದು ಗ್ಯಾರಂಟಿ ಯೋಜನೆ ಮೂಲಕ ರೂ.52 ಸಾವಿರ ಕೋಟಿ ಮೀಸಲಿಟ್ಟಿದ್ದೇವೆ" ಎಂದರು.

"ಯುಪಿಎ ಸರ್ಕಾರದ ಅವಧಿಯಲ್ಲಿ ಚಿನ್ನದ ಬೆಲೆ ರೂ. 28 ಸಾವಿರವಿತ್ತು ಈಗ ರೂ.92 ಸಾವಿರವಿದೆ. 10 ಸಾವಿರವಿದ್ದ ಮೊಬೈಲ್ ದರ 30 ಸಾವಿರಕ್ಕೆ ಏರಿಕೆಯಾಗಿದೆ. "ಕಬ್ಬಿಣದ ಬೆಲೆ ರೂ.16 ಸಾವಿರ, ಕಾರಿನ ಬೆಲೆಗಳಲ್ಲಿ ಊಹೆಗೂ ನಿಲುಕದ ಜಿಗತವಾಗಿದೆ. ರೂ. 1.5 ಲಕ್ಷಕ್ಕೆ ಸಿಗುತ್ತಿದ್ದ ಮಿನಿ ಟ್ರ್ಯಾಕ್ಟರ್ ಬೆಲೆ ರೂ. 5 ಲಕ್ಷಕ್ಕೆ ಏರಿಕೆಯಾಗಿದೆ. ಫಾರ್ಚೂನರ್ ಕಾರಿನ ಬೆಲೆ 25 ಲಕ್ಷದಿಂದ 45 ಲಕ್ಷಕ್ಕೆ ಏರಿಕೆಯಾಗಿದೆ" ಎಂದು ವಿವಿಧ ಅಗತ್ಯ ವಸ್ತುಗಳು ಹಾಗೂ ವಾಹನಗಳ ಬೆಲೆಯ ಪಟ್ಟಿಯನ್ನು ಡಿಸಿಎಂ ಮಾಧ್ಯಮಗಳ ಮುಂದಿಟ್ಟರು.

"ರೂ. 80 ಇದ್ದ ಹೆದ್ದಾರಿ ಟೋಲ್ ಬೆಲೆ 250 ಕ್ಕೂ ಹೆಚ್ಚಾಗಿದೆ. ಇದೆಲ್ಲವು ಅಶೋಕ್ ಅವರಿಗೆ ಕಾಣಿಸುತ್ತಿಲ್ಲವೇ ಹಾಲಿನ ದರ ಏರಿಕೆ ವಿರೋಧಿಸುವ ನೀವು ರೈತ ವಿರೋಧಿಗಳು. ಬ್ಯಾಂಕ್ ಗಳಲ್ಲಿ ಹಣ ಕಟ್ಟಲು, ಬಿಡಿಸಲು, ಚೆಕ್‌ಬುಕ್ ತೆಗೆದುಕೊಳ್ಳಲು ಹೀಗೆ ಎಲ್ಲದಕ್ಕೂ ಶುಲ್ಕ ವಿಧಿಸಿ ಸುಲಿಗೆ ಮಾಡಲಾಗುತ್ತಿದೆ. ಇದು ದೊಡ್ಡ ಹಗರಣವಾಗಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಅವರು ಇತ್ತೀಚೆಗೆ ಹೇಳುತ್ತಿದ್ದರು" ಎಂದರು.

**ಬಿಜೆಪಿಯವರ ಫೋಟೋ ಹಾಕಿಕೊಳ್ಳಲಿ:**

"ಬಿಜೆಪಿಯವರು ಪ್ರತಿಭಟನಾ ಬ್ಯಾನರ್ ನಲ್ಲಿ ನನ್ನ ಹಾಗೂ ಸಿದ್ದರಾಮಯ್ಯ ಅವರ ಫೋಟೋಗಳನ್ನು ಹಾಕುವ ಬದಲು ಕೇಂದ್ರ ನಾಯಕರ ಫೋಟೋ ಹಾಕಿಕೊಳ್ಳಿ, ನಮ್ಮ ಬೆಲೆ ಏರಿಕೆ ಬದಲು ಬಿಜೆಪಿ ಬೆಲೆ ಏರಿಕೆಯನ್ನು ಪ್ರಶ್ನಿಸಿ. ನಿಮ್ಮ ಆಕ್ರೋಶ ನಿಮ್ಮ ನಾಯಕರ ಮೇಲಿರಲಿ, ಇದರಿಂದ ಜನರಿಗೆ, ಪಕ್ಷಕ್ಕೆ ಸೇರಿದಂತೆ ಎಲ್ಲರಿಗೂ ತೊಂದರೆಯಾಗುತ್ತಿದೆ ಎಂದು ವಿವರಿಸಬೇಕು" ಎಂದು ವ್ಯಂಗ್ಯವಾಡಿದರು. "ಬಿಜೆಪಿಯವರ ಹೋರಾಟ ಗ್ಯಾರಂಟಿಗಳ ವಿರುದ್ಧ ನಡೆಯುತ್ತಿದೆ. 1 ಕೋಟಿ 22 ಲಕ್ಷ ಮಹಿಳೆಯರು ಗೃಹಲಕ್ಷ್ಮೀ ಲಾಭ ಪಡೆಯುತ್ತಿದ್ದಾರೆ. ತೆಲಂಗಾಣದಲ್ಲಿ ನಮ್ಮ ಪಕ್ಷದ ಸರ್ಕಾರವಿದೆ ಅಲ್ಲಿ 6 ಕೆಜಿ ಅಕ್ಕಿ ಕೊಡುತ್ತಿದ್ದೇವೆ. ನಮ್ಮಲ್ಲಿ 10 ಕೆಜಿ ನೀಡಲಾಗುತ್ತಿದೆ. ನಾವು ಇಷ್ಟರ ಮಟ್ಟಿಗೆ ಗ್ಯಾರಂಟಿಗಳನ್ನು ನೀಡಿ ಯಶಸ್ವಿಯಾಗುತ್ತೇವೆ ಎಂದು ಅವರು ಎಣಿಸಿರಲಿಲ್ಲ ಅದಕ್ಕೆ ಅವರಿಗೆ ಹೊಟ್ಟೆಯುರಿ" ಎಂದರು. "ಜಿಎಸ್ ಟಿಯನ್ನು ಈಗಾಗಲೇ ನಮ್ಮ ನಾಯಕರು ಗಬ್ಬರ್ ಸಿಂಗ್ ಟ್ಯಾಕ್ಸ್ ಎಂದು ಹೆಸರಿಟ್ಟಿದ್ದಾರೆ. ಎಲ್ಲಾ ಬೆಲೆ ಏರಿಕೆಗೂ ಜಿಎಸ್ ಟಿಯೇ ಮೂಲ" ಎಂದರು. "ಕೇಂದ್ರ ಬಿಜೆಪಿ ಸರ್ಕಾರದ ಜನಾಕ್ರೋಶ ಎಂದು ಬಿಹೆಪಿಯವರು ಯಾತ್ರೆ ಮುಂದುವರೆಸಬೇಕು. ಯಾವುದೇ ಕಾರಣಕ್ಕೂ ಇದನ್ನು ನಿಲ್ಲಿಸಬಾರದು. ಅಮೇರಿಕಾದ ಸುಂಕ ನೀತಿಯಿಂದ ದೇಶದ ಜನರಿಗೆ ಆಗಿರುವ ನಷ್ಟದ ಬಗ್ಗೆ ಏಕೆ ಯಾರೂ ಮಾತನಾಡುತ್ತಿಲ್ಲ. ಷೇರು ಪೇಟೆ ಮುಳುಗಿ ಹೋಗಿದೆ ಆದರೂ ಏಕೆ ಮಾತನಾಡುತ್ತಿಲ್ಲ" ಎಂದರು. ನೀವು ಯಾವ ವಸ್ತುಗಳ ಬೆಲೆ ಕಡಿಮೆ ಮಾಡಲು ಹೋರಾಟ ಮಾಡುತ್ತೀರಿ ಎಂದು ಕೇಳಿದಾಗ, "ಕೇಂದ್ರ ಸರ್ಕಾರ ಬೆಲೆ ಏರಿಕೆ ಮಾಡಿದ ಕಾರಣಕ್ಕೆ ನಮ್ಮಲ್ಲಿಯೂ ಬೆಲೆ ಏರಿಕೆಯಾಗಿದೆ. ಅವರ ನೀತಿಯ ಕಾರಣಕ್ಕೆ ನಾವು ಬೆಲೆ ಏರಿಕೆ ಮಾಡದೇ ವಿಧಿಯಿಲ್ಲ" ಎಂದು ಹೇಳಿದರು.

## ಸಿಎಂ ವಿರುದ್ಧ ಸುಳ್ಳು ಆರೋಪ

ಸಿಎಂ ವಿರುದ್ಧ ಗಣಿ ಗುತ್ತಿಗೆ ಕಿಕ್ ಬ್ಯಾಕ್ ಪಡೆದ ಆರೋಪದ ಬಗ್ಗೆ ಕೇಳಿದಾಗ, "ರಾಜಕೀಯವಾಗಿ ಆರೋಪ ಮಾಡಲು ಪ್ರಯತ್ನ ಮಾಡುತ್ತಿರಬಹುದು. ಇದರಲ್ಲಿ ಯಾವುದೇ ಸತ್ಯವಿಲ್ಲ. ಕಾನೂನಿನ ಚೌಕಟ್ಟು ಬಿಟ್ಟು ಯಾರೂ ಈ ರೀತಿ ಮಾಡಲು ಆಗುವುದಿಲ್ಲ. ಈ ವಿಚಾರದಲ್ಲಿ ಮುಖ್ಯಮಂತ್ರಿಯವರು ಜವಾಬ್ದಾರಿಯಿಂದ ನಡೆದುಕೊಂಡಿದ್ದಾರೆ. ಎಲ್ಲವು ಸುಳ್ಳು ಆರೋಪ" ಎಂದು ತಿಳಿಸಿದರು.

# ಆರ್‌ಟಿಐ ಕಾಯ್ದೆ ತಿದ್ದುಪಡಿಗೆ ಪ್ರತಿಪಕ್ಷಗಳ ಆಕ್ಷೇಪ

**ನವದೆಹಲಿ, ಏ.10:** ಡಿಜಿಟಲ್ ವೈಯಕ್ತಿಕ ದತ್ತಾಂಶ ಸಂರಕ್ಷಣಾ ಕಾಯ್ದೆ (ಡಿಪಿಡಿಪಿ)ಯ ಸೆಕ್ಷನ್ 44 (3) ಅನ್ನು ರದ್ದುಗೊಳಿಸುವಂತೆ ಇಂಡಿಯಾ ಮೈತ್ರಿಕೂಟ ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದ್ದು, ಇದು ಮಾಹಿತಿ ಹಕ್ಕು ಕಾಯ್ದೆ (ಆರ್‌ಟಿಐ)ಯನ್ನು ನಾಶಪಡಿಸುತ್ತದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಆರ್‌ಟಿಐ ಕಾಯ್ದೆ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಕಾಂಗ್ರೆಸ್ ನಾಯಕ ಗೌರವ್ ಗೊಗೊಯ್, ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ ಇಂಡಿಯಾ ಮೈತ್ರಿ ಪಕ್ಷಗಳ 120 ಕ್ಕೂ ಹೆಚ್ಚು ಸಂಸದರು ಈ ಸೆಕ್ಷನ್ ಅನ್ನು ರದ್ದುಗೊಳಿಸಲು ಜಂಟಿ ಜ್ಞಾಪಕ ಪತ್ರಕ್ಕೆ ಸಹಿ ಹಾಕಿದ್ದಾರೆ ಮತ್ತು ಅದನ್ನು ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅವರಿಗೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಎಂಎಂ ಅಬ್ದುಲ್ಲಾ (ಡಿಎಂಕೆ), ಪ್ರಿಯಾಂಕಾ ಚತುರ್ವೇದಿ (ಶಿವಸೇನೆ-ಯುಬಿಟಿ), ಜಾನ್ ಬ್ರಿಟ್ಟಾಸ್, (ಸಿಪಿಐ-ಎಂ), ಜಾವೇದ್ ಅಲಿ ಖಾನ್, (ಎಸ್‌ಪಿ) ಮತ್ತು ನವಲ್ ಕಿಶೋರ್ (ಆರ್‌ಜೆಡಿ) ಭಾಗವಹಿಸಿದ್ದರು. ಡಿಪಿಡಿಪಿ ಕಾಯ್ದೆಯ ಸೆಕ್ಷನ್ 44 (3) ಅನ್ನು ನಾಗರಿಕ ಹಕ್ಕುಗಳ ಹೋರಾಟಗಾರರು ವಿರೋಧಿಸಿದ್ದು, ಇದು 2005 ರ ಆರ್‌ಟಿಐ ಕಾಯ್ದೆಯ ಸೆಕ್ಷನ್ 8 (1) (ಜೆ) ಅನ್ನು ಬದಲಾಯಿಸಲು ಪ್ರಯತ್ನಿಸುತ್ತದೆ ಎಂದು ಗೊಗೊಯ್ ಹೇಳಿದ್ದಾರೆ. ವೈಯಕ್ತಿಕ ಮಾಹಿತಿಯ ಬಹಿರಂಗಪಡಿಸುವಿಕೆಯು ಯಾವುದೇ ಸಾರ್ವಜನಿಕ ಚಟುವಟಿಕೆ ಅಥವಾ ಹಿತಾಸಕ್ತಿಗೆ ಸಂಬಂಧಿಸದಿದ್ದರೆ ಅಥವಾ ಗೌಪ್ಯ ಮಾಹಿತಿ ಆಗಿದ್ದರೆ ಅದನ್ನು ತಡೆಹಿಡಿಯಲು ಆರ್‌ಟಿಐ ಕಾಯ್ದೆಯ ಸೆಕ್ಷನ್ 8(1)(ಜೆ) ಅವಕಾಶ ನೀಡುತ್ತದೆ. ಅದಾಗ್ಯೂ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಮೇಲ್ಮನವಿ ಪ್ರಾಧಿಕಾರವು ಈ ಮಾಹಿತಿಯು ಜನರ ಒಳಿತಿಗೆ ಉಪಯೋಗವಾಗುತ್ತದೆ ಎಂದು ನಿರ್ಧರಿಸಿ, ಅದನ್ನು ಸಾರ್ವಜನಿಕವಾಗುವಂತೆ ಮಾಡಬಹುದಾಗಿದೆ. ಡಿಪಿಡಿಪಿ ಕಾಯ್ದೆಯ ಸೆಕ್ಷನ್ 44 (3) ಆರ್‌ಟಿಐ ಕಾಯ್ದೆಯ ಸೆಕ್ಷನ್ 8(1)(ಜೆ) ಅನ್ನು ತಿದ್ದುಪಡಿ ಮಾಡುತ್ತದೆ.

ಇದು ಸರ್ಕಾರಿ ಸಂಸ್ಥೆಗಳು ಸಾರ್ವಜನಿಕ ಹಿತಾಸಕ್ತಿ ಅಥವಾ ಯಾವುದೇ ಇತರ ವಿನಾಯಿತಿಗಳನ್ನು ಪರಿಗಣಿಸದೆ ವೈಯಕ್ತಿಕ ಮಾಹಿತಿಗೆ ಸಂಬಂಧಿಸಿದ ಮಾಹಿತಿಯನ್ನು ತಡೆಹಿಡಿಯಲು ಅನುಮತಿ ನೀಡುತ್ತದೆ. ಹಾಗಾಗಿ ಸರ್ಕಾರಿ ಅಧಿಕಾರಿಗಳು ಅಥವಾ ರಾಜಕಾರಣಿಗಳ ಮಾಹಿತಿಯು ವೈಯಕ್ತಿಕ ಮಾಹಿತಿ ಎಂಬ ಕಾರಣ ನೀಡಿ ಇನ್ನು ಮುಂದಕ್ಕೆ ಮಾಹಿತಿ ಕೇಳುವವರಿಗೆ ಲಭ್ಯವಾಗದಂತೆ ಮಾಡುವ ಅಪಾಯವಿದೆ.




# ಮುಂದಿನ ದಿನಗಳಲ್ಲಿ ಟಿವಿ, ಫ್ರಿಜ್, ಮೊಬೈಲ್ ಬೆಲೆಯಲ್ಲಿ ಭಾರಿ ಇಳಿಕೆ

**ನವದೆಹಲಿ, ಏ.10:** ಮುಂದಿನ ದಿನಗಳಲ್ಲಿ ಮೊಬೈಲ್, ಟಿವಿ, ಫ್ರಿಜ್ ಸೇರಿದಂತೆ ಎಲೆಕ್ಟ್ರಾನಿಕ್ಸ್ ವಸ್ತುಗಳ ಬೆಲೆ ಭಾರತದಲ್ಲಿ ಭಾರೀ ಇಳಿಕೆಯಾಗುವ ಸಾಧ್ಯತೆಯಿದೆ. ಹೌದು. ಡೊನಾಲ್ಡ್ ಟ್ರಂಪ್ ಆರಂಭಿಸಿದ ಸುಂಕ ಸಮರ ಚೀನಾದ ಮೇಲೆ ಭಾರೀ ಪರಿಣಾಮ ಬೀಳಲಿದೆ. ವ್ಯಾಪಾರ ಉದ್ವಿಗ್ನತೆ ಹೆಚ್ಚುತ್ತಿರುವಂತೆ ಹಲವಾರು ಚೀನೀ ಎಲೆಕ್ಟ್ರಾನಿಕ್ ಘಟಕ ತಯಾರಕರು ಭಾರತೀಯ ಕಂಪನಿಗಳಿಗೆ 5% ರಷ್ಟು ರಿಯಾಯಿತಿಗಳನ್ನು ನೀಡಲು ಆರಂಭಿಸಿದ್ದಾರೆ ಎಂದು ವರದಿಯಾಗಿದೆ. ಚೀನಾ ತಯಾರಕರು ಹೆಚ್ಚುವರಿ ದಾಸ್ತಾನುಗಳನ್ನು ಹೊಂದಿದ್ದಾರೆ.

ಆ ಉತ್ಪನ್ನಗಳನ್ನು ಮಾರಾಟ ಮಾಡಲು ಚೀನಾ ರಿಯಾಯಿತಿ ನೀಡಲು ಮುಂದಾಗಿದೆ. ಈ ನಿರ್ಧಾರದಿಂದ ಭಾರತದಲ್ಲಿ ಫೋನ್, ಟಿವಿ, ಗ್ರಾಹಕ ಎಲೆಕ್ಟ್ರಾನಿಕ್ಸ್ ವಸ್ತುಗಳ ಬೆಲೆ ಬಹಳ ಕಡಿಮೆಯಾಗುವ ಸಾಧ್ಯತೆಯಿದೆ. ಸುಂಕ ಸಮರ ಆರಂಭಿಸುವ ಮೊದಲು ಚೀನಾ ಅಮೆರಿಕದ ವಸ್ತುಗಳಿಗೆ 67% ತೆರಿಗೆ ವಿಧಿಸುತ್ತಿತ್ತು. ಟ್ರಂಪ್ ಅವರು ಏ.2 ರಂದು ಚೀನಾ ವಸ್ತುಗಳಿಗೆ 34% ತೆರಿಗೆ ಹಾಕುವುದಾಗಿ ಘೋಷಣೆ ಮಾಡಿದ್ದರು. ಇದರಿಂದಾಗಿ ಮೊದಲಿದ್ದ 20% ಸೇರಿ 54% ತೆರಿಗೆ ಏರಿಕೆಯಾಗಿತ್ತು. ಅಮೆರಿಕದ ನಿರ್ಧಾರದಿಂದ ಸಿಟ್ಟಾದ ಚೀನಾ ಮತ್ತೆ 34% ಏರಿಕೆ ಮಾಡಿತ್ತು. ಇದಕ್ಕೆ ಸಿಟ್ಟಾದ ಟ್ರಂಪ್ ತೆರಿಗೆಯನ್ನು 104% ಏರಿಕೆ ಮಾಡುತ್ತಾರೆ. ಅಮೆರಿಕದ ನಿರ್ಧಾರದಿಂದ ಮತ್ತೆ ಸಿಟ್ಟಾದ ಚೀನಾ ಅಮೆರಿಕದ ವಸ್ತುಗಳ ಮೇಲೆ 84% ತೆರಿಗೆ ಹಾಕಿತು. ಚೀನಾ ನಿರ್ಧಾರದಿಂದ ಆಕ್ರೋಶಗೊಂಡ ಟ್ರಂಪ್ ಈಗ ಚೀನಾದ ವಸ್ತುಗಳ ಮೇಲೆ 125% ತೆರಿಗೆ ಹಾಕಿದ್ದಾರೆ.



# ಸುಪ್ರೀಂ ಕೋರ್ಟ್ ತೀರ್ಪಿನ ಕುರಿತು ಹೇಳಿಕೆ: ಮಮತಾ ಬ್ಯಾನರ್ಜಿಗೆ ನ್ಯಾಯಾಂಗ ನಿಂದನೆ ನೋಟಿಸ್

**ನವದೆಹಲಿ, ಏ.10:** ರಾಜ್ಯದ ಶಾಲಾ ಸೇವಾ ಆಯೋಗದ (ಎಸ್‌ಎಸ್‌ಸಿ) ನೇಮಕಾತಿ ಹಗರಣ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಇತ್ತೀಚೆಗೆ ನೀಡಿದ ತೀರ್ಪನ್ನು ಸಾರ್ವಜನಿಕವಾಗಿ ಟೀಕಿಸಿದ್ದಕ್ಕಾಗಿ ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರಿಗೆ ನ್ಯಾಯಾಂಗ ನಿಂದನೆ ನೋಟಿಸ್ ನೀಡಲಾಗಿದೆ. ಏಪ್ರಿಲ್ 10 ರಂದು ಎನ್‌ಜಿಒ ಆತ್ಮದೀಪ್ ಪರವಾಗಿ ವಕೀಲ ಸಿದ್ಧಾರ್ಥ್ ದತ್ತಾ ಈ ನೋಟಿಸ್ ನೀಡಿದ್ದಾರೆ.

ರಾಜ್ಯದ ಶಾಲಾ ಸೇವಾ ಆಯೋಗದ (ಎಸ್‌ಎಸ್‌ಸಿ) ನೇಮಕಾತಿಯ ಸಮಯದಲ್ಲಿ ಸುಮಾರು 26,000 ಅಕ್ರಮ ನೇಮಕಾತಿಗಳನ್ನು ರದ್ದುಗೊಳಿಸುವ ಕಲ್ಕತ್ತಾ ಹೈಕೋರ್ಟ್‌ನ ನಿರ್ಧಾರವನ್ನು ಎತ್ತಿಹಿಡಿದ ಸುಪ್ರೀಂ ಕೋರ್ಟ್‌ನ ಏಪ್ರಿಲ್ 3 ರ ತೀರ್ಪಿನ ನಂತರ ಈ ಬೆಳವಣಿಗೆ ಸಂಭವಿಸಿದೆ. ಇದನ್ನು ಎಸ್‌ಎಸ್‌ಸಿ ಉದ್ಯೋಗ ಹಗರಣ ಎಂದು ವ್ಯಾಪಕವಾಗಿ ಕರೆಯಲಾಗುತ್ತದೆ. ಏಪ್ರಿಲ್ 8 ರಂದು ಸಾರ್ವಜನಿಕ ಭಾಷಣದಲ್ಲಿ ಬ್ಯಾನರ್ಜಿ ಅವರು ಸುಪ್ರೀಂ ಕೋರ್ಟ್‌ನ ಅಧಿಕಾರವನ್ನು ನೇರವಾಗಿ ದುರ್ಬಲಗೊಳಿಸುವ ಹೇಳಿಕೆಗಳನ್ನು ನೀಡಿದ್ದಾರೆ ಎಂದು ನೋಟಿಸ್‌ನಲ್ಲಿ ಆರೋಪಿಸಲಾಗಿದೆ. ತಮ್ಮ ಹೇಳಿಕೆಗಳಲ್ಲಿ, ಮುಖ್ಯಮಂತ್ರಿಗಳು ಉದ್ಯೋಗಗಳನ್ನು ವಜಾಗೊಳಿಸುವುದನ್ನು ಪ್ರಶ್ನಿಸಿ, ಯಾರ ಕೆಲಸವನ್ನು ತೆಗೆದುಕೊಳ್ಳುವ ಹಕ್ಕು ಯಾರಿಗಿದೆ ಯಾರೂ ಇಲ್ಲ. ನಮ್ಮ ಯೋಜನೆ ಎ ಸಿದ್ಧವಾಗಿದೆ, ಬಿ ಸಿದ್ಧವಾಗಿದೆ, ಸಿ ಸಿದ್ಧವಾಗಿದೆ, ಡಿ ಸಿದ್ಧವಾಗಿದೆ ಮತ್ತು ಇ ಸಿದ್ಧವಾಗಿದೆ.

ಇದನ್ನು ಹೇಳಿದ್ದಕ್ಕಾಗಿ ನೀವು ನನ್ನನ್ನು ಜೈಲಿಗೆ ಹಾಕಬಹುದು. ಆದರೆ, ನನಗೆ ಅದು ಮುಖ್ಯವಲ್ಲ ಎಂದು ಹೇಳಿದರು. ನ್ಯಾಯಾಲಯದ ನಿರ್ಧಾರದ ಹಿಂದೆ ಪಿತೂರಿ ಇದೆ ಎಂದು ಬ್ಯಾನರ್ಜಿ ಆರೋಪಿಸಿದ್ದಾರೆ. ಈ ತೀರ್ಪು ಶಿಕ್ಷಣ ವ್ಯವಸ್ಥೆಯನ್ನು ನಾಶಮಾಡುವ, ಅರ್ಹ ಶಿಕ್ಷಕರನ್ನು ಕಳ್ಳರು ಮತ್ತು ಅನರ್ಹರು ಎಂದು ಬ್ರಾಂಡ್ ಮಾಡುವ ಗುರಿಯನ್ನು ಹೊಂದಿದೆ ಎಂದು ಹೇಳಿದ್ದಾರೆ.

ಬ್ಯಾನರ್ಜಿಯವರ ಹೇಳಿಕೆಗಳು ಸುಪ್ರೀಂ ಕೋರ್ಟ್‌ನ ಅಧಿಕಾರದ ಮೇಲೆ ಉದ್ದೇಶಪೂರ್ವಕ, ಯೋಜಿತ ಮತ್ತು ಚೆನ್ನಾಗಿ ಯೋಚಿಸಿದ ದಾಳಿಯಾಗಿದೆ. ನ್ಯಾಯಾಂಗ ಪ್ರಕ್ರಿಯೆಯ ಸ್ಪಷ್ಟ ತಿರಸ್ಕಾರ ಎಂದು ನೋಟಿಸ್‌ನಲ್ಲಿ ಉಲ್ಲೇಖಿಸಲಾಗಿದೆ. ಅವರು ಉನ್ನತ ನ್ಯಾಯಾಲಯದ ತೀರ್ಪನ್ನು ಪಾಲಿಸದಿರುವುದನ್ನು ಪ್ರೋತ್ಸಾಹಿಸುತ್ತಿದ್ದಾರೆ ಮತ್ತು ತೀರ್ಪಿನ ವಿರುದ್ಧ ಸಾರ್ವಜನಿಕ ಅಭಿಪ್ರಾಯವನ್ನು ತಿರುಗಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ನೋಟಿಸ್‌ನಲ್ಲಿ






ತಮಿಳುನಾಡಿನ ವೆಲ್ಲಿಂಗ್ಟನ್‌ನಲ್ಲಿ ಗುರುವಾರ ರಕ್ಷಣಾ ಸೇವೆಗಳ ಸಿಬ್ಬಂದಿ ಕಾಲೇಜಿನ 80 ನೇ ಸಿಬ್ಬಂದಿ ಕೋರ್ಸ್‌ನ ಘಟಿಕೋತ್ಸವ ಸಮಾರಂಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪಾಲ್ಗೊಂಡಿದ್ದರು.

# ಪೂಂಚ್‌ನಲ್ಲಿ ಭಾರತ–ಪಾಕಿಸ್ತಾನ ಧ್ವಜ ಸಭೆ

## ಗಡಿ ನಿಯಂತ್ರಣ ರೇಖೆಯ ವಿಚಾರ ವಿನಿಮಯ

**ಜಮ್ಮು, ಏಪ್ರಿಲ್ 10:** ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಚಕ್ಕನ್-ಡಾ-ಬಾಗ್‌ನಲ್ಲಿ ಗುರುವಾರ ನಡೆದ ಧ್ವಜ ಸಭೆಯಲ್ಲಿ ಭಾರತ ಮತ್ತು ಪಾಕಿಸ್ತಾನಗಳು ನಿಯಂತ್ರಣ ರೇಖೆಗೆ ಸಂಬಂಧಿಸಿದ ವಿಷಯಗಳ ಕುರಿತು ಚರ್ಚಿಸಿದವು. "ಧ್ವಜ ಸಭೆಗಳು ಎರಡೂ ಕಡೆಯ ಡಿಜಿಎಂಒ ಅವರ ತಿಳುವಳಿಕೆಗೆ ಅನುಗುಣವಾಗಿ ನಿಯಮಿತ ನಿಯಂತ್ರಣ ರೇಖೆ ಮತ್ತು ಗಡಿ ನಿರ್ವಹಣಾ ಪ್ರಕ್ರಿಯೆಯಾಗಿದೆ" ಎಂದು ಸೇನೆಯು ಅಧಿಕೃತ ಸಂದೇಶದಲ್ಲಿ ತಿಳಿಸಿದೆ. "ಗಡಿ ನಿಯಂತ್ರಣ ರೇಖೆಯ ಉದ್ದಕ್ಕೂ ನಿಯಮಿತ ಸಮಸ್ಯೆಗಳನ್ನು ಚರ್ಚಿಸಲು ಗುರುವಾರದ ಸಭೆಯನ್ನು ನಡೆಸಲಾಯಿತು" ಎಂದು ಸೇನೆ ತಿಳಿಸಿದೆ. ಇದಕ್ಕೂ ಮೊದಲು ಫೆಬ್ರವರಿ 21 ರಂದು, ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಚಕ್ಕನ್-ಡಾ-ಬಾಗ್ ಕ್ರಾಸಿಂಗ್ ಪಾಯಿಂಟ್‌ನಲ್ಲಿ ನಡೆದ ಬ್ರಿಗೇಡಿಯರ್ ಮಟ್ಟದ ಧ್ವಜ ಸಭೆಯಲ್ಲಿ ಗಡಿಗಳಲ್ಲಿ ಶಾಂತಿಗಾಗಿ ನವೀಕರಿಸಿದ ಕದನ ವಿರಾಮ ಒಪ್ಪಂದದ ಪಾವಿತ್ರ್ಯವನ್ನು ಕಾಪಾಡಿಕೊಳ್ಳಲು ಭಾರತ ಮತ್ತು ಪಾಕಿಸ್ತಾನ ಒಪ್ಪಿಕೊಂಡಿವೆ.



# ಮುಟ್ಟಾದ ವಿದ್ಯಾರ್ಥಿನಿಯನ್ನು ಹೊರಗೆ ಕೂರಿಸಿ ಪರೀಕ್ಷೆ ಬರೆಸಿದ ಶಿಕ್ಷಕರು

**ಕೊಯಮತ್ತೂರು, ಏ.10:** ಋತುಮತಿಯಾದ ಪರಿಶಿಷ್ಟ ಜಾತಿಯ (ಅರುಂಧತಿಯಾರ್) 8ನೇ ತರಗತಿ ವಿದ್ಯಾರ್ಥಿನಿಯನ್ನು ಶಿಕ್ಷಕರು ತರಗತಿ ಕೊಠಡಿಯ ಹೊರಗೆ ಕೂರಿಸಿ ಪರೀಕ್ಷೆ ಬರೆಸಿದ ಅಮಾನವೀಯ ಘಟನೆ ತಮಿಳುನಾಡಿನ ಕೊಯಮತ್ತೂರು ಜಿಲ್ಲೆಯ ಕಿನಾತುಕಡವು ತಾಲೂಕಿನ ಸೆಂಗುಟ್ಟೈಪಾಳ್ಯಂ ಗ್ರಾಮದ ಖಾಸಗಿ ಶಾಲೆಯಲ್ಲಿ ನಡೆದಿದೆ. ಶಾಲೆಗೆ ಭೇಟಿ ನೀಡಿದ ವೇಳೆ ಮಗಳು ತರಗತಿಯ ಹೊರಗಡೆ ಕುಳಿತು ಪರೀಕ್ಷೆ ಬರೆಯುತ್ತಿರುವುದನ್ನು ವಿಡಿಯೋ ಮಾಡಿಕೊಂಡಿದ್ದ ವಿದ್ಯಾರ್ಥಿನಿಯ ತಾಯಿ, ಇತರರಿಗೆ ವಿಷಯ ತಿಳಿಸಿದ್ದರು. ಬಳಿಕ ಆ ವಿಡಿಯೋ ವೈರಲ್ ಆಗಿದೆ. ಸೆಂಗುಟ್ಟೈಪಾಳ್ಯಂ ಗ್ರಾಮದಲ್ಲಿರುವ ಸ್ವಾಮಿ ಚಿದ್ಭವಾನಂದ ಮೆಟ್ರಿಕ್ ಹೈಯರ್ ಸೆಕೆಂಡರಿ ಶಾಲೆಯಲ್ಲಿ ಘಟನೆ ನಡೆದಿದೆ. ಏಪ್ರಿಲ್ 5ರಂದು ವಿದ್ಯಾರ್ಥಿನಿಗೆ ಮುಟ್ಟಾಗಿತ್ತು. ಏಪ್ರಿಲ್ 7ರಂದು ಸಮಾಜ ವಿಜ್ಞಾನ ಪರೀಕ್ಷೆ ಬರೆಯಲು ಆಕೆ ಶಾಲೆಗೆ ತೆರಳಿದಾಗ ಶಿಕ್ಷಕರು ಹೊರಗಡೆ ಕೂರಿಸಿ ಪರೀಕ್ಷೆ ಬರೆಸಿದ್ದಾರೆ. ಏಪ್ರಿಲ್ 9ರಂದು ವಿಜ್ಞಾನ ಪರೀಕ್ಷೆ ವೇಳೆಯೂ ಇದೇ ರೀತಿ ನಡೆದಿದೆ ಎಂದು ವರದಿಗಳು ಹೇಳಿವೆ. ಘಟನೆಯ ಬಗ್ಗೆ ಕೊಯಮತ್ತೂರು ಗ್ರಾಮೀಣ ಪೊಲೀಸರು ತನಿಖೆ ಆರಂಭಿಸಿದ್ದಾರೆ ಎಂದು ಕೊಯಮತ್ತೂರು ಜಿಲ್ಲಾಧಿಕಾರಿ ಪವನಕುಮಾರ್ ಜಿ ಗಿರಿಯಪ್ಪನವರ್ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಈ ಕುರಿತು ಜಿಲ್ಲಾಡಳಿತಕ್ಕೆ ವಿವರವಾದ ವರದಿಯನ್ನು ಸಲ್ಲಿಸುವಂತೆ ಮೆಟ್ರಿಕ್ಯುಲೇಷನ್ ಶಾಲೆಯ ಇನ್ಸ್‌ಪೆಕ್ಟರ್‌ಗೆ ನಿರ್ದೇಶಿಸಲಾಗಿದೆ. ಶಾಲಾ ಆಡಳಿತ ಮಂಡಳಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಹೇಳಿದ್ದಾರೆ. ಕೊಯಮತ್ತೂರು ಮುಖ್ಯ ಶಿಕ್ಷಣಾಧಿಕಾರಿ (ಸಿಇಒ) ಆರ್ ಬಾಲಮುರಳಿ ಮತ್ತು ಖಾಸಗಿ ಶಾಲೆಗಳ ಜಿಲ್ಲಾ ಶಿಕ್ಷಣಾಧಿಕಾರಿ (ಡಿಇಒ) ಪುನಿತಾ ಅಂತೋನಿಮಾಳ್ ಗುರುವಾರ ಶಾಲೆಗೆ ಭೇಟಿ ನೀಡಿ ಶಾಲಾ ಆಡಳಿತ ಮಂಡಳಿಯವರಿಂದ ಘಟನೆಯ ಬಗ್ಗೆ ಮಾಹಿತಿ ಪಡೆದಿದ್ದಾರೆ. ನನ್ನ ಮಗಳಿಗೆ ಮುಟ್ಟಾಗಿತ್ತು. ಹಾಗಾಗಿ, ಆಕೆ ಆರಾಮಾಗಿ ಪರೀಕ್ಷೆ ಬರೆಯಲು ಪ್ರತ್ಯೇಕ ವ್ಯವಸ್ಥೆ ಮಾಡುವಂತೆ ನಾವು ಶಿಕ್ಷಕರಲ್ಲಿ ಕೋರಿದ್ದೆವು. ಶಿಕ್ಷಕರು ಪ್ರತ್ಯೇಕ ವ್ಯವಸ್ಥೆ ಮಾಡುವ ಬದಲು ಆಕೆಯನ್ನು ಬಲವಂತವಾಗಿ ತರಗತಿ ಕೊಠಡಿಯಿಂದ ಹೊರಗೆ ಕೂರಿಸಿ ಪರೀಕ್ಷೆ ಬರೆಸಿದ್ದಾರೆ. ಏಪ್ರಿಲ್ 7ರಂದು ಸುಮಾರು ಎರಡೂವರೆಗೆ ತಾಸು ತರಗತಿಯ ಹೊರಗೆ ಮೆಟ್ಟಿಲ ಮೇಲೆ ಕುಳಿತು ಪರೀಕ್ಷೆ ಬರೆದು ಆಕೆಗೆ ಕಾಲು ನೋವು ಬಂದಿತ್ತು ಎಂದು ವಿದ್ಯಾರ್ಥಿನಿಯ ತಂದೆ ಹೇಳಿದ್ದಾರೆ.



# ಬಿಹಾರದಲ್ಲಿ ಜೆಡಿಯು ನಾಯಕನ ಗುಂಡಿಕ್ಕಿ ಹತ್ಯೆ

**ನವದೆಹಲಿ, ಏ.10:** ಬಿಹಾರದ ಖಗಾರಿಯಾ ಜಿಲ್ಲೆಯಲ್ಲಿ ರಾಜ್ಯದ ಆಡಳಿತರೂಢ ಜೆಡಿಯು ಶಾಸಕ ಪನ್ನಾಲಾಲ್‌ಸಿಂಗ್ ಪಟೇಲ್ ಅವರ ಸೋದರಳಿಯ ಎಂದು ಹೇಳಲಾದ 50 ವರ್ಷದ ವ್ಯಕ್ತಿಯನ್ನು ಶಸ್ತ್ರಸಜ್ಜಿತ ಅಪರಿಚಿತ ದುಷ್ಕರ್ಮಿಗಳು ಗುಂಡಿಕ್ಕಿ ಕೊಂದಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಹಾರ, ಮೃತನನ್ನು ಖಗಾರಿಯಾದ ಕೈಥಿ ಟೋಲಾ ನಿವಾಸಿ ಕೌಶಲ್ ಸಿಂಗ್ ಎಂದು ಗುರುತಿಸಲಾಗಿದೆ. ಮಂಗಳವಾರ ತಡರಾತ್ರಿ ಕೌಶಲ್ ಮತ್ತು ಅವರ ಪತ್ನಿ ಚೌಥಮ್ ಪೊಲೀಸ್ ಠಾಣೆ ವ್ಯಾಪ್ತಿಯ ಕೈಥಿ ಟೋಲಾದಲ್ಲಿರುವ ಮನೆಗೆ ಮರಳುತ್ತಿದ್ದಾಗ ಈ ಘಟನೆ ನಡೆದಿದೆ. ದಾಳಿಕೋರರು ಕೌಶಲ್ ಮೇಲೆ ಹತ್ತಿರದಿಂದ ಅವರಿಗೆ ಗುಂಡು ಹಾರಿಸಿದ್ದು, ಇದರಿಂದ ಅವರಿಗೆ ಗಂಭೀರ ಗಾಯಗಳಾಗಿತ್ತು. ಅವರು ಪ್ರಜ್ಞಾಹೀನರಾದ ತಕ್ಷಣ ದುಷ್ಕರ್ಮಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ವರದಿಯಾಗಿದೆ. ಮಾಜಿ ಪಂಚಾಯತ್ ಸಮಿತಿ ಸದಸ್ಯರಾದ ಕೌಶಲ್ ಜೆಡಿಯು ಪಕ್ಷದ ಜೊತೆಗೆ ಗುರುತಿಸಿಕೊಂಡಿದ್ದರು. ಬುಧವಾರ ತಡರಾತ್ರಿ ಅವರು ತಮ್ಮ ಗೋದಾಮಿನಿಂದ ಮನೆಗೆ ಹಿಂತಿರುಗುತ್ತಿದ್ದಾಗ ಈ ಘಟನೆ ಸಂಭವಿಸಿದೆ.

ಕೌಶಲ್ ಅವರನ್ನು ತಕ್ಷಣ ಚೌಥಮ್‌ನಲ್ಲಿರುವ ಹತ್ತಿರದ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ಅವರು ಅಲ್ಲಿಗೆ ತಲುಪುವ ವೇಳೆ ಸಾವನ್ನಪ್ಪಿದ್ದಾರೆ ಎಂದು ಘೋಷಿಸಲಾಗಿದೆ. ಮೃತರ ಪತ್ನಿ ಹತ್ಯೆಯಲ್ಲಿ ಭಾಗಿಯಾಗಿರುವ ಶಂಕಿತರ ಹೆಸರುಗಳನ್ನು ಬಹಿರಂಗಪಡಿಸಿದ್ದಾರೆ ಎಂದು ವರದಿಯಾಗಿದೆ. ಆದರೆ, ಘಟನೆಗೆ ಸಂಬಂಧಿಸಿದಂತೆ ಪೊಲೀಸರು ಇಲ್ಲಿಯವರೆಗೆ ಯಾರನ್ನೂ ಬಂಧಿಸಿಲ್ಲ. ಮೃತರ ಪತ್ನಿ ಆರೋಪಿಗಳನ್ನು ತಕ್ಷಣ ಬಂಧಿಸಬೇಕೆಂದು ಒತ್ತಾಯಿಸಿದ್ದು, ಅಪರಾಧಿಗಳು ಗೋದಾಮಿನಿಂದ ತಮ್ಮನ್ನು ಬೈಕ್‌ನಲ್ಲಿ ಹಿಂಬಾಲಿಸಿರಬಹುದು ಎಂದು ಅವರು ಪೊಲೀಸರಿಗೆ ತಿಳಿಸಿದ್ದಾರೆ. ನಾವು ಮನೆಗೆ ತಲುಪುವ ಹಂತದಲ್ಲಿದ್ದಾಗ ಅಪರಾಧಿಗಳು ನನ್ನ ಗಂಡನನ್ನು ತಡೆದು ಅವರ ಮೇಲೆ ಗುಂಡು ಹಾರಿಸಿದರು ಎಂದು ಅವರು ವಿಚಾರಣಾಧಿಕಾರಿಗಳಿಗೆ ತಿಳಿಸಿದ್ದಾರೆ. ಪ್ರಾಥಮಿಕವಾಗಿ ಈ ಘಟನೆಯು ಕೌಟುಂಬಿಕ ಕಲಹದ ಪರಿಣಾಮದಂತೆ ಕಂಡುಬರುತ್ತಿದೆ ಎಂದು ಖಗರಿಯಾದ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ರಾಕೇಶ್ ಕುಮಾರ್ ಅವರು ಹೇಳಿದ್ದಾರೆ. ಆರೋಪಿಗಳನ್ನು ಆದಷ್ಟು ಬೇಗ ಬಂಧಿಸಲು ನಾವು ವಿಶೇಷ ತಂಡವನ್ನು ರಚಿಸಿದ್ದೇವೆ. ಮೃತರ ಪತ್ನಿಯ ಹೇಳಿಕೆಯನ್ನು ಸಹ ದಾಖಲಿಸಲಾಗಿದೆ ಎಂದು ಎಸ್ಪಿ ಹೇಳಿದ್ದಾರೆ. ಖಗರಿಯಾ ಜಿಲ್ಲೆಯಲ್ಲಿ ನಡೆದ ಜೆಡಿಯು ಶಾಸಕರ ಸಂಬಂಧಿಯ ಈ ಹತ್ಯೆಗೆ ಕೌಟುಂಬಿಕ ಕಲಹವೆ ಕಾರಣ ಎಂದು ಉಪಮುಖ್ಯಮಂತ್ರಿ, ಹಿರಿಯ ಬಿಜೆಪಿ ನಾಯಕ ಸಾಮ್ರಾಟ್ ಚೌಧರಿ ಅವರು ಮಂಗಳವಾರ ಸಂಜೆ ಹೇಳಿದ್ದಾರೆ. ಇದು ಅಪರಾಧವಲ್ಲ ಕೊಲೆ ಕೌಟುಂಬಿಕ ವಿಷಯಕ್ಕೆ ಸಂಬಂಧಿಸಿದ್ದರೆ, ಅದು ಅಪರಾಧವಲ್ಲ? ಎಂದು ಅವರು ಪ್ರತಿಪಾದಿಸಿದ್ದಾರೆ. ಮೃತರ ಕುಟುಂಬ ಸದಸ್ಯರು ತಮ್ಮ ಪತಿಯ ಕೊಲೆಗೆ ಕೌಟುಂಬಿಕ ವಿವಾದವೂ ಒಂದು ಕಾರಣವಾಗಿರಬಹುದು ಎಂದು ಹೇಳಿದ್ದನ್ನು ಅವರು ಉಲ್ಲೇಖಿಸಿದ್ದಾರೆ. ಮೃತರ ಕುಟುಂಬ ಸದಸ್ಯರ ಹೇಳಿಕೆಯ ಪ್ರಕಾರ, ಇದು ಕುಟುಂಬಕ್ಕೆ ಸಂಬಂಧಿಸಿದ ವಿಷಯ ಎಂದು ಚೌಧರಿ ಹೇಳಿದ್ದಾರೆ.

# ಅತ್ಯಾಚಾರಕ್ಕೆ ಸಂತ್ರಸ್ತೆಯೇ ಕಾರಣ ಎಂದ ಉತ್ತರಪ್ರದೇಶ ಹೈಕೋರ್ಟ್

**ಲಖನೌ, ಏ.10:** ಯುವತಿಯೊಬ್ಬರ ಮೇಲೆ ನಡೆದ ಅತ್ಯಾಚಾರಕ್ಕೆ ಅವರೇ ಕಾರಣ ಎಂಬಂತೆ ಅಲಹಾಬಾದ್ ಹೈಕೋರ್ಟ್ ಇತ್ತೀಚೆಗೆ ಅಘಾತಕಾರಿ ತೀರ್ಪೊಂದನ್ನು ನೀಡಿದೆ. 2024 ರಲ್ಲಿ ಅತ್ಯಾಚಾರಕ್ಕೊಳಗಾದ ಮಹಿಳೆಯ ಬಗ್ಗೆ ಮಹಿಳೆಯೆ ಸಮಸ್ಯೆಯನ್ನು ಮೈಗೆಳೆದುಕೊಂಡಿದ್ದಾರೆ ಎಂದು ಎಂದು ಹೇಳಿದ್ದು, ಅವರ ವಿರುದ್ಧ ನಡೆದ ಅಪರಾಧಕ್ಕೆ ಅವರೇ ಕಾರಣರಾಗಿದ್ದಾರೆ ಎಂದು ಆರೋಪಿಗೆ ಜಾಮೀನು ನೀಡುವಾಗ ತೀರ್ಪು ನೀಡಿದೆ. ನ್ಯಾಯಾಧೀಶ ಸಂಜಯ್ ಕುಮಾರ್ ಸಿಂಗ್ ಅವರು ಮಾರ್ಚ್ 11 ರಂದು ಮಹಿಳೆಯ ಮೇಲೆ ಅತ್ಯಾಚಾರ ಎಸಗಿದ ಆರೋಪಿ ನಿಶ್ಚಲ್ ಚಂದಕ್‌ಗೆ ಜಾಮೀನು ಮಂಜೂರು ಮಾಡುವ ತಮ್ಮ ಆದೇಶದಲ್ಲಿ ಈ ಹೇಳಿಕೆ ನೀಡಿದ್ದಾರೆ. ಡಿಸೆಂಬರ್ 2024 ರಲ್ಲಿ ಈ ಪ್ರಕರಣದಲ್ಲಿ ನಿಶ್ಚಲ್‌ನನ್ನು ಬಂಧಿಸಲಾಗಿತ್ತು. ಸಂತ್ರಸ್ತೆಯ ಆರೋಪ ನಿಜವೆಂದು ಒಪ್ಪಿಕೊಂಡರೂ ಸಹ, ಅವಳೆ ಸಮಸ್ಯೆಯನ್ನು ಸ್ವತಃ ಮೈಗೆಳೆದುಕೊಂಡಿದ್ದಾರೆ ಮತ್ತು ಅಪರಾಧಕ್ಕೆ ಕಾರಣಳಾಗಿದ್ದಾಳೆ ಎಂದು ತೀರ್ಮಾನಿಸಬಹುದು ಎಂದು ಈ ನ್ಯಾಯಾಲಯ ಅಭಿಪ್ರಾಯಪಟ್ಟಿದೆ ಎಂದು ಸಂಜಯ್ ಸಿಂಗ್ ತೀರ್ಪಿನಲ್ಲಿ ತಿಳಿಸಿದ್ದಾರೆ. ನೋಯ್ಡಾ ಪೊಲೀಸರಿಗೆ ಸಲ್ಲಿಸಿದ ದೂರಿನ ಪ್ರಕಾರ, ವಿಶ್ವವಿದ್ಯಾಲಯದ ವಿದ್ಯಾರ್ಥಿನಿಯಾಗಿದ್ದ ಯುವತಿ, ಸೆಪ್ಟೆಂಬರ್ 2024 ರಲ್ಲಿ ತನ್ನ ಮೂವರು ಮಹಿಳಾ ಸ್ನೇಹಿತರೊಂದಿಗೆ ದೆಹಲಿಯ ಬಾರ್‌ಗೆ ಹೋಗಿದ್ದೆ ಎಂದು ಹೇಳಿರುವುದಾಗಿ ಬಾರ್ ಮತ್ತು ಬೆಂಚ್ ವರದಿ ಮಾಡಿದೆ. ಯುವತಿ ಬಾರ್‌ನಲ್ಲಿ ಕೆಲವು ಪುರುಷ ಪರಿಚಯಸ್ಥರನ್ನು ಭೇಟಿಯಾದಳು ಮತ್ತು ಚಂದಕ್ ಕೂಡ ಈ ಗುಂಪಿನ ಭಾಗವಾಗಿದ್ದನು ಎಂದು ಯುವತಿ ನೀಡಿದ್ದ ದೂರಿನಲ್ಲಿ ತಿಳಿಸಲಾಗಿದೆ. ಮಹಿಳೆ ಮದ್ಯ ಸೇವಿಸಿ ಬೆಳಗಿನ ಜಾವ 3 ಗಂಟೆಯವರೆಗೆ ಬಾರ್‌ನಲ್ಲಿಯೇ ಇದ್ದರು ಎಂದು ದೂರಿನಲ್ಲಿ ಯುವತಿ ಹೇಳಿದ್ದಾರೆ.ಈ ವೇಳೆ ಚಂದಕ್ ತನ್ನೊಂದಿಗೆ ಬರುವಂತೆ ಕೇಳುತ್ತಲೇ ಇದ್ದನು ಎಂದು ಮಹಿಳೆ ತನ್ನ ದೂರಿನಲ್ಲಿ ಆರೋಪಿಸಿದ್ದಾರೆ. ಚಂದಕ್‌ನ ಒತ್ತಾಯದ ಮೇರೆಗೆ ತಾನು ಕೊನೆಗೆ ಅವನೊಂದಿಗೆ ಅವನ ಮನೆಗೆ ವಿಶ್ರಾಂತಿ ಪಡೆಯಲು ಹೋಗಲು ಒಪ್ಪಿಕೊಂಡೆ ಎಂದು ಯುವತಿ ಹೇಳಿದ್ದಾರೆ. ಮನೆಗೆ ಹೋಗುವ ದಾರಿಯಲ್ಲಿ ಚಂದಕ್ ತನ್ನನ್ನು ಅನುಚಿತವಾಗಿ ಸ್ಪರ್ಶಿಸುತ್ತಲೇ ಇದ್ದನು ಮತ್ತು ನೋಯ್ಡಾದಲ್ಲಿರುವ ತನ್ನ ಮನೆಗೆ ಕರೆದೊಯ್ಯುವ ಬದಲು, ಗುರ್ಗಾಂವ್‌ನಲ್ಲಿರುವ ತನ್ನ ಸಂಬಂಧಿಕರ ಫ್ಲಾಟ್‌ಗೆ ಕರೆದೊಯ್ದು ತನ್ನ ಮೇಲೆ ಅತ್ಯಾಚಾರ ಮಾಡಿದನು ಎಂದು ಯುವತಿ ದೂರಿದ್ದಾರೆ. ಯುವತಿ ಸಲ್ಲಿಸಿದ ದೂರಿನ ಆಧಾರದ ಮೇಲೆ ನೋಯ್ಡಾದ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿತ್ತು. ಡಿಸೆಂಬರ್ 11, 2024 ರಂದು ಚಂದಕ್ ಅವರನ್ನು ಬಂಧಿಸಲಾಗಿದೆ ಎಂದು ಬಾರ್ ಮತ್ತು ಬೆಂಚ್ ವರದಿ ಮಾಡಿದೆ. ಚಂದಕ್ ಜಾಮೀನು ಕೋರಿ ಸಲ್ಲಿಸಿದ ಅರ್ಜಿಯಲ್ಲಿ, ಯುವತಿಯನ್ನು ತನ್ನ ಸಂಬಂಧಿಕರ ಫ್ಲಾಟ್‌ಗೆ ಕರೆದೊಯ್ದು ಅತ್ಯಾಚಾರ ಮಾಡಿದ್ದಾನೆ ಎಂಬ ಆರೋಪವನ್ನು ನಿರಾಕರಿಸಿದ್ದಾರೆ. ತಮ್ಮಿಬ್ಬರ ನಡುವೆ ನಡೆದದ್ದು ಸಮ್ಮತಿಯ ಲೈಂಗಿಕತೆಯೆ ಹೊರತು, ಅತ್ಯಾಚಾರವಲ್ಲ ಎಂದುಅವರು ಹೇಳಿಕೊಂಡಿದ್ದಾರೆ. ಯುವತಿಯೆ ಸ್ವತಃ ತಮ್ಮ ಮನೆಗೆ ಬಂದು ವಿಶ್ರಾಂತಿ ಪಡೆಯಲು ಒಪ್ಪಿಕೊಂಡಿದ್ದರು ಎಂದು ಅವರು ಹೇಳಿದ್ದಾರೆ.ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂಜಯ್ ಸಿಂಗ್ ತನ್ನ ಆದೇಶದಲ್ಲಿ, ಮಹಿಳೆ ಸ್ನಾತಕೋತ್ತರ ವಿದ್ಯಾರ್ಥಿನಿಯಾಗಿದ್ದು, ಎಫ್‌ಐಆರ್‌ನಲ್ಲಿ ಬಹಿರಂಗಪಡಿಸಿದಂತೆ ಆಕೆಯ ಕೃತ್ಯದ ನೈತಿಕತೆ ಮತ್ತು ಮಹತ್ವವನ್ನು ಅರ್ಥಮಾಡಿಕೊಳ್ಳುವಷ್ಟು ಸಮರ್ಥಳಾಗಿದ್ದಾರೆ ಎಂದು ಉಲ್ಲೇಖಿಸಿದ್ದಾರೆ. ಮಹಿಳೆಯ ವೈದ್ಯಕೀಯ ಪರೀಕ್ಷೆಯಲ್ಲಿ, ಆಕೆಯ ಕನ್ಯಾಪೊರೆ ಹರಿದಿರುವುದು ಕಂಡುಬಂದಿದೆ ಆದರೆ ವೈದ್ಯರು ಲೈಂಗಿಕ ದೌರ್ಜನ್ಯದ ಬಗ್ಗೆ ಯಾವುದೇ ಅಭಿಪ್ರಾಯವನ್ನು ನೀಡಿಲ್ಲ ಎಂದು ಆದೇಶದಲ್ಲಿ ಹೇಳಿದ್ದಾರೆ. ಪ್ರಕರಣದ ಸಂಗತಿಗಳು ಮತ್ತು ಸಂದರ್ಭಗಳನ್ನು ಹಾಗೂ ಅಪರಾಧದ ಸ್ವರೂಪ, ಸಾಕ್ಷ್ಯಗಳು, ಆರೋಪಿಗಳ ಶಾಮೀಲುದಾರಿಕೆ ಮತ್ತು ಎರಡು ಕಡೆಯವರ ವಕೀಲರ ವಾದಗಳನ್ನು ಗಮನದಲ್ಲಿಟ್ಟುಕೊಂಡು, ಅರ್ಜಿದಾರರು ಜಾಮೀನಿಗೆ ಸೂಕ್ತವಾದ ಪ್ರಕರಣವನ್ನು ಮಂಡಿಸಿದ್ದಾರೆ ಎಂದು ನಾನು ಭಾವಿಸುತ್ತೇನೆ. ಎಂದು ಆದೇಶದಲ್ಲಿ ತಿಳಿಸಿದ್ದಾರೆ



# 1 ಲಕ್ಷ ರೂ. ವಿದ್ಯುತ್ ಬಿಲ್ ಬಾಕಿ ಉಳಿಸಿಕೊಂಡ ಬಿಜೆಪಿ ಸಂಸದೆ ಕಂಗನಾ

**ನವದೆಹಲಿ, ಏ.10:** ನಟಿ-ಬಿಜೆಪಿ ಸಂಸದೆ ಕಂಗನಾ ರಣಾವತ್ ಮನಾಲಿಯಲ್ಲಿರುವ ತಮ್ಮ ಖಾಲಿ ನಿವಾಸಕ್ಕೆ ಸುಮಾರು 1 ಲಕ್ಷ ರೂ. ವಿದ್ಯುತ್ ಬಿಲ್ ನೀಡಲಾಗಿದೆ ಎಂದು ಆರೋಪಿಸಿದ್ದಾರೆ. ಈ ಬಗ್ಗೆ ಹಿಮಾಚಲ ಪ್ರದೇಶ ರಾಜ್ಯ ವಿದ್ಯುತ್ ಮಂಡಳಿ ಲಿಮಿಟೆಡ್ (ಎಚ್‌ಪಿಎಸ್‌ಇಬಿಎಲ್) ಪ್ರತಿಕ್ರಿಯೆ ನೀಡಿದ್ದು, ಈ ಬಿಲ್ ಹಳೆಯ ಬಾಕಿಗಳನ್ನು ಒಳಗೊಂಡಿದೆ ಎಂದು ಸ್ಪಷ್ಟನೆ ನೀಡಿದೆ. ಮಂಡಿಯಲ್ಲಿ ಇತ್ತೀಚೆಗೆ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಕಂಗನಾ ರಣಾವತ್, ಹೆಚ್ಚಿನ ಬಿಲ್ ಬಗ್ಗೆ ರಾಜ್ಯದ ಕಾಂಗ್ರೆಸ್ ಸರ್ಕಾರವನ್ನು ಟೀಕಿಸಿದರು. ಮನಾಲಿಯಲ್ಲಿರುವ ನನ್ನ ಮನೆಗೆ ಒಂದು ತಿಂಗಳಿಗೆ ನನಗೆ 1 ಲಕ್ಷ ರೂ. ವಿದ್ಯುತ್ ಬಿಲ್ ಬಂದಿದೆ. ನಾನು ಅಲ್ಲಿ ವಾಸಿಸುವುದಿಲ್ಲ.

ಇದು ತುಂಬಾ ಶೋಚನೀಯ ಸ್ಥಿತಿಯಾಗಿದೆ ಎಂದು ಅವರು ಹೇಳಿದರು. ಈ ಬಗ್ಗೆ ಎಚ್‌ಪಿಎಸ್‌ಇಬಿಎಲ್ ಬುಧವಾರ ಬಿಡುಗಡೆ ಮಾಡಿದ ವಿವರವಾದ ಹೇಳಿಕೆಯಲ್ಲಿ, ಆರೋಪ ಸಂಪೂರ್ಣವಾಗಿ ತಪ್ಪು ಮತ್ತು ದಾರಿತಪ್ಪಿಸುವ ಹೇಳಿಕೆ ಎಂದು ಕರೆದಿದೆ. ಜನವರಿ ಮತ್ತು ಫೆಬ್ರವರಿ ತಿಂಗಳ ಎರಡು ಬಿಲ್ಲಿಂಗ್ ಚಕ್ರಗಳನ್ನು ಒಳಗೊಂಡಿದ್ದು, ಹಿಂದಿನ 32,287 ರೂ.ಗಳ ಪಾವತಿಸದ ಬಾಕಿಗಳನ್ನು ಸಹ ಒಳಗೊಂಡಿದೆ ಎಂದು ವಿವರಿಸಿದೆ. ಕಂಗನಾ ರನೌತ್ ಅವರ ಹೆಸರಿನಲ್ಲಿ ಮನಾಲಿಯ ಸಿಮ್ಸಾ ಗ್ರಾಮದಲ್ಲಿರುವ ಅವರ ನಿವಾಸದಲ್ಲಿ 100000838073 ಸಂಖ್ಯೆ ಅಡಿಯಲ್ಲಿ ಗೃಹಬಳಕೆ ಸಂಪರ್ಕವನ್ನು ನೋಂದಾಯಿಸಲಾಗಿದೆ. ಮನೆಯ ಸಂಪರ್ಕಿತ ಲೋಡ್ 94.82 ಕೆಡಬ್ಲ್ಯೂ ಆಗಿದ್ದು, ಇದು ಪ್ರಮಾಣಿತ ಗೃಹಬಳಕೆ ಸಂಪರ್ಕಕ್ಕಿಂತ ಸುಮಾರು 1,500 ಪ್ರತಿಶತ ಹೆಚ್ಚಾಗಿದೆ ಎಂದು ಮಂಡಳಿ ತಿಳಿಸಿದೆ. ಎಚ್‌ಪಿಎಸ್‌ಇಬಿಎಲ್ ಪ್ರಕಾರ, ರಣಾವತ್ ಅಕ್ಟೋಬರ್, ನವೆಂಬರ್ ಮತ್ತು ಡಿಸೆಂಬರ್ 2024 ರ ತಿಂಗಳುಗಳ ವಿದ್ಯುತ್ ಬಿಲ್‌ಗಳನ್ನು ಸಮಯಕ್ಕೆ ಸರಿಯಾಗಿ ಪಾವತಿಸಿಲ್ಲ. ಈ ಬಾಕಿಗಳು ರೂ. 82,061 ರಷ್ಟಿದ್ದವು.

ಮಾರ್ಚ್ 28 ರಂದು ಮಾಡಲಾದ ಇತ್ತೀಚಿನ ಪಾವತಿಯು ಜನವರಿ ಮತ್ತು ಫೆಬ್ರವರಿ ತಿಂಗಳ ಬಳಕೆಯನ್ನು ಒಳಗೊಂಡಿದೆ. ಆಗ ಅವರು ಸುಮಾರು 14,000 ಯೂನಿಟ್ ವಿದ್ಯುತ್ ಬಳಸಿದ್ದಾರೆ ಎಂದು ವರದಿಯಾಗಿದೆ. ರಣಾವತ್ ಅವರ ಹೆಸರಿನಲ್ಲಿರುವ ವಿದ್ಯುತ್ ಸಂಪರ್ಕವು ರಾಜ್ಯ ಸರ್ಕಾರದ ಯೋಜನೆಯಡಿಯಲ್ಲಿ ವಿದ್ಯುತ್ ಸಬ್ಸಿಡಿಗೆ ಅರ್ಹವಾಗಿದೆ ಎಂದು ಮಂಡಳಿಯು ಗಮನಿಸಿದೆ. ಹೆಚ್ಚಿನ ಬಳಕೆಯ ಹೊರತಾಗಿಯೂ, ಹಿಮಾಚಲ ಪ್ರದೇಶದ ಯಾವುದೇ ಇತರ ಗೃಹ ಗ್ರಾಹಕರಂತೆ ಸಂಪರ್ಕವನ್ನು ಅನ್ವಯವಾಗುವ ಸಬ್ಸಿಡಿಗೆ ವಿಸ್ತರಿಸಲಾಗಿದೆ ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ.



# ಬಿಜೆಪಿ ವತಿಯಿಂದ ಇಂದು ಭೀಮಹೆಜ್ಜೆ 100ರ ಸಂಭ್ರಮ: ಜಾಗೃತಿ ಕಾರ್ಯಕ್ರಮ ಆಯೋಜನೆ

**ಬೆಂಗಳೂರು, ಏ.10–** ಬಾಬಾಸಾಹೇಬ ಡಾ. ಅಂಬೇಡ್ಕರ್ ಅವರು ನಿಪ್ಪಾಣಿಗೆ ಭೇಟಿ ಕೊಟ್ಟು 100 ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಬಿಜೆಪಿ ವತಿಯಿಂದ ಏಪ್ರಿಲ್ 11ರಂದು ಭೀಮ ಹೆಜ್ಜೆ 100ರ ಸಂಭ್ರಮ' ಎಂಬ ಜಾಗೃತಿ ಕಾರ್ಯಕ್ರಮವನ್ನು ಬೆಂಗಳೂರಿನಿಂದ ನಿಪ್ಪಾಣಿ ವರೆಗೆ ಹಮ್ಮಿಕೊಳ್ಳಲು ನಿರ್ಧರಿಸಿದ್ದೇವೆ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷ ಎನ್.ಮಹೇಶ್ ತಿಳಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಡಾ.ಬಿ.ಆರ್.ಅಂಬೇಡ್ಕರ್ ಅವರು 1925ರ ಏಪ್ರಿಲ್ 10 ಮತ್ತು ಏಪ್ರಿಲ್ 11ರಂದು ಬೆಳಗಾವಿ ಜಿಲ್ಲೆಯ ನಿಪ್ಪಾಣಿಗೆ ಭೇಟಿ ನೀಡಿದ್ದರು. ಇದೇ ಏಪ್ರಿಲ್ 10 ಮತ್ತು 11ಕ್ಕೆ 100 ವರ್ಷ ತುಂಬುತ್ತಿದೆ. ಈ 100 ವರ್ಷದ ಕಾರ್ಯಕ್ರಮವನ್ನು ಬಿಜೆಪಿ ವತಿಯಿಂದ ಮಾಡುತ್ತಿದ್ದೇವೆ ಎಂದು ವಿವರಿಸಿದರು. ಅಂಬೇಡ್ಕರರು ಶೋಷಿತ ವರ್ಗಗಳನ್ನು ಸಂಘಟಿಸಿ, ಅವರ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಶೋಷಣೆಗಳಿಂದ ಮುಕ್ತಗೊಳಿಸಲು ಮೊದಲ ಸಂಘಟಿತ ಪ್ರಯತ್ನ ಮಾಡಿದ್ದರು. ಅದು ಬಹಿಷ್ಕೃತ ಹಿತಕಾರಿಣಿ ಸಭಾ ಎಂಬುದಾಗಿತ್ತು. ಅದರ ಎರಡನೇ ಸಮಾವೇಶ ನಿಪ್ಪಾಣಿಯಲ್ಲಿ ನಡೆಯಿತು. ಡಾ.ಬಿ.ಆರ್.ಅಂಬೇಡ್ಕರ್ ಅವರು ಸಮಾವೇಶದ ಅಧ್ಯಕ್ಷತೆ ವಹಿಸಿದ್ದರು, ಅಸ್ಪೃಶ್ಯರು, ದಲಿತರಿಗೆ ಶಿಕ್ಷಣ ಕೊಡಬೇಕು. ಆ ಶಿಕ್ಷಣ ಸಮರ್ಪಕವಾಗಿ ಸಿಗಲು ವಸತಿ ಶಾಲೆಗಳು, ವಸತಿ ನಿಲಯಗಳನ್ನು ಪ್ರಾರಂಭಿಸಬೇಕು ಆದರೆ 100 ವರ್ಷ ಕಳೆದರೂ ನಮ್ಮ ರಾಜ್ಯದಲ್ಲಿ ಸುಮಾರು 200 ಹಾಸ್ಟೆಲ್, ವಸತಿ ಶಾಲೆಗಳು ಖಾಸಗಿ ಕಟ್ಟಡಗಳಲ್ಲಿ ನಡೆಯುತ್ತಿವೆ ಎಂದು ಬೇಸರ ವ್ಯಕ್ತಪಡಿಸಿದರು.



ಏಪ್ರಿಲ್ 11ರಂದು ಬೆಂಗಳೂರಿನ ವಿಧಾನಸೌಧದ ಮುಂಭಾಗದ ಬಾಬಾಸಾಹೇಬರ ಪ್ರತಿಮೆ ಮುಂದಿನಿಂದ ರಥಯಾತ್ರೆ ಆರಂಭಿಸಿ ಸಂಜೆ ಚಿತ್ರದುರ್ಗ ತಲುಪುತ್ತೇವೆ. ಏಪ್ರಿಲ್ 12ರಂದು ಹುಬ್ಬಳ್ಳಿ, ಧಾರವಾಡ, ಏಪ್ರಿಲ್ 13ರ ಸಂಜೆ ಬೆಳಗಾವಿ, ಏಪ್ರಿಲ್ 14ರಂದು ಬಾಬಾಸಾಹೇಬರ ಜಯಂತಿಯಲ್ಲಿ ತೊಡಗಿಸಿ ಕೊಳ್ಳುತ್ತೇವೆ. ಏಪ್ರಿಲ್ 15ರಂದು ನಿಪ್ಪಾಣಿಯಲ್ಲಿ ಬೃಹತ್ ಸಮಾವೇಶ ಆಯೋಜಿಸಿದ್ದೇವೆ ಎಂದು ತಿಳಿಸಿದರು.1924ರಲ್ಲಿ ಮಹಾತ್ಮ ಗಾಂಧೀಜಿ ಅವರು ಬೆಳಗಾವಿಯಲ್ಲಿ ಎಐಸಿಸಿ ಅಧಿವೇಶನ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಸರ್ಕಾರವು 100 ವರ್ಷದ ಅಧಿವೇಶನ ಮಾಡಿತ್ತು. ಅದಕ್ಕೆ ಪೂರ್ವಭಾವಿಯಾಗಿ ಬೆಳಗಾವಿ ಅಧಿವೇಶನದಲ್ಲಿ ಶಾಸಕಿ ಶಶಿಕಲಾ ಜೊಲ್ಲೆಯವರು ಈ ವಿಷಯವನ್ನು ಪ್ರಸ್ತಾಪ ಮಾಡಿದ್ದರು. ಗಾಂಧೀಜಿ ಬಂದು 100 ವರ್ಷಗಳ ಆಚರಣೆ ನಡೆಸುತ್ತಿದ್ದೀರಿ. ಅಂಬೇಡ್ಕರ್ ಅವರು ಬಂದು 100 ವರ್ಷವಾಗಿದೆ. ಅದನ್ನೂ ಆಚರಿಸಿ ಎಂದು ಸರಕಾರಕ್ಕೆ ಸಲಹೆ ಕೊಟ್ಟಿದ್ದರು. ಆದರೆ, ಸರಕಾರವು ಅದನ್ನು ಗಂಭೀರವಾಗಿ ಪರಿಗಣಿಸಲಿಲ್ಲ ಎಂದರು.

ಬಿಜೆಪಿಯು ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಎಲ್ಲೆಲ್ಲಿ ಅಪಮಾನ ಆಗಿದೆಯೋ? ಎಲ್ಲೆಲ್ಲಿ ತೊಂದರೆ ಆಗಿದೆಯೋ? ಆ ಎಲ್ಲ ಸ್ಥಳಗಳಲ್ಲಿ ಅವರಿಗೆ ಸನ್ಮಾನ ಮಾಡುವ ಅಥವಾ ಗೌರವಿಸುವ ಕೆಲಸವನ್ನು ನಾವು ಮಾಡಿದ್ದೇವೆ. ಏಪ್ರಿಲ್ 11 ಐತಿಹಾಸಿಕ ದಿನ ಎಂದು ಬಿಜೆಪಿ ಪರಿಭಾವಿಸುತ್ತದೆ ಎಂದು ತಿಳಿಸಿದರು.ಇದು ಸಾಂಕೇತಿಕ ಕಾರ್ಯಕ್ರಮವಲ್ಲ. ಅರ್ಥಪೂರ್ಣವಾಗಿ ನಡೆಯಲಿದೆ. ಬಾಬಾ ಸಾಹೇಬರ ಹೋರಾಟ, ಅವರ ಸಾಧನೆಗಳು, ಅವರಿಗೆ ಅಂದಿನ ಕಾಂಗ್ರೆಸ್ ಮಾಡಿದ ಮೋಸ, ಇಂದಿನ ಕಾಂಗ್ರೆಸ್ ಮಾಡುತ್ತಿರುವ ಮೋಸವನ್ನು ಜನಮಾನಸಕ್ಕೆ ತಲುಪಿಸಲಿದ್ದೇವೆ. ಏಪ್ರಿಲ್ 14ರಂದು ಬಾಬಾಸಾಹೇಬರ ಜನ್ಮ ದಿನಾಚರಣೆ ಬರಲಿದೆ. ಅದನ್ನು ಸೇರಿಸಿಕೊಂಡು ನಾವು ಈ ಕಾರ್ಯಕ್ರಮ ಮಾಡುತ್ತೇವೆ ಎಂದು ವಿವರಿಸಿದರು.



ಬೆಂಗಳೂರಿನ ಧರ್ಮರಾಯ ಸ್ವಾಮಿ ದೇವಸ್ಥಾನದಲ್ಲಿ ಗುರುವಾರ ಬೆಂಗಳೂರು ಕರಗದ ಅಂಗವಾಗಿ ಮಹಿಳೆಯರು ದೀಪ ಆರತಿ ಮೆರವಣಿಗೆ ನಡೆಸಿದರು.

## ಕಮಿಷನ್ ಪಡೆದಿರುವುದು ಸಾಬೀತಾದರೆ ರಾಜೀನಾಮೆಗೆ ಸಿದ್ಧ: ಬೋಸರಾಜು ಸವಾಲು



**ಬೆಂಗಳೂರು, ಏ.10–** ಸಣ್ಣ ನೀರಾವರಿ ಸಚಿವ ಎನ್‌ಎಸ್ ಬೋಸರಾಜು ಅವರ ವಿರುದ್ಧ ಗುತ್ತಿಗೆದಾರರಿಂದ ಕಮಿಷನ್ ಪಡೆದಿದ್ದಾರೆ ಎಂಬ ಆರೋಪ ಕೇಳಿ ಬಂದಿದ್ದು, ಈ ವಿಚಾರವಾಗಿ ಬೆಂಗಳೂರಿನಲ್ಲಿ ಸಚಿವ ಎನ್.ಎಸ್.ಬೋಸರಾಜು ಅವರು ಪ್ರತಿಕ್ರಿಯೆ ನೀಡಿ, ಗುತ್ತಿಗೆದಾರರಿಂದ ಕಮಿಷನ್ ಪಡೆದಿದ್ದನ್ನು ಸಾಬೀತು ಮಾಡಿದರೆ ರಾಜೀನಾಮೆ ನೀಡುತ್ತೇನೆ ಎಂದು ತಿಳಿಸಿದರು. ರಾಜ್ಯ ಗುತ್ತಿಗೆದಾರರ ಸಂಘದಿಂದ ಕಮಿಷನ್ ಆರೋಪ ವಿಚಾರವಾಗಿ ಕಮಿಷನ್ ಪಡೆದಿದ್ದನ್ನು ಸಾಬೀತು ಮಾಡಿದರೆ ರಾಜೀನಾಮೆ ನೀಡುತ್ತೇನೆ ಎಂದು ಬೆಂಗಳೂರಿನಲ್ಲಿ ಸಣ್ಣ ನೀರಾವರಿ ಸಚಿವ ಎನ್‌ಎಸ್ ಬೋಸರಾಜು ಹೇಳಿಕೆ ನೀಡಿದರು ಮೊದಲು ನಮ್ಮ ಸ್ಪಷ್ಟನೆ ಕೇಳಲಿ ಆಮೇಲೆ ಆರೋಪ ಮಾಡಲಿ ಎಂದು ಅವರು ತಿಳಿಸಿದರು. ನನ್ನ ಇಲಾಖೆಯಲ್ಲಿ ಯಾವುದೇ ಭ್ರಷ್ಟಾಚಾರ ಇಲ್ಲ ಇಲಾಖೆಯಲ್ಲಿ ಅಧಿಕಾರಿಗಳ ತಪ್ಪು ಕಂಡು ಬಂದಾಗ ನಾನು ಸರಿಪಡಿಸಿದ್ದೇನೆ ಗುತ್ತಿಗೆದಾರರ ಬಗ್ಗೆ ನಾನು ಆರೋಪ ಮಾಡುವುದಿಲ್ಲ. ಆದರೆ ಗುತ್ತಿಗೆದಾರರು ಕೂಡ ಸುಮ್ಮನೆ ಆರೋಪ ಮಾಡಬಾರದು ಎಂದು ಎನ್ ಎಸ್ ಹೊಸರಾಜು ತಿಳಿಸಿದರು.

## ಕಾಮಗಾರಿ ಬಿಲ್ ಪಾವತಿಯಲ್ಲಿ ಕುಟುಂಬದ ಸದಸ್ಯರ ಹಸ್ತಕ್ಷೇಪ ಇಲ್ಲ: ಸತೀಶ್ ಜಾರಕಿಹೊಳಿ ಸ್ಪಷ್ಟನೆ

**ಬೆಂಗಳೂರು, ಏ.10–** ಲೋಕೋಪಯೋಗಿ ಇಲಾಖೆಯಲ್ಲಿ ಕಾಮಗಾರಿಗಳ ಬಿಲ್ ಪಾವತಿಯಲ್ಲಿ ಕುಟುಂಬದ ಸದಸ್ಯರ ಹಸ್ತಕ್ಷೇಪ ಇಲ್ಲ ಎಂದು ಸಚಿವ ಸತೀಶ್ ಜಾರಕಿಹೊಳಿ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ, ಸಾಮಾನ್ಯವಾಗಿ ಬಾಕಿ ಬಿಲ್ಗಳ ಪಾವತಿಗೆ ಶಿಫಾರಸುಗಳು ಬರುತ್ತವೆ. ಅದನ್ನು ಇಲಾಖೆ ಪರಿಗಣಿಸುತ್ತದೆ. ವಿಶೇಷವಾಗಿ ಶೇ.25 ರಷ್ಟು ಬಿಲ್ ಪಾವತಿಗೆ ಮೊದಲಿನಿಂದಲೂ ಅವಕಾಶವಿದೆ. ಉಳಿದಂತೆ ಜ್ಯೇಷ್ಠತೆ ಆಧಾರದ ಮೇಲೆ ಹಣ ಬಿಡುಗಡೆಯಾಗುತ್ತದೆ ಎಂದರು.



ನನ್ನ ಇಲಾಖೆಗೆ ಸಂಬಂಧಪಟ್ಟಂತೆ ಗುತ್ತಿಗೆದಾರರ ಸಂಘವು ಈ ಮೊದಲು ನೀಡಿದ್ದ ಸಲಹೆಗಳನ್ನು ಆಧರಿಸಿ ಕ್ರಮ ಕೈಗೊಂಡಿದ್ದೇವೆ. ಮುಂದೆಯೂ ಯಾವುದೇ ಸಲಹೆಗಳನ್ನು ನೀಡಿದರೆ ಅದನ್ನು ಪರಿಗಣಿಸುತ್ತೇವೆ. ರಾಜಕಾರಣ ಎಂದ ಮೇಲೆ ಶಾಸಕರು, ಪಕ್ಷದ ಕಾರ್ಯಕರ್ತರು ಶಿಫಾರಸು ನೀಡುವುದು ಸಹಜ. ಅದರಲ್ಲಿ ತಪ್ಪಿಲ್ಲ ಎಂದು ಹೇಳಿದರು. ಗುತ್ತಿಗೆದಾರರ ಸಂಘದವರು ಸಭೆ ಮಾಡಿಯೇ ಸಲಹೆ ನೀಡಬೇಕೆಂದೇನಿಲ್ಲ. ಔಪಚಾರಿಕವಾಗಿ ಸಲಹೆ ನೀಡಿದರೂ ಅದನ್ನು ಪರಿಗಣಿಸುತ್ತೇವೆ. ನಮ ಇಲಾಖೆಯಿಂದ ಯಾರೂ ಕಮಿಷನ್ ಕೇಳುತ್ತಿಲ್ಲ. ಯಾವುದಾದರೂ ಅಂತಹ ನಿರ್ದಿಷ್ಟ ಪ್ರಕರಣಗಳಿದ್ದರೆ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ ಎಂದರು.

ಭ್ರಷ್ಟಾಚಾರದಲ್ಲಿ ಕರ್ನಾಟಕ ನಂಬರ್ ಒನ್ ಎಂಬ ಕಾಂಗ್ರೆಸ್ ಶಾಸಕ ಬಸವರಾಜ್ ರಾಯರೆಡ್ಡಿ ಹೇಳಿಕೆಗೆ ಸಚಿವ ಸತೀಶ್ ಜಾರಕಿಹೊಳಿ ಪ್ರತಿಕ್ರಿಯೆ ಕೊಟ್ಟಿದ್ದಾರೆ.ಈ ಸಂಬಂಧ ನಗರದಲ್ಲಿ ಮಾತನಾಡಿದ ಅವರು, ರಾಯರೆಡ್ಡಿ ಹೇಳಿಕೆ ನಾನು ಕೇಳಿದ್ದೇನೆ. ಮಾಧ್ಯಮಗಳಲ್ಲೂ ನಾನು ನೋಡಿದ್ದೇನೆ. ಜನರಲ್ ಆಗಿ ಅವರು ಅಸೆಸ್ ಮಾಡಿರಬಹುದು. ನೇರವಾಗಿ ಎಲ್ಲಿಯೂ ಹೇಳಿಲ್ಲ. ಅದಕ್ಕೆ ಹೆಚ್ಚು ಒತ್ತು ಕೊಡಬೇಕಿಲ್ಲ. ಸರ್ಕಾರದ ಬಗ್ಗೆ ಪರ್ಟಿಕ್ಯುಲರ್ ಎಲ್ಲಿಯೂ ಹೇಳಿಲ್ಲ ಎಂದರು.

### ಅವಧಿ ಮುಗಿದಿದ್ದರೂ ಮುಂದುವರಿದಿತ್ತು

## ರಾಜ್ಯ ಔಷಧ ಪರಿಷತ್ತಿನ ಆಡಳಿತ ಮಂಡಳಿ ರದ್ದತಿಗೆ ಇಲಾಖೆ ಆದೇಶ

**ಬೆಂಗಳೂರು, ಏ.10–**ಜವಾಬ್ದಾರಿ ಪರಿಣಾಮಕಾರಿ ನಿರ್ವಹಣೆಯಲ್ಲಿ ವಿಫಲ, ಅವಧಿ ಮುಗಿದರೂ ಮುಂದುವರಿದಿದ್ದ ರಾಜ್ಯ ಔಷಧ ಪರಿಷತ್ತಿನ ಆಡಳಿತ ಮಂಡಳಿಯನ್ನು ರದ್ದುಪಡಿಸಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆದೇಶಿಸಿದೆ.

ಮುಂದಿನ ಚುನಾವಣೆ ನಡೆಯುವವರೆಗೂ ಮಂಡಳಿ ಸುಗಮ ಕಾರ್ಯನಿರ್ವಹಣೆಗಾಗಿ ಆಹಾರ ಸುರಕ್ಷತೆ ಮತ್ತು ಔಷಧ ಆಯುಕ್ತರನ್ನು ಆಡಳಿತಾಧಿಕಾರಿಯನ್ನಾಗಿ ನೇಮಿಸಲಾಗಿದೆ ಇಲಾಖೆ ಆದೇಶದಲ್ಲಿ ತಿಳಿಸಿದೆ.

ಅಧಿಕಾರ ದುರ್ಬಬಳಕೆ, ಏಕಪಕ್ಷೀಯ ನಿರ್ಧಾರ, ನೋಂದಣಿ ನವೀಕರಣಕ್ಕೆ ಕಿರುಕುಳದ ಬಗ್ಗೆ ಹಲವಾರು ಕೆಮಿಸ್ಟ್ ಮತ್ತು ಡ್ರಗ್ಗಿಸ್ಟ್ ಸಂಘಟನೆಗಳು ದೂರು ಸಲ್ಲಿಸಿದ್ದವು. ಈ ಹಿನ್ನೆಲೆಯಲ್ಲಿ ತನಿಖೆ ನಡೆಸಿ ಔಷಧ ನಿಯಂತ್ರಕರಿಗೆ ವರದಿ ಸಲ್ಲಿಸುವ ಜವಾಬ್ದಾರಿ ನೀಡಲಾಗಿತ್ತು. ಫಾರ್ಮಸಿ ಪರಿಷತ್ತಿನ ಆಡಳಿತ ಮಂಡಳಿಗೆ 16 ವರ್ಷಗಳಿಂದ ಚುನಾವಣೆ ನಡೆದಿಲ್ಲ. ಇಬ್ಬರು 20 ವರ್ಷಗಳಿಂದ ಸದಸ್ಯರಾಗಿದ್ದರೆ, ನಾಮ ನಿರ್ದೇಶಿತ ಐದು ಸದಸ್ಯರ ಅವಧಿ 2021ರಲ್ಲೇ ಮುಗಿದಿದೆ ಎಂದು ತನಿಖಾ ವರದಿಯಲ್ಲಿ ಉಲ್ಲೇಖಿಸಲಾಗಿದೆ. ಪರಿಷತ್ತಿಗೆ 10 ಫಾರ್ಮಸಿ ಇನ್ಸ್ಪೆಕ್ಟರ್‌ಗಳನ್ನು ಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲು 15 ಷರತ್ತು ವಿಧಿಸಿ ಆದೇಶ ನೀಡಲಾಗಿತ್ತು. ಆದರೆ ಪರಿಷತ್ತಿನ ಅಧ್ಯಕ್ಷ ಹಾಗೂ ರಿಜಿಸ್ಟ್ರಾರ್ ಷರತ್ತಿನಂತೆ ಔಷಧ ನಿಯಂತ್ರಕರಿಂದ ವೇತನ ನಿಗದಿಪಡಿಸಿಕೊಂಡಿಲ್ಲ. ಮೀಸಲಾತಿಯನ್ನು ಪಾಲಿಸದೆ ತಮಗೆ ಬೇಕಾದ ರೀತಿಯಲ್ಲಿ ಫಾರ್ಮಸಿ ಇನ್ಸಪೆಕ್ಟರ್‌ಗಳನ್ನು ನೇಮಕ ಮಾಡಿಕೊಂಡಿದ್ದಾರೆ. ಪರಿಷತ್ತಿನ ಪ್ರಸ್ತುತ ರಿಜಿಸ್ಟ್ರಾರ್ ಡಾ.ಕ್ರಾಂತಿ ಕುಮಾರ್ ಸಿರ್ಸೆ ಅವರು ಸರ್ಕಾರದ ಅನುಮತಿ ಪಡೆಯದೆ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ತನಿಖಾ ವರದಿ ಬಹಿರಂಗಪಡಿಸಿದೆ.

ನೋಂದಣಿ ನವೀಕರಿಸುವಾಗ ಫಾರ್ಮಾಸಿಸ್ಟ್‌ಗಳಿಗೆ ಹಿಂಸೆ, ಪರಿಷತ್ತಿನ ಹಣ ಮ್ಯೂಚ್ಯುವಲ್ ಫಂಡ್‌ನಲ್ಲಿ ಕಾನೂನುಬಾಹಿರವಾಗಿ ಹೂಡಿಕೆ, ಅಧಿಕಾರ ದುರ್ಬಳಕೆಯಾಗಿದೆ. ಅಲ್ಲದೆ, ಔಷಧ ತಜ್ಞರ ಪಟ್ಟಿ ತಯಾರಿಕೆ, ನಿರ್ವಹಣೆ ಮತ್ತು ನೋಂದಣಿಯಾಗದ ವ್ಯಕ್ತಿಗಳು ಔಷಧ ಸರಬರಾಜು ನಿರ್ವಹಣೆ ಹೊಣೆಗಾರಿಕೆಯಲ್ಲೂ ವಿಲವಾಗಿದೆ. ಒಟ್ಟಾರೆ ಪರಿಷತ್ತಿನ ಕಾರ್ಯ ಚಟುವಟಿಕೆಗಳು ಸಾರ್ವಜನಿಕರಲ್ಲಿ ಅನುಮಾನಾಸ್ಪದ ಭಾವನೆ ಮೂಡಿಸಿದ್ದು, ಪರಿಷತ್ತಿನ ಸೇವೆಗಳ ಬಗ್ಗೆ ಸಾಕಷ್ಟು ಅಸಮಾಧಾನವಿದೆ.

ಪರಿಷತ್ತಿನ ಆಡಳಿತ ಮಂಡಳಿಗೆ 2016ರ ಅಕ್ಟೋಬರ್ 10, 2017ರ ಮೇ 23, ಜೂನ್ 19 ಹಾಗೂ 2022ರ ಸೆಪ್ಟೆಂಬರ್ 9ರಂದು ಚುನಾವಣೆ ಪ್ರಕ್ರಿಯೆ ಅಧಿಕಾರಿಗಳನ್ನು ನೇಮಿಸಲಾಗಿದೆ. ಆದರೆ ಈ ಅಧಿಕಾರಿಗಳಿಗೆ ಸಮರ್ಪಕವಾದ ಮಾಹಿತಿ ನೀಡಿಲ್ಲ. ಹೊಸದಾಗಿ ಚುನಾವಣೆ ನಡೆಸಲು ಈಗಿನ ಆಡಳಿತ ಮಂಡಳಿ ಅವಕಾಶ ನೀಡಿಲ್ಲವೆಂಬ ಮಹತ್ವದ ಅಂಶವು ತನಿಖಾ ವರದಿಯಲ್ಲಿದೆ. ಈ ವರದಿ ಆಧರಿಸಿ ಆಡಳಿತ ಮಂಡಳಿ ರದ್ದುಪಡಿಸಲಾಗಿದೆ.

ಹೊಸದಾಗಿ ಚುನಾವಣೆ ತನಕ ಆಡಳಿತಾಧಿಕಾರಿ ನೇಮಕ ಸೂಕ್ತವೆಂದು ಆಹಾರ ಸುರಕ್ಷತೆ ಮತ್ತು ಔಷಧ ಆಯುಕ್ತರು ಸಲ್ಲಿಸಿದ ವರದಿ ಪ್ರಕಾರ ಆರೋಗ್ಯ ಇಲಾಖೆ ಈ ಕ್ರಮಕೈಗೊಂಡಿದೆ.

### ಡೀಸೆಲ್, ಟೋಲ್ ದರ ಏರಿಕೆ ವಿರುದ್ಧ

## ಅನಿರ್ದಿಷ್ಟಾವಧಿ ಲಾರಿ ಮುಷ್ಕರಕ್ಕೆ ಚಾಲಕರ ಸಂಘದ ಬೆಂಬಲ



**ಬೆಂಗಳೂರು, ಏ.10–** ಡೀಸೆಲ್, ಟೋಲ್ ದರ ಏರಿಕೆ ಖಂಡಿಸಿ ಏ.15 ರಿಂದ ಲಾರಿ ಮಾಲೀಕರ ಸಂಘ ಕರೆ ನೀಡಿರುವ ಅನಿರ್ದಿಷ್ಟಾವಧಿ ಲಾರಿ ಮುಷ್ಕರಕ್ಕೆ ನಮ್ಮ ಬೆಂಬಲವಿದೆ ಎಂದು ಇಂಡಿಯನ್ ವೆಹಿಕಲ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಹೇಳಿದ್ದಾರೆ.

ಮುಷ್ಕರವನ್ನು ಬೆಂಬಲಿಸಿ ರಾಜ್ಯದಲ್ಲಿ ಚಾಲಕರು ವಾಹನಗಳ ಸಂಚಾರವನ್ನು ಬಂದ್ ಮಾಡಲಿದ್ದಾರೆ. ಡಿಸೇಲ್ ಬೆಲೆ 7 ತಿಂಗಳಲ್ಲಿ 5ರೂ ಏರಿಕೆಯಾಗಿದೆ. ಈಗಾಗಲೇ ಟೋಲ್ ದರ ದುಬಾರಿಯಾಗಿದ್ದು, ಹೆದ್ದಾರಿಗಳಲ್ಲಿ ಸಂಚರಿಸಲು ಸಾಧ್ಯವಾಗದ ಪರಿಸ್ಥಿತಿ ಇದೆ. ಟೋಲ್ ದರ ಏರಿಕೆಯಿಂದ ಇನ್ನಷ್ಟು ಸಮಸ್ಯೆಗಳು ತಲೆ ದೂರಲಿದೆ. ಡೀಸೆಲ್ ದರದ ಜೊತೆ ಟೋಲ್ ದರ ಏರಿಕೆಯನ್ನು ಕೈಬಿಡಬೇಕು ಎಂದು ಒತ್ತಾಯಿಸಿದ್ದಾರೆ.ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು ಫಿಟ್ನೆಸ್ ಫೀಸ್, ಬಾರ್ಡರ್ ಚೆಕ್ ಪೋಸ್ಟ್, ಡಿಸೇಲ್ ದರ ಇಳಿಕೆ ಸೇರಿದಂತೆ ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಲಾರಿ ಮಾಲೀಕರ ಸಂಘ ಮುಷ್ಕರಕ್ಕೆ ಕರೆ ನೀಡಿದೆ. ಬೇಡಿಕೆ ಈಡೇರುವವರೆಗೆ ಹೋರಾಟಕ್ಕೆ ನಮ್ಮ ಬೆಂಬಲ ಇರಲಿದೆ ಎಂದು ಹೇಳಿದರು.ಮುಷ್ಕರ ಬೆಂಬಲಿಸಿ ಏರ್ಪೋರ್ಟ್ ಟ್ಯಾಕ್ಸಿ, ಜಲ್ಲಿ ಮರಳು, ಸೇರಿದಂತೆ ಗೂಡ್ಸ್ ವಾಹನಗಳು ಸಹ ಬಂದ್ ಆಗಲಿವೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಡೀಸೆಲ್ ಮೇಲೆ ಅನಗತ್ಯವಾಗಿ ತೆರಿಗೆ ಹೊರೆ ಹಾಕುತ್ತಿದ್ದು, ಇದರಿಂದ ಬೆಲೆ ಏರಿಕೆಯಾಗಲಿದೆ. ಹೆಚ್ಚಾಗುತ್ತಿರುವ ಬೆಲೆ ಮತ್ತು ಹಣದುಬ್ಬರದ ನಡುವೆ ಚಾಲಕರು ಜೀವನ ನಿರ್ವಹಣೆ ಮಾಡಲು ಸಾಧ್ಯವಾಗುತ್ತಿಲ್ಲ. ಸರ್ಕಾರದ ಬೊಕ್ಕಸ ತುಂಬಿಸಲು ತೆರಿಗೆ ಹೆಚ್ಚಳ ಮಾಡುತ್ತಿದ್ದು,ಚಾಲಕ ಸಮುದಾಯಕ್ಕೆ ಮಾತ್ರ ವೇತನ ಹೆಚ್ಚಾಗುತ್ತಿಲ್ಲ. ಹೀಗಾಗಿ ಹೋರಾಟಕ್ಕೆ ನಮ್ಮ ಬೆಂಬಲವಿದೆ ಎಂದು ಅವರು ಸ್ಪಷ್ಟಪಡಿಸಿದರು.

## ರಾಜ್ಯದಲ್ಲಿ ಕಾಂಗ್ರೆಸ್ ಇವಿಎಂ ಕಾರಣದಿಂದ ಗೆದ್ದಿದೆ ಮಲ್ಲಿಕಾರ್ಜುನ ಖರ್ಗೆಗೆ ಸಿ.ಟಿ.ರವಿ ತಿರುಗೇಟು

**ಬೆಂಗಳೂರು, ಏ.10–** ಮಹಾರಾಷ್ಟ್ರ ಹಾಗೂ ಹರಿಯಾಣದಲ್ಲಿ ಇವಿಎಂನಲ್ಲಿ ಮೋಸ ಮಾಡಿ ಬಿಜೆಪಿ ಗೆದ್ದಿದೆ ಎಂಬ ಎಐಸಿಸಿ ಅಧ್ಯಕ್ಷ ಎಂ. ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಗೆ ತಿರುಗೇಟು ನೀಡಿರುವ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು, ಅನೇಕ ರಾಜ್ಯಗಳಲ್ಲಿ ಇಂಡಿ ಒಕ್ಕೂಟ ಇಂತಹ ಮೋಸ ಮಾಡಿಯೇ ಚುನಾವಣೆ ಗೆದ್ದಿದ್ದಾರೆ ಎಂಬುದು ನಿಮ್ಮ ಮಾತಿನ ಅರ್ಥವೇ ಎಂದು ಖಾರವಾಗಿ ಪ್ರಶ್ನೆ ಮಾಡಿದ್ದಾರೆ. ಈ ಕುರಿತು ತಮ್ಮ ಅಧಿಕೃತ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು,



ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರಾದ ಎಂ. ಮಲ್ಲಿಕಾರ್ಜುನ ಖರ್ಗೆ ಅವರೇ ಇವಿಎಂ ಮಹಾ ಮೋಸ, ಮಹಾ ಮೋಸ ಎಂದು ವ್ಯರ್ಥಾಲಾಪ ಮಾಡುತ್ತಿರುವ ನೀವು ಹೇಳ ಹೊರಟಿರುವುದು ಏನು? ಎಂದು ವ್ಯಂಗ್ಯವಾಡಿದ್ದಾರೆ.

ನಿಮ್ಮ ಮಾತು ಕೇಳಿದಾಗ ಯದ್ಭಾವಂ ತದ್ಭವತಿ ಎಂಬ ನಾಣ್ಣುಡಿ ನೆನಪಾಗುತ್ತದೆ. ಅಂದ ಹಾಗೆ, ನಿಮ್ಮ ಅಳಿಯ ರಾಧಾಕೃಷ್ಣ, ಕಾಂಗ್ರೆಸ್ಸಿನ ನವ ಅಧಿನಾಯಕಿ ಪ್ರಿಯಾಂಕಾ ರಾಬರ್ಟ್ ವಾದ್ರಾ, ನಿಮ್ಮ ಅಧಿನಾಯಕ ರಾಹುಲ್ ಗಾಂಧಿ ಇವರೆಲ್ಲರೂ ಇವಿಎಂ ಮೋಸದಿಂದಲೇ ಗೆದ್ದಿದ್ದಾರೆ ಎಂದೇ? ತಮಿಳುನಾಡುನಲ್ಲಿ ಡಿಎಂಕೆ, ಕೇರಳದಲ್ಲಿ ಕಮ್ಯುನಿಸ್ಟರು, ಬಂಗಾಳ ದಲ್ಲಿ ತೃಣಮೂಲ ಕಾಂಗ್ರೆಸ್, ಕರ್ನಾಟಕದಲ್ಲಿ ಕಾಂಗ್ರೆಸ್ ಇವಿಎಂ ಕಾರಣದಿಂದ ಗೆದ್ದಿದ್ದಾರೆ ಎಂದು ತಾರಾಟೆಗೆ ತೆಗೆದುಕೊಂಡಿದ್ದಾರೆ.

### ಕೆಐಎಡಿಬಿ ಭೂ ಸ್ವಾಧೀನವನ್ನು ಕೈಬಿಡಲು ಆಗ್ರಹ

## ರೈತ ವೆಂಕಟೇಶ್ ನಡುರಸ್ತೆಯಲ್ಲೇ ವಿಷ ಕುಡಿದು ಆತ್ಮಹತ್ಯೆಗೆ ಯತ್ನ

**ಬೆಂಗಳೂರು (ಗ್ರಾ), ಏ.10–** ಕೆಐಎಡಿಬಿ ಭೂ ಸ್ವಾಧೀನವನ್ನು ಕೈ ಬಿಡುವಂತೆ ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಅವರ ನಿವಾಸಕ್ಕೆ ಹೊರಟ ರೈತರನ್ನು ಪೋಲಿಸರು ತಡೆದ ಕಾರಣಕ್ಕೆ, ರೈತನು ನಡುರಸ್ತೆಯಲ್ಲೇ ವಿಷ ಕುಡಿದು ವೆಂಕಟೇಶ್ ಎಂಬ ರೈತ ಆತ್ಮಹತ್ಯೆ ಮಾಡಿಕೊಂಡ ಘಟನೆ ದೇವನಹಳ್ಳಿಯ ಚೆನ್ನರಾಯಪಟ್ಟಣದಲ್ಲಿ ನಡೆದಿದೆ.

ಕೆಐಎಡಿಬಿ ಭೂ ಸ್ವಾಧೀನ ಕ್ರಮ ಕೈ ಬಿಡುವಂತೆ ರೈತರು ಪ್ರತಿಭಟನೆ ನಡೆಸುಜಿತಿದ್ದರು. ಇಂದು ಸಚಿವ ಮುನಿಯಪ್ಪ ನಿವಾಸಕ್ಕೆ ಮುತ್ತಿಗೆ ಹಾಕಲು ತೆರಳುವಾಗ ಪೊಲೀಸರು ರೈತನನ್ನು ತಡೆದಿದ್ದಾರೆ. ಆಗ ಇಬ್ಬರ ನಡುವೆ ವಾದ–ಪ್ರತಿವಾದ ನಡೆದಿದೆ.

ನಮ್ಮಗೆ ಅಲ್ಲಿಗೆ ಹೋಗಲು ಬಿಡಿ ಇಲ್ಲ ಅವರನ್ನೇ ಇಲ್ಲಿ ಕರೆತನ್ನಿ ಎಂದು ರೈತರು ಕೂಗಾಡಿದ್ದಾರೆ. ಇದಕ್ಕೆ ಜಗ್ಗದ ಪೊಲೀಸರು ರೈತರನ್ನು ತಡೆದಿದ್ದಾರೆ.

ಪೊಲೀಸರಿಂದ ಅನುಮತಿ ಸಿಗದ ಹಿನ್ನಲೆ ವೆಂಕಟೇಶ್ ಅನ್ನದಲ್ಲಿ ವಿಷ ಬೆರೆಸಿ ಸೇವಿಸಿ ಆಕ್ರೋಶ ಹೊರಹಾಕಿದ್ದಾರೆ. ವಿಷ ಸೇವಿಸಿ ಅಸ್ವಸ್ಥರಾದ ವೆಂಕಟೇಶ್‌ನನ್ನು ಕೂಡಲೇ ಸಮೀಪದ ಆಸ್ಪತ್ರೆಗೆ ಕರೆದೊಯ್ದು ಚಿಕಿತ್ಸೆ ನೀಡಲಾಗಿದೆ.

## ಸೈಬರ್ ಅಪರಾಧ ತಡೆಗೆ ಘಟಕ ಸ್ಥಾಪನೆ: ಮಹತ್ವದ ಆದೇಶ

**ಬೆಂಗಳೂರು, ಏ.10–** ರಾಜ್ಯದಲ್ಲಿ ಸೈಬರ್ ಅಪರಾಧಗಳು ಹೆಚ್ಚಾಗುತ್ತಿರುವ ಬೆನ್ನಲ್ಲೇ ಸೈಬರ್ ಅಪರಾಧ ತಡೆ ಘಟಕವನ್ನು ಸ್ಥಾಪಿಸುವ ಕುರಿತು ಮಹತ್ವದ ಆದೇಶ ಹೊರಡಿಸಿದೆ.



ರಾಜ್ಯದಲ್ಲಿ ಇತ್ತೀಚೆಗೆ ಅತಿ ಹೆಚ್ಚು ಸೈಬರ್ ಕ್ರೈಮ್ ಗಳು ನಡೆಯುತ್ತಿದ್ದು, ಅದರಲ್ಲೂ ವಿದ್ಯಾವಂತರೇ ಈ ಈ ವಂಚನೆಯ ಗಾಳಕ್ಕೆ ಬಲಿಯಾಗುತ್ತಿದ್ದಾರೆ. ವರದಿಯ ಪ್ರಕಾರ, ಕಳೆದ ನಾಲ್ಕು ವರ್ಷಗಳಲ್ಲಿ ರಾಜ್ಯದಲ್ಲಿ 52 ಸಾವಿರ ಸೈಬರ್ ಕ್ರೈಮ್ ಪ್ರಕರಣ ದಾಖಲಾಗಿದೆ.

ಇನ್ನು ದಕ್ಷಿಣ ಭಾರತದಲ್ಲಿ ಉಳಿದ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕದಲ್ಲೇ ಅತಿ ಹೆಚ್ಚು ಸೈಬರ್ ಕ್ರೈಮ್ ಪ್ರಕರಣಗಳು ದಾಖಲಾಗುತ್ತಿದ್ದು, ಇದನ್ನು ಹೇಗಾದರೂ ಮಾಡಿ ತಡೆಯಬೇಕೆಂದು ಪ್ರತ್ಯೇಕ ಸೈಬರ್ ಅಪರಾಧ ತಡೆ ಘಟಕ ಸ್ಥಾಪಿಸಲು ಸರ್ಕಾರ ಸಮ್ಮತಿ ನೀಡಿದೆ. ಈ ಘಟಕದ ವ್ಯಾಪ್ತಿಗೆ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ 43 ಸಿಇಎನ್ (ಸೈಬರ್, ಎಕನಾಮಿಕ್ಸ್ & ನಾರ್ಕೋಟಿಕ್ಸ್) ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು ಮರುನಾಮಕರಣ ಮಾಡಿ ಒಳಪಡಿಸಲಾಗಿದೆ.

ಅಲ್ಲದೆ ಸಿಐಡಿ ಸೈಬರ್ ಹಾಗೂ ಬೆಂಗಳೂರಿನ ಸೈಬರ್ ಠಾಣೆಗಳು ಸೇರಿ ಒಟ್ಟು 45 ಠಾಣೆಗಳ ಅಧೀನಕ್ಕೆ ಬರುತ್ತವೆ. ಈ ಠಾಣೆಗಳು ಅಬಕಾರಿ ಕಾಯ್ದೆ, ಲಾಟರಿ ನಿಷೇಧ ಕಾಯ್ದೆ, ಕಾನೂನುಬಾಹಿರ ಚಟುವಟಿಕೆಗಳ ನಿಗ್ರಹ ಕಾಯ್ದೆ (ಯುಎಪಿಎ) ಸೇರಿದಂತ ಇತರೆ ಕಾಯ್ದೆಗಳಲ್ಲಿ ತನಿಖೆ ನಡೆಸಬಹುದು ಎಂದಿದೆ. ಅಲ್ಲದೆ ಸೈಬರ್ ಕಮಾಂಡ್ ಘಟಕಕ್ಕೆ ನಾಲ್ವರು ಎಸ್ಪಿಗಳು ಸೇರಿದಂತೆ 193 ಅಧಿಕಾರಿ– ಸಿಬ್ಬಂದಿ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.

## ಏ.17ರಂದು ಬೃಹತ್ ಹೋರಾಟ ನಡೆಸಲು ಕಾಂಗ್ರೆಸ್ ಯೋಜನೆ

**ಬೆಂಗಳೂರು, ಏ.10–** ಕಾಂಗ್ರೆಸ್ ಸರ್ಕಾರದ ದರ ಏರಿಕೆಯ ವಿರುದ್ಧ ಬಿಜೆಪಿ ನಾಯಕರು ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿದ್ದು, ಜನಾಕ್ರೋಶಯಾತ್ರೆ ಕೈಗೊಂಡಿದ್ದಾರೆ. ಇದಕ್ಕೆ ಕೌಂಟರ್ ಕೊಡಲು ಕಾಂಗ್ರೆಸ್ ಬೃಹತ್ ಹೋರಾಟಕ್ಕೆ ಸಿದ್ಧತೆ ನಡೆಸಿದೆ. ಬಿಜೆಪಿಯ ಜನಾಕ್ರೋಶ ಯಾತ್ರೆಗೆ ಪ್ರತಿ ಯಾತ್ರೆ ನಡೆಸಲು ಕಾಂಗ್ರೆಸ್ ಸಿದ್ಧತೆ ನಡೆಸಿದ್ದು ಏಪ್ರಿಲ್ 17ರಂದು ಬೃಹತ್ ಹೋರಾಟ ನಡೆಸಲು ಯೋಜನೆ ರೂಪಿಸಿದೆ.

ಸಿಎಂ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಕೇಂದ್ರ ಸರ್ಕಾರದ ದರ ಏರಿಕೆ ನೀತಿ ವಿರುದ್ಧ ಹೋರಾಟ ನಡೆಸಲು ಮುಂದಾಗಿರುವ ಕಾಂಗ್ರೆಸ್ ಬಿಜೆಪಿಗೆ ಟಕ್ಕರ್ ಕೊಡಲು ಸಿದ್ಧವಾಗಿದೆ. ಕೇಂದ್ರ ಸರ್ಕಾರ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ದರ ಏರಿಕೆ ಮಾಡಿದ್ದು, ಇದರ ವಿರುದ್ಧ ಪ್ರತಿಭಟನೆ ನಡೆಸಲು ರಾಜ್ಯ ಕಾಂಗ್ರೆಸ್ ಬೃಹತ್ ಹೋರಾಟ ಹಮ್ಮಿಕೊಂಡಿದೆ.

ಇತ್ತ ಜೆಡಿಎಸ್ ಕೂಡಾ "ಸಾಕಪ್ಪಾ ಸಾಕು ಕಾಂಗ್ರೆಸ್" ಅಭಿಯಾನ ಆರಂಭಿಸಿದ್ದು, ರಾಜ್ಯ ಸರ್ಕಾರದ ದರ ಏರಿಕೆ ವಿರುದ್ಧ ಪ್ರತಿಭಟನೆ ಮಾಡುತ್ತಿದೆ. ಶನಿವಾರ ಫ್ರೀಡಂ ಪಾರ್ಕ್‌ನಲ್ಲಿ ದೊಡ್ಡ ಹೋರಾಟ ಹಮ್ಮಿಕೊಂಡಿರುವ ಜೆಡಿಎಸ್ ನಿರಂತರವಾಗಿ ಈ ಅಭಿಯಾನವನ್ನ ಮಾಡುತ್ತೆ ಎಂದು ಜೆಡಿಎಸ್ ಹೇಳಿದೆ.

## ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘದ ವತಿಯಿಂದ ಏ.12 ಮತ್ತು 13ರಂದು ಕ್ರಿಕೆಟ್ ಕ್ರೀಡಾಕೂಟ ಹಬ್ಬ

**ಬೆಂಗಳೂರು, ಏ.10–** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲೂಜೆ)ವು ಈ ಬಾರಿ ಹಾಸನ ಜಿಲ್ಲಾ ಕಾರ್ಯ ನಿರತ ಪತ್ರಕರ್ತರ ಸಂಘದ ಸಹಕಾರದಿಂದ ಇದೇ ಏ.12 ಮತ್ತು 13ರಂದು ಕ್ರಿಕೆಟ್ ಕ್ರೀಡಾಕೂಟವನ್ನು ಏರ್ಪಡಿಸಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ತಿಳಿಸಿದರು.

ಪ್ರೆಸ್ ಕ್ಲಬ್‌ನಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಮಾಹಿತಿ ನೀಡಿದರು. ಟೂರ್ನ್‌ಮೆಂಟಿನಲ್ಲಿ ಪ್ರತಿ ಜಿಲ್ಲೆಯ ತಂಡಗಳು ಕ್ರೀಡಾಕೂಟದಲ್ಲಿ ಭಾಗವಹಿಸಲಿದ್ದು, ಎರಡು ದಿನ ಪತ್ರಕರ್ತರ ಕ್ರಿಕೆಟ್ ಕ್ರೀಡಾ ಹಬ್ಬ ನಡೆಯಲಿದೆ ಎಂದರು. ಈ ಪಂದ್ಯಾವಳಿ ಉದ್ಘಾಟನೆಯನ್ನು ಸಹಕಾರ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ ಎನ್ ರಾಜಣ್ಣ ನಡೆಸಿಕೊಡಲಿದ್ದಾರೆ. ವಿಧಾನಸಭಾಧ್ಯಕ್ಷರಾದ ಯು.ಟಿ.ಖಾದರ್ ಅವರು ಘನ ಉಪಸ್ಥಿತಲಿರಲಿದ್ದು, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ ವಿ ಪ್ರಭಾಕರ್ ಪಂದ್ಯಾವಳಿ ಕುರಿತು ಆಶಯ ನುಡಿಗಳನ್ನು ಆಡಲಿದ್ದಾರೆ.

ಪ್ರಾಸ್ತಾವಿಕವಾಗಿ ಎಚ್.ಬಿ.ಮದನಗೌಡರು ಮಾತನಾಡಲಿದ್ದಾರೆ.

ಸಂಸದರಾದ ಶ್ರೇಯಸ್ ಪಟೇಲ್ ಕ್ರಿಕೆಟ್ ಪಂದ್ಯಾವಳಿಗೆ ಚಾಲನೆ ನೀಡಲಿದ್ದಾರೆ ಅಧ್ಯಕ್ಷತೆಯನ್ನು ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ವಹಿಸಲಿದ್ದು, ಹಾಸನ ಪತ್ರಕರ್ತರ ಸಂಘದ ಅಧ್ಯಕ್ಷ ರಾದ ವೇಣುಕುಮಾರ್ ಪ್ರೇರಣಾ ನುಡಿ ಹೇಳಲಿದ್ದಾರೆ.



ಕ್ರೀಡಾಕೂಟಕ್ಕೆ ಹಾಸನ ಜಿಲ್ಲೆಯ ಎಲ್ಲ ಶಾಸಕರು, ಜಿಲ್ಲೆಯ ಎಲ್ಲ ವರ್ಗದ ಸರ್ಕಾರಿ ಅಧಿಕಾರಿಗಳು ಹಾಗೂ ಹಾಸನ ಕಾರ್ಯನಿರತ ಪತ್ರಕರ್ತರ ಸಂಘದ ಎಲ್ಲ ಪದಾಧಿಕಾರಿಗಳು ಭಾಗವಹಿಸಲಿದ್ದಾರೆ. ಆದ್ದರಿಂದ ರಾಜ್ಯದ ಎಲ್ಲ ಕಾರ್ಯನಿರತ ಪತ್ರಕರ್ತರ ಬಂಧುಗಳಿಗೆ ಈ ಎರಡು ದಿನಗಳ ಕ್ರೀಡಾಕೂಟದಲ್ಲಿ ತಾವೆಲ್ಲರೂ ಭಾಗವಹಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಕ್ರಿಕೆಟ್ ಪಂದ್ಯಾವಳಿಯ ಆಮಂತ್ರಣ ಪತ್ರಿಕೆ ಯನ್ನು ಬಿಡುಗಡೆ ಮಾಡಲಾಯಿತು. ಹಿರಿಯ ಪತ್ರಕರ್ತರಾದ ಧ್ಯಾನ್ ಪೂಣಚ್ಚ, ಗಿರೀಶ್ ಗರಗ, ಭಾರತಿ ರಾಜನ್, ವಿಶ್ವನಾಥ್ ಸುವರ್ಣ ಅವರು ಉಪಸ್ಥಿತರಿದ್ದರು.

**ಪತ್ರಕರ್ತರ ಕ್ರಿಕೆಟ್ ಟೂರ್ನಿಗೆ ಡಿಸಿಎಂ ಡಿಕೆಶಿ ಶುಭ ಹಾರೈಕೆ:** ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘವು ಹಾಸನದಲ್ಲಿ ಏ.12 ಮತ್ತು 13ರಂದು ಹಾಸನ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಯೋಗದಲ್ಲಿ ಆಯೋಜಿಸಿರುವ ರಾಜ್ಯ ಮಟ್ಟದ ಪತ್ರಕರ್ತರ ಕ್ರಿಕೇಟ್ ಕ್ರೀಡಾಕೂಟದ ಲಾಂಛನವನ್ನು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಿಡುಗಡೆ ಮಾಡಿ, ಶುಭ ಹಾರೈಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಡಿಸಿಎಂ ಮಾಧ್ಯಮ ಸಲಹೆಗಾರ ಪಿ.ತ್ಯಾಗರಾಜ್ , ಜಾಹೀರಾತು ಪರಿಶೀಲನಾ ಸಮಿತಿ ಅಧ್ಯಕ್ಷ ರಮೇಶ್ ಬಾಬು ಇದ್ದರು.


ಬೆಂಗಳೂರಿನ ಟೌನ್ ಹಾಲ್‌ನಿಂದ ಗುರುವಾರ ಜೈನ ಸಮುದಾಯದ ಜನರು ಮಹಾವೀರ ಜಯಂತಿ ಮೆರವಣಿಗೆ ನಡೆಸಿದರು.

# ಪ್ರಯಾಣಿಕರ ದಟ್ಟಣೆ ಪರಿಗಣಿಸಿ 600 ಹೊಸ ಬಸ್: ರಾಮಲಿಂಗಾರೆಡ್ಡಿ

**ಯಾದಗಿರಿ, ಏ.10–** ಸಾರಿಗೆ ಸಂಸ್ಥೆಯಲ್ಲಿ ಪ್ರಯಣಿಕರ ದಟ್ಟಣೆಯ ಹಿನ್ನೆಲೆಯಲ್ಲಿ ಹೊಸದಾಗಿ ಎರಡು ಸಾವಿರ ಬಸ್‌ಗಳನ್ನು ಖರೀದಿಸಲಾಗುತ್ತಿದ್ದು, ಇದರಲ್ಲಿ ಕಲ್ಯಾಣ ಕರ್ನಾಟಕ ಭಾಗಕ್ಕೆ 600–700 ಬಸ್‌ಗಳನ್ನು ಒದಗಿಸುವ ಮೂಲಕ ಪ್ರಯಾಣಿಕರಿಗೆ ಇನ್ನಷ್ಟು ಅನುಕೂಲ ಕಲ್ಪಿಸಲಾಗುವುದು ಎಂದು ರಾಜ್ಯ ಸಾರಿಗೆ ಹಾಗೂ ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ಜಿಲ್ಲೆಯ ಮಾಧ್ವಾರ್ ಗ್ರಾಮದಲ್ಲಿ ನೂತನ ಬಸ್ ನಿಲ್ದಾಣ ಉದ್ಘಾಟಿಸಿ ಮಾತನಾಡಿದ ಅವರು, ಶಕ್ತಿ ಯೋಜನೆಯಿಂದಾಗಿ ಬಸ್‌ಗಳಲ್ಲಿ ಮಹಿಳೆಯರ ಸಂಚಾರ ಹೆಚ್ಚಾಗಿದ್ದು, ಸಾರ್ವಜನಿಕರ ಜನದಟ್ಟಣೆಯು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಶೀಘ್ರದಲ್ಲಿಯೇ ಹೊಸದಾದ ಎರಡು ಸಾವಿರ ಬಸ್‌ಗಳನ್ನು ಖರೀದಿಸಲಾಗುತ್ತಿದ್ದು, ಕಲ್ಯಾಣ ಕರ್ನಾಟಕ ಭಾಗಕ್ಕೆ ಸುಮಾರು 600 ರಿಂದ 700 ಬಸ್‌ಗಳನ್ನು ಇದರಲ್ಲಿ ಒದಗಿಸಲಾಗುವುದು ಎಂದು ಹೇಳಿದರು. ರಸ್ತೆ ಸಾರಿಗೆ ನಿಗಮದಲ್ಲಿನ ಸಿಬ್ಬಂದಿಗಳ ಕೊರತೆ ನೀಗಿಸಲು ಕ್ರಮ ಕೈಗೊಳ್ಳಲಾಗಿದೆ. ಸಾರಿಗೆ ಸಂಸ್ಥೆಯಲ್ಲಿ ಖಾಲಿ ಇರುವ 10,000 ಹುದ್ದೆಗಳ ಭರ್ತಿಗೆ ಕ್ರವ ಕೈಗೊಳ್ಳಲಾಗುತ್ತಿದೆ.ಈ ಹಿಂದಿನ ಸರ್ಕಾರಿ ಸಿಬ್ಬಂದಿಗಳ ಮಕ್ಕಳ ಅನುಕಂಪ ಆಧಾರಿತ 1000 ಹುದ್ದೆಗಳ ನೇಮಕಾತಿ ಹಾಗೂ 9000 ಬಸ್ ಚಾಲಕರ, ನಿರ್ವಾಹಕರ ನೇಮಕಾತಿಗೆ ಸಂಬಂಧಿಸಿದಂತೆ ಹಣಕಾಸು ಇಲಾಖೆಯಿಂದ ಅನುಮೋದನೆ ದೊರೆತ ತಕ್ಷಣ ನೇಮಕಾತಿ ಆಗಲಿದೆ ಎಂದು ಹೇಳಿದರು.


ಯಾದಗಿರಿ ಜಿಲ್ಲೆಯ ಮಾದ್ವಾರ್‌ನಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ನೂತನ ಬಸ್ ನಿಲ್ದಾಣ ಉದ್ಘಾಟಿಸಿದರು.

ಈ ಭಾಗದಲ್ಲಿ ಸೈದಾಪುರ ವೇಗವಾಗಿ ಬೆಳೆಯುತ್ತಿದೆ. ಇಲ್ಲಿ ಬಸ್‌ನಿಲ್ದಾ ಣದ ಅವಶ್ಯಕತೆ ಬಗ್ಗೆ ಕಲ್ಬುರ್ಗಿ ಸಂಸದರು ಹಾಗೂ ಗುರುಮಠಕಲ್ ಶಾಸಕರು ಗಮನಕ್ಕೆ ತಂದಿದ್ದು, ಸಂಸದರ ನಿಧಿ, ಶಾಸಕರ ನಿಧಿ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಅಥವಾ ಸಾರಿಗೆ ಸಂಸ್ಥೆ ನಿಗಮದ ಅನುದಾನದಡಿ ಈ ವರ್ಷದಲ್ಲಿಯೇ ತಲಾ 2.5 ಕೋ.ರೂಗಳಂತೆ ಅನುದಾನ ಒದಗಿಸಿ ಒಟ್ಟು 5 ಕೋ. ರೂ. ವೆಚ್ಚದಲ್ಲಿ ಹೈಟೆಕ್ ಬಸ್ ನಿಲ್ದಾಣ ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿ ಸೈದಾಪುರ ಬಸ್ ಡಿಪೋಗೆ ಸಂಬಂಧಿಸಿದಂತೆ ಪರಿಶೀಲನೆ ನಡೆಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿವಿಧ ಬಸ್ ನಿಲ್ದಾಣಗಳಿಗೆ ದೇಶದ ಮಹನಿಯರ ನಾಮಕರಣ ಮಾಡುವುದು ಸಂತಸದ ಸಂಗತಿ. ಈ ಹಿನ್ನೆಲೆಯಲ್ಲಿಯಾದ ಗಿರಿ ಕೇಂದ್ರ ಬಸ್ ನಿಲ್ದಾಣಕ್ಕೆ ಮೈಲಾರ ಮಲ್ಲಯ್ಯನ ನಾಮಕರಣಹಾಗೂ ಗುರುಮಠಕಲ್ ಬಸ್ ನಿಲ್ದಾಣಕ್ಕೆ ಖಾಸಾ ಮಠದ ನಾಮಕರಣ ಮಾಡುವ ಬಗ್ಗೆ ಸಂಬಂಧಿ ಸಿದ ಅಧಿಕಾರಿಗಳಿಂದ ವರದಿ ಪಡೆಯಲಾಗುವುದು ಎಂದು ಹೇಳಿದರು.

ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡಮನಿ ಅವರು ಮಾತನಾಡಿ, ಈ ಭಾಗದಲ್ಲಿ ಸಾರಿಗೆ ಸಂಪರ್ಕ ಹೆಚ್ಚಿಸಬೇಕು. ಗುರಮಠಕಲ್ ಬಸ್ ನಿಲ್ದಾಣಕ್ಕೆ ಖಾಸಾಮಠದ ನಾಮಕರಣಕ್ಕೆ ಕ್ರಮ ಕೈಗೊಳ್ಳುವಂತೆ ಹಾಗೂ ಸೈದಾಪುರ ಹೈಟೆಕ್ ಬಸ್ ನಿಲ್ದಾಣ ಮಂಜೂರಾತಿಗೆ ಕ್ರಮ ಕೈಗೊಳ್ಳಲು ಕೋರಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಅವರು,ಈ ಭಾಗದಲ್ಲಿ ಕೈಗಾರಿಕಾ ಕ್ಷೇತ್ರ ಬೆಳೆಯುತ್ತಿರುವದರಿಂದ ಸೈದಾಪುರ ಬಸ್ ನಿಲ್ದಾಣ ಮಂಜೂರು ಮಾಡಬೇಕು. ಈ ಭಾಗದ ದೇವಸ್ಥಾನಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡಬೇಕು.ಹೆಚ್ಚಿನ. ಬಸ್‌ಗಳ ಸೌಲಭ್ಯ ಕಲ್ಪಿಸಬೇಕು, ಯಾದಗಿರಿ ಬಸ್ ನಿಲ್ದಾಣ ಕುಕ್ಕೆ ಮೈಲಾರ ಮಲ್ಲಯ್ಯನ ಹಾಗೂ ಗುರುಮಠಕಲ್ ಬಸ್ ನಿಲ್ದಾಣಕ್ಕೆ ಖಾಸಾಮಠದ ನಾಮಕರಣ ಮಾಡಲು ಸಚಿವರಲ್ಲಿ ಮನವಿ ಮಾಡಿದರು.

# ಕಾರಿನಲ್ಲಿ ಬಂದು ಎಟಿಎಂನಿಂದ 18 ಲಕ್ಷ ರೂ. ಅಪಹರಿಸಿದ ದರೋಡೆಕೋರರು

**ಕಲಬುರಗಿ, ಏ.10–** ಬೀದರನಲ್ಲಿ ಗುಂಡಿನ ದಾಳಿ ನಡೆಸಿ ಸೆಕ್ಯುರಿಟಿಯನ್ನು ಕೊಂದು ಎಟಿಎಂವಾಹನದಲ್ಲಿದ್ದ 93 ಲಕ್ಷ ದೋಚಿದ ಪ್ರಕರಣ ಇನ್ನೂ ಪತ್ತೆಯಗದೇ ಜೀವಂತವಾಗಿರುವಾಗಲೇ, ಕಲಬುರಗಿ ನಗರದಲ್ಲಿ ಮತ್ತೊಂದು ಎಟಿಎಂ ದರೋಡೆ ನಡೆದಿದ್ದು, ಸುಮಾರು 18 ಲಕ್ಷ ರೂ ಅಪಹರಿಸಲಾಗಿದೆ ಎನ್ನಲಾಗಿದೆ.



ನಗರದ ಸಬ್ ಅರ್ಬನ್ ಪೊಲೀಸ್ ಠಾಣಾ ವ್ಯಾಪ್ತಿಯ ಪೂಜಾರಿ ಚೌಕ್ ಹತ್ತಿರ ಇರುವ ಎಸ್‌ಬಿಐ ಬ್ಯಾಂಕ್ ಎಟಿಎಂನಲ್ಲಿ ಈ ದರೋಡೆ ನಡೆದಿದೆ. ಸ್ಥಳಕ್ಕೆ ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಅವರು ಸೇರಿದಂತೆ ವಿವಿಧ ಅಧಿಕಾರಿಗಳು ಭೇಟಿ ನೀಡಿದರು. ಸಂಜೆ ಮೂರು ಗಂಟೆ ಸುಮಾರಿಗೆ ಸಿಬ್ಬಂದಿ ಎಸ್‌ಬಿಐ ಬ್ಯಾಂಕ್ ಎಟಿಎಂಗೆ ಹಣವನ್ನು ತುಂಬಿದ್ದರು. ಮುಂಜಾನೆ ನಾಲ್ಕು ಗಂಟೆ ಸುಮಾರಿಗೆ ಈ ದರೋಡೆ ನಡೆದಿದೆ. ಈ ಎಟಿಎಂನಲ್ಲಿ ಯಾವುದೇ ಭದ್ರತಾ ಸಿಬ್ಬಂದಿ ಇರಲಿಲ್ಲ. ಇದನ್ನು ಗಮನಿಸಿದ್ದ ದರೋಡೆಕೋರರ ಗುಂಪು ಈ ಕೃತ್ಯ ಎಸಗಿದೆ. ಕಾರಿನಲ್ಲಿ ಆಗಮಿಸಿದ ಗುಂಪು ಸಿಸಿಟಿವಿಗೆ ಸ್ಪ್ರೇ ಮಾಡಿ ಬಳಿಕ ಗ್ಯಾಸ್ ಕಟರ್‌ನಿಂದ ಎಟಿಎಂ ಯಂತ್ರವನ್ನು ಕಟ್ ಮಾಡಿ ಅದರಲ್ಲಿದ್ದ 18 ಲಕ್ಷ ರೂ ದರೋಡೆ ಮಾಡಿದ್ದಾರೆ. ಸುಮಾರು 48 ನಿಮಿಷಗಳಲ್ಲಿ ಈ ಕೃತ್ಯ ಎಸಗಿ ಕಾರಿನಲ್ಲಿ ಪರಾರಿಯಾಗಿರುವ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಎಸ್‌ಬಿಐ ಬ್ಯಾಂಕ್ ಎಟಿಎಂಗೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಶ್ವಾನದಳ, ಬೆರಳಚ್ಚು ತಜ್ಞರು ಆಗಮಿಸಿದ್ದಾರೆ. ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡು ತನಿಖೆಯನ್ನು ಕೈಗೊಂಡಿದ್ದಾರೆ. ಅಂತರ ರಾಜ್ಯದ ತಂಡ ಈ ಘಟನೆ ಹಿಂದಿದೆ ಎಂದು ಅಂದಾಜಿಸಲಾಗಿದೆ.

ಕಳೆದ ಫೆಬ್ರವರಿಯಲ್ಲಿ ಬೀದರ್‌ನಲ್ಲಿ ಎಟಿಎಂಗೆ ಹಣ ತುಂಬುವ ವಾಹನದ ಮೇಲೆ ಗುಂಡಿನ ದಾಳಿ ನಡೆಸಿ ಸುಮಾರು 83 ಲಕ್ಷ ರೂ. ದರೋಡೆ ಮಾಡಲಾಗಿತ್ತು. ಈ ಪ್ರಕರಣದಲ್ಲಿ ಅಂತರರಾಜ್ಯ ದರೋಡೆಕೋರರು ಇದ್ದಾರೆ ಎಂದು ಶಂಕಿಸಲಾಗಿದ್ದು, ಆರೋಪಿಗಳನ್ನು ಇನ್ನೂ ಸಹ ಬಂಧಿಸಿಲ್ಲ. ಈಗ ಇದೇ ಮಾದರಿಯಲ್ಲಿ ಎಸ್‌ಬಿಐ ಬ್ಯಾಂಕ್ ಎಟಿಎಂನಿಂದ ದರೋಡೆ ಮಾಡಲಾಗಿದ್ದು, ಪೊಲೀಸರು ಆರೋಪಿಗಳ ಪತ್ತೆಗಾಗಿ ಕಾರ್ಯಾಚರಣೆ ಆರಂಭಿಸಿದ್ದಾರೆ. ನಾಲ್ವರು ಇರುವ ತಂಡ ಈ ಕೃತ್ಯ ಮಾಡಿದೆ ಎಂದು ಅಂದಾಜಿಸಲಾಗಿದೆ. ಪೊಲೀಸರು ಮೊದಲು ಕಾರಿನ ಕುರಿತು ಮಾಹಿತಿ ಸಂಗ್ರಹ ಮಾಡಲು ಮುಂದಾಗಿದ್ದಾರೆ. ಎಟಿಎಂಗೆ ನುಗ್ಗಿ 18 ಲಕ್ಷ ರೂ. ದರೋಡೆ ಮಾಡಿದ ಗುಂಪನ್ನು ಪತ್ತೆ ಹಚ್ಚಲು ಪೊಲೀಸರು ವಿಶೇಷ ತಂಡವನ್ನು ರಚನೆ ಮಾಡುವ ನಿರೀಕ್ಷೆ ಇದೆ. ಸದ್ಯ ಪ್ರಾಥಮಿಕ ತನಿಖೆ ನಡೆಯುತ್ತಿದ್ದು, ಹೆಚ್ಚಿನ ಮಾಹಿತಿ ಸಿಕ್ಕಿಲ್ಲ.

# ಮಹಾನಗರ ಪಾಲಿಕೆಯಿಂದ ಶವಗಳ ಅಂತ್ಯ ಸಂಸ್ಕಾರಕ್ಕೆ ಬಯೋಗ್ಯಾಸ್ ಪ್ಲಾಂಟ್ ಸ್ಥಾಪನೆ

**ಮೈಸೂರು, ಏ.10–**ನಗರದಲ್ಲಿ ಸಂಗ್ರಹವಾಗುವ ಹಸಿಕಸದಿಂದ ಬಯೋಗ್ಯಾಸ್ ತಯಾರಿಸಿ ಅದನ್ನು ಶವಗಳ ಅಂತ್ಯ ಸಂಸ್ಕಾರಕ್ಕೆ ಬಳಸಿಕೊಳ್ಳುವ ವಿನೂತನ ಯೋಜನೆಯನ್ನು ಮಹಾನಗರ ಪಾಲಿಕೆಯು ಸಿದ್ಧಗೊಳಿಸಿದ್ದು, ಇದು ಇಡೀ ರಾಜ್ಯಕ್ಕೆ ಪ್ರಥಮವಾಗಿದೆ.

ನಗರದ ಚಾಮುಂಡಿಬೆಟ್ಟದ ತಪ್ಪಲಿನಲ್ಲಿರುವ ಹರಿಶ್ಚಂದ್ರ ಘಾಟ್‌ನಲ್ಲಿ 98 ಲಕ್ಷ ರೂ.ವೆಚ್ಚದಲ್ಲಿ ಬಯೋಗ್ಯಾಸ್ ಪ್ಲಾಂಟ್ ಸ್ಥಾಪನೆ ಮಾಡಲಾಗಿದ್ದು, ಇಲ್ಲಿ ತಯರಾಗುವ ಗ್ಯಾಸ್‌ನಿಂದ ಶವ ಸುಡುವ ಕಾರ್ಯ ಕೆಲವೇ ದಿನಗಳಲ್ಲಿ ಶುರುವಾಗಲಿದೆ. ಹರಿಶ್ಚಂದ್ರ ಘಾಟ್‌ನಲ್ಲಿ ಇರುವ ಅನಿಲ ಚಿತಾಗಾರದಲ್ಲಿ ಪ್ರಸ್ತುತ ವಾಣಿಜ್ಯ ಬಳಕೆಯ ಸಿಲಿಂಡರ್ ಉಪಯೋಗಿಸಿಕೊಂಡು ಶವ ಸುಡಲಾಗುತ್ತಿತ್ತು. ಒಂದು ಶವ ಸಂಸ್ಕಾರ ಮಾಡಲು ಒಂದು ಸಿಲಿಂಡರ್ ಬೇಕಾಗಿತ್ತು. ತಿಂಗಳಿಗೆ ಸರಾಸರಿ 40 ಸಿಲಿಂಡರ್ ಅಗತ್ಯವಿತ್ತು. ಈಗ ಇಲ್ಲೇ ಬಯೋಗ್ಯಾಸ್ ಉತ್ಪಾದನೆ ಮಾಡುವುದರಿಂದ ಸಿಲಿಂಡರ್ ಖರೀದಿ ತಪ್ಪುವುದಲ್ಲದೇ, ಪರಿಸರ ಮಾಲಿನ್ಯ ಕಡಿಮೆಯಾಗುತ್ತದೆ. ಜತೆಗೆ ಸಿಲಿಂಡರ್ ಖರೀದಿಯ ಖರ್ಚು ಉಳಿತಾಯವಾಗುತ್ತದೆ.

ಅಕ್ಕ–ಪಕ್ಕದ ಬಡಾವಣೆಗಳಿಂದ ತ್ಯಾಜ್ಯ ಸಂಗ್ರಹ: ಬಯೋ ಗ್ಯಾಸ್ ಪ್ಲಾಂಟ್ ಎರಡೂವರೆ ಟನ್ ತ್ಯಾಜ್ಯದಿಂದ 20 ಕೆ.ಜಿ. ತೂಕದ ಸಿಲಿಂಡರ್‌ನಷ್ಟು ಗ್ಯಾಸ್ ಉತ್ಪಾದನೆ ಮಾಡುವ ಸಾಮರ್ಥ್ಯ ಹೊಂದಿದೆ. ಇದು ಒಂದು ಸಿಲಿಂಡರ್‌ನಲ್ಲಿ ಇರುವಷ್ಟೇ ಪ್ರಮಾಣದ ಗ್ಯಾಸ್ ಉತ್ಪಾದನೆ ಮಾಡುತ್ತದೆ. ಮೈಸೂರು ನಗರದಲ್ಲಿ ಹೋಟೆಲ್‌ಗಳು, ಮನೆಗಳಿಂದ ಪ್ರತಿನಿತ್ಯ ಹಸಿಕಸ–ಒಣಕಸವನ್ನು ಪಾಲಿಕೆಯಿಂದ ಸಂಗ್ರಹಣೆ ಮಾಡಲಾಗುತ್ತದೆ.

ಹೀಗೆ ಸಂಗ್ರಹ ಮಾಡಿದ ಹಸಿಕಸವಾದ ತರಕಾರಿ ತ್ಯಾಜ್ಯ, ಹಣ್ಣು–ಹಂಪಲಿನ ತ್ಯಾಜ್ಯ ತಗೆದುಕೊಂಡು ಹೋಗಿ ತ್ಯಾಜ್ಯ ಸಂಸ್ಕರಣ ಘಟಕದಲ್ಲಿ ವಿಲೇವಾರಿ ಮಾಡಲಾಗುತ್ತಿತ್ತು. ಈಗ ಸ್ಮಶಾನದಲ್ಲಿ ಬಯೋಗ್ಯಾಸ್ ಪ್ಲಾಂಟ್ ಸ್ಥಾಪನೆ ಮಾಡಿರುವುದರಿಂದ ಅಲ್ಲಿಗೆ ಅಗತ್ಯವಾದಷ್ಟು ತ್ಯಾಜ್ಯವನ್ನು ಅಕ್ಕ–ಪಕ್ಕದ ಬಡಾವಣೆಗಳಲ್ಲೇ ಸಂಗ್ರಹ ಮಾಡಿ ಪೂರೈಕೆ ಮಾಡಲಾಗುತ್ತದೆ.

ಇದರಿಂದ ದೂರದ ಸಂಸ್ಕರಣಾ ಘಟಕಕ್ಕೆ ಸಾಗಿಸಿ ವಿಲೇವಾರಿ ಮಾಡುವ ಸಮಸ್ಯೆಯೂ ತಪ್ಪುತ್ತದೆ. ಕಸವು ಗ್ಯಾಸ್ ಆಗಿ ಪರಿವರ್ತನೆಯಾಗುವುದರಿಂದ ಕಸ ರಾಶಿಯಾಗುವುದು ತಪ್ಪುತ್ತದೆ.

ಸ್ಮಶಾನದಲ್ಲಿ ದೀಪ ಬೆಳಗಿಸಲು ಬಳಕೆ: ಮಂಚೇಗೌಡನ ಕೊಪ್ಪಲಿನ ಸ್ಮಶಾನದಲ್ಲಿ ಮತ್ತೊಂದು ಬಯೋಗ್ಯಾಸ್ ಪ್ಲಾಂಟ್ ಸ್ಥಾಪನೆ ಮಾಡಲಾಗಿದ್ದು, ಇಲ್ಲಿ ಉತ್ಪಾದನೆಯಾಗುವ ಗ್ಯಾಸ್ ಅನ್ನು ವಿದ್ಯುತ್ ಆಗಿ ಪರಿವರ್ತನೆ ಮಾಡಿಕೊಂಡು ಸ್ಮಶಾನದಲ್ಲಿ ಇರುವ ಬೀದಿ ದೀಪಗಳನ್ನು ಬೆಳಗಿಸಲು ಉಪಯೋಗಿಸಲಾಗುತ್ತದೆ. ಇಲ್ಲಿ ಎರಡೂವರೆ ಟನ್ ಹಸಿ ಕಸದಿಂದ 25 ಕಿಲೋವ್ಯಾಟ್ ವಿದ್ಯುತ್ ದೊರಕುತ್ತದೆ. ಇದನ್ನು 14 ರಿಂದ 15 ಬೀದಿ ದೀಪಗಳನ್ನು ಬೆಳಗಿಸಲು ಬಳಕೆ ಮಾಡಿಕೊಳ್ಳಬಹುದಾಗಿದೆ.

ರಾಜ್ಯದಲ್ಲಿ ಹಸಿ ಕಸದ ತ್ಯಾಜ್ಯದಿಂದ ಬಯೋಗ್ಯಾಸ್ ಉತ್ಪಾದನೆ ಮಾಡಿ ಬೇರೆ–ಬೇರೆ ಉದ್ದೇಶಗಳಿಗೆ ಬಳಕೆ ಮಾಡಿಕೊಳ್ಳುವುದು ಸಾಮಾನ್ಯವಾಗಿದೆ. ಆದರೆ ಇದನ್ನು ಶವ ಸಂಸ್ಕಾರಕ್ಕೆ ಬಳಕೆ ಮಾಡುವ ಮೂಲಕ ಸುಸ್ಥಿರ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಮಾದರಿ ಯೋಜನೆ ಮಾಡಲು ಮೈಸೂರು ಮಹಾನಗರ ಪಾಲಿಕೆ ಮುಂದಾಗಿದೆ. ಅಲ್ಲದೇ ಇದರಿಂದ ತ್ಯಾಜ್ಯದ ವಿಲೇವಾರಿಯ ಸಮಸ್ಯೆಯೂ ಸ್ವಲ್ಪ ಮಟ್ಟಿಗೆ ಕಡಿಮೆಯಾಗುತ್ತದೆ.

# ರಾಯಚೂರಿನಲ್ಲಿ ಗ್ರಾಹಕರ ಠೇವಣಿ ವಂಚನೆ ಬ್ಯಾಂಕ್‌ನ ವ್ಯವಸ್ಥಾಪಕರ ಬಂಧನ

**ರಾಯಚೂರು ಏ.10–**ಗ್ರಾಹಕರು ಬ್ಯಾಂಕ್‌ನಲ್ಲಿ ಇಟ್ಟಿದ್ದ 10 ಕೋಟಿ 92 ಲಕ್ಷ ಹಣವನ್ನು ವಂಚಿಸಿದ್ದ ಮ್ಯಾನೇಜರ್ ಅನ್ನು ರಾಯಚೂರು ಪೊಲೀಸರು ಬಂಧಿಸಿದ್ದಾರೆ.

ಮ್ಯಾನೇಜರ್ ನರೇಂದ್ರರೆಡ್ಡಿ ಮತ್ತು ಅರುಣಾ ಎಂಬುವವರನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಹೌದು ರಾಯಚೂರು ನಗರದ ಬ್ಯಾಂಕ್ ಆಫ್ ಮಹಾರಾಷ್ಟ್ರ ಮ್ಯಾನೇಜರ್ ಆಗಿ ನರೇಂದ್ರರೆಡ್ಡಿ ಕೆಲಸ ಮಾಡುತ್ತಿದ್ದರು. ಈತ ಕೆನರಾ ಬ್ಯಾಂಕ್‌ನ ಮಾಜಿ ಉದ್ಯೋಗಿ ಅರುಣಾ ಎಂಬಾಕೆಯೊಂದಿಗೆ ಸೇರಿಕೊಂಡು ಬ್ಯಾಂಕ್‌ಗೆ ಕನ್ನಾ ಹಾಕಿದ್ದಾನೆ. ಇದೀಗ ಈ ಇಬ್ಬರನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸಿದ್ದಾರೆ. ಬ್ಯಾಂಕ್‌ಗಳನ್ನು ನಂಬಿ ಜನ ಹಣ ಹಾಗೂ ಚಿನ್ನಾಭರಣಗಳನ್ನು ಖಾತೆಯಲ್ಲಿ ಇಡುತ್ತಾರೆ. ಆದರೆ ಇಲ್ಲೊಬ್ಬ ಮ್ಯಾನೇಜರ್ ಗ್ರಾಹಕರ ಹಣವನ್ನು ನುಂಗಿ ನೀರು ಕುಡಿದಿದ್ದಾನೆ. ಈ ವಿಚಾರ ತಿಳಿಯುತ್ತಿದ್ದಂತೆ ತಲೆ ಮರಿಸಿಕೊಂಡಿದ್ದ ಮ್ಯಾನೇಜರ್‌ನನ್ನು ಪೊಲೀಸರು ಇದೀಗ ಬಂಧಿಸಿದ್ದಾರೆ. ಜೊತೆಗೆ ಕೊಳ್ಳೆ ಹೊಡೆದ ಹಣ ಏನಾಯ್ತು ಅನ್ನೋದರ ಬಗ್ಗೆ ವಿಚಾರಣೆ ನಡೆಸಿದ್ದಾರೆ. ನಗರದ ಬ್ಯಾಂಕ್ ಆಫ್ ಮಹಾರಾಷ್ಟ್ರ ಬ್ಯಾಂಕ್‌ನಲ್ಲಿ ಜನ ಹಣ ಹಾಗೂ ಚಿನ್ನಾಭರಣಗಳನ್ನು ಖಾತೆಯಲ್ಲಿ ಇಟ್ಟಿದ್ದರು. ಕೆಲವರು ಚಿನ್ನಾಭರಣಗಳ ಮೇಲೆ ಸಾಲಗಳನ್ನು ಪಡೆದುಕೊಂಡಿದ್ದರು. ಇನ್ನೂ ಕೆಲವರು ವಾಹನಕ್ಕಾಗಿ ಸಾಲ ಪಡೆದುಕೊಂಡಿದ್ದಾರೆ. ಈ ಎಲ್ಲಾ ಗ್ರಾಹಕರ ಖಾತೆಯಿಂದ ಪ್ರತಿತಿಂಗಳು ಇಂತಿಷ್ಟು ಹಣ ಕಡಿತಗೊಳ್ಳುತ್ತಿತ್ತು. ಆದರೆ ಕಳೆದ ತಿಂಗಳು ಖಾತೆಯಿಂದ ಪ್ರತಿ ತಿಂಗಳು ಕಡಿತಗೊಳ್ಳುವುದಕ್ಕಿಂತ ಹೆಚ್ಚು ಹಣ ಕಡಿತಗೊಂಡಿದೆ. ಇದರಿಂದ ಗಾಬರಿಗೊಂಡ ಗ್ರಾಹರು ಬ್ಯಾಂಕ್‌ಗೆ ಬಂದು ವಿಚಾರಿಸಿದಾಗ ಅನುಮಾನ ಬಂದಿದೆ.

ಬ್ಯಾಂಕ್ ಸಿಬ್ಬಂದಿ ಇದರ ಬಗ್ಗೆ ಸೈಬರ್ ಪೊಲೀಸರಿಗೆ ದೂರು ನೀಡಿ, ನಾವೂ ಕೂಡ ಇದಕ್ಕೆ ಸಹಾಯ ಮಾಡುತ್ತೇವೆ, ಇದು ಬ್ಯಾಂಕ್‌ನಿಂದ ಕಡಿತಗೊಂಡ ಹಣವಲ್ಲ ಎಂದು ಹೇಳಿದ್ದಾರೆ. ಆಗ ನಿಜವಾದ ಸತ್ಯ ಬಯಲಾಗಿದೆ. ಈ ಬ್ಯಾಂಕ್ ಮ್ಯಾನೇಜರ್ ತನ್ನ ಮೊಬೈಲ್ ನಂಬರ್ ನೀಡಿ ಗ್ರಾಹಕರು ಪ್ರತಿ ತಿಂಗಳು ವರ್ಗಾಯಿಸುವ ಹಣವನ್ನು ಲೂಟಿ ಮಾಡಿದ್ದಾನೆ. ಅಲ್ಲದೆ ಬ್ಯಾಂಕ್ ಕಡೆಯಿಂದ ಬರುತ್ತಿದ್ದ ಎಲ್ಲಾ ನೋಟೀಸ್‌ಗಳು ತನ್ನ ಫೋನ್‌ಗೆ ಬರುವಂತೆ ಮಾಡಿಕೊಂಡಿದ್ದಾನೆ. ಇದೆಲ್ಲಾ ಗೊತ್ತಾಗಿ ಗ್ರಾಹರು ನೇರವಾಗಿ ಪೊಲೀಸರಿಗೆ ದೂರು ನೀಡಿದ್ದರು. ಆದರೆ ಪ್ರಕರಣ ಬೆಳಕಿಗೆ ಬಂದ ಬಳಿಕ ಮ್ಯಾನೇಜರ್ ನರೇಂದ್ರರೆಡ್ಡಿ ತಲೆ ಮರಿಸಿಕೊಂಡಿದ್ದ. ಇದೀಗ ಪೊಲೀಸರು ಖತರ್ನಾಕ್ ಮ್ಯಾನೇಜರ್‌ನನ್ನು ಬಂಧಿಸಿದ್ದಾರೆ. ಬ್ಯಾಂಕ್‌ನ ಮಾಜಿ ಉದ್ಯೋಗಿ ಅರುಣಾ ಎಂಬಾಕೆಯನ್ನೂ ಬಂಧಿಸಲಾಗಿದೆ.

# ಹುಟ್ಟು ಸಾವುಗಳ ಮಧ್ಯೆ ಮಾಡುವ ಸತ್ಕಾರ್ಯವೇ ಸಾರ್ಥಕ: ಸಲೀಂ ಪಾಶಾ

**ಬೀದರ್, ಏ.10–** ಹುಟ್ಟುವುದು ಆಕಸ್ಮಿಕ, ಸಾಯುವುದು ಖಚಿತ. ಹುಟ್ಟು ಸಾವುಗಳ ಮಧ್ಯೆ ಇರುವ ಅಮೂಲ್ಯ ಜೀವನ ಮಹತ್ವದ್ದಾಗಿದೆ. ಸಮಾಜಕ್ಕಾಗಿ ಏನಾದರೂ ಮಾಡಿ ಜನರಿಗೆ ಉಪಕಾರ ಮಾಡುವುದು ಪವಿತ್ರಕಾರ್ಯ. ಇಂತಹ ಸೇವೆಯನ್ನು ಡಾ. ಗುರಮ್ಮಾ ಸಿದ್ದಾರೆಡ್ಡಿ ತಾಯಿಯವರು ಮಾಡುತ್ತಿದ್ದಾರೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಸಲೀಂ ಪಾಶಾ ತಿಳಿಸಿದರು.

ನಗರದಲ್ಲಿ ಡಾ. ಎಸ್.ಎಸ್. ಸಿದ್ದಾರೆಡ್ಡಿ ಫೌಂಡೇಶನ್, ಭಾರತ್ ಸ್ಕೌಟ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಡಾ.ಎಸ್. ಎಸ್.ಸಿದ್ದಾರೆಡ್ಡಿಯವರ 9ನೇ ವರ್ಷದ ಸ್ಮರಣಾರ್ಥವಾಗಿ 2023–2024ನೇ ಸಾಲಿನ ರಾಜ್ಯ ಪುರಸ್ಕಾರ ಹಾಗೂ ಸ್ಕೌಟ್ ಮತ್ತು ಗೈಡ್ಸ್ ಮಕ್ಕಳಿಗೆ ಕರ್ನಾಟಕ ಸಾಹಿತ್ಯ ಸಂಘದ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಹಣ ಸಂಪಾದನೆ ಮಾಡಿ ಅದನ್ನು ಉಳಿಸುವ ಕಾರ್ಯ ಎಲ್ಲರೂ ಮಾಡುತ್ತಾರೆ. ಆದರೆ ಡಾ. ಗುರಮ್ಮಾ ಸಿದ್ದಾ ರೆಡ್ಡಿಯವರು ತಮ್ಮಲ್ಲಿರುವ ಸಂಪತ್ತನ್ನು ವಿದ್ಯಾರ್ಥಿಗಳಿಗಾಗಿ, ಸಮಾ ಜೋಧಾರ್ಮಿಕ ಕಾರ್ಯಗಳಿಗಾಗಿ ವ್ಯಯ ಮಾಡುತ್ತಿರುವುದು ಅಭಿನಂದನೀಯ. ಈ ಹಿಂದೆ ಎಂ.ಸಿ. ಮೋದಿಯವರು ಸಾವಿರಾರು ಕಣ್ಣಿನ ಶಸ್ತ್ರಚಿಕಿತ್ಸೆ ಮಾಡಿ ಜನರ ಹೃದಯದಲ್ಲಿ ಅಚ್ಚಳಿಯದೆ ಉಳಿದಿದ್ದಾರೆ. ಅದೇ ರೀತಿ ಸಿದ್ದಾರೆಡ್ಡಿ ಕಣ್ಣಿನ ಆಸ್ಪತ್ರೆ ಹೆಸರು ಮಾಡಲಿ. ಇಂದು ಮಕ್ಕಳಿಗೆ ಡಾ. ಎಸ್.ಎಸ್. ಸಿದ್ದಾರೆಡ್ಡಿ ಅವರ ಸ್ಮರಣಾರ್ಥ ವಿದ್ಯಾರ್ಥಿಗಳಿಗೆ ರಾಜ್ಯ ಪುರಸ್ಕಾರ ನೀಡಿ ಪ್ರೋತ್ಸಾಹಿಸುತ್ತಿರುವುದು ಉತ್ತಮ ಕಾರ್ಯ ಎಂದು ಶ್ಲಾಘಿಸಿದರು. ಭಾರತ ಸ್ಕೌಟ್ ಮತ್ತು ಗೈಡ್ಸ್‌ನ ರಾಜ್ಯ ಮುಖ್ಯ ಆಯುಕ್ತ ಪಿ.ಜಿ.ಆರ್. ಸಿಂಧ್ಯಾ ಅವರು ಮಾತನಾಡಿ, ಡಾ. ಸಿದ್ದಾರೆಡ್ಡಿಯವರು ಬದುಕಿದ್ದಾಗಲೇ ಸ್ಕೌಟ್ ಮತ್ತು ಗೈಡ್ಸ್‌ನ ಕಾರ್ಯಕ್ಕೆ ತನು ಮನ ಧನದಿಂದ ಸಹಕಾರ ನೀಡಿದ್ದರು. ಅವರ ಹೆಗಲಿಗೆ ಹೆಗಲಾಗಿ ಜಿಲ್ಲೆಯಲ್ಲಿ ಡಾ. ಗುರಮ್ಮಾ ಸಿದ್ದಾರೆಡ್ಡಿಯವರು ಸ್ಕೌಟ್ ಮತ್ತು ಗೈಡ್ಸ್‌ನ ಏಳ್ಗೆಗೆ ಶ್ರಮಿಸುತ್ತಿದ್ದಾರೆ ಎಂದರು.


ಬೀದರ್‌ನಲ್ಲಿ ನಗರದಲ್ಲಿ ಡಾ. ಎಸ್.ಎಸ್. ಸಿದ್ದಾರೆಡ್ಡಿ ಫೌಂಡೇಶನ್, ಭಾರತ್ ಸ್ಕೌಟ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಡಾ.ಎಸ್. ಎಸ್.ಸಿದ್ದಾರೆಡ್ಡಿಯವರ 9ನೇ ವರ್ಷದ ಸ್ಮರಣಾರ್ಥವಾಗಿ 2023–2024ನೇ ಸಾಲಿನ ರಾಜ್ಯ ಪುರಸ್ಕಾರ ಹಾಗೂ ಸ್ಕೌಟ್ ಮತ್ತು ಗೈಡ್ಸ್ ಮಕ್ಕಳಿಗೆ ಕರ್ನಾಟಕ ಸಾಹಿತ್ಯ ಸಂಘದ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಿದ ಸನ್ಮಾನ ಸಮಾರಂಭವನ್ನು ಶಿಕ್ಷಣ ಇಲಾಖೆ ಉಪನಿರ್ದೇಶಕ ಸಲೀಂ ಪಾಶಾ ಅವರು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿದರು.

ಭಾರತ ಸ್ಕೌಟ್ ಮತ್ತು ಗೈಡ್‌ನ ಜಿಲ್ಲಾ ಮುಖ್ಯ ಆಯುಕ್ತೆ ಡಾ. ಗುರಮ್ಮಾ ಸಿದ್ದಾರೆಡ್ಡಿ ಮಾತನಾಡಿ, ಸಿದ್ದಾರೆಡ್ಡಿಯವರ ಸ್ಮರಣಾರ್ಥವಾಗಿ ಇಂದು 150ಕ್ಕೂ ಹೆಚ್ಚು ಮಕ್ಕಳಿಗೆ ರಾಜ್ಯ ಪುರಸ್ಕಾರ ನೀಡಿ ಗೌರವಿಸಲಾಗಿದೆ. ಮಕ್ಕಳು ಉತ್ತಮ ನಾಗರಿಕರಾಗಿ ಬದುಕಬೇಕು. ಶಿಕ್ಷಣ, ಸಂಸ್ಕಾರ, ಸದ್ವಿನಯ ಅಳವಡಿಸಿಕೊಂಡು ಭಾರತದ ಹೆಸರು ವಿಶ್ವದಲ್ಲಿ ಪಸರಿಸಬೇಕೆಂಬುದು ನಮ್ಮ ಮೂಲ ಉದ್ದೇಶವಾಗಿದೆ. ಹೀಗಾಗಿ ಪ್ರತೀ ವರ್ಷ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಿಸುವ ಕಾರ್ಯ ಮಾಡಲಾಗುತ್ತಿದೆ. ನಮ್ಮ ಮಕ್ಕಳು ಹಾಗೂ ಸೊಸೆ ಕೂಡಾ ನನಗೆ ಕೈಜೋಡಿಸಿರುವುದು ಸಮಾಜ ಸೇವೆ ಮಾಡುವ ನಮ್ಮ ಉತ್ಸಾಹ ಇಮ್ಮಡಿ ಗೊಂಡಿದೆ ಎಂದರು.

# ಕರುಣೇಶ್ವರ ನಗರದಲ್ಲಿ ಹನುಮೋತ್ಸವ, ಎರಡು ದಿನಗಳ ಹೋಮಿಯೋಪತಿ- ನೇತ್ರ ಆರೋಗ್ಯ ಶಿಬಿರ

**ಕಲಬುರಗಿ, ಏ.10–** ಕರುಣೇಶ್ವರ ನಗರದ ಶ್ರೀ ಜೈ ವೀರ ಹನುಮಾನ್ ಮಂದಿರದಲ್ಲಿ ಶ್ರೀಹನುಮ ಜಯಂತಿಯ ಅಂಗವಾಗಿ ಶ್ರೀ ಹನುಮೋತ್ಸ ಹಾಘೂ ಎರಡು ದಿನಗಳ ಹೋಮಿಯೋಪತಿ–ಉಚಿತ ನೇತ್ರ ಚಿಕಿತ್ಸಾ ಶಿಬಿರವನ್ನು ಪಂಡಿತ ಪ್ರಸನ್ನಾಚಾರ್ಯ ಜೋಶಿ ಅವರು ಉದ್ಘಾಟಿಸಿದರು.

ಉದ್ಯಮಿ ಹಾಗೂ ರಾಜಕೀಯ ಧುರೀಣ ಕೃಷ್ಣಾಜಿ ಕುಲಕರ್ಣಿ ಅವರು ಮಾತನಾಡಿ, ದೇವಸ್ಥಾನ ಸ್ಥಾಪನೆಯಾದಂತಲೂ ಸದಸ್ಯರಾಗಿದ್ದು ವೀರಾಂಜನೇಯನ ಅನುಗ್ರಹ ಎಲ್ಲರಿಗೂ ದೊರೆಯಲಿ, ದೇವಸ್ಥಾನದ ಅಭಿವೃದ್ಧಿಗೆ ಸಹಕರಿಸುವುದಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ದೇವಸ್ಥಾನದ ನಿಕಟಪೂರ್ವ ಹಿರಿಯ ಸದಸ್ಯರಾದ ರಾಘವೇಂದ್ರ ಬಳೂರಗಿ, ಬಾಬುರಾವ್ ಕುಲಕರ್ಣಿ ರೇವೂರ್ ಪುರುಷೋತ್ತಮ್ ಬಿಳಗುಂದಿ, ಮುಕುಂದ ಜಹಾಗೀರದಾರ, ಕಲ್ಲಪ್ಪ ಸಕ್ರಿ ಅವರನ್ನು ಸನ್ಮಾನಿಸಲಾಯಿತು. ದೇವಸ್ಥಾನದ ಅಧ್ಯಕ್ಷ ಕಿಶನರಾವ್ ಮಟಮಾರಿ, ಅವಿನಾಶ್ ಕುಲಕರ್ಣಿ ರೇವೂರ್, ಡಾ.ಸುಧೀರ್ ಕುಳಗೇರಿ, ವಿನುತ ಎಸ್ ಜೋಶಿ, ವಿಶ್ವಾಸ್ ಮೊಘೇಕರ್, ಬಾಬುರಾವ್ ಸುಂಟನೂರ್, ಮಲ್ಲಿಕಾರ್ಜುನ್ ಹೂಗಾರ್, ಶಾಮಾಚಾರ್ಯ ಜೋಶಿ ವನದುರ್ಗ, ಶಂಕರರಾವ್ ಸಿಂದಗಿಕರ್, ನಿತೀಶ್ ಜೋಶಿ, ಸುರೇಶ್ ಯಾಳವಾರಕರ್, ಆರ್ ಕೆ ಕುಲಕರ್ಣಿ, ಗೋವಿಂದ ಕುಲಕರ್ಣಿ, ವಿಜಯಕುಮಾರ್ ಕುಲಕರ್ಣಿ, ಶ್ರೀ ಜೈ ವೀರ ಹನುಮಾನ್ ಭಜನಾ ಮಂಡಳಿಯ ಮಂಡಳಿಯ ಹೇಮಾ ಚೌಡಾಪೂರಕರ್,ಸವಿತಾ ಕುಲಕರ್ಣಿ, ಗಿರಿಜಾ ಸಿಂದಗಿಕರ, ವಂದನಾ ಜಹಾಗೀರದಾರ, ಸುನಂದ ಎಸ್ ಜೋಶಿ, ಮಾಲಿನಿ ಮಟಮಾರಿ, ಅಶ್ವಿನಿ ಕಾರಟಗಿ, ಅನುರಾಧಾ ಜೋಶಿ ಇತರರಿದ್ದರು.


ಕಲಬುರಗಿಯ ಕರುಣೇಶ್ವರ ನಗರದ ವೀರಹನುಮಾನ ದೇವಸ್ಥಾನದ ರಜತೋತ್ಸವದ ಅಂಗವಾಗಿ ಹನುಮೋತ್ಸವ ಉಚಿತ ಹೋಮಿಯೋಪತಿ–ನೇತ್ರ ತಪಾಸಣಾ ಶಿಬಿರವನ್ನು ಪಂ.ಪ್ರಸನ್ನಾಚಾರ್ಯ ಜೋಶಿ ಅವರು ಉದ್ಘಾಟಿಸಿದರು.

ಕರುಣೇಶ್ವರ ನಗರದ ವೀರ ಹನುಮಾನ್ ದೇವಾಲಯದ ರಜತ ಮಹೋತ್ಸವದ ಅಂಗವಾಗಿ, ಎರಡು ದಿನಗಳ ವರೆಗೆ 'ವಿಶ್ವ ಹೋಮಿಯೋಪಥಿ ದಿನಾಚರಣೆ' ಸಂದರ್ಭದಲ್ಲಿ ಉಚಿತ ಹೋಮಿಯೋಪತಿ ತಪಾಸಣೆ ನಡೆಯಲಿದ್ದು, ವೈದ್ಯರಾದ ಡಾ. ಸುರೇಂದ್ರ ಸಿದ್ಧಾಪುರ್ಕರ್ ಮತ್ತು ಡಾ. ಗೌರಿಶ್ರೀ ಇವರ ಮಾರ್ಗದರ್ಶನದಲ್ಲಿ ಶುಗರ್ ಮತ್ತು ಸಾಮಾನ್ಯ ಆರೋಗ್ಯ ತಪಾಸಣಾ ಶಿಬಿರವನ್ನು ಬೆಳಿಗ್ಗೆ 9:30 ರಿಂದ ಮಧ್ಯಾಹ್ನ 12:30ರವರೆಗೆ ಹಮ್ಮಿಕೊಳ್ಳಲಾಗಿದೆ.

ವೀರ ಹನುಮಾನ್ ದೇವಸ್ಥಾನ ಅಭಿವೃದ್ಧಿ ಸಂಘ, ಹೆಡ್ ಹೆಲ್ಡ್ ಹೈ ಫೌಂಡೇಶನ್ ಮತ್ತು ಅನುಗ್ರಹ ಕಣ್ಣಿನ ಆಸ್ಪತ್ರೆ, ಬರುಕಾ ನೇತ್ರಾಲಯದ ಸಹಯೋಗದಲ್ಲಿ ಉಚಿತ ಕಣ್ಣು ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಡಾ. ಪ್ರಭು ಗೌಡ ಬಿ.ಎಲ್. ಮತ್ತು ಡಾ. ಮಾಲನಿ ಪಿ.ಎಲ್. ಅವರ ನೇತೃತ್ವದಲ್ಲಿ ಕಣ್ಣಿನ ತಪಾಸಣೆ, ಕಣ್ಣುಪೊರೆ ಶಸ್ತ್ರ ಚಿಕಿತ್ಸೆ ಮತ್ತು ಇತರೆ ಕಣ್ಣಿನ ರೋಗಗಳಿಗೆ ಚಿಕಿತ್ಸೆಯ ವ್ಯವಸ್ಥೆ ಕಲ್ಪಿಸಲಾಗಿದೆ.

ಈ ಎರಡು ದಿನಗಳ ಶಿಬಿರಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ ಉಚಿತ ಆರೋಗ್ಯ ತಪಾಸಣೆಯ ಸದುಪಯೋಗ ಪಡೆದುಕೊಳ್ಳುವಂತೆ ದೇವಸ್ಥಾನ ಅಭಿವೃದ್ಧಿ ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

# ಬಿಜೆಪಿ ಕಚೇರಿಯಲ್ಲಿ ಮಹಾವೀರ ಜಯಂತಿ ಆಚರಣೆ



**ಬಳ್ಳಾರಿ, ಏ.10–**ಸಿರುಗುಪ್ಪ ನಗರದ ಬಿಜೆಪಿ ಕಚೇರಿಯಲ್ಲಿ ಅಹಿಂಸೆಯೇ ಶ್ರೇಷ್ಠ ಧರ್ಮವೆಂದು ಸಾರಿದ ಭಗವಾನ್ ಮಹಾವೀರ ಜಯಂತಿಯ ಶುಭಾಶಯಗಳು ಸಲ್ಲಿಸಲಾಯಿತು. ಶಾಂತಿ ಮತ್ತು ಅಹಿಂಸೆಯ ಪ್ರತಿಪಾದಕರಾದ ಜೈನಧರ್ಮದ 24ನೇ ಮತ್ತು ಕೊನೆಯ ತೀರ್ಥಂಕರರಾದ ವರ್ಧಮಾನ ಮಹಾವೀರ ಅವರ ಜೀವನ ಮತ್ತು ಸಂದೇಶ ಎಲ್ಲರಿಗೂ ದಾರಿ ದೀಪವಾಗಿದೆ ಎಂದರು.

# ಜ್ಞಾನಾಮೃತ ಉತ್ತಮ ಸಾಧನೆ: 57 ಡಿಸ್ಟಿಂಕ್ಷನ್

**ಬಳ್ಳಾರಿ, ಏ.9–** ಬಳ್ಳಾರಿ ಮಾರ್ಕೆಡ್ ಟ್ರಸ್ಟ್‌ನ 'ಜ್ಞಾನಾಮೃತ' ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗ ವಿದ್ಯಾರ್ಥಿಗಳು ಉತ್ತಮ ಸಾಧನ ಮಾಡಿದೆ. ಕಾಲೇಜಿನ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗಗಳಲ್ಲಿ ಪರೀಕ್ಷೆಗೆ ಹಾಜರಿದ್ದ 200 ವಿದ್ಯಾರ್ಥಿಗಳಲ್ಲಿ 57 ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿ 123 ವಿದ್ಯಾರ್ಥಿಗಳು ಪ್ರಥಮ ಶ್ರೇಣಿ ಹಾಗೂ 20 ವಿದ್ಯಾರ್ಥಿಗಳು ದ್ವಿತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ.



# ಮುಂದಿನ ದೊಡ್ಡ ಐಟಿ ಹಬ್ ಆಗಿ ಕಲಬುರಗಿ: ಡಿ.ಸಿ ಘೋಷಣೆ

**ಕಲಬುರಗಿ, ಏ.10–** ನಮ್ಮ ಕಲಬುರಗಿ ಜಿಲ್ಲೆ ರಾಜ್ಯದ ಮುಂದಿನ ದೊಡ್ಡ ಐಟಿ ಹಬ್ಬ ಆಗಲಿದೆ. ಕರ್ನಾಟಕ ಸರ್ಕಾರ ಹಾಗೂ ನಗರದ ಪಿಡಿಎ ಇಂಜಿನೀಯರಿಂಗ್ ಕಾಲೇಜ್ ಸಹಭಾಗಿತ್ವದಲ್ಲಿ ಸ್ಥಳೀಯ ನವ ಉದ್ಯಮಿಗಳಿಗೆ ಪ್ರೋತ್ಸಾಹಿಸಲು ಮತ್ತು ಮಾರ್ಗದರ್ಶನ ನೀಡಲು ಸಹಾಯವಾಗುವಂತೆ ಕಾರ್ಯತಂತ್ರ ಕೇಂದ್ರ ಸಾಫ್ಟ್‌ವೇರ್ ಸೆಂಟರ್ ಅನ್ನು ಪ್ರಾರಂಭಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಘೋಷಿಸಿದರು.




ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಾಗತಿಕ ಮಟ್ಟದ ಇನ್‌ಕ್ಯುಬೇಶನ್ ಸೆಂಟರ್ ತೆರೆಯಲು ಜಿಲ್ಲಾಧಿಕಾರಿ ಕಚೇರಿ, ಕೆಡಿಐಎಂ ಮತ್ತು ಪಿಡಿಎ ಕಾಲೇಜ್ ಆಫ್ ಇಂಜಿನಿಯರಿಂಗ್ ನಡುವೆ ಒಡಂಬಡಿಕೆಯ ಮೂಲಕ ಇನ್ಕ್ಯುಬೇಷನ್ ಸೆಂಟರ್‌ಗೆ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮತ್ತು ಶಶೀಲ್ ನಮೋಶಿ ಅವರು ಒಪ್ಪಂದ ವಿನಿಮಯ ಮಾಡಿಕೊಂಡರು.

ರಾಜ್ಯದ ಬೆಂಗಳೂರು ಕೇಂದ್ರಿತ ಅಭಿವೃದ್ಧಿಯನ್ನು ಹೊರ ಜಿಲ್ಲೆಗಳಾದ ಕಲಬುರಗಿ, ಹುಬ್ಬಳ್ಳಿ–ಧಾರವಾಡ, ಮೈಸೂರು ಮತ್ತು ಮಂಗಳೂರು ಸೇರಿದಂತೆ ಎರಡನೇ ಸಾಲಿನಲ್ಲಿರುವ ನಗರಗಳಲ್ಲಿ ಉದ್ಯಮಶೀಲತೆಯನ್ನು ಸರ್ಕಾರ ಮತ್ತು 5 ಉದ್ಯೋಗಗಳನ್ನು ಸೃಷ್ಟಿಸಲು 1,000 ಕೋಟಿ ಅನುದಾನ ರಾಜ್ಯ ಮೀಸಲಿರಿಸದೆ. ಜಾಗತಿಕ ಮಟ್ಟದ ಇನ್‌ಕ್ಯುಬೇಶನ್ ಸೆಂಟರ್ ತೆರೆಯಲು ಜಿಲ್ಲಾಧಿಕಾರಿ ಕಚೇರಿ, ಕೆಡಿಐಎಂ ಮತ್ತು ಪಿಡಿಎ ಕಾಲೇಜ್ ಆಫ್ ಇಂಜಿನಿಯರಿಂಗ್ ನಡುವೆ ಒಡಂಬಡಿಕೆಯ ಮೂಲಕ ಇನ್ನ್ಯುಬೇಷನ್ ಸೆಂಟರ್ ಅನ್ನು ಪ್ರಕಟಿಸಲಾಗಿದೆ. ಇದು ಸ್ಟಾರ್ಟ್‌ಅಪ್‌ಗಳನ್ನು ಪೋಷಿಸಲು, ಉದ್ಯಮಿಗಳನ್ನು ಬೆಂಬಲಿಸಲು ಮತ್ತು ತಂತ್ರಜ್ಞಾನಗಳಲ್ಲಿ ಉದಯೋನ್ಮುಖ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಕಾರ್ಯತಂತ್ರದ ಕೇಂದ್ರವಾಗಿ ಕಾರ್ಯನಿರ್ವಹಿಸುತ್ತದೆ. ಈ ಉಪಕ್ರಮವು ಕರ್ನಾಟಕ ಸರ್ಕಾರದ ಬಿಯಾಂಡ್ ಬೆಂಗಳೂರು ಮಿಷನ್ ಅನ್ನು ಬಲಪಡಿಸುತ್ತದೆ, ರಾಜ್ಯದ ಉದಯೋನ್ಮುಖ ನಗರಗಳು ಮತ್ತು ಪ್ರದೇಶಗಳಲ್ಲಿ, ವಿಶೇಷವಾಗಿ ಕರ್ನಾಟಕದಲ್ಲಿ ದೃಢವಾದ ಡಿಜಿಟಲ್ ಮತ್ತು ಐಟಿ ಪರಿಸರ ವ್ಯವಸ್ಥೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿದೆ. ಒಡಂಬಡಿಕೆಯನ್ನು ಜಾಗತಿಕವಾಗಿ ಗುರುತಿಸಿಕೊಂಡಿರುವ ಅಮೇರಿಕಾ ದೇಶದ ಫಿಅಇಬ ಕಾರ್ಪ್ ಸಂಸ್ಥೆಯನ್ನು ಹೊಂದಿದ್ದು, ಈ ಸಂಸ್ಥೆಯು ಕಲಬುರಗಿಯಲ್ಲಿ ಹೊಸ ಕೇಂದ್ರವನ್ನು ಪ್ರಾರಂಭಿಸಿದೆ.

ಇದರೊಂದಿಗೆ ಕರ್ನಾಟಕದ ಜೊತೆಗೆ ಕಲ್ಯಾಣ ಕರ್ನಾಟಕದಲ್ಲಿ ಐಟಿ ಹೆಜ್ಜೆಗುರುತುಗಳು ವಿಸ್ತರಿಸುತ್ತದೆ. ಎಕ್ಸೆಲ್ ಕಾರ್ಪ್ ಯುಎಸ್‌ಎ, 2003 ರಿಂದ ಸಾಫ್ಟ್‌ವೇರ್ ಆವಿಷ್ಕಾರದಲ್ಲಿ ಜಾಗತಿಕ ನಾಯಕ, ಭಾರತದಲ್ಲಿ ತನ್ನ ಸಂಶೋಧನೆ ಮತ್ತು ಅಭಿವೃದ್ಧಿ ಕಾರ್ಯಾಚರಣೆಗಳ ಪ್ರಮುಖ ವಿಸ್ತರಣೆಯನ್ನು ಘೋಷಿಸಿದೆ. ಆರ್ಟಿಫಿಶಿಯಲ್ ಇಂಟೆಲಿಜೆನ್ಸ್, ಜನರೇಟಿವ್ ಅಲ್, ಕ್ವಾಂಟಮ್ ಕಂಪ್ಯೂಟಿಂಗ್, ಡಿಜಿಟಲ್ ಟ್ರಾನ್ಸ್‌ಫರ್ಮೇಷನ್, ಎಂಬೆಡೆಡ್ ಸಿಸ್ಟಮ್ಸ್ ಮತ್ತು ಇಂಟರ್ನೆಟ್ ಆಫ್ ಥಿಂಗ್ಸ್ (ಐಒಟಿ) ಅಂತಹ ಅತ್ಯಾಧುನಿಕ ತಂತ್ರಜ್ಞಾನಗಳ ಮೇಲೆ ಕಾರ್ಯತಂತ್ರದ ಗಮನವನ್ನು ಹೊಂದಿರುವ ಕಂಪನಿಯು ಕಲಬುರಗಿಯಲ್ಲಿ ಹೊಸ ಕೇಂದ್ರವನ್ನು ಪ್ರಾರಂಭಿಸುವ ಮೂಲಕ ಉತ್ತರ ಕರ್ನಾಟಕದಲ್ಲಿ ತನ್ನ ಅಸ್ತಿತ್ವವನ್ನು ಬಲಪಡಿಸುತ್ತಿದೆ. ನ್ಯೂಜೆರ್ಸಿಯಲ್ಲಿ ಪ್ರಧಾನ ಕಚೇರಿಯನ್ನು ಹೊಂದಿರುವ ಕಾರ್ಪ್ ಬೆಂಗಳೂರು, ಚೆನ್ನೈ, ಬೆಳಗಾವಿ, ಮತ್ತು ಹುಬ್ಬಳ್ಳಿ–ಧಾರವಾಡದಾದ್ಯಂತ ಸುಧಾರಿತ ಐಟಿ ಹಬ್‌ಗಳನ್ನು ನಿರ್ವಹಿಸುತ್ತಿದೆ. ಕಲಬುರಗಿ ಕೇಂದ್ರದ ಸೇರ್ಪಡೆಯು ಭಾರತದಲ್ಲಿ ಬೆಳೆಯುತ್ತಿರುವ ಟೆಕ್ ಪರಿಸರ ವ್ಯವಸ್ಥೆಯನ್ನು ಬೆಂಬಲಿಸುವಲ್ಲಿ ಮಹತ್ವದ ಹೆಜ್ಜೆಯನ್ನು ಗುರುತಿಸುತ್ತದೆ ಮತ್ತು ಶ್ರೇಣಿ –2 ನಗರಗಳಲ್ಲಿ ಹೆಚ್ಚಿನ ಕೌಶಲ್ಯದ ಉದ್ಯೋಗಗಳನ್ನು ಸೃಷ್ಟಿಸುತ್ತದೆ ಎಂದರು.

ಕಾರ್ಪ್‌ನ ಮಿಷನ್‌ನ ಒಂದು ಅವಿಭಾಜ್ಯ ಅಂಗವೆಂದರೆ ನ್ಯೂಯಾರ್ಕ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಅಂಡ್ ಟೆಕ್ನಾಲಜಿ, ಇಂಜಿನಿಯರಿಂಗ್ ಪದವೀಧರರು ಮತ್ತು ಕೆಲಸ ಮಾಡುವ ವೃತ್ತಿಪರರಿಗೆ ಉದ್ಯಮ–ಸಿದ್ಧ ತರಬೇತಿ ಮತ್ತು ಖಾತರಿಯ ಉದ್ಯೋಗ ನಿಯೋಜನೆಯನ್ನು ನೀಡುವ ಅಂಗಸಂಸ್ಥೆಯಾಗಿದೆ. ಈ ಉಪಕ್ರಮವು ಶಿಕ್ಷಣ ಮತ್ತು ಉದ್ಯಮದ ನಡುವಿನ ಅಂತರವನ್ನು ಕಡಿಮೆ ಮಾಡುತ್ತದೆ. ಜಿಲ್ಲೆಯ ಬೆಳವಣಿಗೆಗೆ ಸಧಾ ಕ್ರಿಯಾಶೀಲರಾಗಿ ದುಡಿಯುತ್ತಿರುವ ಐಟಿ–ಬಿಟಿ ಮತ್ತು ಆರ್ ಡಿ ಪಿಆರ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಪಾತ್ರ ಈ ಒಡಂಬಡಿಕೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಅವರ ಕನಸಿನಂತೆ ಕಲಬುರಗಿಯು ಕರ್ನಾಟಕದ ಭವಿಷ್ಯದ ಬೆಳವಣಿಗೆಯ ಕಥೆಯ ಪ್ರಮುಖ ಭಾಗವಾಗಿದೆ.

ಎಕ್ಸಿಐಎಲ್ ಕಾರ್ಪೊರೇಷನ್ ಇನ್‌ಕ್ಯುಬೇಷನ್ ಸೆಂಟರ್ ಮತ್ತು ಸಾಫ್ಟ್‌ವೇರ್ ಅಭಿವೃದ್ಧಿ ಕೇಂದ್ರದೊಂದಿಗೆ ನಾವು ಸ್ಥಳೀಯ ಯುವಜನತೆಯ ಸಬಲೀ ಕರಣಕ್ಕೆ ಅಡಿಪಾಯ ಹಾಕಲಾಗಿದೆ. ಜಾಗತಿಕ ಅವಕಾಶಗಳು ಮತ್ತು ಈ ಕ್ರಿಯಾತ್ಮಕ ಪ್ರದೇಶದಲ್ಲಿ ಹೂಡಿಕೆ ಮಾಡಲು ದೇಶೀಯ ಮತ್ತು ಅಂತರರಾಷ್ಟ್ರೀಯ ಕಂಪನಿಗಳನ್ನು ಆಹ್ವಾನಿಸಿ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡಲು ಸಿದ್ಧವಾಗಿದೆ. ಎಚ್‌ಕೆಇ ಸೊಸೈಟಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಶಶಿಲ್ ಜಿ ನಮೋಶಿ ಅವರು ಕಲ್ಯಾಣ ಕರ್ನಾಟಕದ ಅಭಿವೃದ್ಧಿಗಾಗಿ ಪಿಡಿಎ ಶಾಲೆಯಲ್ಲಿ ಇನ್ನ್ಯುಬೇಷನ್ ಸೆಂಟರ್ ಸ್ಥಾಪಿಸಲು ಯುವಕರು ಮುಂದಾಗಿರುವುದು ಮತ್ತು ಈ ಭಾಗದ ಉದ್ಯಮಿಗಳು ಮತ್ತು ಉದ್ಯೋಗ ಸೃಷ್ಟಿಗೆ ಉಪಕ್ರಮವು ಅಪಾರವಾಗಿ ಸಹಾಯ ಮಾಡುತ್ತದೆ. ಇದು ಸ್ಥಳೀಯ ಪ್ರತಿಭೆಗಳನ್ನು ಉಳಿಸಿಕೊಳ್ಳಲು ಮತ್ತು ಈ ಭಾಗದ ಒಟ್ಟಾರೆ ಕೈಗಾರಿಕಾ ಬೆಳವಣಿಗೆಗೆ ಸಹಕಾರಿಯಾಗಿದೆ. ಕೆಡಿಇಎಂನ ಸಿಐಒ ಸಂಜೀವ್ ಕುಮಾರ್ ಗುಪ್ತ ಅವರು ಮಾತನಾಡಿ ಕರ್ನಾಟಕದ ಐಟಿ ಕ್ಷೇತ್ರವನ್ನು ಬಲ ಪಡಿಸುವಲ್ಲಿ ಈ ತರಹದ ಒಡಂಬಡಿಕೆಗಳ ಪಾತ್ರ ಮುಖ್ಯವಾಗುತ್ತದೆ. ಕಲಬುರಗಿಯು ರಾಜ್ಯದ ಪ್ರಮುಖ ತಂತ್ರಜ್ಞಾನ ಕೇಂದ್ರವಾಗಿ ಅಪಾರ ಸಾಮರ್ಥ್ಯವನ್ನು ಹೊಂದಿದೆ. ಈ ಉಪಕ್ರಮದ ಮೂಲಕ, ನಾವು ಸ್ಟಾರ್ಟ್‌ಅಪ್‌ಗಳು ಮತ್ತು ಉದ್ಯಮಿಗಳಿಗೆ ಅಗತ್ಯವಾದ ಸಂಪನ್ಮೂಲಗಳನ್ನು ಒದಗಿಸುವ ಗುರಿಯನ್ನು ಹೊಂದಿದ್ದೇವೆ ಎಂದರು.

ಎಕ್ಸೆಲ್ ಕಾರ್ಪ ಯುಎಎಸ್‌ಎ ಸ್ಥಾಪಕ ಮತ್ತು ಸಿಇಒ ಪ್ಪಿ ಗೋಯೆಲ್ ಅವರು ಮಾತನಾಡಿ, ಕಾರ್ಪ್‌ನಲ್ಲಿ ನಾವು ನಾವೀನ್ಯತೆ–ಚಾಲಿತ ಬೆಳವಣಿಗೆ ಮತ್ತು ಹೊಸ ಅವಕಾಶಗಳನ್ನು ಅನ್ಲಾಕ್ ಮಾಡಿ ಮಾಡುವ ಶಕ್ತಿಯನ್ನು ನಂಬುತ್ತೇವೆ. ಕಲಬುರಗಿಯಲ್ಲಿ ನಮ್ಮ ಅಸ್ತಿತ್ವವನ್ನು ವಿಸ್ತರಿಸಲು ಕಆಂ ಕಾಲೇಜು ಮತ್ತು ಕರ್ನಾಟಕದೊಂದಿಗೆ ಪಾಲುದಾರಿಕೆ ಮಾಡಲು ನಾವು ಹೆಮ್ಮೆಪಡುತ್ತೇವೆ. ಈ ಪ್ರದೇಶದ ಪ್ರತಿಭೆಯನ್ನು ನಾವು ನಂಬುತ್ತೇವೆ ಮತ್ತು ಇಲ್ಲಿ ಜಾಗತಿಕ ಅವಕಾಶಗಳನ್ನು ಆವಿಷ್ಕರಿಸಲು ಬದ್ಧರಾಗಿದ್ದೇವೆ. ಸೊಸೈಟಿಯ ಎಲ್ಲಾ ಆಡಳಿತ ಮಂಡಳಿಯ ಸದಸ್ಯರು ಸಂತೋಷವನ್ನು ಮತ್ತು ಸಂಪೂರ್ಣ ಯಶಸ್ಸಿಗೆ ಬೆಂಬಲವನ್ನು ನೀಡುತ್ತಿದ್ದಾರೆ ಭರವಸೆ ನೀಡಲಾಗಿದೆ. ಅಭಿವೃದ್ಧಿಗೆ ಫಲವತ್ತಾದ ನೆಲವನ್ನು ನಿರ್ಮಿಸಲಾಗಿದೆ ಎಂದು ಹರ್ಷದ ಸ್ಥಿತಿ ಎಂದರು.

## ಕೇಂದ್ರೀಯ ವಿವಿಯಲ್ಲಿ ಸಮಾಜ ಕಾರ್ಯ ಉತ್ಸವ

# ಜಗತ್ತಿನ ಹಲವಾರು ಸಮಸ್ಯೆಗಳಿಗೆ ಸಮಾಜ ಕಾರ್ಯ ಪರಿಹಾರ: ಪ್ರೊ.ಸತ್ಯನಾರಾಯಣ

**ಕಲಬುರಗಿ, ಏ.10–** ವೇಗವಾಗಿ ವಿಕಸನಗೊಳ್ಳುತ್ತಿರುವ ಸಮಾಜದಲ್ಲಿ ಸಮಾಜ ಕಾರ್ಯಕರ್ತರು ಬಹಳ ಮುಖ್ಯ ಪಾತ್ರ ವಹಿಸುತ್ತಾರೆ ಎಂದು ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.



ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ವಿಶ್ವ ಸಮಾಜಕಾರ್ಯ ದಿನದ ಅಂಗವಾಗಿ ಆಯೋಜಿಸಿದ ಸಮಾಜ ಕಾರ್ಯ ಉತ್ಸವವನ್ನು ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಉದ್ಘಾಟಿಸಿದರು.

ಸಮಾಜಕಾರ್ಯ ಉತ್ಸವ 2025ನ್ನು ಉದ್ಘಾಟಿಸಿ , ಮಾನವರಿಗೆ ವಯಸ್ಸಾದಂತೆ ಸಮಾಜವೂ ನಿರಂತರ ಬದಲಾವಣೆಗೆ ಒಳಗಾಗು ತ್ತದೆ. ಇಂದಿನ ಜಗತ್ತಿನಲ್ಲಿ ಹಲವಾರು ಸಮಸ್ಯೆಗಳು ಉದ್ಭವಿಸುತ್ತಿವೆ ಮತ್ತು ನಮ್ಮ ಪರಿಸರದ ಬಗ್ಗೆ ಮಾತ್ರವಲ್ಲದೆ ನಮ್ಮ ಸುತ್ತಮುತ್ತಲಿನ ಜನರ ಬಗ್ಗೆಯೂ ನಾವು ಕಾಳಜಿ ವಹಿಸುವುದು ಕಡ್ಡಾಯ ವಾಗಿದೆ. ಹೆಚ್ಚುತ್ತಿರುವ ತಲೆಮಾರುಗಳ ನಡುವಿನ ಸಂಪರ್ಕದ ಕಡಿತ ಮತ್ತು ಮಾನವ ಯೋಗ ಕ್ಷೇಮದ ಬಗೆಗೆ ನಾವು ಗಮನಹರಿಸಬೇಕು. ಆದ್ದರಿಂದ ಸಮಾಜಕಾರ್ಯಕರ್ತರು ಪೀಳಿಗೆಗಳ ಬಾಂಧವ್ಯವನ್ನು ಪೋಷಿಸುವಲ್ಲಿ ಸಕ್ರಿಯ ಪಾತ್ರ ವಹಿಸಬೇಕು" ಎಂದರು.

ಮುಖ್ಯ ಅತಿಥಿಯಾಗಿದ್ದ ಶಿವಮೊಗ್ಗದ ಕುವೆಂಪು ವಿಶ್ವ ವಿದ್ಯಾಲಯದ ಸಮಾಜ ಕಾರ್ಯ ವಿಭಾಗದ ನಿವೃತ್ತ ಪ್ರಾಧ್ಯಾಪಕ ಪ್ರೊ. ರವೀಂದ್ರ ಡಿ. ಗಡ್ಕರ್ ಮಾತನಾಡಿ, ಭಾರತೀಯ ಸಂವಿಧಾನದ ಮೂಲ ಭೂತ ಮೌಲ್ಯಗಳು ಮತ್ತು ಸಮಾಜ ಕಾರ್ಯಕರ್ತರು ಪಿತೃಪ್ರಧಾನ ವ್ಯವಸ್ಥೆಗಳ ಮತ್ತು ಸಾಮಾಜಿಕ ಅನ್ಯಾಯಗಳನ್ನು ಪ್ರಶ್ನಿಸುವಲ್ಲಿ ಪ್ರಮುಖ ಪಾತ್ರವಹಿಸುತ್ತಾರೆ. ಪ್ರತಿಯೊಬ್ಬ ನಾಗರಿಕನು ಸ್ವಾವಲಂಬಿ ಯಾಗಿರಬೇಕು. ಅದಕ್ಕಾಗಿ ನೀವು ನಿಮ್ಮನ್ನು ಪರೀಕ್ಷಿಸಿಕೊಳ್ಳಬೇಕು, ನಿಮ್ಮ ಸ್ವಂತ ಬೆಳಕಾಗಬೇಕು. ನಿಮ್ಮನ್ನು ನೀವು ಸಬಲಗೊಳಿಸಿಕೊಳ್ಳಬೇಕು. ಸ್ವಾವಲಂಬಿಯಾಗಬೇಕು. ಆಗ ಮಾತ್ರ ನೀವು ಇತರರಿಗೆ ಸ್ಫೂರ್ತಿ ನೀಡಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಅಂಗನವಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಕೃಷಿ, ಕೌಶಲ್ಯ ಅಭಿವೃದ್ಧಿ, ಮತ್ತು ನವೀಕರಿಸಬಹುದಾದ ಇಂಧನ, ಚಿಕಿತ್ಸಕ ಸೌಲಭ್ಯಗಳೊಂದಿಗೆ ವೃದ್ಧಾಶ್ರಮದ ಮಾದರಿ, ಸುಸ್ಥಿರ ನಗರ ಮಾದರಿ ಮತ್ತು ಕಾರ್ಖಾನೆಯ ಡಿಜಿಟಲ್ ಮಾದರಿಗಳನ್ನು ಪ್ರದರ್ಶಿಸಿದರು. ಕಾರ್ಯಕ್ರಮದ ಸಂಯೋಜಕಿ ಡಾ. ಚಿತ್ಕಲಾ ವೆಂಕರೆಡ್ಡಿ ಪ್ರಾಸ್ತಾವಿಕ ಭಾಷಣ ಮಾಡಿ ಕಾರ್ಯ ಕ್ರಮದ ಉದ್ದೇಶಗಳನ್ನು ವಿವರಿಸಿದರು. ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥೆ ಪ್ರೊ. ಪವಿತ್ರಾ ಆಲೂರ್ ಸ್ವಾಗತಿಸಿದರು. ಡಾ. ಭಾಗ್ಯಶ್ರೀ ವಂದಿಸಿದರು. ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಹದಿಹರೆಯದಲ್ಲಿನ ಬದಲಾವಣೆಗೆ ಭಯ ಬೇಡ: ಡಾ.ಅನಿತಾ

**ಬೀದರ್, ಏ.10–** ಹದಿ ಹರೆಯದ 13ರಿಂದ 19ರ ಒಯಸ್ಸಿನವರಿಗೆ ಅವರ ದೇಹದಲ್ಲಿ ಬದಲಾವಣೆ ಕಂಡುಬರುತ್ತವೆ. ಆದರೆ ಇದಕ್ಕೆ ಭಯಪಡುವ ಅವಶ್ಯಕತೆ ಇಲ್ಲ. ಏನಾದರೂ ಆರೋಗ್ಯದಲ್ಲಿ ಏರು–ಪೇರು ಕಂಡುಬಂದಲ್ಲಿ ಪಾಲಕರು ಮತ್ತು ಶಿಕ್ಷಕರ ಜೊತೆ ಹಂಚಿಕೊಳ್ಳಬೇಕು ಎಂದು ಹೈದ್ರಾಬಾದ್‌ನ ಹದಿಹರೆಯದ ಆರೋಗ್ಯ ಅಕ್ಯಡೆಮಿಯ ಉಪಾಧ್ಯಕ್ಷೆ ಡಾ. ಅನೀತಾ ಬಿ. ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.



ನಗರದ ಗುರುನಾನಕ್ ಶಾಲೆ 50 ವರ್ಷ ಪೂರೈಸಿದ ಸೂವರ್ಣ ಮಹೋತ್ಸವದ ಸಂದರ್ಭದಲ್ಲಿ ಝಿರಾ ಫಂಕ್ಷನ್ ಹಾಲ್‌ನಲ್ಲಿ ವಿದ್ಯಾರ್ಥಿಗಳಿಗೆ ಮತ್ತು ಪೋಷಕರಿಗೆ ಆರೋಗ್ಯ ಜಾಗೃತಿ ಕಾರ್ಯಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜಂಕ್‌ಫೂಡ್ ತಿರಸ್ಕರಿಸಬೇಕು, ಒಳ್ಳೆಯ ಗುಣಮಟ್ಟದ ಆಹಾರ ಸೇವನೆ ಮಾಡಬೇಕು ಎಂದರು.

ಹೈದ್ರಾಬಾದ್ ತನವೀರ್ ಆಸ್ಪತ್ರೆಯ ನಿರ್ದೇಶಕರು ಮತ್ತು ತೆಲಂಗಾಣಾ ನರ್ಸಿಂಗ್ ಹೋಂ ಅಸೋಸಿಯೇಶನ್ ಕಾರ್ಯದರ್ಶಿ ಡಾ.ಎಸ್. ನೌನೀಹಾಲ್ ಸಿಂಗ್ ಅವರು ಮಾತನಾಡಿ, ಸರಿಯಾದ ಸಮಯದಲ್ಲಿ ಊಟ ಮಾಡಬೇಕು. ವ್ಯಾಯಾಮ ಮತ್ತು ಯೋಗ ದಿನನಿತ್ಯ ಮಾಡಬೇಕು. ಇಲ್ಲದಿದ್ದಲ್ಲಿ ದಪ್ಪತನ ಮತ್ತು ಬೇರೆ ರೀತಿಯ ರೋಗಗಳು ಉತ್ಪತ್ತಿಯಾಗುತ್ತವೆ ಎಂದು ಎಚ್ಚರಿಸಿದರು. ಇದೇ ಸಂದರ್ಭದಲ್ಲಿ ರೋಡ್ ಸೆಫ್ಟಿ ಬಗ್ಗೆಯೂ ಅವರು ಜಾಗೃತಿ ಮೂಡಿಸಿದರು. ಸಂಸ್ಥೆಯ ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ್ ಅವರು ಮಾತನಾಡಿ, ನೀವು ದೈಹಿಕವಾಗಿ ಸದೃಢವಾಗಿದ್ದರೆ ಅದು ನಿಮ್ಮ ಮಾನಸಿಕ ಸಾಮರ್ಥ್ಯವನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ ಮತ್ತು ನಿಮ್ಮ ಶೈಕ್ಷಣಿಕತೆಯನ್ನು ಸುಧಾರಿಸುತ್ತದೆ ಎಂದು ವಿವರಿಸಿದರು. ಪೋಷಕರು ಭಾಗವಹಿಸಿ ಇದರ ಲಾಭವನ್ನು ಪಡೆದುಕೊಂಡರು. ಇಂತಹ ಕಾರ್ಯ ಕ್ರಮವನ್ನು ಹಮ್ಮಿಕೊಂಡು ಮಕ್ಕಳಿಗೆ ಜಾಗೃತಿ ಮೂಡಿಸಿರುವುದು ಒಂದು ಒಳ್ಳೆಯ ವೇದಿಕೆ ನಿರ್ಮಿಸಿಕೊಟ್ಟಿದ್ದೇವೆ ಎಂದು ಹೇಳಿದರು.

# ಸಾಧನೆಗೆ ಮತ್ತೊಂದು ಹೆಸರೇ ಶ್ರೀ ಚೈತನ್ಯ ಸಂಸ್ಥೆ




**ಬಳ್ಳಾರಿ, ಏ.10–** ದ್ವಿತೀಯ ಪಿ.ಯು.ಸಿ ಫಲಿತಾಂಶ ದಿನಾಂಕ 08.04.2025 ರಂದು ಪ್ರಕಟವಾಗಿದ್ದು ಬಳ್ಳಾರಿಯ ಶ್ರೀ ಚೈತನ್ಯ ವಿದ್ಯಾಸಂಸ್ಥೆಗಳ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆಯನ್ನು ಮಾಡಿದ್ದಾರೆ. ಪ್ರತಿ ವರ್ಷದಂತೆ ಈ ವರ್ಷವೂ ಸಹ ಅತಿಹೆಚ್ಚು ವಿದ್ಯಾರ್ಥಿಗಳು ಉತ್ತಮ ಫಲಿತಾಂಶವನ್ನು ಸಾಧಿಸಿ ಕೀರ್ತಿಯನ್ನು ತಂದಿರುತ್ತಾರೆ. ಪ್ರಸಕ್ತ ಶೈಕ್ಷಣಿಕ ವರ್ಷದಲ್ಲಿ ಈ ಕೆಳಗಿನಂತೆ ಫಲಿತಾಂಶವನ್ನು ಸಾಧಿಸಿರುತ್ತಾರೆ. ಇವರುಗಳಿಗೆ ಕಾಲೇಜಿನ ಆಡಳಿತ ಮಂಡಳಿಯ ನಿರ್ದೇಶಕರಾದ ಡಾ॥ಪಿ.ರಾಧಾಕೃಷ್ಣ ರವರು ಅಭಿನಂದನೆಯನ್ನು ಸಲ್ಲಿಸಿರುತ್ತಾರೆ.

# ಶ್ರೀ ಗುರು ತಿಪ್ಪೇರುದ್ರ ಕಾಲೇಜು ವತಿಯಿಂದ ವಿದ್ಯಾರ್ಥಿಗಳ ಸಾಮರ್ಥ್ಯ ಹೆಚ್ಚಳ ಕಾರ್ಯಕ್ರಮ



**ಬಳ್ಳಾರಿ, ಏ.10–** ದಿನಾಂಕ 07.04.2025 ಸೋಮವಾರದಂದು ಬಳ್ಳಾರಿಯ ಗಾಂಧಿನಗರದ ನಕ್ಷತ್ರ ಹೋಟೆಲ್‌ನಲ್ಲಿ ಶ್ರೀ ಗುರು ತಿಪ್ಪೇರುದ್ರ ಕಾಲೇಜ್‌ವತಿಯಿಂದ “STUDENT ENRICHMENT” ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಶ್ರೀ ಗುರು ತಿಪ್ಪೇರುದ್ರ ಕಾಲೇಜಿನ ವಿದ್ಯಾರ್ಥಿಗಳೊಂದಿಗೆ ಬಳ್ಳಾರಿಯ ಅನೇಕ ಕಾಲೇಜಿನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

ಶ್ರೀ ತಿಪ್ಪೇರುದ್ರ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಸ್.ಎನ್.ರುದ್ರಪ್ಪ ರವರ ನೇತೃತ್ವದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮಕ್ಕೆ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವ ವಿದ್ಯಾಲಯದ ಕುಲಪತಿಗಳಾದ ಎಮ್. ಮುನಿರಾಜುರವರು, ರಿಜಿಸ್ಟ್ರರ್ ಆದ ಎಸ್.ಎನ್. ರುದ್ರೇಶ್ ರವರು, ಬುಸಿನೆಸ್ ಅಡ್‌ಮಿನಿಸ್ಟ್ರೇಷನ್ ವಿಭಾಗದ ಅಧ್ಯಕ್ಷರಾದ ಕೆ.ಸಿ.ಪ್ರಶಾಂತ್, ಡಾ: ಶ್ರೀಮತಿ ಆರ್ಚನ, ಡಾ: ಜೆ.ಪಿ. ದಿನೇಶ್ ಹಿರಿಯ ಉಪನ್ಯಾಸಕರು ಹಾಗೂ ಸಂಪನ್ಮೂಲ ಉಪನ್ಯಾಸ ಕರ ವರ್ಗ ಶ್ರೀ ಕೃಷ್ಣ ದೇವರಾಯ ವಿಶ್ವವಿದ್ಯಾಲಯ, ಇವರುಗಳನ್ನು ಆಹ್ವಾನಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಸ್ವಾಗತ ಭಾಷಣವನ್ನು ಡಾ: ಶ್ರೀಮತಿ ರೀನಾ ರೆಡ್ಡಿ, ಪ್ರಾಂಶುಪಾಲರು ಗುರು ತಿಪ್ಪೇರುದ್ರ ಕಾಲೇಜ್ ಇವರು ನಡೆಸಿಕೊಟ್ಟರು. ಈ ಕಾರ್ಯಕ್ರಮದ ಸಂಕ್ಷಿಪ್ತ ಪರಿಚಯವನ್ನು ಇರ್ಶಾದ್ ಅಲಿ, ಪ್ರಾಧ್ಯಾಪಕರು ಶ್ರೀ ಗುರು ತಿಪ್ಪೇರುದ್ರ ಕಾಲೇಜ್ ಇವರು ನಡೆಸಿಕೊಟ್ಟರು. ಈ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾದ ಡಾ: ರವಿ ನಾರಯಣ್ ಕೆ.ಎಸ್., ಡಾ: ಶ್ರೀಮತಿ ನಿರ್ಮಲ ಜೆ., ಡಾ: ಅರುಣ ಕುಮಾರ್ ಜಿ ಹಾಗೂ ಡಾ: ಸುನಿಲ್ ಕುಮಾರ ಎಮ್.ಎಸ್. ಅತ್ಯುತ್ತಮವಾಗಿ “ ಕ್ಯಾರಿಯರ್ ಎಡ್ಜ್ ಫಾರ್ ಯಂಗ್ ಪ್ರೊಫೆಶನಲ್ಸ್” ಎಂಬ ವಿಷಯದ ಬಗ್ಗೆ ಉಪನ್ಯಾಸ ನೀಡಿದರು. ಇದು ವಿದ್ಯಾರ್ಥಿಗಳಿಗೆ ಮಾರ್ಗದರ್ಶನದ ದೀವಿಗೆ ಆಗಿತ್ತು. ಕಾರ್ಯಕ್ರಮವು ಅತ್ಯಂತ ಯಶಸ್ವಿಯಾಗಿ ಜರುಗಿತು.

# ಬಿ.ಪಿ.ಎಸ್.ಸಿ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಫಲಿತಾಂಶ–ಸಾಧನೆಯ ಸುದಿನ: ಡಾ. ಯಶವಂತ ಭೂಪಾಲ್

**ಬಳ್ಳಾರಿ, ಏ.10–** ಶ್ರೀಮತಿ ಬಸವರಾಜೇಶ್ವರಿ ಸಮೂಹ ಶಿಕ್ಷಣ ಸಂಸ್ಥೆಗಳ ಅಧೀನದಲ್ಲಿರುವ ಬಿ.ಪಿ.ಎಸ್.ಸಿ ಪದವಿ ಪೂರ್ವ ಕಾಲೇಜು, ಬಳ್ಳಾರಿ, 2024–25ನೇ ಸಾಲಿನ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಅತ್ಯುನ್ನತ ಸಾಧನೆಯೊಂದನ್ನು ದಾಖಲಿಸಿದ್ದು, ವಿದ್ಯಾರ್ಥಿಗಳ ಶ್ರಮ, ಅಧ್ಯಾಪಕರ ಮಾರ್ಗದರ್ಶನ ಹಾಗೂ ಸಂಸ್ಥೆಯ ದೃಢ ದೃಷ್ಟಿಕೋನದ ಫಲವಾಗಿ ಈ ಯಶಸ್ಸು ಸಾಧ್ಯವಾಗಿದೆ.



ವಾಣಿಜ್ಯ ವಿಭಾಗದ ವಿದ್ಯಾರ್ಥಿ ಯು. ವಿನೋದ್ ಕುಮಾರ 98.50% (591/600) ಅಂಕಗಳನ್ನು ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಪಡೆದು ಕೀರ್ತಿ ತಂದಿದ್ದರೆ, ವಿಜ್ಞಾನ ವಿಭಾಗದ ಕೋಟ್ರಾ ಮಧುರಿಮ 96% (576/600) ಅಂಕಗಳನ್ನು ಪಡೆದು ಪ್ರಭಾವಶಾಲಿ ಸಾಧನೆ ಮಾಡಿದ್ದಾರೆ. ಒಟ್ಟು ಶೇಕಡಾ 90% ಫಲಿತಾಂಶ – ಈ ಸಂಖ್ಯೆಗಳು ಕೇವಲ ಅಂಕಗಳಲ್ಲ, ಭವಿಷ್ಯದ ಮೇಲೆ ಕಟ್ಟುವ ಆತ್ಮವಿಶ್ವಾಸದ ಸಂಕೇತ. 67 ಮಂದಿ ಡಿಸ್ಟಿಂಕ್ಷನ್, 33 ವಿದ್ಯಾರ್ಥಿಗಳಿಂದ 100 ಅಂಕಗಳು – ಇದು ನಮ್ಮ ವಿದ್ಯಾರ್ಥಿಗಳ ಪ್ರತಿಭೆ ಮತ್ತು ಪ್ರಾಮಾಣಿಕ ಪ್ರಯತ್ನದ ಪ್ರತಿಫಲ. ಕಾಲೇಜಿನ ಅಧ್ಯಕ್ಷರು ಡಾ. ಯಶವಂತ ಭೂಪಾಲ್ ತಮ್ಮ ಸಂತೋಷ ವ್ಯಕ್ತಪಡಿಸುತ್ತಾ ಹೇಳಿದರು:

# ಶ್ರೀ ಪಾರ್ಶ್ವನಾಥ ಜೈನ್ ಸಂಘ ವತಿಯಿಂದ ಭಗವಾನ್ ಮಹಾವೀರ ಜಯಂತಿ ಆಚರಣೆ

**ಬಳ್ಳಾರಿ, ಏ.10–** ಶ್ರೀ ಪಾರ್ಶ್ವನಾಥ ಜೈನ್ ಸಂಘ, ಬಳ್ಳಾರಿಅವರಿಂದ ಭಗವಾನ್ ಮಹಾವೀರ ಜಯಂತಿ (ಜನ್ಮ ಕಲ್ಯಾಣಕ ಮಹೋತ್ಸವ) ಭಕ್ತಿ, ಶ್ರದ್ಧೆ ಮತ್ತು ಸಾಮಾಜಿಕ ಏಕತೆಯೊಂದಿಗೆ ಅದ್ದೂರಿಯಾಗಿ ಆಚರಿಸಲಾಯಿತು. ಈ ವರ್ಷದ ಆಚರಣೆ ವಿಶೇಷ ಮಹತ್ವವನ್ನು ಹೊಂದಿದೆ ಏಕೆಂದರೆ ಬಳ್ಳಾರಿಗೆ ಸೇರಿದ ಐತಿಹಾಸಿಕ ಶ್ರೀ ಪುರ್ಷಾದಾನೀಯ ಜೈನ್ ದೇವಸ್ಥಾನವು ಈ ವರ್ಷ ತನ್ನ 100ನೇ ವರ್ಷದ ಶ್ರೇಷ್ಠ ಸಾಧನೆಯನ್ನೂ ಸಂಭ್ರಮಿಸುತ್ತಿದೆ. ಇದು ದಕ್ಷಿಣ ಭಾರತದ ಮೂರನೇ ಅತ್ಯಂತ ಹಳೆಯ ಜೈನ ದೇವಸ್ಥಾನವಾಗಿ ಶತಮಾನೋತ್ಸವದಲ್ಲಿ ಪ್ರವೇಶಿಸಿದೆ ಎಂಬ ಹೆಮ್ಮೆಗೂ ಪಾತ್ರವಾಗಿದೆ.




ಯಾತ್ರೆಯಲ್ಲಿ ಸಮಾಜದ ಪುರುಷರು, ಮಹಿಳೆಯರು, ಯುವಕರು, ಮಕ್ಕಳು ಸೇರಿದಂತೆ ಅನೇಕರು ಪರಂಪರ ವೇಷಭೂಷೆಯಲ್ಲಿ ಪಾಲ್ಗೊಂಡು, ಭಗವಾನ್ ಮಹಾವೀರರ ಸಂದೇಶಗಳನ್ನು ಜನತೆಯವರೆಗೆ ತಲುಪಿಸಿದರು.

ನಂತರ ಶ್ರೀ ಪಾರ್ಶ್ವ ಜೈನ್ ಭವನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಈ ಕಾರ್ಯಕ್ರಮದಲ್ಲಿ ಮಕ್ಕಳಿಂದ ಹಿರಿಯರವರ ತನಕ ಭಗವಾನ್ ಮಹಾವೀರರ ಅಹಿಂಸೆ, ಸತ್ಯ, ಅಪರಿಗ್ರಹ, ಬ್ರಹ್ಮಚರ್ಯ ಮತ್ತು ಕಾರುಣ್ಯ ಎಂಬ ಮಾನವೀಯ ಮೌಲ್ಯಗಳನ್ನು ಸಾರಿದರು.

ಕಾರ್ಯಕ್ರಮದ ವೈಶಿಷ್ಟ್ಯವೆಂದರೆ ಸಾಧ್ವಿಜೀ ಭಗವಂತರ ಪಾವನ ಉಪಸ್ಥಿತಿಯು, ಅವರ ಧರ್ಮೋಪದೇಶದಿಂದ ಶ್ರದ್ಧಾಳುಗಳಿಗೆ ಆತ್ಮಶುದ್ಧಿ ಮತ್ತು ಧರ್ಮಪಥದ ಪ್ರೇರಣೆ ಸಿಕ್ಕಿತು. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಬಳ್ಳಾರಿ ನಗರ ನಿಗಮದ ಮೇಯರ್ ಮುಲ್ಲಂಗಿ ನಂದೀಶ್ ಪಾಲ್ಗೊಂಡರು. ಜೊತೆಗೆ ಜೈನ್ ಸಂಘದ ಅಧ್ಯಕ್ಷರಾದ ಶ್ರೀ ಉತ್ಸವಲಾಲ್ ಜೀ ಮತ್ತು ಉಪಾಧ್ಯಕ್ಷರಾದ ಸುರಜ್‌ಮಲ್ ಜೀ ಉಪಸ್ಥಿತರಿದ್ದರು. ಸಾಮಾಜಿಕವಾಗಿ ಸಮಾಜದ ನೂರಾರು ಜನರು ಕಾರ್ಯಕ್ರಮದಲ್ಲಿ ಭಕ್ತಿಯಿಂದ ಭಾಗವಹಿಸಿದರು.

ಎಲ್ಲಾ ಜನರೂ ಭಗವಾನ್ ಮಹಾವೀರರ ಸಂದೇಶಗಳನ್ನು ಪಾಲನೆ ಮಾಡುವ ಸಂಕಲ್ಪ ಮಾಡಿ, ಈ ದಿನವನ್ನು ಕೇವಲ ಧಾರ್ಮಿಕ ಆಚರಣೆಯಾಗಿ ಮಾತ್ರವಲ್ಲ, ನೈತಿಕತೆ, ಶ್ರದ್ಧೆ ಮತ್ತು ಮೌಲ್ಯಗಳ ಪಾಠದ ದಿನವನ್ನಾಗಿ ಮಾಡಿದರು. ಈ ಮಹೋತ್ಸವವು ಶ್ರೀ ಪುರ್ಷಾದಾನೀಯ ಜೈನ್ ದೇವಸ್ಥಾನದ ಶತಮಾನೋತ್ಸವದ ಗೌರವ ಮತ್ತು ಭಗವಾನ್ ಮಹಾವೀರರ ಶಾಶ್ವತ ಸಂದೇಶಗಳ ಪ್ರತೀಕವಾಗಿ ಇಡೀ ಸಮಾಜಕ್ಕೆ ಸ್ಪೂರ್ತಿದಾಯಕವಾಗಿ ಉಳಿಯಿತು.

# ಜಿಲ್ಲಾಮಟ್ಟದ ಜನಪದ ಸಡಗರ, ಭಾಷೆಯಿಲ್ಲದಿದ್ದರೆ ಕಾಡು ಪ್ರಾಣಿಗಳಂತೆ ಬಾಳಬೇಕಿತ್ತು: ಸುರೇಶ ಚನ್ನಶೆಟ್ಟಿ

**ಬೀದರ್, ಏ.10–** ಜನಪದ ಎಂಬುದು ಭಾರತೀಯ ಭಷೆಯ ಸಂಸ್ಕೃತಿಯಾಗಿದೆ. ಭಾಷೆ ಇಲ್ಲದಿದ್ದರೆ ನಾವೆಲ್ಲ ಕಾಡು ಪ್ರಾಣಿಗಳಂತೆ ಬಾಳಬೇಕಿತ್ತು. ಭಾಷೆ ಎಂಬ ಸಂಸ್ಕೃತಿಗೆ ಮುನ್ನುಡಿ ಬರೆದದ್ದೇ ಭವ್ಯ ಪರಂಪರೆಯ ಜನಪದ ಎಂದು ಜಿಲ್ಲಾ ಕಸಾಪ ಅಧ್ಯಕ್ಷ ಸುರೇಶ ಚನ್ನಶೆಟ್ಟಿ ಹೇಳಿದರು.



ಇಂದಿನ ಯುವಕರು ಮತ್ತು ಯುವತಿಯರು ಸಾಮಾಜಿಕ ಜಾಲತಾಣಗಳ ಮೂಲಕ ನಮ್ಮ ಭವ್ಯ ಭಾತರದ ದೇಶಿ ಸಂಸ್ಕೃತಿಯನ್ನು ಮರೆತು, ಪಾಶ್ಚಿಮಾತ್ಯ ಸಂಸ್ಕೃತಿಯ ಕಡೆಗೆ ವಾಲುತ್ತಿರುವುದು ವಿಷಾದಕರ ಸಂಗತಿಯಾಗಿದೆ ಎಂದು ತೀವ್ರ ಕಳವಳ ವ್ಯಕ್ತಪಡಿಸಿದರು.

ನಗರದ ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಆವರಣದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹರ್ಷಿ ವಾಲ್ಮೀಕಿ ಸೋಶಿಯಲ್ ಐಂಡ್ ಕಲ್ಚರಲ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ 2020–21ನೇ ಸಾಲಿನ ಸಂಘ ಸಂಸ್ಥೆಗಳ ಗಿರಿಜನ ಉಪಯೋಜನೆಯಡಿ ಏರ್ಪಡಿಸಿದ ಜಿಲ್ಲಾ ಮಟ್ಟದ ಜನಪದ ಸಡಗರ ಹಾಗೂ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ, ಪಾಶ್ಚಿಮಾತ್ಯ ಸಂಸ್ಕೃತಿಯಿಂದ ನಮ್ಮ ಜಾನಪದ ಸಂಸ್ಕೃತಿ ಕಡಿಮೆಯಾಗುತ್ತಿದೆ. ಭವ್ಯ ಭಾರತ ಅನೇಕ ಭಾಷೆಗಳ ದೇಶ, ಭಾಷೆಗಳೇ ಇಲ್ಲದೇ ಇದ್ದರೇ ನಾವು ಮಾನವರು ಕಾಡು ಪ್ರಾಣಿಗಳಾಗಿ ಬಾಳುತ್ತಿದ್ದೇವು ಎಂದ ಅವರು ಜಾನಪದ ಕಲಾವಿದರು ಜಾನಪದದ ಮೂಲಕ ನಮ್ಮ ಪ್ರಾಚೀನ ಸಂಸ್ಕೃತಿ ಪರಂಪರೆಗಳನ್ನು ಉಳಿಸಿಕೊಂಡು ಬಂದಿರುವರು. ಕನ್ನಡ ಭಾಷೆಗೆ ವಚನ ಸಾಹಿತ್ಯ, ದಾಸ ಸಾಹಿತ್ಯ ಸೇರಿದಂತೆ ಅನೇಕ ಸಾಹಿತ್ಯಗಳು ಕನ್ನಡಕ್ಕೆ ಶ್ರೀಮಂತ ಭಾಷೆಯನ್ನಾಗಿ ಮಾಡಿವೆ ಎಂದು ಕೊಂಡಾಡಿದರು.

ಕರ್ನಾಟಕ ಸರಕಾರಿ ನೌಕರರ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆ ಶ್ರೀಮತಿ ಪಾರ್ವತಿ ಸೋನಾರೆ ಅವರು ಮಾತನಾಡಿ, ಈ ಹಿಂದಿನ ಮಹಿಳೆಯರು ತಾವು ತೊಡುವ ಉಡುಪುಗಳು, ಆಭರಣಗಳು, ವೇಷ–ಭೂಷಣಗಳು ನಮ್ಮ ಜಾನಪದ ಸಂಸ್ಕೃತಿಯನ್ನು ಬಿಂಬಿಸುತ್ತಿದ್ದವು. ಆದರೆ ಇಂದಿನ ಯಾಂತ್ರಿಕ ಜೀವನದಲ್ಲಿ ಅವುಗಳೆಲ್ಲ ಬದಲಾವಣೆಗೊಂಡಿವೆ. ಜನಪದರು ಆಯಾ ಸ್ಥಳ ಅಲ್ಲಿಯ ನೆಲ, ಜಲ, ಭಾಷೆ, ಪರಿಸರ ಅಲ್ಲಿಯ ಜನ ಜೀವನ ಶೈಲಿ ವೃತ್ತಾಂತಗಳನ್ನು ತಮ್ಮ ಹಾಡುಗಳ ಮೂಲಕ ಒಗಟುಗಳ ಮೂಲಕ ವ್ಯಕ್ತಪಡಿಸುತ್ತಿದ್ದರು ಎಂದರು.

ಸರಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಚಾರ್ಯ ಪ್ರೊ. ಮನೋಜಕುಮಾರ ಕುಲಕರ್ಣಿ ಅವರು, ಆಧುನಿಕ ಬದಲಾವಣೆಯ ಭರಾಟೆಯಲ್ಲಿ ನಾವು ಜೀವನವನ್ನು ಸಾಗಿಸುತ್ತಿದ್ದೇವೆ. ಒತ್ತಡದ ಬದುಕಿನಿಂದ ಶಾಂತಿ ನೆಮ್ಮದಿ ಕಳೆದುಕೊಂಡಿದ್ದೇವೆ. ಅವುಗಳನ್ನು ಪಡೆಯಲು ಜಾನಪದ ಹಾಡು ಆಲಿಸಬೇಕು. ಜಾನ ಪದ ಆಟಗಳನ್ನು ವಿಕ್ಷಿಸಬೇಕೆಂದ ಅವರು ಮಹಿಳೆಯರಿಂದಲೇ ಜಾನಪದ ಕಲೆ ಉಳಿಸಲು ಸಾಧ್ಯ ಎಂದರು.

ಶ್ರೀಮತಿ ಅಂಬಿಕಾ ತಂಡ ಸೇರಿದಂತೆ ವಿವಿಧ ತಂಡದಿಂದ ಜಾನಪದ ಸಾಂಸ್ಕೃತಿಕ ಕಾರ್ಯಕ್ರಮಗಳು ಪ್ರೆಕ್ಷಕರ ಮನಗಳನ್ನು ರಂಜಿಸಿದವು. ಸಮಾರಂಭದಲ್ಲಿ ಇತ್ತಿಚೆಗೆ ಕರ್ನಾಟಕ ಜಾನಪದ ಅಕಾಡೇಮಿಯ 2024ನೇ ಸಾಲಿನ ವಾರ್ಷಿಕ ಪ್ರಶಸ್ತಿ ಪುರಸ್ಕೃತರಾದ ಮಾರುತಿ ಕೋಳಿ ಚಾಂಬೋಳ, ಕರ್ನಾಟಕ ಸರಕಾರಿ ನೌಕರರ ಮಹಿಳಾ ಘಟಕದ ಬೀದರ ಜಿಲ್ಲಾಧ್ಯಕ್ಷೆ ಶ್ರೀಮತಿ ಬಿ.ಜೆ. ಪಾರ್ವತಿ ಸೋನಾರೆ, ಮತ್ತು ಕರ್ನಾಟಕ ಬಂಜಾರಾ ಭಾಷೆ ಮತ್ತು ಸಂಸ್ಕೃತಿ ಅಕಾಡೇಮಿಯ ಪ್ರಶಸ್ತಿ ಪುರಸ್ಕೃತರಾದ ಶ್ರೀಮತಿ ಆಶಾ ರಾಠೋಡ್ ಅವರುಗಳಿಗೆ ಶಾಲು ಹೊದಿಸಿ, ನೆನಪಿನ ಕಾಣಿಕೆ ನೀಡಿ, ವಿಶೇಷವಾಗಿ ಸನ್ಮಾನಿಸಿ, ಗೌರವಿಸಲಾಯಿತು.

# ಪ್ರೇಮ ವಿವಾಹಕ್ಕೆ ಸಂಬಂಧಿಸಿ ಐವರನ್ನು ಕೊಂದ ಮೂವರಿಗೆ ಗಲ್ಲು, 9 ಮಂದಿಗೆ ಜೀವಾವಧಿ ಶಿಕ್ಷೆ

**ರಾಯಚೂರು, ಏ. 10:** ಜಿಲ್ಲೆಯ ಸಿಂಧನೂರಲ್ಲಿ ನಡೆದ ಐವರ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಕೊಲೆಪಾತಕಿಗಳಿಗೆ ಜಿಲ್ಲಾ ಸತ್ರ ನ್ಯಾಯಾಲಯ ಮೂವರಿಗೆ ಗಲ್ಲು ಶಿಕ್ಷೆ, ಇನ್ನೂ ಒಂಭತ್ತು ಮಂದಿಗೆ ಜೀವಾವಧಿ ಶಿಕ್ಷೆ ವಿಧಿಸಿ ಆದೇಶಿಸಿದೆ.



ಸಿಂಧನೂರಿನ ಸುಕಾಲಪೇಟೆಯಲ್ಲಿ 2020ರಲ್ಲಿ ನಡೆದಿದ್ದ ಐವರ ಕೊಲೆ ಪ್ರಕರಣ ರಾಯಚೂರು ಜಿಲ್ಲೆಯನ್ನೇ ಬೆಚ್ಚಿ ಬೀಳಿಸಿತ್ತು. ಇದೀಗ ಈ ಪ್ರಕರಣ ಸಂಬಂಧ ಕೋರ್ಟ್ ತೀರ್ಪು ನೀಡಿದ್ದು, ಐವರ ಕೊಲೆ ಹಾಗೂ ಇಬ್ಬರ ಕೊಲೆ ಯತ್ನ ಪ್ರಕರಣದಲ್ಲಿ ಮೂವರು ಆರೋಪಿಗಳಿಗೆ ಮರಣದಂಡನೆ ಹಾಗೂ 9 ಆರೋಪಿಗಳಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿದೆ.

# ಸುಂಕ ಪ್ರತಿಕ್ರಮಗಳ ಜಾರಿಗೆ 90 ದಿನ ವಿರಾನ: ಟ್ರಂಪ್ ಘೋಷಣೆ

**ಬ್ರುಸೆಲ್ಸ್, ಏ.10:** ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಸುಂಕಗಳ ವಿರುದ್ಧ ಯುರೋಪಿಯನ್ ಒಕ್ಕೂಟವು ತನ್ನ ಮೊದಲ ಪ್ರತಿಕ್ರಮಗಳನ್ನು 90 ದಿನಗಳವರೆಗೆ ತಡೆಹಿಡಿಯಲಿದೆ ಎಂದು ಯುರೋಪಿಯನ್ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಹೇಳಿದ್ದಾರೆ.

ಉಕ್ಕು ಮತ್ತು ಅಲ್ಯೂಮಿನಿಯಂ ಮೇಲಿನ ಟ್ರಂಪ್ ಅವರ 25% ಸುಂಕಗಳಿಗೆ ಪ್ರತಿಕ್ರಿಯೆಯಾಗಿ ಮುಂದಿನ ಮಂಗಳವಾರದಿಂದ ಅಮೆರಿಕ ಆಮದುಗಳ ಮೇಲೆ ಪ್ರತಿ-ಸುಂಕಗಳನ್ನು ಪ್ರಾರಂಭಿಸಬೇಕಿತ್ತು. "ನಾವು ಮಾತುಕತೆಗಳಿಗೆ ಅವಕಾಶ ನೀಡಲು ಬಯಸುತ್ತೇವೆ" ಎಂದು ವಾನ್ ಡೆರ್ ಲೇಯೆನ್ Xನಲ್ಲಿ ಹೇಳಿದರು. "ನಮ್ಮ ಸದಸ್ಯ ರಾಷ್ಟ್ರಗಳಿಂದ ಬಲವಾದ ಬೆಂಬಲವನ್ನು ಪಡೆದ EU ಪ್ರತಿಕ್ರಮಗಳ ಅಳವಡಿಕೆಯನ್ನು ಅಂತಿಮಗೊಳಿಸುವಾಗ, ನಾವು ಅವುಗಳನ್ನು 90 ದಿನಗಳವರೆಗೆ ತಡೆಹಿಡಿಯುತ್ತೇವೆ.

ಟ್ರಂಪ್ ಹೆಚ್ಚಿನ ವ್ಯಾಪಾರ ಪಾಲುದಾರರಿಗೆ ಪರಸ್ಪರ ಸುಂಕಗಳ ಮೇಲೆ ತಕ್ಷಣದ 90 ದಿನಗಳ ವಿರಾಮವನ್ನು ಘೋಷಿಸಿದ ನಂತರ ಗುರುವಾರ ಯುರೋಪಿಯನ್ ಷೇರುಗಳು ಏರಿಕೆಯಾಗಿ, ದಿನಗಳ ಕಾಲ ಮಾರುಕಟ್ಟೆ ಸೋಲಿನ ನಂತರ ಬೃಹತ್ ಪರಿಹಾರ ರ್ಯಾಲಿಯನ್ನು ಪ್ರೇರೇಪಿಸಿತು ಎಂದು ಸುದ್ದಿ ವರದಿಗಳು ತಿಳಿಸಿವೆ. ಆದಾಗ್ಯೂ, EU ಮುಖ್ಯಸ್ಥರ ವಿಶಾಲ ಸಂದೇಶವು US-ಕೇಂದ್ರಿತ



ವ್ಯಾಪಾರದಿಂದ EU ನ ಕಾರ್ಯತಂತ್ರದ ತಿರುವು ಮುಂದುವರಿಯುತ್ತದೆ ಎಂದು ಸೂಚಿಸಿತು. ಅಮೆರಿಕವು ಅನ್ಯಾಯದ ವ್ಯಾಪಾರ ಪದ್ಧತಿಗಳೆಂದು ವಿವರಿಸಿರುವ ಬಗ್ಗೆ ವ್ಯಾಪಾರ ಪಾಲುದಾರರೊಂದಿಗೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ ಸುಂಕಗಳನ್ನು ವಿರಾಮಗೊಳಿಸುವ ಅಧ್ಯಕ್ಷ ಟ್ರಂಪ್ ಅವರ ನಿರ್ಧಾರ ಬಂದಿದೆ. ಅಸ್ಥಿರ ಮಾರುಕಟ್ಟೆಗಳನ್ನು ಶಾಂತಗೊಳಿಸುವ ಮತ್ತು ಪ್ರಮುಖ ಆರ್ಥಿಕ ಮಿತ್ರರೊಂದಿಗೆ ಮರು ಮಾತುಕತೆಗಳನ್ನು ಪ್ರಾರಂಭಿಸುವ ಗುರಿಯನ್ನು ಈ ಕ್ರಮ ಹೊಂದಿದೆ. 10 ಪ್ರತಿಶತ ಬೇಸ್ಲೈನ್ ಮತ್ತು 10 ಪ್ರತಿಶತ ಪ್ರತೀಕಾರದ ಪದರವನ್ನು ಒಳಗೊಂಡಿರುವ ಟ್ರಂಪ್ ಅವರ ಪರಸ್ಪರ ಸುಂಕಗಳನ್ನು EU ಮತ್ತು ಡಜನ್‌ಗಟ್ಟಲೆ ಇತರ ವ್ಯಾಪಾರ ಪಾಲುದಾರರ ಮೇಲೆ ವಿಧಿಸಲಾಯಿತು, ಇದು ಷೇರು ಮಾರುಕಟ್ಟೆ ನಷ್ಟ ಮತ್ತು ವಿಶಾಲ ಆರ್ಥಿಕ ಹಿಂಜರಿತದ ಭಯವನ್ನು ಹೆಚ್ಚಿಸಿತು. ಬುಧವಾರ, ಶ್ವೇತಭವನವು ಚೀನಾವನ್ನು ಹೊರತುಪಡಿಸಿ ಈ ಸುಂಕಗಳನ್ನು 90 ದಿನಗಳವರೆಗೆ ವಿರಾಮಗೊಳಿಸಿತು, ಹೊಸ ನಿಯಮಗಳನ್ನು ರೂಪಿಸಲು ಆಡಳಿತವನ್ನು ಸಂಪರ್ಕಿಸಿದ ಪಾಲುದಾರರೊಂದಿಗೆ ಮಾತುಕತೆಗಳನ್ನು ಸುಗಮಗೊಳಿಸಲು. ಯುರೋಪಿಯನ್ ಕಮಿಷನ್ 25 ಪ್ರತಿಶತ ಉಕ್ಕು ಮತ್ತು ಅಲ್ಯೂಮಿನಿಯಂ ಸುಂಕಗಳ ಕುರಿತು ಗಖ ವಿರುದ್ಧ ಪ್ರತೀಕಾರದ ಕ್ರಮಗಳನ್ನು ಅಧಿಕೃತಗೊಳಿಸಿದ ಕೆಲವೇ ಗಂಟೆಗಳ ನಂತರ ಈ ವಿರಾಮ ಬಂದಿತು, ಏಪ್ರಿಲ್ ಮಧ್ಯದಿಂದ ಹೊಸ ಸುಂಕಗಳೊಂದಿಗೆ ವ್ಯಾಪಕ ಶ್ರೇಣಿಯ ಗಖ ರಫ್ತುಗಳನ್ನು ಹೊಡೆಯಲು ಯೋಜಿಸಿದೆ. ಏತನ್ಮಧ್ಯೆ, US ಸರಕುಗಳ ಆಮದಿನ ಮೇಲೆ ಬೀಜಿಂಗ್ನ 84% ತೆರಿಗೆ ಜಾರಿಗೆ ಬಂದಿತು - ಆದರೂ ಟ್ರಂಪ್ ಮಹಾಶಕ್ತಿಗಳ ನಡುವೆ "ಉತ್ತಮ ಒಪ್ಪಂದ" ಮಾಡಿಕೊಳ್ಳಲಾಗುವುದು ಎಂದು ಒತ್ತಾಯಿಸಿದರು. ಅಮೆರಿಕ ಅಧ್ಯಕ್ಷರು ಬೀಜಿಂಗ್ನಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲಿನ ಸುಂಕವನ್ನು ಶೇ.125 ಕ್ಕೆ ಏರಿಸಿದ ಕೆಲವೇ ಗಂಟೆಗಳ ನಂತರ ಚೀನಾ ಈ ಕ್ರಮ ಕೈಗೊಂಡಿದೆ. ಆದರೆ, ಮಾರುಕಟ್ಟೆಗಳ ಪ್ರಕ್ಷುಬ್ಧತೆಯನ್ನು ಲೆಕ್ಕಿಸದೆ, ಇತರ ಡಜನ್‌ಗಟ್ಟಲೆ ರಾಷ್ಟ್ರಗಳ ವಿರುದ್ಧ 90 ದಿನಗಳ ಕಾಲ ಹೆಚ್ಚಿನ ದಂಡನಾತ್ಮಕ ತೆರಿಗೆಗಳನ್ನು ವಿರಾಮಗೊಳಿಸಲಾಗಿದೆ.

# ಸ್ಲೋವಾಕಿಯಾ ವಿ.ವಿ.ಯಿಂದ ರಾಷ್ಟ್ರಪತಿ ದ್ರೌಪದಿ ಮುರ್ಮುಗೆ ಡಾಕ್ಟರೇಟ್ ಪ್ರದಾನ




**ಸ್ಲೋವಾಕಿಯಾ,ಏ.10:** ಸ್ಲೋವಾಕಿಯಾ ಭೇಟಿಯಲ್ಲಿರುವ ರಾಷ್ಟ್ರಪತಿ ದೌಪದಿ ಮುರ್ಮು ಅವರಿಗೆ 'ಕಾನ್ಸ್ಟಂಟೈನ್ ದಿ ಫಿಲಾಸಫರ್ ವಿಶ್ವವಿದ್ಯಾಲಯ' ಗೌರವ ಡಾಕ್ಟರೇಟ್ ನೀಡಿ ಪುರಸ್ಕರಿಸಿದೆ.

ನಾಲ್ಕು ದಿನಗಳ ಸ್ಲೋವಾಕಿಯಾ ಮತ್ತು ಪೋರ್ಚುಗಲ್ ಭೇಟಿಗೆ ತೆರಳಿರುವ ಮುರ್ಮು ಅವರು ವಿಶ್ವವಿದ್ಯಾಲಯದ ಕ್ಯಾಂಪಸ್‌ನಲ್ಲಿ ಗೌರವವನ್ನು ಸ್ವೀಕರಿಸಿದರು. ಸಾರ್ವಜನಿಕ ಸೇವೆಯಲ್ಲಿ ಗಮನಾರ್ಹ ಪಾತ್ರ ವಹಿಸಿದ್ದನ್ನು ಪರಿಗಣಿಸಿ ವಿಶ್ವವಿದ್ಯಾಲಯವು ಮುರ್ಮು ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಿ ಗೌರವಿಸಿದೆ. ಶಿಕ್ಷಣ, ಮಹಿಳಾ ಸಬಲೀಕರಣ, ಸಾಂಸ್ಕೃತಿಕ ಮತ್ತು ಭಾಷಾ ವೈವಿಧ್ಯತೆಯ ಸಂರಕ್ಷಣೆ ಮತ್ತು ಉತ್ತೇಜನಕ್ಕೆ ನೀಡಿದ ಕೊಡುಗೆಗಾಗಿ ಅವರನ್ನು ಗೌರವಿಸಲಾಗಿದೆ ಎಂದು ವಿಶ್ವವಿದ್ಯಾಲಯ ಪ್ರಕಟಣೆಯಲ್ಲಿ ಹೇಳಿದೆ. ಗೌರವ ಸ್ವೀಕರಿಸಿ ಮಾತನಾಡಿದ ಮುರ್ಮು, 'ಭಾರತದ 140 ಕೋಟಿ ಜನರ ಪರವಾಗಿ ಈ ಗೌರವವನ್ನು ಸ್ವೀಕರಿಸುತ್ತಿದ್ದೇನೆ' ಎಂದು ಹೇಳಿದ್ದಾರೆ.

# ದ್ವಿಪಕ್ಷೀಯ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಮುಂದಾದ ಭಾರತ-ಯುನೈಟೆಡ್ ಕಿಂಗ್ಡಮ್



**ಲಂಡನ್,ಏ.10:** ಟ್ರಂಪ್ ಅವರ ಸುಂಕ ಯುದ್ಧದ ಪರಿಣಾಮವಾಗಿ ವಿಶ್ವದಾದ್ಯಂತ ದೇಶಗಳು ತಮ್ಮ ವ್ಯಾಪಾರ ತಂತ್ರಗಳನ್ನು ಮರುಪರಿಶೀಲಿಸುತ್ತಿರುವ ಬೆನ್ನಲ್ಲೇ, ಭಾರತ ಮತ್ತು ಯುನೈಟೆಡ್ ಕಿಂಗ್ಡಮ್ ದೀರ್ಘಕಾಲದಿಂದ ನಿಧಾನಗತಿಯಲ್ಲಿ ಸಾಗುತ್ತಿದ್ದ ಮುಕ್ತ ವ್ಯಾಪಾರ ಒಪ್ಪಂದ (FTA) ಮಾತುಕತೆಗಳಲ್ಲಿ ಮತ್ತೊಮ್ಮೆ ಗಂಭೀರತೆ ತೋರಿಸಿವೆ. ಇತ್ತೀಚೆಗೆ ಲಂಡನ್‌ನಲ್ಲಿ ನಡೆದ '13ನೇ ಆರ್ಥಿಕ ಮತ್ತು ಹಣಕಾಸು ಸಂವಾದ'ದಲ್ಲಿ ಭಾರತದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಮತ್ತು ಯುಕೆಯ ಹಣಕಾಸು ಕುಲಪತಿ ರಾಚೆಲ್ ರೀಲ್ಸ್ ಸಹ-ಅಧ್ಯಕ್ಷತೆ ವಹಿಸಿ, ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಮತ್ತು ಈಖಿಂ ಹಾಗೂ ದ್ವಿಪಕ್ಷೀಯ ಹೂಡಿಕೆ ಒಪ್ಪಂದದ ಮಾತುಕತೆಗಳನ್ನು ಮುಂದುವರಿಸುವ ಬದ್ಧತೆಯನ್ನು ವ್ಯಕ್ತಪಡಿಸಿದರು. ದ್ವಿಪಕ್ಷೀಯ ಮಾತುಕತೆ ನಂತರ ಹೇಳಿಕೆ ಬಿಡುಗಡೆ ಮಾಡಿರುವ ಜಂಟಿ ಹೇಳಿಕೆಯಲ್ಲಿ ಯುಕೆಯ ಪ್ರತಿನಿಧಿಗಳು ತಮ್ಮ ಮುಂಬರುವ ಕೈಗಾರಿಕಾ ಕಾರ್ಯತಂತ್ರವನ್ನು ಹಂಚಿಕೊಳ್ಳುವ ಉತ್ಸಾಹವನ್ನು ವ್ಯಕ್ತಪಡಿಸಿದರು. ಈ ಕಾರ್ಯತಂತ್ರದಲ್ಲಿ ಮುಂದುವರಿದ ಉತ್ಪಾದನೆ ಮತ್ತು ಜೀವ ವಿಜ್ಞಾನಗಳಂತಹ ಬೆಳವಣಿಗೆಯ ಆದ್ಯತಾ ಕ್ಷೇತ್ರಗಳು ಒಳಗೊಂಡಿದ್ದು, ಇಲ್ಲಿ ಬ್ರಿಟಿಷ್ ಪರಿಣತಿ ಮತ್ತು ಸಂಶೋಧನಾ ಸಾಮರ್ಥ್ಯಗಳು ಭಾರತವನ್ನು ಜಾಗತಿಕ ಉತ್ಪಾದನಾ ಕೇಂದ್ರವಾಗಿ ರೂಪಿಸಲು ಸಹಕಾರಿಯಾಗಲಿವೆ. ಶುದ್ಧ ಇಂಧನ, ವೃತ್ತಿಪರ ಮತ್ತು ವ್ಯವಹಾರ ಸೇವೆಗಳು, ಹಣಕಾಸು ಸೇವೆಗಳು, ಸೃಜನಶೀಲ ಕೈಗಾರಿಕೆಗಳು ಹಾಗೂ ರಕ್ಷಣಾ ಕ್ಷೇತ್ರಗಳಲ್ಲಿ ಉದ್ಯೋಗ ಸೃಷ್ಟಿ ಮತ್ತು ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವ ಗುರಿಯನ್ನು ಈ ಪಾಲುದಾರಿಕೆ ಹೊಂದಿದೆ. ಕೈಗಾರಿಕಾ ಸಂಬಂಧಗಳನ್ನು ಗಟ್ಟಿಗೊಳಿಸಲು ಮತ್ತು ಪೂರೈಕೆ ಸರಪಳಿಯನ್ನು ಬೆಂಬಲಿಸಲು 'ಭಾರತ ಯುಕೆ ರಕ್ಷಣಾ ಕೈಗಾರಿಕಾ ಮಾರ್ಗಸೂಚಿ'ಗೆ ಸಹಿ ಹಾಕುವ ಪ್ರಸ್ತಾವವನ್ನು ಎರಡೂ ದೇಶಗಳು ಪರಿಗಣಿಸುತ್ತಿವೆ. ಇತ್ತೀಚಿನ ವರ್ಷಗಳಲ್ಲಿ ಹಣಕಾಸು ಸೇವೆಗಳ ವ್ಯಾಪಾರದಲ್ಲಿ ಗಮನಾರ್ಹ ಬೆಳವಣಿಗೆ ಕಂಡುಬಂದಿದ್ದು, ಇದನ್ನು ಮತ್ತು ವಿಸ್ತರಿಸಲು ಒಟ್ಟಾಗಿ ಕಾರ್ಯನಿರ್ವಹಿಸುವ ಇರಾದೆಯನ್ನು ಉಭಯ ದೇಶಗಳು ತೋರಿವೆ. ಈಖಿಂ ಮತ್ತು ಇತರ ಒಪ್ಪಂದಗಳು ಯಶಸ್ವಿಯಾದರೆ, ಎರಡೂ ದೇಶಗಳ ಆರ್ಥಿಕತೆಗೆ ಗಣನೀಯ ಉತ್ತೇಜನ ಸಿಗಲಿದೆ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

# ಮಿಲಿಟರಿ ಕ್ರಮ ಅನಿವಾರ್ಯ: ಟ್ರಂಪ್



**ವಾಷಿಂಗ್ಟನ್,ಏ.10:** ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ಇರಾನ್ ವಿರುದ್ಧ ಮಿಲಿಟರಿ ಬಲವನ್ನು ಬಳಸುವುದಾಗಿ ಬೆದರಿಕೆ ಹಾಕಿದರು. ಟೆಹ್ರಾನ್ ವಿರುದ್ಧ ಇಸ್ರೇಲ್ ಯಾವುದೇ ಮಿಲಿಟರಿ ಕ್ರಮದಲ್ಲಿ ಭಾಗಿಯಾಗಲಿದೆ ಎಂದು ಅಮೆರಿಕ ಅಧ್ಯಕ್ಷರು ಸ್ಪಷ್ಟಪಡಿಸಿದ್ದಾರೆ.

ಈ ಮಿಲಿಟರಿ ಕ್ರಮದಲ್ಲಿ ಟೆಲ್ ಅವಿವ್ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಹೇಳಿದರು. ಪರಮಾಣು ಕಾರ್ಯಕ್ರಮದ ಕುರಿತು ಶನಿವಾರ ಒಮಾನ್‌ನಲ್ಲಿ ಮಾತುಕತೆ ನಡೆಸಲು ಅಮೆರಿಕ ಮತ್ತು ಇರಾನ್ ಒಪ್ಪಿಕೊಂಡ ಒಂದು ದಿನದ ನಂತರ ಇತ್ತೀಚಿನ ಬೆದರಿಕೆ ಬಂದಿದೆ. ಯಾವುದೇ ಸಂದರ್ಭದಲ್ಲೂ ಇರಾನ್ ಪರಮಾಣು ರಾಷ್ಟ್ರವಾಗಲು ಬಿಡುವುದಿಲ್ಲ ಎಂದು ಟ್ರಂಪ್ ಹೇಳಿದರು. ಅದು ತನ್ನ ಪರಮಾಣು ಕಾರ್ಯಕ್ರಮವನ್ನು ನಿಲ್ಲಿಸಲು ನಿರಾಕರಿಸಿದರೆ, ನಂತರ ಮಿಲಿಟರಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

# ಭ್ರಷ್ಟಾಚಾರ ಪ್ರಕರಣ: ಮಾಜಿ ಪ್ರಧಾನಿ ಹಸೀನಾ ಪುತ್ರಿ ಸೇರಿ 18 ಜನರ ವಿರುದ್ಧ ಬಂಧನ ವಾರಂಟ್

**ಢಾಕಾ,ಏ.10:** ವಸತಿ ನಿವೇಶನವನ್ನು ಅಕ್ರಮವಾಗಿ ಖರೀದಿಸಿದ ಭ್ರಷ್ಟಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಂಗ್ಲಾದೇಶದ ನ್ಯಾಯಾಲಯವು ಗುರುವಾರ ಮಾಜಿ ಪ್ರಧಾನಿ ಶೇಖ್ ಹಸೀನಾ, ಅವರ ಪುತ್ರಿ ಸೈಮಾ ವಾಜೆದ್ ಪುಟುಲ್ ಮತ್ತು ಇತರ 17 ಜನರ ವಿರುದ್ಧ ಹೊಸ ಬಂಧನ ವಾರಂಟ್ ಹೊರಡಿಸಿದೆ.



ಆರೋಪಿಗಳು ನ್ಯಾಯಾಲಯಕ್ಕೆ ಹಾಜರಾಗಲು ವಿಫಲವಾದ ನಂತರ ಬಂಧನ ವಾರಂಟ್ ಹೊರಡಿಸಲಾಗಿದ್ದು, ನ್ಯಾಯಾಲಯವು ಭ್ರಷ್ಟಾಚಾರ ನಿಗ್ರಹ ಆಯೋಗ(೦ಅಅ) ಸಲ್ಲಿಸಿದ ಆರೋಪ ಪಟ್ಟಿಯನ್ನು ಸ್ವೀಕರಿಸಿದೆ. ಢಾಕಾ ಮೆಟ್ರೋಪಾಲಿಟನ್ ಹಿರಿಯ ವಿಶೇಷ ನ್ಯಾಯಾಧೀಶ ಜಾಕಿರ್ ಹೊಸೈನ್ ಗಾಲಿಬ್ ಅವರು ೦ಅಅ ಯ ಆರೋಪ ಪಟ್ಟಿಯನ್ನು ಸ್ವೀಕರಿಸಿದ್ದು, ತಲೆಮರೆಸಿಕೊಂಡಿರುವ ವ್ಯಕ್ತಿಗಳನ್ನು ಬಂಧಿಸಲು ಆದೇಶಿಸಿದರು. ಢಾಕಾದ ಹೊರವಲಯದಲ್ಲಿರುವ ಪುರ್ಬಾಚಲ್ ನ್ಯೂ ಸಿಟಿ ಹೌಸಿಂಗ್ ಪ್ರಾಜೆಕ್ಟ್‌ನಲ್ಲಿ ವಸತಿ ನಿವೇಶನವನ್ನು ಪಡೆಯಲು ಹಸೀನಾ ಮತ್ತು ಅವರ ಮಗಳು ವಂಚನೆ ಮಾಡಿದ್ದಾರೆ ಎಂಬ ಆರೋಪಗಳ ಸುತ್ತ ಈ ಪ್ರಕರಣ ಸುತ್ತುತ್ತದೆ

ಆರೋಪಪಟ್ಟಿಯ ಪ್ರಕಾರ, ಪುಟುಲ್ ತನ್ನ ತಾಯಿ, ಆಗಿನ ಪ್ರಧಾನಿ ಹಸೀನಾ ಅವರ ಮೇಲೆ ಅನಗತ್ಯ ಪ್ರಭಾವ ಬೀರಿ, ಸರ್ಕಾರಿ ಭೂಮಿ ಹಂಚಿಕೆ ನಿಯಂತ್ರಿಸುವ ಕಾನೂನು ವಿಧಾನಗಳನ್ನು ಉಲ್ಲಂಘಿಸಿ, ಜಮೀನನ್ನು ಕಾನೂನುಬಾಹಿರವಾಗಿ ಪಡೆದುಕೊಂಡಿದ್ದಾರೆ. ಪುಟುಲ್ ಮತ್ತು ಅವರ ಕುಟುಂಬವು ಈಗಾಗಲೇ ಢಾಕಾದಲ್ಲಿ ಆಸ್ತಿಗಳನ್ನು ಹೊಂದಿದ್ದು, ಅವರ ಕ್ರಮಗಳ ನ್ಯಾಯಸಮ್ಮತತೆಯನ್ನು ಮತ್ತಷ್ಟು ದುರ್ಬಲಗೊಳಿಸಿದೆ ಎಂದು ೦ಅಅ ಹೇಳಿಕೊಂಡಿದೆ. ಪ್ರಸ್ತುತ ನವದೆಹಲಿಯಲ್ಲಿ ವಿಶ್ವ ಆರೋಗ್ಯ ಸಂಸ್ಥೆಯ (ಫಊಓಔ) ಆಗೋಯ ಏಷ್ಯಾದ ಪ್ರಾದೇಶಿಕ ನಿರ್ದೇಶಕಿಯಾಗಿ ಸೇವೆ ಸಲ್ಲಿಸುತ್ತಿರುವ ಪುಟುಲ್ ಅವರನ್ನು ಸಹ ಈ ಪ್ರಕರಣದಲ್ಲಿ ಸಿಲುಕಿಸಲಾಗಿದೆ.

ಈ ಪ್ರಕರಣದ ಜೊತೆಗೆ, ಬಾಂಗ್ಲಾದೇಶದ ಸ್ಥಾಪಕ ಪಿತಾಮಹ ಶೇಖ್ ಮುಜಿಬುರ್ ರೆಹಮಾನ್ ಅವರ 100 ನೇ ಹುಟ್ಟುಹಬ್ಬದಂದು 2020 ರಲ್ಲಿ ನಡೆದ ಮುಜಿಬ್ ಶತಮಾನೋತ್ಸವ" ಆಚರಣೆಯ ಸಂದರ್ಭದಲ್ಲಿ 4,000 ಕೋಟಿ ದುರುಪಯೋಗದ ಬಗ್ಗೆ ೦ಅಅ ಇತ್ತೀಚೆಗೆ ತನಿಖೆಯನ್ನು ಪ್ರಾರಂಭಿಸಿದೆ. ಹಸೀನಾ ಮತ್ತು ಅವರ ಸಹೋದರಿ ಶೇಖ್ ರೆಹನಾ ಮತ್ತು ಮಾಜಿ ಪ್ರಧಾನ ಕಾರ್ಯದರ್ಶಿ ಕಮಲ್ ಅಬ್ದುಲ್ ನಾಸರ್ ಚೌಧರಿ ಅವರ ಮೇಲೆ ತನಿಖೆ ನಡೆಯುತ್ತಿದೆ. 16 ವರ್ಷಗಳ ಕಾಲ ಆಳಿದ ಹಸೀನಾ ಅವರ ಸರ್ಕಾರವನ್ನು ವಿದ್ಯಾರ್ಥಿಗಳ ನೇತೃತ್ವದ ದಂಗೆಯ ನಂತರ ಆಗಸ್ಟ್ 2024 ರಲ್ಲಿ ಪದಚ್ಯುತಗೊಳಿಸಲಾಯಿತು. ಅಂದಿನಿಂದ, ಹಸೀನಾ(77) ಭಾರತದಲ್ಲಿ ವಾಸಿಸುತ್ತಿದ್ದಾರೆ. ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ಅವರನ್ನು ಹಸ್ತಾಂತರಿಸುವಂತೆ ಕೋರಿದೆ, ಆದರೆ ನವದೆಹಲಿ ಇನ್ನೂ ಈ ವಿನಂತಿಗೆ ಸ್ಪಂದಿಸಿಲ್ಲ.

# ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್ ಸಿಂಧು, ರಾಜಾವತ್ ನಿರ್ಗಮನ

**ನಿಂಗೊ (ಚೀನಾ),ಏ.10:** ಒಲಿಂಪಿಕ್ಸ್‌ನಲ್ಲಿ ಎರಡು ಪದಕ ಗೆದ್ದಿರುವ ಪಿ.ವಿ. ಸಿಂಧು ಮತ್ತು ಉದಯೋನ್ಮುಖ ಆಟಗಾರ ಪ್ರಿಯಾಂಶು ರಾಜಾವತ್‌ಅ ವರು ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನ ಸಿಂಗಲ್ಸ್ ಪ್ರಿಕ್ವಾರ್ಟರ್‌ಫೈನಲ್ ನಲ್ಲಿ ಗುರುವಾರ ಸೋಲನುಭವಿಸಿದರು. ವಿಶ್ವ ಕ್ರಮಾಂಕದಲ್ಲಿ 17ನೇ ಸ್ಥಾನ ಹೊಂದಿರುವ ಸಿಂಧು ಉತ್ತಮ ಹೋರಾಟ ಕಂಡ ಮಹಿಳೆಯರ ವಿಭಾಗದ ಪಂದ್ಯದಲ್ಲಿ ಮೂರನೇ ಶ್ರೇಯಾಂಕದ ಜಪಾನ್ ಆಟಗಾರ್ತಿ ಅಕಾನೆ ಯಮಾಗುಚಿ ಅವರಿಗೆ 12-21, 21-16, 16-21.



ವಿಶ್ವ ಕ್ರಮಾಂಕದಲ್ಲಿ ನಾಲ್ಕನೇ ಸ್ಥಾನದಲ್ಲಿರುವ ಅಕಾನೆ 66 ನಿಮಿಷಗಳಲ್ಲಿ ಪಂದ್ಯ ಗೆದ್ದು ಎಂಟರ ಘಟ್ಟಕ್ಕೆ ಮುನ್ನಡೆದರು. ರಾಜಾವತ್ ಅವರು ಪುರುಷರ ಸಿಂಗಲ್ಸ್‌ನಲ್ಲಿ 14-21, 17-21 ರಲ್ಲಿ ಏಳನೇ ಕ್ರಮಾಂಕದ ಕೊಡೈ ನರವೋಕಾ (ಜಪಾನ್) ಅವರಿಗೆ ಸೋತರು. ವಿಶ್ವದ ಐದನೇ ಕ್ರಮಾಂಕದ ಆಟಗಾರ ಕುನ್ಲಾವುತ್ ವಿಟೆಡ್ಸ್ರ್ನ (ಥಾಯ್ಲೆಂಡ್) ಅವರು ಇನ್ನೊಂದು ಪಂದ್ಯದಲ್ಲಿ ಭಾರತದ ಕಿರಣ್ ಜಾರ್ಜ್ ಅವರನ್ನು 19-21, 21-13, 21-16 ರಿಂದ ಸೋಲಿಸಿದರು. ಇದರೊಂದಿಗೆ ಪುರುಷರ ಮತ್ತು ಮಹಿಳೆಯರ ಸಿಂಗಲ್ಸ್‌ನಲ್ಲಿ ಭಾರತದ ಸವಾಲು ಅಂತ್ಯಗೊಂಡಿತು.

**ಧ್ರುವ್ ತನಿಶಾ ಮುನ್ನಡೆ:**

ಮಿಶ್ರ ಡಬಲ್ಸ್‌ನಲ್ಲಿ ಭಾರತದ ಧ್ರುವ್ ಕಪಿಲ-ತನಿಶಾ ಕ್ರಾಸ್ಟೊ ಜೋಡಿ ಎಂಟರ ಘಟ್ಟ ಪ್ರವೇಶಿಸಿತು. ಈ ಜೋಡಿ 12-21, 21-16, 21-18 ರಿಂದ ಚೀನಾ ಪಿಯ ಯೆ ಹಾಂಗ್ ವೀ- ನಿಕೋಲ್ ಗೊನ್ಸಾಲ್ವೆಸ್ ಅವರನ್ನು ಸೋಲಿಸಿತು.

ಕಪಿಲಾ ಮತ್ತು ಕ್ರಾಸ್ ಕ್ವಾರ್ಟರ್‌ಫೈನಲ್‌ನಲ್ಲಿ ಹಾಂಗ್ಕಾಂಗ್ನ ಚುನ್ ಮನ್ ಟಾಂಗ್ ಯಿಂಗ್ ಸುಯತ್ ತ್ಸ ಜೋಡಿಯನ್ನು ಎದುರಿಸಲಿದೆ. ಚುನ್ ಮನ್-ಯಿಂಗ್ ಜೋಡಿ ಐದನೇ ಶ್ರೇಯಾಂಕ ಪಡೆದಿದೆ. ಆದರೆ ಇದೇ ವಿಭಾಗದಲ್ಲಿ ಭಾರತದ ಅಶಿತ್ ಸೂರ್ಯ ಅಮೃತಾ ಪ್ರಮುತೇಶ್ ಜೋಡಿ ನಿರ್ಗಮಿಸಿತು. ಇವರಿಬ್ಬರು 11-21, 14-21 ರಲ್ಲಿ ಅಗ್ರ ಶ್ರೇಯಾಂಕದ ಜಿಯಾಂಗ್ ಝುನ್ ಬಾಂಗ್ ವೀ ಯಾ ಷಿನ್ (ಚೀನಾ) ಅವರಿಗೆ ಮಣಿದರು.

# ಆರ್‌ಸಿಬಿ ವಿರುದ್ಧ ಡೆಲ್ಲಿ ಕ್ಯಾಪಿಟಲ್ಸ್‌ಗೆ ಭರ್ಜರಿ ಗೆಲುವು

**ಬೆಂಗಳೂರು,ಏ.10:** ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಕರ್ನಾಟಕದ ಹುಡುಗ ಕೆಎಲ್ ರಾಹುಲ್ ಅಬ್ಬರಿಸಿದರು. ಕೆಎಲ್ ರಾಹುಲ್ ಮಾಸ್ಟರ್ ಕ್ಲಾಸ್ ಬ್ಯಾಟಿಂಗ್ ನೆರವಿನಿಂದ ಡೆಲ್ಲಿ ಕ್ಯಾಪಿಟಲ್ಸ್ ಆರ್‌ಸಿಬಿ ವಿರುದ್ಧ 6 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಐಪಿಎಲ್ 2025ರ ಆವೃತ್ತಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಅಜೇಯ ಓಟವನ್ನು ಮುಂದುವರೆಸಿದೆ, ಸತತವಾಗಿ 4 ಪಂದ್ಯಗಳನ್ನು ಗೆದ್ದು 8 ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ.



ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಮೊದಲು ಬೌಲಿಂಗ್ ಆಯ್ಕೆ ಮಾಡಿಕೊಂಡಿತು. ಸ್ಫೋಟಕ ಆರಂಭ ಪಡೆದ ಆರ್ ಸಿಬಿ ಫಿಲ್ ಸಾಲ್ಟ್ ರನೌಟ್ ಆಗುತ್ತಿದ್ದಂತೆ ದಿಕ್ಕೆಟ್ಟಿತು. ಫಿಲ್ ಸಾಲ್ಟ್ 17 ಎಸೆತಗಳಲ್ಲಿ 4 ಬೌಂಡರಿ 3 ಸಿಕ್ಸರ್ ಸಹಿತ 37 ರನ್ ಗಳಿಸಿದರು, ಮಿಚೆಲ್ ಸ್ಟಾರ್ಕ್ ಅವರ ಒಂದೇ ಓವರ್ ನಲ್ಲಿ 30 ರನ್ ಸಿಡಿಸಿ ಅಬ್ಬರಿಸಿದರು. ಆದರೆ ಅವರು ರನೌಟ್ ಆಗಿದ್ದೇ ಆರ್‌ಸಿಬಿಗೆ ದೊಡ್ಡ ಹೊಡೆತವಾಯಿತು. ಫಿಲ್ ಸಾಲ್ಟ್ ರನೌಟ್ ಆಗುತ್ತಿದ್ದಂತೆ ಡೆಲ್ಲಿ ಕ್ಯಾಪಿಟಲ್ಸ್ ಬಿಗಿ ಬೌಲಿಂಗ್ ದಾಳಿ ಮಾಡುವ ಮೂಲಕ ಆರ್ ಸಿಬಿ ರನ್ ಗಳಿಸಲು ಕಡಿವಾಣ ಹಾಕಿತು. ಕೊಹ್ಲಿ 22 ರನ್ ಗಳಿಸಿ ಔಟಾದರೆ, ನಾಯಕ ರಜತ್ ಪಟಿದಾರ್ 25 ರನ್ ಗಳಿಸಿ ಔಟಾದರು. ಲಿಯಾಮ್ ಲಿವಿಂಗ್‌ಸ್ಟೋನ್, ದೇವದತ್ ಪಡಿಕ್ಕಲ್ ಬ್ಯಾಟಿಂಗ್‌ನಲ್ಲಿ ವಿಫಲವಾಗಿದ್ದು ತಂಡಕ್ಕೆ ದೊಡ್ಡ ಹೊಡೆತ ನೀಡಿತು. ಕೊನೆಯಲ್ಲಿ ಟಿಮ್ ಡೇವಿಡ್ 20 ಎಸೆತಗಳಲ್ಲಿ 2 ಬೌಂಡರಿ 4 ಸಿಕ್ಸರ್ ಸಹಿತ ಅಜೇಯ 37 ರನ್ ಗಳಿಸುವ ಮೂಲಕ ಆರ್ ಸಿಬಿ 163 ರನ್ ಕಲೆಹಾಕಲು ಪ್ರಮುಖ ಕೊಡುಗೆ ನೀಡಿದರು.

**ಡೆಲ್ಲಿ ಪರ 77 ರನ್ ಸಿಡಿಸಿದ ಕನ್ನಡಿಗ ಕೆಎಲ್ ರಾಹುಲ್:** ಸಿಎಸ್‌ಕೆಗೆ ಹೀನಾಯ ಸೋಲು ಕೆಎಲ್ ರಾಹುಲ್ ಅಬ್ಬರ 164 ರನ್‌ಗಳ ಸವಾಲಿನ ಗುರಿ ಬೆನ್ನಟ್ಟಿದ ಡೆಲ್ಲಿ ಕ್ಯಾಪಿಟಲ್ಸ್‌ಗೆ ಆರ್ ಸಿಬಿ ಬೌಲರ್ ಗಳು ಆರಂಭದಲ್ಲೇ ಆಘಾತ ನೀಡಿದರು. ಫಾಫ್ ಡುಪ್ಲೆಸಿಸ್ 2 ರನ್ ಗಳಿಸಿ ಔಟಾದರೆ, ಜೇಕ್ ಫ್ರೇಸರ್ ಮೆಕ್‌ಗುರ್ಕ್ ಮತ್ತು ಅಭಿಷೇಕ್ ಪೊರೆಲ್ ತಲಾ 7 ರನ್ ಗಳಿಸಿ ಔಟಾದರು. ಆದರೆ ಕೆಎಲ್ ರಾಹುಲ್ ಮತ್ತೊಂದು ಕಡೆ ವಿಕೆಟ್ ಬೀಳದಂತೆ ಎಚ್ಚರಿಕೆಯಿಂದ ಆಡಿದರು. ಅಕ್ಷರ್ ಪಟೇಲ್ 15 ರನ್ ಗಳಿಸಿ ಔಟಾದರು. ಕಠಿತಿಜಡಿಜಜ ಃಥಿ ಓಜಥಣ ಖಣಚಿಥಿ ಟ್ರಿಸ್ಟಾನ್ ಸ್ಟಬ್ಸ್ 23 ಎಸೆತಗಳಲ್ಲಿ ಅಜೇಯ 38 ರನ್ ಗಳಿಸಿದರು. ಕೆಎಲ್ ರಾಹುಲ್ 53 ಎಸೆತಗಳಲ್ಲಿ 7 ಬೌಂಡರಿ 6 ಸಿಕ್ಸರ್ ಸಹಿತ ಅಜೇಯ 93 ರನ್ ಗಳಿಸುವ ಮೂಲಕ ಡೆಲ್ಲಿ ಕ್ಯಾಪಿಟಲ್ಸ್‌ಗೆ ಸುಲಭ ಗೆಲುವು ತಂದುಕೊಟ್ಟರು. ಭುವನೇಶ್ವರ್ ಕುಮಾರ್ 2 ವಿಕೆಟ್ ಪಡೆದರೆ, ಯಶ್ ದಯಾಳ್ ಮತ್ತು ಸುಯಾಶ್ ಶರ್ಮಾ ತಲಾ 1 ವಿಕೆಟ್ ಪಡೆದರು. ಆರ್ ಸಿಬಿ ಹೊರಗಡೆ ಮೂರು ಪಂದ್ಯಗಳನ್ನು ಗೆದ್ದಿದ್ದು ತವರಿನಲ್ಲಿ ಆಡಿದ 2 ಪಂದ್ಯಗಳನ್ನು ಸೋತಿದೆ. ಮುಂದಿನ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ತಂಡವನ್ನು ಎದುರಿಸಲಿದ್ದು ಏಪ್ರಿಲ್ 13 ರಂದು ಜೈಪುರದಲ್ಲಿ ಈ ಪಂದ್ಯ ನಡೆಯಲಿದೆ.



**ಸ್ಪೇನ್‌ನ ಬಾರ್ಸಿಲೋನಾದಲ್ಲಿ FC ಬಾರ್ಸಿಲೋನಾ ಮತ್ತು ಬೊರುಸ್ಸಿಯಾ ಡಾರ್ಟ್ಮಂಡ್ ನಡುವಿನ UEFA ಚಾಂಪಿಯನ್ಸ್ ಲೀಗ್ ಕ್ವಾರ್ಟರ್‌ಫೈನಲ್ 1ನೇ ಲೆಗ್ ಫುಟ್‌ಬಾಲ್ ಪಂದ್ಯದಲ್ಲಿ FC ಬಾರ್ಸಿಲೋನಾದ ರಾಫಿನ್ಹಾ ಗೋಲು ಗಳಿಸಿದರು.**

# ಒಲಂಪಿಕ್ಸ್‌ನಲ್ಲಿ ಕ್ರಿಕೆಟ್‌ಗೆ ಐಓಸಿ ಹಸಿರು ನಿಶಾನೆ

ಬರೋಬ್ಬರಿ 128 ವರ್ಷಗಳ ಬಳಿಕ ಒಲಂಪಿಕ್ಸ್ ಆಟದಲ್ಲೂ ಕ್ರಿಕೆಟ್ ಆಟ ಆಡಲು ಅಂತಾರಾಷ್ಟ್ರೀಯ ಒಲಂಪಿಕ್ಸ್ ಕಮಿಟಿಯು ಗ್ರೀನ್ ಸಿಗ್ನಲ್ ನೀಡಿದೆ. 2028ರಲ್ಲಿ ಲಾಸ್ ಏಂಜಲೀಸ್ ನಲ್ಲಿ ನಡೆಯಲಿರುವಂತ ಒಲಂಪಿಕ್ಸ್ ನಲ್ಲಿ 6 ಕ್ರಿಕೆಟ್ ತಂಡಗಳು ಭಾಗಿಯಾಗಲಿದ್ಯಾವೆ ಅಂತ ಐಓಸಿ ತಿಳಿಸಿದೆ. ಹಲವಾರು ಪ್ರಮುಖ ಕ್ರಿಕೆಟ್ ರಾಷ್ಟ್ರಗಳು 2028 ರ ಒಲಿಂಪಿಕ್ ಕ್ರೀಡಾಕೂಟದಿಂದ ಹೊರಗುಳಿಯಲಿವೆ ಎಂದು ತೋರುತ್ತದೆ.

**ತಂಡಗಳ ಅರ್ಹತೆ**

**ಈವೆಂಟ್ ಅರ್ಹತಾ ಪ್ರಕ್ರಿಯೆಯನ್ನು ಇನ್ನೂ ಘೋಷಿಸಲಾಗಿಲ್ಲ. ಆದರೆ ಯುಎಸ್‌ಎ ಆತಿಥೇಯರಾಗಿ ನೇರ ಪ್ರವೇಶವನ್ನು ಪಡೆಯುವ ಸಾಧ್ಯತೆಯಿದೆ. ಇದರರ್ಥ ಉಳಿದ ಸ್ಥಾನಗಳಿಗೆ ಸ್ಪರ್ಧಿಸಲು ಇತರ ಐದು ಪೂರ್ಣ ಸದಸ್ಯರಿಗೆ ಮಾತ್ರ ಅವಕಾಶವಿರುತ್ತದೆ.**

ಪುರುಷರ ಮತ್ತು ಮಹಿಳಾ ಪಂದ್ಯಾವಳಿಗಳಿಗೆ ಕೇವಲ ಆರು ತಂಡಗಳು ಮಾತ್ರ ಸ್ಪರ್ಧಿಸಲಿವೆ ಎಂದು ಅಂತರರಾಷ್ಟ್ರೀಯ ಒಲಿಂಪಿಕ್ ಸಮಿತಿ ಘೋಷಿಸಿದೆ. ಪ್ರತಿ ತಂಡವು 90 ಕ್ರೀಡಾಪಟು ಸ್ಥಾನಗಳನ್ನು ಹೊಂದಿರುತ್ತದೆ. ಅಂದರೆ ಆರು ತಂಡಗಳು ತಲಾ 15 ಆಟಗಾರರ ತಂಡವನ್ನು ಕಣಕ್ಕಿಳಿಸಬಹುದು. ಲಾಸ್ ಏಂಜಲೀಸ್ 2028 ಒಲಿಂಪಿಕ್ಸ್‌ನಲ್ಲಿ ಕ್ರಿಕೆಟ್ ಸೇರ್ಪಡೆ ಒಂದು ದೊಡ್ಡ ವಿಷಯವಾಗಿದೆ. ಇದು 128 ವರ್ಷಗಳ ಸುದೀರ್ಘ ವಿರಾಮದ ನಂತರ ಈ ಪ್ರಮುಖ ಸ್ಪರ್ಧೆಗೆ ಕ್ರೀಡೆಯ ಪುನರಾಗಮನವನ್ನು ಸೂಚಿಸುತ್ತದೆ. 1900ರ ಪ್ಯಾರಿಸ್ ಒಲಿಂಪಿಕ್ಸ್‌ನಲಿ ಕೊನೆಯ ಬಾರಿ ಕ್ರಿಕೆಟ್ ಆಡಲಾಗಿತ್ತು. ನಂತರ, ಗ್ರೇಟ್ ಬ್ರಿಟನ್ ಮತ್ತು ಫ್ರಾನ್ಸ್ ನಡುವೆ ಎರಡು ದಿನಗಳ ಪಂದ್ಯವಿತ್ತು, ನಂತರ ಇದನ್ನು ಅನಧಿಕೃತವಾಗಿ ಟೆಸ್ಟ್ ಪಂದ್ಯವೆಂದು ಗುರುತಿಸಲಾಯಿತು.

# ಭಾರತ ವನಿತಾ ತಂಡದ ಆಸ್ಟ್ರೇಲಿಯ ಪ್ರವಾಸ



**ಹೊಸದಿಲ್ಲಿ,ಏ.10:** ಭಾರತದ ವನಿತಾ ಹಾಕಿ ತಂಡ 5 ಪಂದ್ಯಗಳ ಸರಣಿಗಾಗಿ ಇದೇ ತಿಂಗಳಾಂತ್ಯ ಆಸ್ಟ್ರೇಲಿಯಕ್ಕೆ ಪ್ರವಾಸ ಕೈಗೊಳ್ಳಲಿದೆ. ಎ. 26ರಿಂದ ಮೇ 4ರ ಅವಧಿಯಲ್ಲಿ ಪಂದ್ಯಗಳನ್ನು ಆಡಲಾಗುವುದು ಎಂದು "ಹಾಕಿ ಇಂಡಿಯಾ' ತಿಳಿಸಿದೆ.

ಭಾರತ ತಂಡ ಮೊದಲು ಆಸ್ಟ್ರೇಲಿಯ "ಎ' ವಿರುದ್ಧ 2 ಪಂದ್ಯಗಳನ್ನು ಆಡಲಿದೆ (ಎ.26, 27). ಬಳಿಕ 3 ಪಂದ್ಯಗಳಲ್ಲಿ ಸೀನಿಯರ್ ತಂಡವನ್ನು ಎದುರಿಸಲಿದೆ (ಮೇ 1, 3, 4). ಎಲ್ಲ ಪಂದ್ಯಗಳು ಪರ್ತ್ ಹಾಕಿ ಸ್ಟೇಡಿಯಂ'ನಲ್ಲಿನಡೆಯಲಿವೆ.